ಸಂಪುಟ: 05 ಸಂಚಿಕೆ: 81 ಪುಟಗಳು: 08 ಬುಧವಾರ 04 ಜೂನ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಾವು ಯಾವ ರೀತಿ ಬದುಕುವುದಿಲ್ಲವೋ ಆ ರೀತಿ ಬೇರೆಯವರು ಬದುಕಲಿ ಎಂದು ಹೇಳುವ ಅಧಿಕಾರ ನಮಗ್ಯಾರಿಗೂ ಇಲ್ಲ.

## ರಾಜ್ಯಸಭೆಯಲ್ಲಿ ಡಿಕೆಶಿ ಪರ ನಿಂತ ಮಲ್ಲಿಕಾರ್ಜುನ ಖರ್ಗೆ!

• ಉದಯವಾಹಿನಿ, ಹೊಸದಿಲ್ಲಿ

ಸಂವಿಧಾನ ಬದಲಾವಣೆ ಬಗ್ಗೆ ಡಿಸಿಎಂ ಡಿಕೆ ಶಿವಕುಮಾರ್ ನೀಡಿರುವ ಹೇಳಿಕೆ ರಾಜ್ಯಸಭೆಯಲ್ಲಿ ಕೋಲಾಹಲಕ್ಕೆ ಕಾರಣವಾಗಿದೆ. ಈ ಬಗ್ಗೆ ಬಿಜೆಪಿ ಸದನಲ್ಲಿ ವಿಷಯ ಪ್ರಸ್ತಾಪಿಸಿದಾಗ ಡಿಕೆ ಶಿವಕುಮಾರ್ ಪರ ನಿಂತ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಅಂತಹ ಹೇಳಿಕೆಯನ್ನು ನಮ್ಮ ಸಚಿವರು ನೀಡಿಲ್ಲ. ಕಾಂಗ್ರೆಸ್ ಯಾವಾಗಲೂ ಸಂವಿಧಾನ ರಕ್ಷಿಸುವ ಕೆಲಸ ಮಾಡುತ್ತದೆ. ಸಂವಿಧಾನ ಬದಲಿಸುವ ಬಗ್ಗೆ ಯಾವಾಗಲೂ ಬಿಜೆಪಿ ಯೋಚನೆ ಮಾಡುತ್ತದೆ ಎಂದು ಕಿಡಿಕಾರಿದರು.

ಅದಲ್ಲದೇ ಡಿಸಿಎಂ ಬಗ್ಗೆ ಹೇಳಿಕೆಗೆ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಕೇಂದ್ರ ಸಚಿವ ಜೆಪಿ ನಡ್ಡಾ, ಮಲ್ಲಿಕಾರ್ಜುನ ಖರ್ಗೆ ಅವರು ಹೇಳುತ್ತಿರುವುದು ಸುಳ್ಳು. ಗುತ್ತಿಗೆಯಲ್ಲಿ ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿ ನೀಡುವ ಮಸೂದೆಯನ್ನು ಕರ್ನಾಟಕ ವಿಧಾನಸಭೆಯಲ್ಲಿ ಪಾಸ್ ಮಾಡಲಾಗಿದೆ. ಇದೆಲ್ಲಾ ಆದ್ಮೇಲೆ ಡಿಕೆ ಶಿವಕುಮಾರ್ ಅವರು ಸಂವಿಧಾನವನ್ನು ಕಾಂಗ್ರೆಸ್ ನೀಡಿದೆ, ಸಂವಿಧಾನವನ್ನು ಕಾಂಗ್ರೆಸ್ ಬದಲಾಯಿಸುತ್ತದೆ ಎಂದಿದ್ದಾರೆ.

## 19ರಂದು ನಂದಿ ಗಿರಿಧಾಮದಲ್ಲಿ ಸಚಿವ ಸಂಪುಟ ಸಭೆ: ಸಿಎಂ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ತಾಲ್ಲೂಕಿನ ನಂದಿ ಗಿರಿಧಾಮದಲ್ಲಿ ಜೂನ್ 19 ರಂದು ಸಚಿವ ಸಂಪುಟ ಸಭೆ ನಡೆಸಲು ತೀರ್ಮಾನಿಸಲಾಗಿದೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಉನ್ನತ ಶಿಕ್ಷಣ ಖಾತೆ ಸಚಿವ ಡಾ. ಎಂ.ಸಿ.ಸುಧಾಕರ್‌ಗೆ ತಿಳಿಸಿದ್ದು, ಗಿರಿಧಾಮದಲ್ಲಿ ಬರದ ಸಿದ್ದತೆಗಳು ನಡೆಯುತ್ತಿವೆ. ನಂದಿ ಗಿರಿಧಾಮದ ಸುತ್ತಮುತ್ತ ಭೌಗೋಳಿಕ ವಿಸ್ತೀರ್ಣ ಹಂಚಿಕೊಂಡಿರುವ ಬಯಲುಸೀಮೆಯ ಜಿಲ್ಲೆಗಳಾದ ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಸಚಿವ ಸಂಪುಟ ಸಭೆ ವರದಾನವಾಗುವ ನಿರೀಕ್ಷೆಯಿದೆ. ತ್ರಿವಳಿ ಜಿಲ್ಲೆಗಳ ಸಮಸ್ಯೆಗಳು, ಮೂಲಭೂತ ಸಮಸ್ಯೆಗಳು, ವಿಶೇಷ ಪ್ಯಾಕೇಜ್ ಗಳನ್ನು ಘೋಷಣೆ ಮಾಡುವ ನಿರೀಕ್ಷೆಯಿದೆ. ಮೂರು ಜಿಲ್ಲೆಗಳ ಶಾಸಕರು, ತಮ್ಮ-ತಮ್ಮ ಕ್ಷೇತ್ರದ ಸಮಸ್ಯೆಗಳನ್ನು ಕ್ಷೇತ್ರಗಳ ಬಗ್ಗೆ ಪಟ್ಟಿ ತಯಾರಿ ಮಾಡಿಕೊಂಡು ಮುಖ್ಯಮಂತ್ರಿಗಳಿಗೆ ಸಲ್ಲಿಸಲು ಸನ್ನದ್ಧರಾಗಿದ್ದಾರೆ. 1986ರಲ್ಲಿ ನಂದಿ ಗಿರಿಧಾಮದಲ್ಲಿ ಎರಡನೇ ಸಾರ್ಕ್ ಶೃಂಗ ಸಮ್ಮೇಳನ ನಡೆದಿತ್ತು. ಮಹಾತ್ಮ ಗಾಂಧಿಜಿ, ಜವಾಹರಲಾಲ್ ನೆಹರು ಸೇರಿದಂತೆ ವಿಶ್ವದ ಖ್ಯಾತನಾಮರು ನಂದಿ ಗಿರಿಧಾಮದ ಪ್ರಕೃತಿಗೆ ಮನಸೋತಿದ್ದರು.

## ರೈತರ ಜೋಳ ಖರೀದಿಸಲು ನಿಯೋಗದಿಂದ ಸಚಿವರಿಗೆ ಮನವಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಆಹಾರ ಭವನದಲ್ಲಿ ರಾಯಚೂರಿನ ಬಸವನಗೌಡ ಬಾದರ್ಲಿರವರ ನೇತೃತ್ವದ ರೈತ ಮುಖಂಡರ ನಿಯೋಗವು ಆಹಾರ ಸಚಿವರನ್ನು ಭೇಟಿಯಾಗಿ ಚರ್ಚೆ ನಡೆಸಿದರು. ಈ ವೇಳೆ ಮುಂಗಾರು ಮತ್ತು ಹಿಂಗಾರಿನಲ್ಲಿ ರೈತರು ಹೆಚ್ಚಾಗಿ ಜೋಳ ಬೆಳೆಯುತ್ತಾರೆ. ಹೀಗಾಗಿ ಸರ್ಕಾರ ಕನಿಷ್ಟ ಬೆಂಬಲ ಬೆಲೆ ಯೋಜನೆಯಡಿ ಜೋಳವನ್ನು ಖರೀದಿಸಿದರೆ ರೈತರಿಗೆ ಅನುಕೂಲಕರವಾಗುತ್ತದೆ ಎಂದು ಮುಖಂಡರು ಪ್ರಸ್ತಾಪಿಸಿದರು. ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿ ಪ್ರಕ್ರಿಯೆಗೆ ಕೇಂದ್ರ ಸರ್ಕಾರದ ಗರಿಷ್ಠ ಮಿತಿಯನ್ನೂ ಮೀರಿದೆ. ಇನ್ನೂ ಎಂಎಸ್‌ಪಿ ಯೋಜನೆಯಡಿ ನೋಂದಣಿ ಮಾಡಿದ ರೈತರ ಹೆಚ್ಚುವರಿ ಜೋಳವನ್ನು ಖರೀದಿಸಲು ಮುಂದಿನ ಸಚಿವ ಸಂಪುಟದ ಉಪಸಮಿತಿ ಸಭೆಯಲ್ಲಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್‌ನ ಶಾಸಕರಾದ ಬಸವನಗೌಡ ಬಾದರ್ಲಿ, ರೈತ ಮುಖಂಡರು ಇದ್ದರು.

## ನಮ್ಮವರು ಲಿಮಿಟ್ ಅಲ್ಲಿರ್ಬೇಕು! ಹೆಚ್ಚು ಕಮ್ಮಿಯಾದ್ರೆ ಯಾರ್ ಜವಾಬ್ದಾರಿ?

• ಉದಯವಾಹಿನಿ, ಬೆಂಗಳೂರು

ಕಮಲ್ ಹಾಸನ್ ಅವರು ವೈಯಕ್ತಿಕವಾಗಿ ಬಹಳ ಹಠದಲ್ಲಿದ್ದಾರೆ, ನಮ್ಮವರು (ಕನ್ನಡ ಸಂಘಟನೆ) ಕೂಡಾ ಸ್ವಲ್ಪ ಲಿಮಿಟೇಶನ್ ನಲ್ಲಿರಬೇಕು. ರಾಜ್ಯದ ಹಿತವನ್ನು ನಾವು ಕಾಪಾಡಿಕೊಳ್ಳಬೇಕಾಗುತ್ತದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದ್ದಾರೆ. ನಾಳೆ ಹೆಚ್ಚು ಕಡಿಮೆ ಆದ್ರೆ, ಯಾರು ಜವಾಬ್ದಾರರು. ನಮ್ಮವರು ಹೊಸೂರಿಗೆ ಹೋಗ್ತಾರೆ, ಅವರು ಇಲ್ಲಿಗೆ ಬರ್ತಾರೆ. ಏನಾದ್ರೂ ದೊಡ್ಡದಾಗಿ ಆದ್ರೆ, ಯಾರು ಜವಾಬ್ದಾರಿ ಎಂದು ಹೇಳಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಈ ವಿಚಾರದಲ್ಲಿ ಪ್ರತಿಭಟನೆಯಂತೂ ಮಾಡಿದ್ದಾಗಿದೆ. ನ್ಯಾಯಾಲಯದಲ್ಲಿ ಎಲ್ಲಾರ ಅಭಿಪ್ರಾಯವನ್ನು ಪಡೆಯಲಾಗುತ್ತದೆ, ರಾಜ್ಯದ ಮತ್ತು ಭಾಷೆಯ ಹಿತವನ್ನು ಕಾಪಾಡಬೇಕು. ನಿನ್ನೆ ನಾನು ನಮ್ಮ ರಾಜ್ಯದ ಸಾಹಿತಿಗಳನ್ನು ಮಾತನಾಡಿಸಿದ್ದೇನೆ. ಹಂಪ ನಾಗರಾಜಯ್ಯ ಅವರ ಬಳಿಯೂ ಮಾತನಾಡಿದ್ದೇನೆ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ. ಕಮಲ್ ಹಾಸನ್ ವಿಚಾರದಲ್ಲಿ ಯಾರದ್ದು ತಪ್ಪು, ಯಾರದ್ದು ಸರಿ ಎನ್ನುವುದನ್ನು ಚರ್ಚೆ ಮಾಡಿದ್ದೇನೆ. ನಾವೆಲ್ಲಾ (ಕನ್ನಡ, ತಮಿಳು, ತೆಲುಗು, ಮಲಯಾಳಂ) ದ್ರಾವಿಡ ಭಾಗಕ್ಕೆ ಸೇರಿದಂತವರು. ಇದರಲ್ಲಿ ಮೇಲು, ಕೀಳು ಎನ್ನುವುದು ಏನೂ ಇಲ್ಲ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ.

# 18 ವರ್ಷಗಳ ಕನಸು ಈಗ ನನಸು!

### ಪಂಜಾಬ್ ವಿರುದ್ಧ ಆರ್‌ಸಿಬಿ ರೋಚಕ ಜಯಭೇರಿ

# ಹೇ... ಈ ಸಲ ಕಪ್ ನಮ್ದು



**ಕೊನೆಗೂ ಐಪಿಎಲ್ ಟ್ರೋಫಿಗೆ ಮುತ್ತಿಟ್ಟ ಆರ್‌ಸಿಬಿ..**

**ಕೊಹ್ಲಿ ಸಿಡಿಲು, ಹೆಜಲ್ ಬೆಂಕಿ!**



### ಸಂಕ್ಷಿಪ್ತ ಸ್ಕೋರ್

**ರಾಯಲ್ ಚಾಲೆಂಜರ್ಸ್ ಬೆಂಗಳೂರು 20 ಓವರ್ ಗಳಲ್ಲಿ**

190/9, ಕೊಹ್ಲಿ 43, ರಜತ್ ಪಾಟೀದಾರ್ 26, ಲಿವಿಂಗ್ ಸ್ಟನ್ 25, ಮಾಯಾಂಕ್ ಅಗರ್ವಾಲ್ 24, ಜಿತೇಶ್ ಶರ್ಮಾ 24, ಅರ್ಶದೀಪ್ ಸಿಂಗ್ 40ಕ್ಕೆ 3, ಕೈಲ್ ಜಾಮಿಸನ್ 48ಕ್ಕೆ 3,

**ಪಂಜಾಬ್ ಕಿಂಗ್ಸ್ 20 ಓವರ್‌ಗಳಲ್ಲಿ**

184/7, ಇಂಗ್ಲಿಸ್ 39, ಪ್ರಭಾ ಸಿಮ್ರಾನ್ ಸಿಂಗ್ 26, ಪ್ರಿಯಾಂಶ್ ಆರ್ಯ 24, ಕೃನಾಲ್ ಪಾಂಡ್ಯ 17ಕ್ಕೆ 2

- ಆರ್‌ಸಿಬಿ 18 ವರ್ಷಗಳ ಬಳಿಕ ಮೊದಲ ಐಪಿಎಲ್ ಟ್ರೋಫಿಯನ್ನು ಗೆದ್ದಿದೆ, ಇದರಿಂದ ಕೋಟ್ಯಂತರ ಕನ್ನಡಿಗರ ಕನಸು ಈಡಾಗಿದೆ.
- ಆರ್‌ಸಿಬಿಯ ವೃತ್ತಿಯಲ್ಲಿ 73% ಗೆಲುವಿನ ಪ್ರಮಾಣವಿದೆ, ಮತ್ತು 16 ಪಂದ್ಯಗಳಲ್ಲಿ 11 ಪಂದ್ಯಗಳನ್ನು ಗೆದ್ದಿದೆ.
- ಆರ್‌ಸಿಬಿಯ ಆಟಗಾರ ವಿರಾಟ್ ಕೊಹ್ಲಿ ಮತ್ತು ಜೋಶ್ ಹೆಜಲ್‌ವುಡ್ ಅವರ ಅತ್ಯುತ್ತಮ ಪ್ರದರ್ಶನವು ತಂಡವನ್ನು ವಿಜಯದತ್ತ ನಡೆಸಿದೆ.

**ಕಪ್ ಗೆಲ್ಲಲೇಬೇಕು ಎಂಬ ಹಠ, ಮನಸ್ಸು!**

• ಉದಯವಾಹಿನಿ ಅಹ್ಮದಾಬಾದ್

ರಾಯಲ್ ಚಾಲೆಂಜರ್ಸ್ ಬೆಂಗಳೂರು ಅಭಿಮಾನಿಗಳ 18 ವರ್ಷಗಳ ಕನಸು ಇದೀಗ ನನಸಾಗಿದೆ. ಪಂಜಾಬ್ ಕಿಂಗ್ಸ್ ಪಡೆಯನ್ನು 6 ರನ್ ಗಳಿಂದ ಬಗ್ಗುಬಡಿದ ರಜತ್ ಪಾಟೀದಾರ್ ಬಳಗ ಈ ಬಾರಿ ಕಪ್ ನಮ್ದು ಎಂದು ಹೆಮ್ಮೆಯಿಂದ ಬೀಗಿದೆ. ನಗರದ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಮಂಗಳವಾರ ನಡೆದ ರೋಮಾಂಚಕ ಪಂದ್ಯದಲ್ಲಿ ಗೆಲ್ಲಲು 191 ರನ್‌ಗಳ ಸವಾಲಿನ ಗುರಿ ಪಡೆದ ಶ್ರೇಯಸ್ ಅಯ್ಯರ್ ಪಡೆ ನಿಗದಿತ ಓವರ್ ಗಳು ಮುಗಿದಾಗ 7 ವಿಕೆಟ್ ಕಳೆದುಕೊಂಡು 184 ರನ್ ಗಳನ್ನಷ್ಟೇ ಗಳಿಸಲು ಶಕ್ತವಾಯಿತು. ಪಂಜಾಬ್ ಕಿಂಗ್ಸ್ ಎಚ್ಚರಿಕೆಯಿಂದ ಇನ್ನಿಂಗ್ಸ್ ಆರಂಭಿಸಿದರು. ಮೊದಲ ವಿಕೆಟ್ ಗೆ 5 ಓವರ್ ಗಳಲ್ಲಿ 43 ರನ್ ಜೊತೆಯಾಟವಾಡಿದರು. ಈ ಹಂತದಲ್ಲಿ 19 ಎಸೆತದಲ್ಲಿ 24 ರನ್ ಗಳಿಸಿದ್ದ ಪ್ರಿಯಾಂಶ್ ಆರ್ಯ ಅವರನ್ನು ಜೋಶ್ ಹೇಜಲ್ ವುಡ್ ಅವರು ಸಾಲ್ಟ್ ಅವರಿಗೆ ಕ್ಯಾಚ್ ಕೊಡಿಸಿದರು. ಆದರೂ ಪಂಜಾಬ್ ಆರ್ಭಟ ಮಾತ್ರ ಕಡಿಮೆಯಾಗಿರಲಿಲ್ಲ. ಪ್ರಭಸಿಮ್ರಾನ್ ಸಿಂಗ್ ಅವರು ಜೋಶ್ ಇಂಗ್ಲಿಸ್ ಅವರ ಜೊತೆ ಸೇರಿಕೊಂಡು ಇನ್ನಿಂಗ್ಸ್ ಬೆಳೆಸುವ ಪ್ರಯತ್ನ ಮಾಡಿದರು. ಆದರೆ ಈ ಜೋಡಿಯನ್ನು ಮುರಿದ ಕೃನಾಲ್ ಪಾಂಡ್ಯ ಆರ್ ಸಿಬಿಗೆ ಅಗತ್ಯವಾಗಿ ಬೇಕಿದ್ದ ಬ್ರೇಕ್ ತಂದು ಕೊಡುತ್ತಾರೆ. 22 ಎಸೆತದಲ್ಲಿ 26 ರನ್ ಗಳಿಸಿದ್ದ ಪ್ರಭಸಿಮ್ರಾನ್ ಅವರನ್ನು ಕೃನಾಲ್ ಪಾಂಡ್ಯ ಅವರು ಭುವನೇಶ್ವರ್ ಕುಮಾರ್ ಅವರಿಗೆ ಕ್ಯಾಚಿತ್ತರು. ಮುಂದಿನ ಓವರ್‌ನಲ್ಲೇ ಒಂದು ರನ್ ಗಳಿಸಿದ್ದ ನಾಯಕ ಶ್ರೇಯಸ್ ಅಯ್ಯರ್ ಅವರನ್ನು ಕೀಪರ್ ಜಿತೇಶ್ ಶರ್ಮಾ ಅವರಿಗೆ ಕ್ಯಾಚ್ ಕೊಡಿಸುವಲ್ಲಿ ರೊಮಾರಿಯೋ ಶೆಫರ್ಡ್ ಯಶಸ್ವಿಯಾಗಿದರು. ವಿಕೆಟ್ ಗಳು ಒಂದೆಡೆಯಿಂದ ಬೀಳುತ್ತಿದ್ದರೂ ಜೋಶ್ ಇಂಗ್ಲಿಸ್ ಅವರು ಮಾತ್ರ ತಮ್ಮ ಆಟ ಮುಂದುವರಿಸಿದ್ದರು. 23 ಎಸೆತಗಳಿಂದ 39 ರನ್ ಗಳಿಸಿದ್ದ ಅವರನ್ನು ಕೃನಾಲ್ ಪಾಂಡ್ಯ ಅವರೇ ಬಲೆಗೆ ಬೀಳಿಸಿದರು. ಅಲ್ಲಿಂದ ಬಳಿಕ ಪಂಜಾಬ್ ಕಿಂಗ್ಸ್ ತಂಡವನ್ನು ಒತ್ತಡಕ್ಕೆ ಸಿಲುಕಿಸುವಲ್ಲಿ ಯಶಸ್ವಿಯಾದ ಆರ್ ಸಿಬಿ ಬೌಲರ್ ಗಳು ನೇಹಾಲ್ ವಧೇರಾ(15), ಶಶಾಂಕ್ ಸಿಂಗ್ (26) ಅವರ ವಿಕೆಟ್ ಅನ್ನೂ ಸರಿಯಾದ ಸಮಯದಲ್ಲಿ ಕೀಳುವ ಮೂಲಕ ಗೆಲುವಿಗೆ ಸನಿಹವಾದರು.

ಬಾಲಂಗೋಚಿಗಳಿಂದ ಯಾವ ರೀತಿಯ ಮ್ಯಾಜಿಕ್ ಸಹ ನಡೆಯಲಿಲ್ಲ. ಇದಕ್ಕೂ ಮೊದಲು ಟಾಸ್ ಸೋತು ಬ್ಯಾಟಿಂಗ್ ಗೆ ಇಳಿಸಲ್ಪಟ್ಟ ಆರ್ ಸಿಬಿಗೆ ಫಿಲ್ ಸಾಲ್ಟ್ ಅವರು ಭರ್ಜರಿ ಆರಂಭ ಒದಗಿಸಿದರು.

ಅರ್ಶದೀಪ್ ಸಿಂಗ್ ಎಸೆದ ಮೊದಲ ಓವರ್‌ನಲ್ಲೇ ಒಂದು ಬೌಂಡರಿ ಮತ್ತು ಮತ್ತೊಂದು ಸಿಕ್ಸರ್ ಸಿಡಿಸಿದ ಸಾಲ್ಟ್ 13 ರನ್ ಬಾರಿಸಿದರು. ಆದರೆ ಈ ಆರ್ಭಟ ಹೆಚ್ಚು ಹೊತ್ತು ಇರಲಿಲ್ಲ.

2ನೇ ಓವರ್‌ನ 4ನೇ ಎಸೆತದಲ್ಲೇ ಫಿಲ್ ಸಾಲ್ಟ್ ಅವರ ವಿಕೆಟ್ ಗಳಿಸುವಲ್ಲಿ ಜಾಮಿಸನ್ ಯಶಸ್ವಿಯಾದರು.

ಇದಾದ ಬಳಿಕ ವಿರಾಟ್ ಕೊಹ್ಲಿ ಅವರನ್ನು ಸೇರಿಕೊಂಡ ಮಾಯಾಂಕ್ ಅಗರ್ವಾಲ್ ಅವರು ಪವರ್ ಪ್ಲೇಯನ್ನು ಬಹಳ ಜಾಣ್ಮೆಯಿಂದ ನಿಭಾಯಿಸಿದರು.

ಹೀಗಾಗಿ 6 ಓವರ್ ಗಳು ಮುಗಿದಾಗ ಆರ್ ಸಿಬಿಗೆ 55 ರನ್ ಗಳು ಹರಿದು ಬಂದಿದ್ದವು. ಈ ಹಂತದಲ್ಲಿ ಉತ್ತಮವಾಗಿ ಆಡುತ್ತಿದ್ದ ಮಾಯಾಂಕ್ ಅಗರ್ವಾಲ್ ಅವರನ್ನು ದಿಕ್ಕು ತಪ್ಪಿಸಿದ್ದು ಯುಜುವೇಂದ್ರ ಚಹಲ್. 18 ಎಸೆತದಲ್ಲಿ 24 ರನ್ ಗಳಿಸಿದ್ದ ಮಾಯಾಂಕ್ ಅವರು ಲೆಗ್ ಸ್ಟಂಪ್ ಮೇಲಿದ್ದ ಶಾರ್ಟ್ ಪಿಚ್ ಬಾಲನ್ನು ತಪ್ಪಾಗಿ ಆಡಿ ಅರ್ಶದೀಪ್ ಗೆ ಕ್ಯಾಚಿತ್ತು ಔಟಾದರು. ಇಲ್ಲಿಂದ ಬಳಿಕ ವಿರಾಟ್ ಕೊಹ್ಲಿ ಮತ್ತು ರಜತ್ ಪಾಟೀದಾರ್ ಅವರು ಭರ್ಜರಿ ಹೊಡೆತಗಳ ಮೂಲಕ ಪ್ರೇಕ್ಷಕರನ್ನು ರಂಜಿಸಿದರು. ಜೊತೆಗೆ ಉತ್ತಮ ಸ್ಕೋರ್ ಬೋರ್ಡನ್ನು ಶತಕದತ್ತ ಕೊಂಡೊಯ್ಯುತ್ತಿದ್ದರು. ಈ ಹಂತದಲ್ಲಿ 16 ಎಸೆತಗಳಿಂದ 26 ರನ್ ಗಳಿಸಿದ್ದ ಆರ್ ಸಿಬಿ ನಾಯಕನನ್ನು ಜಾಮಿಸನ್ ಅವರು ಎಲ್ ಬಿಡಬ್ಲ್ಯೂ ಬಲೆಗೆ ಕೆಡವಿದರು.

### ಆರ್‌ಸಿಬಿ ಟೀಂ ಆಟ, ಎದುರಾಳಿಗಳಿಗೆ ಕಾಟ

ಆರ್‌ಸಿಬಿ ಪ್ರತಿಬಾರಿ ವಿರಾಟ್ ಕೊಹ್ಲಿ, ಎಬಿಡಿ, ಕ್ರಿಸ್ ಗೇಲ್‌ರಂತಹ ಸ್ಟಾರ್ ಪ್ಲೇಯರ್ಸ್ ಮೇಲೆ ಡಿಫೆಂಡ್ ಆಗಿತ್ತು. ಆದರೆ, ಈ ಬಾರಿ ಮಾತ್ರ ಆರ್ ಸಿಬಿ ಯಸಸ್ಸಿನಲ್ಲಿ ಎಲ್ಲಾ ಆಟಗಾರರ ಸಾಮೂಹಿಕ ಕೊಡುಗೆ ಇದೆ. ಆರ್‌ಸಿಬಿ ತಂಡವಾಗಿ ಮೈದಾನದಲ್ಲಿ ಆಟವಾಡಿದ್ದು, ಆರ್‌ಸಿಬಿಯ ಒಂಬತ್ತು ವಿಭಿನ್ನ ಆಟಗಾರರು ಈ ಋತುವಿನಲ್ಲಿ ಮ್ಯಾನ್ ಆಫ್ ದಿ ಮ್ಯಾಚ್ ಪ್ರಶಸ್ತಿಯನ್ನು ಪಡೆದಿದ್ದಾರೆ. ಇದು ಬ್ಯಾಟಿಂಗ್ ಮತ್ತು ಬೌಲಿಂಗ್‌ನಲ್ಲಿರುವ ಡೆಪ್ತ್‌ಗೆ ಸಾಕ್ಷಿಯಾಗಿತ್ತು. ಒಬ್ಬರು ಆಡಿಲ್ಲ ಅಂದ್ರೂ ಮತ್ತೊಬ್ಬರು ಬಂದು ಮ್ಯಾಚ್ ಅನ್ನು ಗೆಲ್ಲಿಸಿದ್ದರು. ರಜತ್ ಪಾಟೀದಾರ್ ನಾಯಕತ್ವ ವರ್ಕ್ ಆಗಿದ್ದು, ಭುವನೇಶ್ವರ್‌ಕುಮಾರ್, ಜಿತೇಶ್ ಶರ್ಮಾ, ಕೃನಾಲ್ ಪಾಂಡ್ಯ, ಸುಯೇಶ್ ಶರ್ಮಾ, ದೇವದತ್ ಪಡಿಕ್ಕಲ್, ಮಯಾಂಕ್ ಅಗರ್ವಾಲ್, ಫಿಲ್ ಸಾಲ್ಟ್, ಟಿಮ್ ಡೇವಿಡ್ ಅಗತ್ಯವಿದ್ದಾಗ ತಂಡಕ್ಕೆ ನೆರವಾಗಿದ್ದಾರೆ. ಇದೇ ಕಾರಣಕ್ಕೆ ಆರ್‌ಸಿಬಿ ಟ್ರೋಫಿ ಗೆದ್ದಿದೆ.



### ವಿರಾಟ್ ಕೊಹ್ಲಿ ತಾಳ್ಮೆಯ ಇನ್ನಿಂಗ್ಸ್

ಒಂದೆಡೆ ವಿಕೆಟ್‌ಗಳು ಬೀಳುತ್ತಿದ್ದರೂ ಮತ್ತೊಂದೆಡೆ ವಿರಾಟ್ ಕೊಹ್ಲಿ ಅವರು ತಾಳ್ಮೆಯಿಂದ ಆಟವಾಡುತ್ತಿದ್ದರು. ಆದರೆ 15ನೇ ಓವರ್‌ನಲ್ಲಿ ತಂಡದ ಮೊತ್ತ 131 ಆಗಿದ್ದಾಗ ಅಜ್ಮತುಲ್ಲಾ ಒಮರಾಜೈ ಅವರು ವಿರಾಟ್ ಕೊಹ್ಲಿ ಅವರನ್ನು ಪೆವಿಲಿಯನ್ ಗೆ ಅಟ್ಟುವಲ್ಲಿ ಯಶಸ್ವಿಯಾಗುತ್ತಾರೆ. ಕೊಹ್ಲಿ ಅವರು 39 ಎಸೆತಗಳಿಂದ 3 ಬೌಂಡರಿಗಳಿದ್ದ 45 ರನ್ ಗಳಿಸಿದರು. ಮಧ್ಯಮ ಕ್ರಮಾಂಕದಲ್ಲಿ ಲಿಯಾಮ್ ಲಿವಿಂಗ್ ಸ್ಟನ್ (15 ಎಸೆತದಲ್ಲಿ 25 ರನ್), ಜಿತೇಶ್ ಶರ್ಮಾ(10 ಎಸೆತದಲ್ಲಿ 25 ರನ್) ಮತ್ತು ರೊಮಾರಿಯೋ ಶೆಫರ್ಡ್(9 ಎಸೆತದಲ್ಲಿ 17) ತಕ್ಕ ಮಟ್ಟಿಗೆ ಉತ್ತಮವಾಗಿಯೇ ಬ್ಯಾಟ್ ಬೀಸಿದರು. ಆದರೆ ಉತ್ತಮವಾಗಿ ಆಡುತ್ತಿದ್ದ ಜಿತೇಶ್ ಶರ್ಮಾ ಅವರನ್ನು ಕರ್ನಾಟಕದ ಮಧ್ಯಮ ವೇಗಿ ವೈಶಾಖ್ ವಿಜಯ್ ಕುಮಾರ್ ಅವರು ಕ್ಲೀನ್ ಬೌಲ್ಡ್ ಮಾಡುವ ಮೂಲಕ ಆರ್ ಸಿಬಿ ರನ್ ವೇಗಕ್ಕೆ ಕಡಿವಾಣ ಹಾಕುತ್ತಾರೆ. ಅಂತಿಮ ಓವರ್‌ನಲ್ಲಿ ಅರ್ಶದೀಪ್ ಸಿಂಗ್ ಅವರು 3 ವಿಕೆಟ್ ಗಳಿಸಿದ್ದರಿಂದ ತಂಡದ ಮೊತ್ತ 200ರ ಗಡಿದಾಟಿಸುವ ಆರ್‌ಸಿಬಿ ಉದ್ದೇಶಕ್ಕೆ ತಣ್ಣೀರೆರಚುತ್ತಾರೆ. ಹೀಗಾಗಿ ಅಂತಿಮವಾಗಿ ಆರ್ ಸಿಬಿ 9 ವಿಕೆಟ್ ನಷ್ಟಕ್ಕೆ 190 ರನ್ ಗಳಿಸಲಷ್ಟೇ ಶಕ್ತವಾಗುತ್ತದೆ.

### ಅದ್ಭುತ ಸಂಘಟಿತ ಪ್ರದರ್ಶನ!


ಐಪಿಎಲ್ 2025ರಲ್ಲಿ ಟೂರ್ನಿ ಪೂರ್ತಿ ಆರ್ ಸಿಬಿ ಸ್ಥಿರ ಪ್ರದರ್ಶನವನ್ನು ನೀಡಿದೆ. ಅದನ್ನು ಫೈನಲ್‌ನಲ್ಲೂ ಮುಂದುವರೆಸಿದ್ದು, ಮೊದಲ ಟ್ರೋಫಿ ಎತ್ತಿ ಹಿಡಿಯಲು ಕಾರಣವಾಯಿತು. ಪಾಯಿಂಟ್ಸ್ ಟೇಬಲ್‌ನಲ್ಲಿ ಟಾಪ್ 2 ಆಗಿ ಪ್ಲೇ ಆಫ್‌ಗೆ ಪ್ರವೇಶಿಸಿದ ಆರ್‌ಸಿಬಿ ಮೊದಲ ಕ್ವಾಲಿಫೈಯರ್‌ನಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧವೇ ಅತ್ಯದ್ಭುತ ಗೆಲುವು ಸಾಧಿಸಿ ಅಂತಿಮ ಸುತ್ತಿಗೆ ಪ್ರವೇಶಿಸಿತ್ತು. ಕ್ವಾಲಿಫೈಯರ್ ಸೋಲಿನ ಸೇಡು ತೀರಿಸಿಕೊಳ್ಳುವ ತವಕದಲ್ಲಿದ್ದ ಪಂಜಾಬ್‌ಗೆ ಅವಕಾಶ ನೀಡದೇ ಆರ್‌ಸಿಬಿ ಟ್ರೋಫಿ ಗೆದ್ದಿದೆ. ಈ ಸೀಸನ್‌ನಲ್ಲಿ ಶೇ.73ರಷ್ಟು ಗೆಲುವಿನ ಪ್ರಮಾಣ ಹೊಂದಿರುವ ಆರ್‌ಸಿಬಿಗೆ ಐಪಿಎಲ್ ಟ್ರೋಫಿ ಫುಲ್ ಡಿಸರ್ವ್ ಎಂದರೆ ತಪ್ಪಾಗಲ್ಲ. ಆರ್‌ಸಿಬಿ 16 ಪಂದ್ಯಗಳಲ್ಲಿ ಫೈನಲ್ ಸೇರಿಸಿ 11 ಪಂದ್ಯವನ್ನು ಗೆದ್ದಿದೆ. ಒಂದು ಪಂದ್ಯ ಮಳೆಯಿಂದ ರದ್ದಾಗಿದೆ. ಆರ್‌ಸಿಬಿಯ ಈ ಪರ್ಫಾಮೆನ್ಸ್ ಕಳೆದ ಆವೃತ್ತಿಗಳಿಗಿಂತಲೂ ಬಹುಪಾಲು ಉತ್ತಮವಿದ್ದಿದ್ದು, ಈ ಸಲ ಕಪ್ ಅನ್ನು ನಮ್ಮದಾಗಿಸಿದೆ.

### ಕೃನಾಲ್ ಪಾಂಡ್ಯ



ಆರ್‌ಸಿಬಿ ತಂಡದ ಸ್ಟಾರ್ ಆಲ್ರೌಂಡರ್ ಕೃನಾಲ್ ಪಾಂಡ್ಯ, ಬ್ಯಾಟಿಂಗ್‌ನಲ್ಲಿ ಹೆಚ್ಚು ಜಾದು ಮಾಡಲು ಸಾಧ್ಯವಾಗಲಿಲ್ಲ. ಆದರೆ ಬೌಲಿಂಗ್‌ನಲ್ಲಿ ಪಂಜಾಬ್ ಪರ ವಾಲುತ್ತಿದ್ದ ಪಂದ್ಯವನ್ನು ಆರ್‌ಸಿಬಿ ತೆಕ್ಕೆಗೆ ಜಾರುವಂತೆ ಮಾಡುವಲ್ಲಿ ಕೃನಾಲ್ ಪಾಂಡ್ಯ ಯಶಸ್ವಿಯಾದರು. 4 ಓವರ್ ಬೌಲಿಂಗ್ ಮಾಡಿದ ಕೃನಾಲ್ ಪಾಂಡ್ಯ ಕೇವಲ 17 ರನ್ ನೀಡಿ ಪ್ರಮುಖ ಎರಡು ವಿಕೆಟ್ ಕಬಳಿಸುವಲ್ಲಿ ಯಶಸ್ವಿಯಾದರು. ಪಂಜಾಬ್ ಪರ ಅಪಾಯಕಾರಿ ಬ್ಯಾಟರ್ ಎನಿಸಿಕೊಂಡಿದ್ದ ಪ್ರಭ್‌ಸಿಮ್ರನ್ ಸಿಂಗ್(26) ಹಾಗೂ ಜೋಶ್ ಇಂಗ್ಲಿಶ್(39) ಅವರನ್ನು ಬಲಿ ಪಡೆಯುವ ಮೂಲಕ ಆರ್‌ಸಿಬಿ ಗೆಲುವಿನ ರೂವಾರಿ ಎನಿಸಿಕೊಂಡರು.

### ಗೆಲುವು ಸಂಭ್ರಮಿಸಿದ ಎಬಿ ಡಿವಿಲಿಯರ್ಸ್



ಆರ್‌ಸಿಬಿ ಗೆಲುವು ದಾಖಲಿಸುತ್ತಿದ್ದಂತೆ ಆರ್‌ಸಿಬಿ ಮಾಜಿ ಕ್ರಿಕೆಟಿಗ ಎಬಿ ಡಿವಿಲಿಯರ್ಸ್ ಸಂಭ್ರಮಿಸಿದ್ದಾರೆ. ಎಬಿ ಡಿವಿಲಿಯರ್ಸ್ ಕೂಡ ಭಾವುಕರಾಗಿದ್ದಾರೆ. ನಿಯಂತ್ರಿಸಿಕೊಂಡು ಇತರರೊಂದಿಗೆ ಸಂತಸ ಹಂಚಿಕೊಂಡಿದ್ದಾರೆ. ತಬ್ಬಿಕೊಂಡು ಶುಭಾಶಯ ತಿಳಿಸಿದ ಕ್ರಿಸ್ ಗೇಲ್ ಆರ್‌ಸಿಬಿ ಫೈನಲ್ ಪಂದ್ಯ ವೀಕ್ಷಿಸಲು ಆರ್‌ಸಿಬಿ ಮಾಜಿ ಕ್ರಿಕೆಟಿಗ ಕ್ರಿಸ್ ಗೇಲ್ ಕೂಡ ಹಾಜರಿದ್ದರು. ವಿರಾಟ್ ಕೊಹ್ಲಿ ಸೇರಿದಂತೆ ಆರ್‌ಸಿಬಿ ಕ್ರಿಕೆಟಿಗರ ತಬ್ಬಿಕೊಂಡ ಗೇಲ್ ಶುಭಾಶಯ ತಿಳಿಸಿದ್ದಾರೆ.

# ಗಡೀಪಾರಿನ ನಂತರ ಪುತ್ತಿಲ ವಿರುದ್ಧ ಮತ್ತೊಂದು ಕಾನೂನು ಅಸ್ತ್ರ ಹೂಡಿದ ಸರ್ಕಾರ!

**● ಒಂದು ಧರ್ಮವನ್ನು ಇನ್ನೊಂದು ಧರ್ಮದ ವಿರುದ್ಧ ಎತ್ತಿ ಕಟ್ಟುವ ಕೆಲಸ ● ತನಿಖಾಧಿಕಾರಿ ಎದುರು ವಿಚಾರಣೆಗೆ ಒಳಗಾಗಬೇಕು**

• ಉದಯವಾಹಿನಿ ದಕ್ಷಿಣ ಕನ್ನಡ

ಹಿಂದುತ್ವವಾದಿ ಸಂಘಟನೆ ಮುಖಂಡ, ಬಿಜೆಪಿ ನಾಯಕ ಅರುಣ್ ಕುಮಾರ್ ಪುತ್ತಿಲ ವಿರುದ್ಧ ಗಡೀಪಾರು ಅಸ್ತ್ರ ಪ್ರಯೋಗಿಸಿರುವ ರಾಜ್ಯ ಸರ್ಕಾರದಿಂದ ಅವರ ವಿರುದ್ಧ ಮತ್ತೊಂದು ಕಾನೂನು ಅಸ್ತ್ರ ಪ್ರಯೋಗವಾಗಿದೆ. ಪೊಲೀಸ್ ಇಲಾಖೆಯು ಪುತ್ತಿಲ ಅವರಿಗೆ ಗಡೀಪಾರು ಪ್ರಕ್ರಿಯೆ ಆರಂಭಿಸಿದ ಬೆನ್ನಲ್ಲೇ, ಪ್ರಚೋದನಾಕಾರಿ ಭಾಷಣ ಮಾಡಿದ್ದಾರೆ ಎನ್ನಲಾದ ಪ್ರಕರಣದಲ್ಲಿ ತನಿಖೆ ಆರಂಭಗೊಂಡಿದೆ.

**ಪುತ್ತೂರಿನ ಅಶ್ರಫ್ ದೂರು**

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದನಾ ದಾಳಿ ಖಂಡಿಸಿ ಪುತ್ತೂರಿನಲ್ಲಿನಡೆದ ಪ್ರತಿಭಟನಾ ಸಭೆಯಲ್ಲಿಭಾಷಣ ಮಾಡಿದ್ದ ಅರುಣ್ ಕುಮಾರ್ ಪುತ್ತಿಲ ಅವರು ಅನ್ಯ ಧರ್ಮದ ವಿರುದ್ಧ ಅವಹೇಳನ ಕಾರಿಯಾಗಿ ಮಾತನಾಡಿದ್ದು, ಒಂದು ಧರ್ಮವನ್ನು ಇನ್ನೊಂದು ಧರ್ಮದ ವಿರುದ್ಧ ಎತ್ತಿ ಕಟ್ಟುವ ಕೆಲಸ ಮಾಡಿದ್ದಾರೆ. ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪುತ್ತೂರಿನ ಅಶ್ರಫ್ ಎಂಬವರು ದೂರು ನೀಡಿದ್ದಾರೆ.

ಅದರಂತೆ ಪುತ್ತೂರು ನಗರ ಠಾಣೆ ಇನ್‌ಸ್ಪೆಕ್ಟರ್ ನೋಟಿಸ್ ಜಾರಿ ಮಾಡಿದ್ದು, ತಕ್ಷಣ ಪೊಲೀಸ್ ತನಿಖಾಧಿಕಾರಿ ಎದುರು ವಿಚಾರಣೆಗೆ ಒಳಗಾಗಬೇಕು ಎಂದು ನೋಟಿಸ್‌ನಲ್ಲಿ ತಿಳಿಸಲಾಗಿದೆ. ಮಂಗಳವಾರ ಪುತ್ತೂರು ನಗರ ಠಾಣೆ ಸಿಬ್ಬಂದಿ ಖುದ್ದು ಅರುಣ್ ಪುತ್ತಿಲ ಅವರನ್ನು ಭೇಟಿ ಮಾಡಿ ನೋಟಿಸ್ ನೀಡಿದರು.

**ಗಡೀಪಾರು ಪ್ರಕ್ರಿಯೆ:** ಅರುಣ್ ಪುತ್ತಿಲ ಸೇರಿದಂತೆ ದಕ್ಷಿಣ ಕನ್ನಡ ಜಿಲ್ಲೆಯ 36 ಮಂದಿಯ ವಿರುದ್ಧ ಈಗಾಗಲೇ ಪೊಲೀಸ್ ಇಲಾಖೆ ಗಡೀಪಾರು ಪ್ರಕ್ರಿಯೆ ಆರಂಭಿಸಿದೆ. ಜೂ.6ರಂದು ಪುತ್ತೂರು ಸಹಾಯಕ ಆಯುಕ್ತರ ಎದುರು ವಿಚಾರಣೆಗೆ ಬಂದು ಗಡೀಪಾರು ನೋಟಿಸ್‌ಗೆ ಸಂಬಂಧಿಸಿದ ವಿಚಾರಣೆ ಎದುರಿಸಬೇಕು. ಖುದ್ದಾಗಿ ಇಲ್ಲವೇ ವಕೀಲರ ಮೂಲಕ ಹಾಜರಾಗಬಹುದು. ಹಾಜರಾಗದೇ ಇದ್ದಲ್ಲಿಈ ಪ್ರಕರಣದಲ್ಲಿನಿಮಗೆ ಯಾವುದೇ ಅಸಕ್ತಿ ಇಲ್ಲವೆಂದು ಪರಿಗಣಿಸಿ ಏಕಪಕ್ಷೀಯ ಕ್ರಮ ಕೈಗೊಳ್ಳಲಾಗುವುದು ಎಂದು ಗಡೀಪಾರು ನೋಟಿಸ್‌ನಲ್ಲಿತಿಳಿಸಲಾಗಿತ್ತು.

ಪೊಲೀಸ್ ಇಲಾಖೆಯ ಕ್ರಮವನ್ನು ಪುತ್ತಿಲ ಖಂಡಿಸಿದ್ದು, ರಾಜ್ಯ ಕಾಂಗ್ರೆಸ್ ಸರಕಾರ ಪೊಲೀಸ್ ಇಲಾಖೆಯನ್ನು ಬಳಸಿಕೊಂಡು ಹಿಂದೂ ನಾಯಕರ ವಿರುದ್ಧ ದಮನ ಪ್ರಕ್ರಿಯೆ ನಡೆಸುತ್ತಿದೆ ಎಂದು ಆರೋಪಿಸಿದ್ದಾರೆ. ನನ್ನ ವಿರುದ್ಧ ಯಾವುದೇ ಗುರುತರ ಪ್ರಕರಣಗಳಿಲ್ಲ. ಇದ್ದ ಪ್ರಕರಣಗಳು ಸುಳ್ಳು ಎಂದು ಸಾಬೀತಾಗಿವೆ ಎಂದವರು ತಿಳಿಸಿದ್ದಾರೆ.

**ಕಾನೂನು ರೀತಿಯಲ್ಲಿ ಕ್ರಮ: ಸಿದ್ದರಾಮಯ್ಯ:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾನೂನು ಉಲ್ಲಂಘಿಸಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುತ್ತದೆ. ಆದರೆ, ಸರ್ಕಾರದ ಕಾರ್ಯಾಚರಣೆಯು ಧರ್ಮಾಧಾರಿತವಾಗಿ ಅಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇತ್ತೀಚೆಗೆ ಸ್ಪಷ್ಟಪಡಿಸಿದ್ದರು. ಇತ್ತೀಚೆಗೆ, ಮಂಗಳೂರಿನಲ್ಲಿ ನಡೆದ ವಿದ್ಯಮಾನಗಳಿಗೆ ಸಂಬಂಧಿಸಿದಂತೆ ಮಂಗಳೂರಿನ ಪೊಲೀಸ್ ಇಲಾಖೆಗೆ ರಾಜ್ಯ ಸರ್ಕಾರ ಮೇಜರ್ ಸರ್ಜರಿ ಮಾಡಿದೆ. ದೊಣ್ಣೆಯಿಂದ ತಪ್ಪಿಸಿಕೊಂಡ್ರೆ 100 ವರ್ಷ ಆಯಸ್ಸು ಎಂಬಂತೆ ಸಿದ್ದರಾಮಯ್ಯ ಬರುವ ನವೆಂಬರ್‌ಗೆ ಡಿಕೆಶಿಗೆ ಸಿಎಂ ಸ್ಥಾನವನ್ನು ತಪ್ಪಿಸಲು ಈ ಅಸ್ತ್ರವನ್ನು ಬಳಸಬಹುದು ಎನ್ನಲಾಗುತ್ತಿದೆ.

**ಪ್ರಚೋದನಕಾರಿ ಭಾಷಣ ಆರೋಪ ಕೇಸ್:** ಮೇ 12ರಂದು ಆರ್‌ಎಸ್‌ಎಸ್ ಮುಖಂಡ ಕಲ್ಲಡ್ಕ ಪ್ರಭಾಕರ್ ಪ್ರಚೋದನಾಕಾರಿ ಭಾಷಣ ಮಾಡಿದ್ದಾರೆ ಎಂದು ಆರೋಪಿಸಿ ಬಂಟ್ವಾಳದ ಗ್ರಾಮಾಂತರ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿತ್ತು. ಪ್ರಕರಣ ರದ್ದು ಕೋರಿ ಹೈಕೋರ್ಟ್ ಮೆಟ್ಟಿಲೇರಿದ್ದ ಪ್ರಭಾಕರ ಭಟ್‌ಗೆ ರಿಲೀಫ್ ಸಿಕ್ಕಿದೆ. ಬಂಧನ ಸಹಿತ ಯಾವುದೇ ಒತ್ತಡದ ಕ್ರಮ ಕೈಗೊಳ್ಳದಂತೆ ಹೈಕೋರ್ಟ್ ಆದೇಶ ನೀಡಿದೆ. ಇದು ಹಿಂದೂ ಹೋರಾಟಗಾರರ ದಮನಿಸುವ ಕೆಲಸ ಅಂತಾ ಮಾಜಿ ಸಂಸದ ನಳಿನ್ ಕುಮಾರ್ ಕಟೀಲ್ ಆರೋಪಿಸಿದ್ದಾರೆ.

### 36 ಜನ ಗಡೀಪಾರಿನ ಪಟ್ಟಿಯಲ್ಲಿ



ಜಿಲ್ಲೆಯಲ್ಲಿ ಸಂಭವಿಸಿದ ಸಾಲು ಸಾಲು ಕೊಲೆಗಳು ಸರ್ಕಾರವನ್ನು ಬಡಿದೆಬ್ಬಿಸಿದ್ದು, ಬಂಟ್ವಾಳದ ಅಬ್ದುಲ್ ರಹಿಮಾನ್ ಹತ್ಯೆ ಬಳಿಕ ಜಿಲ್ಲೆಯ ಪೊಲೀಸ್ ವ್ಯವಸ್ಥೆಗೆ ಮೇಜರ್ ಸರ್ಜರಿ ಆಗಿದೆ. ಹೊಸದಾಗಿ ಅಧಿಕಾರ ಸ್ವೀಕರಿಸಿರುವವರು ಆಪರೇಷನ್ ಆರಂಭಿಸಿದ್ದಾರೆ. ಸರಣಿ ಕೊಲೆಗಳಿಂದ ಪ್ರಕ್ಷುಬ್ಧಗೊಂಡಿರುವ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೊಲೀಸರು ಕಾರ್ಯಾಚರಣೆ ಆರಂಭಿಸಿದ್ದಾರೆ. ಕೋಮು ಪ್ರಚೋದನೆ ನೀಡುತ್ತಿದ್ದವರ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಮುಂದಾಗಿದ್ದಾರೆ. 15 ಮುಸ್ಲಿಮರೂ ಸೇರಿದಂತೆ ದಕ್ಷಿಣ ಕನ್ನಡ ಜಿಲ್ಲೆಯಿಂದ ಒಟ್ಟು 36 ಜನರ ಗಡೀಪಾರಿಗೆ ಪ್ರಕ್ರಿಯೆ ಆರಂಭವಾಗಿದೆ. ಗಡೀಪಾರು ಪಟ್ಟಿಯಲ್ಲಿ ಬಿಜೆಪಿ ಮುಖಂಡ ಅರುಣ್ ಪುತ್ತಿಲ, ಭರತ್ ಕುಮ್ಡೇಲು, ಮಹೇಶ್ ಶೆಟ್ಟಿ ತಿಮರೋಡಿ ಹೆಸರಿದೆ. ಬಂಟ್ವಾಳ ನಗರ, ಬಂಟ್ವಾಳ ಗ್ರಾಮಾಂತರ, ಪುತ್ತೂರು ನಗರ, ಪುತ್ತೂರು ಗ್ರಾಮಾಂತರ, ವಿಟ್ಲ, ಸುಳ್ಯ, ಬೆಳ್ಳಾರೆ ಬೆಳ್ತಂಗಡಿ, ಪುಂಜಾಲಕಟ್ಟೆ, ಕಡಬ ಹಾಗೂ ಉಪ್ಪಿನಂಗಡಿ ಠಾಣಾ ವ್ಯಾಪ್ತಿಯ 36 ಜನ ಗಡೀಪಾರಿನ ಪಟ್ಟಿಯಲ್ಲಿದ್ದಾರೆ.

**ಈ ದಿನದ ದರ** | ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,906/Gram24ct ₹9,080/Gram22ct | ಬೆಳ್ಳಿ: ₹100.10/Gram

# ಚಿಕ್ಕಬಳ್ಳಾಪುರದಲ್ಲಿ ಕುಸುಮ್-ಸಿ ಯೋಜನೆಗೆ ಚಾಲನೆ

## ಬೆಂಗಳೂರು ವಿದ್ಯುತ್ ಸರಬರಾಜು ನಿಗಮ ಲಿಮಿಟೆಡ್ ಬೆಸ್ಕಾಮ್ ಮತ್ತು ಜರ್ಮನ್ ಅಂತರರಾಷ್ಟ್ರೀಯ ಸಹಕಾರ ನಿಗಮ

• **ಉದಯವಾಹಿನಿ, ಬೆಂಗಳೂರು**

ಸೌರ ವಿದ್ಯುತ್ ಉತ್ಪಾದನೆ ಹೆಚ್ಚಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳುತ್ತಿದ್ದು ಇದೇ ತಿಂಗಳ 11ರಂದು ಚಿಕ್ಕಬಳ್ಳಾಪುರ ಜಿಲ್ಲೆ ಗೌರಿಬಿದನೂರು ತಾಲ್ಲೂಕಿನ ತೊಂಡೇಬಾವಿ ಗ್ರಾಮದಲ್ಲಿ ಕುಸುಮ್-ಸಿ ಯೋಜನೆಗೆ ಚಾಲನೆ ನೀಡಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ.

ಕುಸುಮ್-ಸಿ ಪ್ರಧಾನ ಮಂತ್ರಿ ಕಿಸಾನ್ ಉರ್ಜಾ ಸುರಕ್ಷಾ ಏವಂ ಉತ್ಥಾನ ಮಹಾಭಿಯಾನ ಯೋಜನೆಯ ಒಂದು ಅಂಶವಾಗಿದೆ.

ಇದು ಅಸ್ತಿತ್ವದಲ್ಲಿರುವ ಗ್ರಿಡ್-ಸಂಪರ್ಕಿತ ಕೃಷಿ ಪಂಪ್‌ಗಳನ್ನು ಸೌರೀಕರಣಗೊಳಿಸಲು ಅನುವು ಮಾಡಿಕೊಡುತ್ತದೆ .ಇದರಿಂದ ರೈತರು ವಿದ್ಯುತ್ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವ ಮತ್ತು ವಿದ್ಯುತ್ ವಿತರಣಾ ಕಂಪನಿಗಳಿಗೆ ಹೆಚ್ಚುವರಿ ಸೌರಶಕ್ತಿಯನ್ನು ಮಾರಾಟ ಮಾಡುವ ಮೂಲಕ ಹೆಚ್ಚುವರಿ ಆದಾಯವನ್ನು ಗಳಿಸುವ ಗುರಿಯನ್ನು ಹೊಂದಿದೆ. ಇದು ವೈಯಕ್ತಿಕ ಪಂಪ್-ಮಟ್ಟದ


ಉದಯವಾಹಿನಿ ಚಿತ್ರ

ಸೌರೀಕರಣ ಮತ್ತು ಫೀಡರ್-ಮಟ್ಟದ ಸೌರೀಕರಣ ಎರಡನ್ನೂ ಬೆಂಬಲಿಸುತ್ತದೆ, ಅಲ್ಲಿ ಒಂದೇ ಸೌರ ವಿದ್ಯುತ್ ಸ್ಥಾವರವು ಬಹು ಪಂಪ್‌ಗಳಿಗೆ ಶಕ್ತಿ ನೀಡುತ್ತದೆ. ಸೌರ ಫಲಕಗಳನ್ನು ಸ್ಥಾಪಿಸಲು ಖಾಸಗಿ ಭೂಮಿಯನ್ನು ಖರೀದಿಸುವಲ್ಲಿನ ಅಡೆತಡೆಗಳನ್ನು ಒಪ್ಪಿಕೊಂಡ ಇಂಧನ ಸಚಿವ ಕೆ.ಜೆ. ಜಾರ್ಜ್, ಸರ್ಕಾರಿ ಭೂಮಿ ಲಭ್ಯವಿರುವಲ್ಲೆಲ್ಲಾ ಫಲಕಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಹೇಳಿದರು. ಎಲ್ಲಾ ಜಿಲ್ಲಾಧಿಕಾರಿಗಳಿಗೆ ಭೂಮಿಯನ್ನು ಹುಡುಕಿ ಕೆಲಸ ಪ್ರಾರಂಭಿಸಲು ನಿರ್ದೇಶಿಸಲಾಗಿದೆ.

**ವಿಮಾನ ನಿಲ್ದಾಣಕ್ಕೆ ಭೇಟಿ ನೀಡುವ ಕ್ಯಾಬ್‌ಗಳು, ಖಾಸಗಿ ವಾಹನಗಳಿಗೆ ಚಾರ್ಜಿಂಗ್ ಸೌಲಭ್ಯವು ಪ್ರಯೋಜನವನ್ನು ನೀಡುತ್ತದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು. ಪ್ರತಿದಿನ 10,000 ಕ್ಕೂ ಹೆಚ್ಚು ಕ್ಯಾಬ್‌ಗಳು ಬೆಂಗಳೂರು ನಗರದಿಂದ ವಿಮಾನ ನಿಲ್ದಾಣಕ್ಕೆ ಚಲಿಸುತ್ತವೆ ಮತ್ತು ಅವುಗಳಲ್ಲಿ ಹಲವು ವಿದ್ಯುತ್ ಚಾಲಿತ ವಾಹನಗಳಾಗಿವೆ. ನಗರದಲ್ಲಿ ಶೀಘ್ರದಲ್ಲೇ ಇಂತಹ ಹೆಚ್ಚಿನ ಚಾರ್ಜಿಂಗ್ ಕೇಂದ್ರಗಳು ಬರಲಿವೆ ಎಂದು ಹೇಳಿದರು.**

ಪಂಚಾಯತ್‌ನಲ್ಲಿ ಲಭ್ಯವಿರುವ ಭೂಮಿಯನ್ನು ಉಪಯುಕ್ತಾ ಕಾರ್ಯಗಳಿಗೆ ಬಳಸಲು ಸಹ ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

**ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಸೌರಶಕ್ತಿ ಚಾಲಿತ ಎರಡನೇ ಲೈಫ್ ಬ್ಯಾಟರಿಗಳ ಸಂಗ್ರಹ ಸಂಯೋಜಿತ ವಿದ್ಯುತ್ ವಾಹನ ಚಾರ್ಜಿಂಗ್ ಕೇಂದ್ರವನ್ನು ಉದ್ಘಾಟಿಸಿದ ನಂತರ ಅವರು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬೆಂಗಳೂರು ವಿದ್ಯುತ್ ಸರಬರಾಜು ನಿಗಮ ಲಿಮಿಟೆಡ್ ಬೆಸ್ಕಾಮ್ ಮತ್ತು ಜರ್ಮನ್ ಅಂತರರಾಷ್ಟ್ರೀಯ ಸಹಕಾರ ನಿಗಮ (GIZ))ದೊಂದಿಗೆ ನಿರ್ಮಾಣ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.**

ಚಾರ್ಜಿಂಗ್ ಕೇಂದ್ರದಲ್ಲಿ ಬಳಸಿದ ಬ್ಯಾಟರಿಗಳನ್ನು ನವೀಕರಿಸಿ ಬಳಸಲಾಗಿರುವುದರಿಂದ, ಪರಿಸರದ ಮೇಲಿನ ಪರಿಣಾಮ ಕಡಿಮೆಯಾಗಿದೆ ಎಂದು ಜಾರ್ಜ್ ಹೇಳಿದರು. ಇದು ದೇಶದಲ್ಲಿ ಮೊದಲನೆಯದು ಮತ್ತು ರಾಜ್ಯದ ವಿದ್ಯುತ್ ನೀತಿಯ ಭಾಗವಾಗಿ ಇದನ್ನು ಸ್ಥಾಪಿಸಲಾಗಿದೆ. ಕರ್ನಾಟಕವು 5,880 EV ಚಾರ್ಜಿಂಗ್ ಕೇಂದ್ರಗಳನ್ನು ಹೊಂದಿದ್ದು, ಅವುಗಳಲ್ಲಿ 4462 ಬೆಂಗಳೂರಿನಲ್ಲಿ ಮಾತ್ರ ಇವೆ.

KIAನಲ್ಲಿರುವ ಹೊಸ ಸೌಲಭ್ಯವು ಏಕಕಾಲದಲ್ಲಿ 23 ವಾಹನಗಳನ್ನು ಚಾರ್ಜ್ ಮಾಡಬಹುದು. ಆದಾಗ್ಯೂ, ಮೊದಲ ಹಂತದಲ್ಲಿ, ಎಂಟು ವಾಹನಗಳು ಪರ್ಯಾಯ ವಿದ್ಯುತ್‌ನೊಂದಿಗೆ ಚಾರ್ಜ್ ಮಾಡಲು ಸಾಧ್ಯವಾಗುತ್ತದೆ. ಹಗಲಿನಲ್ಲಿ ಉತ್ಪಾದಿಸುವ ಸೌರಶಕ್ತಿಯನ್ನು ಸಂಗ್ರಹಿಸಲು ಕೇಂದ್ರದಲ್ಲಿ ಪ್ರತ್ಯೇಕ ಘಟಕವನ್ನು ಸ್ಥಾಪಿಸಲಾಗಿದೆ, ಇದನ್ನು ರಾತ್ರಿಯಲ್ಲಿ ಬಳಸಿಕೊಳ್ಳಲಾಗುತ್ತದೆ.

ಪ್ರಸ್ತುತ ಘಟಕವು 60% ನೇರ ಶಕ್ತಿ, 30% ಸೌರಶಕ್ತಿಯೊಂದಿಗೆ ಕಾರ್ಯನಿರ್ವಹಿಸುತ್ತದೆ.

ಪ್ರತಿ ಚಾರ್ಜಿಂಗ್ ಘಟಕವು 10 ನವೀಕರಿಸಿದ ಬ್ಯಾಟರಿಗಳನ್ನು ಹೊಂದಿದ್ದು, 5-6 ವರ್ಷಗಳ ಜೀವಿತಾವಧಿಯನ್ನು ಹೊಂದಿದೆ ಎಂದು ಬೆಸ್ಕಾಮ್ ಅಧಿಕಾರಿಯೊಬ್ಬರು ವಿವರಿಸಿದರು.

# ಆರೋಪಿಗಾಗಿ ಪೊಲೀಸರ ತೀವ್ರ ಹುಡುಕಾಟ, ಬಿಹಾರಕ್ಕೆ ತಂಡ ರವಾನೆ

• **ಉದಯವಾಹಿನಿ, ಬೆಂಗಳೂರು**

ಚಂದಾಪುರದ ರೈಲ್ವೆ ಸೇತುವೆಯ ಬಳಿ ಟ್ರಾಲಿ ಬ್ಯಾಗ್‌ನಲ್ಲಿ ಶವವಾಗಿ ಪತ್ತೆಯಾದ 18 ವರ್ಷದ ಯುವತಿಯ ಕೊಲೆ ಪ್ರಕರಣದ ತನಿಖೆಯನ್ನು ತೀವ್ರಗೊಳಿಸರುವ ನಗರ ಪೊಲೀಸರು, ಆರೋಪಿ ಪತ್ತೆಗಾಗಿ ಬಿಹಾರ ರಾಜ್ಯಕ್ಕೆ ತೆರಳಿದ್ದಾರೆ. ಆರೋಪಿ ಬಿಹಾರ ರಾಜ್ಯದಲ್ಲಿರುವ ಕುರಿತು ಶಂಕೆಗಳು ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಆನೇಕಲ್ ಉಪವಿಭಾಗದ ಪೊಲೀಸ್ ವಿಶೇಷ ತಂಡ ಬಿಹಾರ ರಾಜ್ಯಕ್ಕೆ ಭೇಟಿ ನೀಡಿದೆ ಎಂದು ತಿಳಿದುಬಂದಿದೆ. ವಿಶ್ವಾಸಾರ್ಹ ಮಾಹಿತಿಗಳ ಆಧಾರದ ಮೇಲೆ ಆರೋಪಿಯನ್ನು ಗುರ್ತಿಸಲಾಗಿದ್ದು, ಸೂರ್ಯ ಸಿಟಿ ಪೊಲೀಸ್ ಇನ್ಸ್‌ಪೆಕ್ಟರ್, ಇತರ ಅಧಿಕಾರಿಗಳು ಬಿಹಾರಕ್ಕೆ ತೆರಳಿದ್ದಾರೆಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ. ಆರೋಪಿಯನ್ನು ಇನ್ನೂ ಬಂಧಿಸಲಾಗಿಲ್ಲ. ಮೃತ ಯುವತಿಯ ಫೋಟೋವನ್ನು ದೇಶದಾದ್ಯಂತ ಎಲ್ಲಾ ಪೊಲೀಸ್ ಠಾಣೆಗೆ ಕಳುಹಿಸಲಾಗಿತ್ತು. ಬಳಿಕ ಯುವತಿಯ ಗುರುತು ಪತ್ತೆಯಾಗಿತ್ತು. ಸಿಸಿಟಿವಿ ದೃಶ್ಯಾವಳಿಗಳು ಮತ್ತು ಇತರ ತಾಂತ್ರಿಕ ಸಾಕ್ಷ್ಯಗಳು ಆರೋಪಿ ಪತ್ತೆಗೆ ಸಹಾಯ ಮಾಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಆದಾಗ್ಯೂ, ಆರೋಪಿ ತಪ್ಪಿಸಿಕೊಳ್ಳಲು ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಪ್ರಕರಣದ ಬಗ್ಗೆ ಹೆಚ್ಚಿನ ಮಾಹಿತಿ ಬಹಿರಂಗಪಡಿಸಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

# ರಾಜ್ಯ ವಾಣಿಜ್ಯ ಮಂಡಳಿಗೆ ಕ್ರಮಕ್ಕೆ ಒತ್ತಾಯ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

**ಕನ್ನಡ ಭಾಷೆಯ ಬಗ್ಗೆ ತಾತ್ಸರವಾಗಿ ಮಾತನಾಡಿದ ತಮಿಳು ನಟ ಕಮಲಹಾಸನ್ ನಟಿಸಿರುವ ಥಗ್ ಲೈಫ್ ಸಿನಿಮಾವನ್ನು ಕರ್ನಾಟಕ ರಾಜ್ಯದಲ್ಲಿ ಬಿಡುಗಡೆ ಮಾಡಬಾರದೆಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಕಾರ್ಮಿಕ ಪರಿಷತ್ ರಾಜ್ಯಾಧ್ಯಕ್ಷರಾದ ಶ್ರೀ ರವಿ ಶೆಟ್ಟಿ ಬೈಂದುರ್ ರವರ ನೇತೃತ್ವದಲ್ಲಿ ಸಾವಿರಾರು ಕಾರ್ಯಕರ್ತರ ಜೊತೆಗೆ ನಗರ ಪೊಲೀಸ್ ಆಯುಕ್ತರು, ಕರ್ನಾಟಕ ರಾಜ್ಯ ವಾಣಿಜ್ಯ ಮಂಡಳಿಗೆ ಕ್ರಮಕ್ಕೆ ಒತ್ತಾಯಿಸಿ ದೂರು ಸಲ್ಲಿಸಿದರು**

# ಡಿಜಿಟಲ್ ಕ್ಷೇತ್ರದಲ್ಲಿ ಭಾರತ ವಿಶೇಷ ಸಾಧನೆ: ಸಂಜೀವ್ ಸನ್ಯಾಲ್

• **ಉದಯವಾಹಿನಿ, ಬೆಂಗಳೂರು**

ಆರ್ಥಿಕ ವ್ಯವಸ್ಥೆ ಮತ್ತು ಡಿಜಿಟಲ್ ಪರಿವರ್ತನೆಯ ಕ್ಷೇತ್ರಗಳಲ್ಲಿ ಭಾರತ ವಿಶೇಷ ಸಾಧನೆ ಮಾಡಿದ್ದು, ಈಗ ಆಡಳಿತದ ವಿವಿಧ ಹಂತಗಳಲ್ಲಿ ಆಳವಾದ ಸುಧಾರಣೆಯ



ಅಗತ್ಯವಿದೆ ಎಂದು ಪ್ರಧಾನ ಮಂತ್ರಿಯ ಆರ್ಥಿಕ ಸಲಹಾ ಮಂಡಳಿಯ ಸದಸ್ಯ ಸಂಜೀವ್ ಸನ್ಯಾಲ್ ಹೇಳಿದರು. ಚಾಣಕ್ಯ ವಿಶ್ವವಿದ್ಯಾಲಯದ ಯುವ ಪಥದಲ್ಲಿ 'ಕಾರ್ಯ ವಿಧಾನದಲ್ಲಿ ಸುಧಾರಣೆಗಳು ವಿಕಸಿತ ಭಾರತಕ್ಕೆ ದಾರಿ' ಎಂಬ ವಿಷಯದ ಕುರಿತು ಉಪನ್ಯಾಸ ನೀಡಿದರು. ದೇಶದ ಮುಂದಿನ ಅಭಿವೃದ್ಧಿಗೆ ವಿವಿಧ ಕ್ಷೇತ್ರಗಳಲ್ಲಿ ಸುಧಾರಣೆ ಅಗತ್ಯ. ಅಧಿಕಾರಿಶಾಹಿ ವ್ಯವಸ್ಥೆ ಮತ್ತು ಕೆಲಸದ ಪರಿಕ್ರಮಗಳನ್ನು ಸರಳಗೊಳಿಸುವುದು, ನಿರ್ಣಯ ಕೈಗೊಳ್ಳುವ ವೇಗ ಹಾಗೂ ಹೊಣೆಗಾರಿಕೆ ಹೆಚ್ಚಿಸುವುದು ಸುಧಾರಣೆಯ ಪ್ರಮುಖ ಅಂಶವಾಗಿದೆ. ಇದು ಸರ್ಕಾರ, ಖಾಸಗಿ ವಲಯದಲ್ಲಿ ಉತ್ತಮ ಫಲಿತಾಂಶಕ್ಕೆ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು. ಸಾರ್ವಜನಿಕ ಸಂಸ್ಥೆಗಳ ಕಾರ್ಯಕ್ಷಮತೆ ಹೆಚ್ಚಿಸಲು ಉತ್ತಮ ತರಬೇತಿ, ತಂತ್ರಜ್ಞಾನ ಬಳಕೆ ಮತ್ತು ಫಲಿತಾಂಶ ಆಧಾರಿತ ವ್ಯವಸ್ಥೆಗಳನ್ನು ಅನುಸರಿಸುವ ಅಗತ್ಯವಿದೆ ಎಂದು ಅವರು ಒತ್ತಿ ಹೇಳಿದರು.

# ಸ್ಯಾಂಕಿ ಕೆರೆ: ಮಣ್ಣಿನ ಏರಿ ಉಳಿಯಲಿ

• **ಉದಯವಾಹಿನಿ, ಬೆಂಗಳೂರು**

ಸ್ಯಾಂಕಿ ಕಿ ಕೆರೆಯಲ್ಲಿ ಮಣ್ಣಿನ ಏರಿಯನ್ನೇ ಉಳಿಸಿಕೊಳ್ಳಬೇಕು ಎಂದು ಸ್ಯಾಂಕಿ ಕೆರೆ ತಂಡ ಒತ್ತಾಯಿಸಿದೆ. ಸ್ಯಾಂಕಿ ಕೆರೆಯಲ್ಲಿ ಸಾಕಷ್ಟು ಪ್ರದೇಶ ಕಾಂಕ್ರೀಟ್‌ನಿಂದ ಅಭಿವೃದ್ಧಿಯಾಗಿದ್ದು, ಅಳಿದುಳಿದಿರುವ ಏರಿಯನ್ನು ನೈಸರ್ಗಿಕವಾಗಿ ಮಣ್ಣಿನ ಏರಿಯನ್ನಾಗಿ ಸಂರಕ್ಷಿಸಬೇಕು. ಯಾವುದೇ ರೀತಿಯಲ್ಲಿ ಕಾಂಕ್ರೀಟೀಕರಣ ಮಾಡಬಾರದು ಎಂದು ಬಿಬಿಎಂಪಿಯ ಕೆರೆಗಳ ವಿಭಾಗದ ವಿಶೇಷ ಆಯುಕ್ತ ಪ್ರೀತಿ ಗೆಲ್ಲೋಟ್ ಅವರಿಗೆ ಸ್ಯಾಂಕಿ ಕೆರೆ ತಂಡ ದವರು ಪತ್ರ ಬರೆದಿದ್ದಾರೆ. ಕೆರೆಯಲ್ಲಿ ಪಾದಚಾರಿ ಮಾರ್ಗವನ್ನು ನಿರ್ಮಿಸುವುದಕ್ಕೆ ನಾವು ವಿರೋಧ ವ್ಯಕ್ತಪಡಿಸುತ್ತಿಲ್ಲ. ಆದರೆ ಪರಿಸರಸ್ನೇಹಿ ವಾತಾವರಣವನ್ನು ಇದು ಹಾಳು ಮಾಡಬಾರದು. ಸ್ಯಾಂಕಿ ಕೆರೆಯ ಕೆಲವೇ ವಿಸ್ತೀರ್ಣದಲ್ಲಿ ಮಣ್ಣಿನ ಏರಿ ಉಳಿದಿದೆ. ಅದನ್ನು ಸದೃಢಗೊಳಿಸಿ, ಉಳಿಸಿಕೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ. ಹಲವು ಪ್ರಭೇದದ ಪಕ್ಷಿಗಳು ಸ್ಯಾಂಕಿ ಕೆರೆಯಲ್ಲಿವೆ. ಅವುಗಳು ಗೂಡು ಕಟ್ಟಿಕೊಂಡು, ಮರಿಗಳೊಂದಿಗೆ ವಾಸ ಮಾಡುತ್ತಿವೆ. ಜೀವವೈವಿಧ್ಯಕ್ಕೆ ನೈಸರ್ಗಿಕ ತಾಣ ಅಗತ್ಯ. ಹೀಗಾಗಿ. ಗಿಡಗಳಿಂದ ಕೂಡಿರುವ ಪಾದಚಾರಿ ಮಾರ್ಗವನ್ನು (ವಾಕಿಂಗ್ ಟ್ರ್ಯಾಕ್) ಮಣ್ಣಿನಿಂದ ಉಳಿಸಿಕೊಂಡರೆ ಪಕ್ಷಿಗಳು, ಕೀಟಗಳಿಗೆ ಅನುಕೂಲವಾಗುತ್ತದೆ ಎಂದಿದ್ದಾರೆ. ಮಣ್ಣಿನ ಏರಿ ಇರುವುದರಿಂದ ಕೆರೆಗೆ ಹರಿಯುವ ನೀರು ಸಂಸ್ಕರಿತವಾಗುತ್ತದೆ. ಅಂತರ್ಜಲ ಮರುಪೂರಣವಾಗುತ್ತದೆ. ಮಣ್ಣಿನ ಏರಿ ಸ್ಪಾಂಜ್ ರೀತಿ ಕೆಲಸ ಮಾಡಿ. ತೇವಾಂಶವನ್ನು ಉಳಿಸಿಕೊಳ್ಳುತ್ತದೆ' ಎಂದು ಸದಾಶಿವನಗರ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಸ್ಯಾಂಕಿ ಕೆರೆ ತಂಡದ ಸದಸ್ಯರು ಹೇಳಿದ್ದಾರೆ.

# ಬಿಹಾರ ಮಹಿಳೆ ದರ್ಪ ಖಂಡಿಸಿ ಆಟೋ ಚಾಲಕರ ಖಂಡನೆ

• **ಉದಯವಾಹಿನಿ, ಬೆಂಗಳೂರು**

ಆಟೋ ಚಾಲಕನಿಗೆ ಚಪ್ಪಲಿಯಿಂದ ಹಲ್ಲೆ ಮಾಡಿರುವ ಬಿಹಾರಿ ಮಹಿಳೆಯ ವಿರುದ್ಧ ಕಾನೂನು ಕ್ರಮಕ್ಕೆ ಆಗ್ರಹಿಸಿ ಆಟೋ ಚಾಲಕರು ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ ನಡೆಸಿದರು.

ಸಿಐಟಿಯು ನೇತೃತ್ವದಲ್ಲಿ ಆಟೋ ರಿಕ್ಷಾ ಡ್ರೈವರ್ಸ್ ಯುನಿಯನ್ ಆಯೋಜಿಸಿದ್ದ ಪ್ರತಿ ಭಟನೆಯಲ್ಲಿ ನೂರಾರು ಚಾಲಕರು ಭಾಗವಹಿಸಿದ್ದರು.

**ರಕ್ಷಣೆಗೆ ಕಾನೂನು ರೂಪಿಸುವಂತೆ ಆಗ್ರಹ**

ಇತ್ತೀಚೆಗೆ ಆಟೋ, ಟ್ಯಾಕ್ಸಿ ಚಾಲಕರ ಮೇಲೆ ಹಲ್ಲೆ ಘಟನೆಗಳು ಹೆಚ್ಚುತ್ತಿವೆ. ಹೀಗಾಗಿ, ಚಾಲಕರಿಗೆ ಸೂಕ್ತ ರಕ್ಷಣೆ ನೀಡಬೇಕು. ಸರ್ಕಾರಿ ನೌಕರರಿಗೆ ರಕ್ಷಣೆ ಇರುವಂತೆ ನಮಗೂ ರಕ್ಷಣೆ ಒದಗಿಸಲು


ಉದಯವಾಹಿನಿ ಚಿತ್ರ

ಕಾನೂನು ಜಾರಿಗೆ ತರಬೇಕು. ಆಟೋ ಚಾಲಕರು ತಪ್ಪು ಮಾಡಿದಾಗ, ಕೂಡಲೇ ಕೇಸ್ ದಾಖಲಿಸಿ ಕ್ರಮ ಕೈಗೊಳ್ಳಲಾಗುತ್ತದೆ. ಅದೇ ರೀತಿ ಪ್ರಯಾಣಿಕರು, ಸಾರ್ವಜನಿಕರಿಂದ ಆಟೋ ಚಾಲಕರ ಮೇಲೆ ಹಲ್ಲೆಯಾದಾಗ ಪೊಲೀಸರು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

**ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಒಕ್ಕೂಟದ ಅಧ್ಯಕ್ಷ ಎಂ. ಮಂಜುನಾಥ್, ನಗರದಲ್ಲಿ ಆಟೋ ಮತ್ತು ಟ್ಯಾಕ್ಸಿ ಚಾಲಕರಿಗೆ ಸುರಕ್ಷತೆ ಇಲ್ಲ. ಅವರು ಶಾಂತಿಯುತವಾಗಿ ಕೆಲಸ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ಹೇಳಿದರು. ಪೊಲೀಸರು ಆಟೋ ಚಾಲಕರನ್ನು ಬೆಂಬಲಿಸುವುದಿಲ್ಲ. ಆಟೋ, ಟ್ಯಾಕ್ಸಿ ಚಾಲಕರಿಗೆ ರಕ್ಷಣೆ ಕೋರಿ ರಾಜ್ಯ ಸರ್ಕಾರಕ್ಕೆ ಶೀಘ್ರದಲ್ಲೇ ಮನವಿ ಪತ್ರ ಸಲ್ಲಿಸಲಾಗುವುದು. ನಮ್ಮ ಮೇಲೆ ಹಲ್ಲೆ ನಡೆಸಿದರ ವಿರುದ್ಧ ಪೊಲೀಸರು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.**

# ನಟ ಕಮಲ್ ಹಾಸನ್ ಚಿತ್ರ ಬಿಡುಗಡೆಗೆ ಅವಕಾಶ ನೀಡಬಾರದು : ಸಿ.ವಿ.ದೇವರಾಜ್

• **ಉದಯವಾಹಿನಿ, ಬೆಂಗಳೂರು**

ತಮಿಳಿನಿಂದಲೆ ಕನ್ನಡ ಹುಟ್ಟಿದೆ ಎಂದು ಅಜ್ಞಾನ ಅವೈಜ್ಞಾನಿಕ ಹೇಳಿಕೆ ನೀಡಿದ ಬಹುಭಾಷಾ ನಟ ಕಮಲ್ ಹಾಸನ್ ಕ್ಷಮೆ ಕೇಳುವಂತೆ ಪದೇ ಪದೇ ದುಂಬಾಲು ಬೀಳುವುದು ಕನ್ನಡಿಗರ ಸ್ವಾಭಿಮಾನಕ್ಕೆ ಅಪಮಾನ ಮಾಡಿದಂತೆ ಎಂದು ರಾಜ್ಯ ಒಕ್ಕಲಿಗರ ಒಕ್ಕೂಟ ಕರ್ನಾಟಕ ರಾಜ್ಯಾಧ್ಯಕ್ಷ ಸಿ. ವಿ. ದೇವರಾಜ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನಟ ಕಮಲ್ ಹಾಸನ್ ಕನ್ನಡ ಭಾಷೆಯ ಇತಿಹಾಸ ತಿಳಿಯದೆ ನೀಡಿದ ಹೇಳಿಕೆ ಬಗ್ಗೆ ರಾಜ್ಯ ಉಚ್ಚನ್ಯಾಯಾಲಯವ ಅಸಮಧಾನ ವ್ಯಕ್ತಪಡಿಸಿದೆ. ಇತ್ತೀಚಿನ ವರ್ಷಗಳಲ್ಲಿ ಹಲವಾರು ಚಿತ್ರ ನಿರ್ಮಿಸಿ ಸೋತು ಸುಣ್ಣವಾಗಿರುವ ನಟ ಕಮಲ್ ಹಾಸನ್ ಬಿಡುಗಡೆಯಾಗಲಿರುವ ತನ್ನ ಹೊಸ ಚಿತ್ರಕ್ಕೆ ಉಚಿತ ಪ್ರಚಾರ ಪಡೆಯುವ ಉದ್ದೇಶದಿಂದ ಕನ್ನಡ ಭಾಷೆಯ ಕುರಿತು ಅಜ್ಞಾನದ ಹೇಳಿಕೆ ನೀಡಿ ವಿವಾದ ಸೃಷ್ಟಿ ಮಾಡಿದ್ದಾರೆ.

ಆ ಮೂಲಕ ತನ್ನ ಚಿತ್ರಕ್ಕೆ ಉಚಿತ ಪ್ರಚಾರ ಪಡೆಯುವ ಉದ್ದೇಶವನ್ನು ಯಶಸ್ವಿಯಾಗಿ ಇಡೇರಿಸಿಕೊಂಡಿದ್ದಾರೆ ಎಂದರು. ಕನ್ನಡಿಗರು ಮತ್ತು ಕನ್ನಡ ಪರ ಸಂಘಟನೆಗಳು ಕಮಲ್ ಹಾಸನ್ ಕ್ಷಮೆ ಕೇಳುವಂತೆ ಒತ್ತಾಯಿಸಿ ಪ್ರತಿಭಟನೆ ಮಾಡುವ ಬದಲು ಅವನ ಯಾವುದೇ ಚಿತ್ರ ಕನ್ನಡ ನೆಲದಲ್ಲಿ ಪ್ರದರ್ಶನ ಕಾಣದಂತೆ ಏಕತೆ ಪ್ರದರ್ಶಿಸಬೇಕು ಎಂದು ಮನವಿ ಮಾಡಿದ್ದಾರೆ.

ತನ್ನ ಚಿತ್ರದ ವಾಣಿಜ್ಯ ಲಾಭಕ್ಕಾಗಿ ಕನ್ನಡ ಭಾಷೆ ಹೆಸರಿನಲ್ಲಿ ವಿವಾದ ಸೃಷ್ಟಿಸಿರುವ ಕಮಲ್ ಹಾಸನ್ ಅತ್ಯಂತ ಕೆಟ್ಟ ಮತ್ತು ಕೊಳಕು ಮನಸ್ಥಿತಿಯ ವಿಕೃತ್ತ ವ್ಯಕ್ತಿ ಎಂಬುದನ್ನು ಜಗತ್ತಿಗೆ ಸಾಬೀತು


ಉದಯವಾಹಿನಿ ಚಿತ್ರ

**ಕನ್ನಡ ಚಲನ ಚಿತ್ರ ವಾಣಿಜ್ಯ ಮಂಡಳಿ ಹಾಗೂ ಚಿತ್ರ ವಿತರಕರು ಹಣದ ಆಸೆಗೆ ಬಲಿಯಾಗಿ ಯಾವುದೇ ಯಾವುದೇ ಕಾರಣಕ್ಕೂ ಕಮಲ್ ಹಾಸನ್ ಚಿತ್ರ ಬಿಡುಗಡೆಗೆ ಅವಕಾಶ ನೀಡಬಾರದು. ವಿತರಕರು ಕಮಲ್ ಹಾಸನ್ ಚಿತ್ರ ಹಂಚಿಕೆಯ ಒಪ್ಪಂದ ರದ್ದು ಪಡಿಸಬೇಕು. ವಿತರಕರೆ ಇಲ್ಲದಿದ್ದರೆ ಚಿತ್ರ ಹೇಗೆ ಬಿಡುಗಡೆಯಾಗುತ್ತದೆ. ಒಂದು ವೇಳೆ ದುರಂಹಕಾರಿ ಕಮಲ್ ಹಾಸನ್ ಕ್ಷಮೆ ಕೇಳಿದರು ಸಹಥಗ್ ಲೈಫ್ ಚಿತ್ರ ಬಿಡುಗಡೆಗೆ ಅವಕಾಶ ನೀಡಬಾರದು ಎಂದು ಸಿ.ವಿ.ದೇವರಾಜ್ ಒತ್ತಾಯಿಸಿದ್ದಾರೆ.**

ಪಡಿಸಿದ್ದಾರೆ ಎಂದು ದೇವರಾಜ್ ಹೇಳಿದ್ದಾರೆ.

ಒಂದು ವೇಳೆ ಈ ಬಾರಿ ಅದೇ ರೀತಿ ಒಳ ಒಪ್ಪಂದ ಮಾಡಿಕೊಂಡು ಕಮಲ್ ಹಾಸನ್ ಥಗ್ ಲೈಫ್ ಚಿತ್ರ ಬಿಡುಗಡೆ ಮಾಡಿದರೆ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

# ನಾಡ ಪ್ರಭುವಿಗೆ ದೃಶ್ಯ-ಶ್ರಾವ್ಯ ಗೌರವ ನೀಡಲು ಸರ್ಕಾರ ಸಜ್ಜು!

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನ ಸ್ಥಾಪನೆಗೆ ಕಾರಣರಾದ ನಾಡಪ್ರಭು ಕೆಂಪೇಗೌಡರ ಕುರಿತು ದೃಶ್ಯ ಶ್ರಾವ್ಯ ಪ್ರಸ್ತುತಿ ಹೊರತರಲು ರಾಜ್ಯ ಸರ್ಕಾರ ಸಜ್ಜಾಗಿದೆ. ಈ ಯೋಜನೆಯು ಕೆಂಪೇಗೌಡರ ಐತಿಹಾಸಿಕ ಕೊಡುಗೆಗಳು ಮತ್ತು ಪರಂಪರೆಯನ್ನು ಜೀವಂತಗೊಳಿಸುವ ಗುರಿಯನ್ನು ಹೊಂದಿದೆ. ಇದು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಮುಂಬರುವ ಕೆಂಪೇಗೌಡ ಥೀಮ್ ಪಾರ್ಕ್‌ನಲ್ಲಿ ಪ್ರವಾಸಿಗರಿಗೆ ಆಕರ್ಷಕ ಅನುಭವವನ್ನು ನೀಡುತ್ತದೆ.


ಉದಯವಾಹಿನಿ ಚಿತ್ರ

ಉದ್ಯಾನವನದ ಸ್ಥಳವನ್ನು ಪರಿಶೀಲಿಸಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ, ದೃಶ್ಯ-ಶ್ರಾವ್ಯ ವೈಶಿಷ್ಟ್ಯವು ಅಕ್ಟೋಬರ್ ಅಂತ್ಯ ಅಥವಾ ನವೆಂಬರ್ ಆರಂಭದಲ್ಲಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ ಎಂದು ಹೇಳಿದರು. ಇದು ಕೆಂಪೇಗೌಡರ ಜೀವನ ಮತ್ತು ಬೆಂಗಳೂರಿನ ಅಭಿವೃದ್ಧಿಗೆ ನೀಡಿದ ಕೊಡುಗೆಗಳ ಬಗ್ಗೆ ಸಮಗ್ರ ನೋಟವನ್ನು ನೀಡುತ್ತದೆ ಎಂದು ಅವರು ಹೇಳಿದರು. ಇತಿಹಾಸಕಾರರು ಮತ್ತು ತಜ್ಞರಿಂದ ಇನ್‌ಪುಟ್‌ಗಳನ್ನು ಪಡೆದು ಸುಮಾರು 6 ಕೋಟಿ ರೂ. ವೆಚ್ಚದಲ್ಲಿ ಆಡಿಯೋ ದೃಶ್ಯವನ್ನು ಸಿದ್ಧಪಡಿಸಲಾಗುವುದು. ಈ ಆಡಿಯೋ-ಶ್ರವಣ ಪ್ರಸ್ತುತಿಯನ್ನು ಅಭಿವೃದ್ಧಿಪಡಿಸುವ ಜವಾಬ್ದಾರಿಯನ್ನು ನೀಡಲಾಗಿದೆ. ನಮ್ಮ ತಂಡವು ಪ್ರಗತಿಯನ್ನು ಟ್ರ್ಯಾಕ್ ಮಾಡುತ್ತದೆ ಎಂದು ಅವರು ಹೇಳಿದರು. 1537 ರಲ್ಲಿ ಬೆಂಗಳೂರನ್ನು ಸ್ಥಾಪಿಸಿದ್ದಕ್ಕಾಗಿ, ಮಣ್ಣಿನ ಕೋಟೆಯನ್ನು ಸ್ಥಾಪಿಸಿದ್ದಕ್ಕಾಗಿ, ಶತಮಾನಗಳ ಕಾಲ ನಗರವನ್ನು ಉಳಿಸಿಕೊಂಡಿದ್ದ ಅದರ ವಿಶಿಷ್ಟ ಕೆರೆ ನಿರ್ಮಿಸಿದ್ದಕ್ಕಾಗಿ ಕೆಂಪೇಗೌಡರನ್ನು ಗೌರವಿಸಲಾಗುತ್ತದೆ.

# ಪಿಸ್ತೂಲ್ ಹಿಡಿದು ಬೆದರಿಕೆ ಆರೋಪ

• **ಉದಯವಾಹಿನಿ, ಬೆಂಗಳೂರು**

ಎಎಸ್‌ಐ ಒಬ್ಬರು ಸಾರ್ವಜನಿಕ ಸ್ಥಳದಲ್ಲಿ ಪಿಸ್ತೂಲ್ ಹಿಡಿದು ಬೆದರಿಕೆ ಹಾಕಿದ್ದ ಆರೋಪವಿದ್ದು, ಈ ಸಂಬಂಧ ಹಿರಿಯ ಅಧಿಕಾರಿಗಳಿಗೆ ದೂರು ನೀಡಲಾಗಿದೆ. ಈ ಸಂಬಂಧ ಪೊಲೀಸ್ ಅಧಿಕಾರಿಗಳು ತನಿಖೆ ಆರಂಭಿಸಿದ್ದಾರೆ.'ಮಡಿವಾಳ ಎಎಸ್‌ಐ ಕುಮಾರ್ ಮೇಲೆ ಆರೋಪ ಇದೆ. ಘಟನೆಯ ಸಂಬಂಧ ಮಡಿವಾಳ ಉಪ ವಿಭಾಗದ ಎಸಿಪಿ ತನಿಖೆ ಕೈಗೊಂಡಿದ್ದಾರೆ' ಎಂದು ಗೊತ್ತಾಗಿದೆ. ಮೇ 23ರ ಮಧ್ಯರಾತ್ರಿ 1.35ಕ್ಕೆ ಮಡಿವಾಳದ ಜಕ್ಕಸಂದ್ರದ ಖಾಸಗಿ ಹೋಟೆಲ್‌ನಲ್ಲಿ ಘಟನೆ ನಡೆದಿದೆ.

ಮಡಿವಾಳದ ಹೋಟೆಲ್‌ನಲ್ಲಿ ಆಡಳಿತ ಮಂಡಳಿ, ಕಾರ್ಮಿಕರ ಮಧ್ಯೆ ಸಂಬಳದ ವಿಚಾರಕ್ಕೆ ಮೂರು ತಿಂಗಳಿಂದ ಗಲಾಟೆ ನಡೆಯುತ್ತಿತ್ತು. ಗಲಾಟೆ ಸಂಬಂಧ ಕಾರ್ಮಿಕನೊಬ್ಬ ಪೊಲೀಸ್ ಕಂಟ್ರೋಲ್‌ಗೆ ರೂಂಗೆ ಕರೆ ಮಾಡಿದ್ದ. ಕರೆ ಆಧರಿಸಿ ಸ್ಥಳಕ್ಕೆ ಹೋಗಿ ವಿಚಾರಿಸಿದ್ದೇನೆ. ಪಿಸ್ತೂಲ್‌ನ ಪೌಚ್ ಕಿತ್ತುಹೋಗಿತ್ತು. ಕೈನಲ್ಲಿ ಪಿಸ್ತೂಲ್ ಹಿಡಿದುಕೊಂಡು ಮಾಹಿತಿ ಪಡೆದಿದ್ದೇನೆ' ಎಂದು ಪ್ರಾಥಮಿಕ ತನಿಖೆ ವೇಳೆ ಕುಮಾರ್ ಹೇಳಿಕೆ ನೀಡಿದ್ದಾರೆ.



ತನಿಖೆ ವೇಳೆ ಪೊಲೀಸ್ ಠಾಣೆಗೆ ಮತ್ತು ಪೊಲೀಸರ ಸಹಾಯವಾಣಿಗೆ ಯಾವುದೇ ಕರೆ ಬಂದಿರಲಿಲ್ಲ ಎಂಬುದು ಗೊತ್ತಾಗಿದೆ.

ತನಿಖೆ ಪೂರ್ಣವಾದ ಬಳಿಕ ಘಟನೆಯ ಪೂರ್ಣ ಮಾಹಿತಿ ನೀಡಲಾಗುವುದು ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಹೋಟೆಲ್‌ಗೆ ಬಂದಿದ್ದ ಎಎಸ್‌ಐ ಪಿಸ್ತೂಲ್ ಹಿಡಿದು ಓಡಾಡಿರುವ ದೃಶ್ಯ ಹೋಟೆಲ್‌ನ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ.

ಹೋಟೆಲ್ ಸಿಬ್ಬಂದಿ ಈ ದೃಶ್ಯವನ್ನು ಸಾಮಾಜಿಕ ಮಾಧ್ಯಮದಲ್ಲಿ ಹರಿಯಬಿಟ್ಟಿದ್ದಾರೆ. 'ಪೊಲೀಸ್ ಶಿಷ್ಟಾಚಾರದ ಪ್ರಕಾರ ಪಿಸ್ತೂಲ್ ಹಿಡಿದುಕೊಂಡು ಸಾರ್ವಜನಿಕವಾಗಿ ಓಡಾಡುವಂತಿಲ್ಲ. ಗಲಾಟೆ ನಡೆದ ಸಂದರ್ಭದಲ್ಲಿ ಪಿಸ್ತೂಲ್ ಬಳಸಿ ಕೇವಲ ಗಾಳಿಯಲ್ಲಿ ಗುಂಡು ಹಾರಿಸಬಹುದು. ಘಟನೆ ಕುರಿತು ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಕರ್ನಾಟಕದಲ್ಲಿ ತಾಂತ್ರಿಕ ಶಿಕ್ಷಣ ಬಲವರ್ಧನೆಗೆ ಒತ್ತು


• **ಉದಯವಾಹಿನಿ, ಬೆಂಗಳೂರು**

ಕರ್ನಾಟಕದಲ್ಲಿ ತಾಂತ್ರಿಕ ಶಿಕ್ಷಣವನ್ನು ಬಲಪಡಿಸುವ ಪ್ರಯತ್ನವಾಗಿ, ರಾಜ್ಯ ಸರ್ಕಾರವು ಏಷ್ಯನ್ ಅಭಿವೃದ್ಧಿ ಬ್ಯಾಂಕ್ ನಿಂದ 2,600 ಕೋಟಿ ರೂಪಾಯಿ ಸಾಲ ಪಡೆದುಕೊಳ್ಳುತ್ತಿದೆ. ಪಾಲಿಟೆಕ್ನಿಕ್,ಇಂಜಿನಿಯರಿಂಗ್ ಕಾಲೇಜುಗಳನ್ನು ಮೇಲ್ದರ್ಜೆಗೇರಿಸಲು, ಉದ್ಯಮ-ಸಂಬಂಧಿತ ಮತ್ತು ಕೌಶಲ್ಯ ಆಧಾರಿತ ಕಲಿಕೆಯನ್ನು ಉತ್ತೇಜಿಸಲು ಈ ಸಾಲವನ್ನು ಬಳಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ, ಎಂ.ಸಿ. ಸುಧಾಕರ್ ಹೇಳಿದ್ದಾರೆ.

ರಾಜ್ಯದಲ್ಲಿ ಉನ್ನತ ಶಿಕ್ಷಣ ಕ್ಷೇತ್ರದ ಕುರಿತು ನವೀಕರಣಗಳು ಮತ್ತು ಮಾಹಿತಿಯನ್ನು ಒದಗಿಸಲು ಉನ್ನತ ಶಿಕ್ಷಣ ಇಲಾಖೆ ಹೊರತಂದಿರುವ ಕರ್ನಾಟಕ ಉನ್ನತ ಶಿಕ್ಷಣ ತ್ರೈಮಾಸಿಕ ನಿಯತಕಾಲಿಕೆಯ ಬಿಡುಗಡೆ ಸಮಾರಂಭದಲ್ಲಿ ಈ ವಿಷಯ ತಿಳಿಸಿದರು.

ಈ ನಿಯತಕಾಲಿಕವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ನಿವಾಸದಲ್ಲಿ ಅಧಿಕೃತವಾಗಿ ಬಿಡುಗಡೆ ಮಾಡಿದರು. ರಾಜ್ಯದಲ್ಲಿ ತಾಂತ್ರಿಕ ಶಿಕ್ಷಣ ಮೂಲಸೌಕರ್ಯವನ್ನು ಸುಧಾರಿಸಲು 2,600 ಕೋಟಿ ರೂಪಾಯಿ ಸಾಲವನ್ನು ನೀಡಲು ಎಡಿಬಿ ಒಪ್ಪಿಕೊಂಡಿದೆ.

ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಆರ್ಥಿಕ ವ್ಯವಹಾರಗಳ ಇಲಾಖೆ ಪ್ರಸ್ತಾವನೆಯನ್ನು ಅನುಮೋದಿಸಿದೆ. ಎಡಿಬಿ ಅಧಿಕಾರಿಗಳು ನಮ್ಮ ಸಂಸ್ಥೆಗಳಿಗೆ ಭೇಟಿ ನೀಡಿದ್ದು, ಸಾಲವನ್ನು ಶೀಘ್ರದಲ್ಲೇ ಬಿಡುಗಡೆ ಮಾಡಲಿದೆ ಎಂದು ಡಾ. ಸುಧಾಕರ್ ಹೇಳಿದರು. ತ್ರೈಮಾಸಿಕ ನಿಯತಕಾಲಿಕವು ಉನ್ನತ ಶಿಕ್ಷಣ ಇಲಾಖೆ ಮತ್ತು ಸಂಸ್ಥೆಗಳ ನಡುವೆ ಸಂವಹನ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ. ಇದು ಸರ್ಕಾರಿ ಆದೇಶಗಳು, ನಿಯಮಗಳು, ಭಾರತೀಯ, ಅಂತಾರಾಷ್ಟ್ರೀಯ ವಿಶ್ವವಿದ್ಯಾಲಯಗಳು ಮಾಡಿದ ಶೈಕ್ಷಣಿಕ ಪ್ರಗತಿಯ ಕುರಿತು ಶಿಕ್ಷಣ ತಂತ್ರಜ್ಞಾನದಲ್ಲಿನ ಜಾಗತಿಕ ಪ್ರವೃತ್ತಿಗಳು ಮತ್ತು ತಜ್ಞರ ಲೇಖನಗಳನ್ನು ಪ್ರಕಟಿಸುತ್ತದೆ ಎಂದು ಅವರು ಹೇಳಿದರು.

ಉದಯವಾಹಿನಿ ಚಿತ್ರ


### ಆಗುವ ಅನುಕೂಲತೆಗಳೇನು?

**ಪಾಲಿಟೆಕ್ನಿಕ್, ಇಂಜಿನಿಯರಿಂಗ್ ಕಾಲೇಜುಗಳು ಉತ್ತಮ ಸೌಲಭ್ಯಗಳೊಂದಿಗೆ ಸಜ್ಜುಗೊಳ್ಳಲಿವೆ. ವಿದ್ಯಾರ್ಥಿಗಳು ಕೋರ್ಸ್ ಮುಗಿಸಿ ಉದ್ಯೋಗಕ್ಕೆ ಸಜ್ಜಾಗಲು ಪ್ರಾಯೋಗಿಕ ಮತ್ತು ಕೌಶಲ್ಯ ಆಧಾರಿತ ಶಿಕ್ಷಣದ ಮೇಲೆ ಗಮನ ಹರಿಸಲಾಗುವುದು. ತಾಂತ್ರಿಕ ಮತ್ತು ಉನ್ನತ ಶಿಕ್ಷಣ ವಿದ್ಯಾರ್ಥಿಗಳಿಗೆ ಉದ್ಯೋಗವನ್ನು ಖಾತರಿಪಡಿಸುವ ತರಬೇತಿಯನ್ನು ನೀಡುವುದು ನಮ್ಮ ಗುರಿಯಾಗಿದೆ. ಈ ಹೂಡಿಕೆಯು ಶಿಕ್ಷಣ ಮತ್ತು ಕೈಗಾರಿಕಾ ಅಗತ್ಯಗಳ ನಡುವಿನ ಅಂತರವನ್ನು ಕಡಿಮೆ ಮಾಡುತ್ತದೆ ಎಂದು ಸಚಿವರು ಹೇಳಿದರು.**

# ಕೈ ಕಾರ್ಯಕರ್ತರಿಗೆ 7.65 ಕೋಟಿ ರೂ ಹಣ ಬಿಡುಗಡೆ

## ಫಲಾನುಭವಿಗಳ ಕುರಿತು ನಿರ್ಲಕ್ಷ್ಯ: ಸರ್ಕಾರದ ನಡೆ ವಿರುದ್ಧ ತೀವ್ರ ಆಕ್ರೋಶ

• **ಉದಯವಾಹಿನಿ, ಬೆಂಗಳೂರು**

5 ಗ್ಯಾರಂಟಿ ಯೋಜನೆಗಳಿಂದ ರಾಜ್ಯದಲ್ಲಿ ಅಧಿಕಾರದ ಚುಕ್ಕಾಣಿ ಹಿಡಿದ ಕಾಂಗ್ರೆಸ್, ಫಲಾನುಭವಿಗಳ ಕುರಿತು ನಿರ್ಲಕ್ಷ್ಯ ತೋರುತ್ತಿದ್ದು, ಫಲಾನುಭವಿಗಳಿಗೆ ಸರಿಯಾಗಿ ಯೋಜನೆ ತಲುಪಿಸದಿದ್ದರೂ ಗ್ಯಾರಂಟಿ ಅನುಷ್ಠಾನ ಸಮಿತಿಯಲ್ಲಿದ್ದ ಕಾಂಗ್ರೆಸ್‌ನ ಕಾರ್ಯಕರ್ತರಿಗೆ ಕಾರ್ಯಕರ್ತರಿಗೆ 7.65 ಕೋಟಿ ರೂ ಹಣ ಬಿಡುಗಡೆ ಮಾಡಿದೆ. ಸರ್ಕಾರ ಈ ನಡೆ ಇದೀಗ ಆಕ್ರೋಶಕ್ಕೆ ಕಾರಣವಾಗಿದೆ.

ರಾಜ್ಯ ಸರ್ಕಾರದ ಗೃಹಲಕ್ಷ್ಮೀ ಯೋಜನೆಯ ಹಣ ಪ್ರತಿ ತಿಂಗಳು ಮಹಿಳೆಯರ ಖಾತೆಗೆ ಜಮೆ ಆಗುತ್ತಿಲ್ಲ. ಶಕ್ತಿ ಯೋಜನೆಯಿಂದಾಗಿ ಸಾರಿಗೆ ಇಲಾಖೆ ಸಂಕಷ್ಟಕ್ಕೆ ಸಿಲುಕಿದ್ದು, ಟಿಕೆಟ್ ದರ ಏರಿಕೆ ಮಾಡಿ ಬರೆ ಎಳೆದಿದೆ. ಇನ್ನು ಯುವನಿಧಿ ಬಗ್ಗೆ ಸರ್ಕಾರ ಯಾವುದೇ ಮಾಹಿತಿ ನೀಡುತ್ತಿಲ್ಲ. ಅನ್ನಭಾಗ್ಯದ ಲೋಪದೋಷಗಳ ಕುರಿತು ಜನರು ಹಿಡಿಶಾಪ ಹಾಕುತ್ತಿದ್ದಾರೆ. ಗೃಹಜ್ಯೋತಿಯ ಸರಾಸರಿಯನ್ನು 2ನೇ ವರ್ಷ ಇನ್ನೂ ಪರಿಷ್ಕರಣೆ ಮಾಡಿಲ್ಲ. ಗ್ಯಾರಂಟಿ ಯೋಜನೆಗಳಿಂದ ಫಲಾನುಭವಿಗಳು



ಉದಯವಾಹಿನಿ ಚಿತ್ರ

ಲಾಭ ಪಡೆಯಿದ್ದರೂ, ಸರ್ಕಾರ ಮಾತ್ರಕ ಗ್ಯಾರಂಟಿ ಅನುಷ್ಠಾನ ಸಮಿತಿಯಲ್ಲಿದ್ದ ಕಾಂಗ್ರೆಸ್‌ನ ಕಾರ್ಯಕರ್ತರಿಗೆ ಭರ್ಜರಿ ಹಣ ಬಿಡುಗಡೆ ಮಾಡಿದೆ.

ಗ್ಯಾರಂಟಿ ಅನುಷ್ಠಾನ ಸಮಿತಿಯಲ್ಲಿದ್ದ ಕಾಂಗ್ರೆಸ್ ಕಾರ್ಯಕರ್ತರಿಗೆ 7.65 ಕೋಟಿ ಹಣ ಬಿಡುಗಡೆಗೆ ಸರ್ಕಾರ ಆದೇಶ ನೀಡಿದೆ. ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರು, ಉಪಾಧ್ಯಕ್ಷರ ಗೌರವಧನ ಮತ್ತು ಸದಸ್ಯರಿಗೆ ಹಣ ಬಿಡುಗಡೆಗೆ ಆದೇಶ ನೀಡಲಾಗಿದೆ. ಏಪ್ರಿಲ್ ತಿಂಗಳಿಂದ ಆಗಸ್ಟ್ ವರೆಗೂ ಸಭಾ ಭತ್ಯೆ ಬಿಡುಗಡೆಗೆ ಸೂಚನೆ ನೀಡಲಾಗಿದ್ದು, 3 ತಿಂಗಳ ಅಡ್ವಾನ್ಸ್ ಹಣ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯಿಂದ ಆದೇಶ ಹೊರಡಿಸಲಾಗಿದೆ. ಇನ್ನು ಆದೇಶದಲ್ಲಿ ಅಧಿಕಾರಿಗಳಿಗೆ ಷರತ್ತು ಕೂಡ ವಿಧಿಸಲಾಗಿದೆ.

ಈ ಅನುದಾನವನ್ನು ಆರ್ಥಿಕ ಇಲಾಖೆಯಿಂದ ಕಾಲಕಾಲಕ್ಕೆ ನೀಡಲಾಗಿರುವ ಸೂಚನೆಗಳ ಅನುಸಾರ ಆದ್ಯತೆಯ ಮೇಲೆ ವೆಚ್ಚ ಮಾಡಬೇಕು. ಷರಾದಲ್ಲಿ ತಿಳಿಸಿರುವ ಉದ್ದೇಶಕ್ಕೆ ಮಾತ್ರ ವೆಚ್ಚ ಮಾಡಬೇಕು. ಯಾವುದೇ ಹಂತದಲ್ಲಿ ಅನುಷ್ಠಾನ ಅಧಿಕಾರಿ ಹಂತದಲ್ಲಿ ವಿಳಂಬವಾಗಿ. ಅನುದಾನ ವ್ಯತ್ಯಾಸವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲ. ಭತ್ಯೆ ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

**ಬಿಜೆಪಿ ತೀವ್ರ ಆಕ್ರೋಶ**

**ಸರ್ಕಾರದ ಈ ನಡೆಗೆ ಬಿಜೆಪಿ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ. ಕಾಂಗ್ರೆಸ್ ಕಾರ್ಯಕರ್ತರಿಗೆ ಗ್ಯಾರಂಟಿ ಸಮಿತಿ ಹೆಸರಲ್ಲಿ ಮುಂಗಡ ವೇತನ ನೀಡುವ ಈ ದರಿದ್ರ ಸರ್ಕಾರ ಡಾಟಾ ಆಪರೇಟರ್‌ಗಳಿಗೆ 4 ತಿಂಗಳುಗಳಿಂದ ವೇತನ ನೀಡದೆ ಸತಾಯಿಸುತ್ತಿದೆ. ವೇತನ ನೀಡದ ಕಾರಣ ಆಸ್ಪತ್ರೆಗಳಲ್ಲಿ ಡಾಟಾ ಆಪರೇಟರ್ ಗಳ ಸೇವೆ ಲಭ್ಯವಾಗುತ್ತಿಲ್ಲ, ಇದರಿಂದ ಸಾರ್ವಜನಿಕರು ಹೈರಾಣಾಗುತ್ತಿದ್ದಾರೆ. ರಾಜ್ಯದ ಸರ್ಕಾರಿ/ ಅರೆ ಸರ್ಕಾರಿ/ ಗುತ್ತಿಗೆ ಆಧಾರಿತ ನೌಕರರನ್ನೂ ಮೀರಿಸಿ ಕಾಂಗ್ರೆಸ್ ಕಾರ್ಯಕರ್ತರು ಮುಂಗಡ ವೇತನ ಪಡೆಯುತ್ತಿರುವುದು ಈ ರಾಜ್ಯದ ದುರಂತವೇ ಸರಿ ಎಂದು ಕಿಡಿಕಾರಿದೆ.**

# ಎಪಿಎಸ್ ಗೆ ಎನ್.ಬಿ.ಎ ಮಾನ್ಯತೆ

• **ಉದಯವಾಹಿನಿ, ಬೆಂಗಳೂರು**

60 ವರ್ಷಗಳ ಸಾರ್ಥಕ ಸೇವೆ ಸಲ್ಲಿಸಿರುವ ಎಪಿಎಸ್ ಗೆ ನ್ಯಾಷನಲ್ ಬೋರ್ಡ್ ಆಫ್ ಅಕ್ರಿಡಿಟೇಶನ್ (ಎನ್.ಬಿ.ಎ) ಮಾನ್ಯತೆ ದೊರೆತಿದೆ. ಎಪಿಎಸ್ ಕಾಲೇಜ್ ಆಫ್ ಇಂಜಿನಿಯರಿಂಗ್ ನ ಕಂಪ್ಯೂಟರ್ ಸೈನ್ಸ್, ಇಂಜಿನಿಯರಿಂಗ್, ಎಲೆಕ್ಟ್ರಾನಿಕ್ ಮತ್ತು ಕಮ್ಯುನಿಕೇಶನ್ ಇಂಜಿನಿಯರಿಂಗ್ ಕಾರ್ಯಕ್ರಮಗಳಿಗೆ ಮುಂದಿನ ಮೂರು ವರ್ಷಗಳಿಗೆ ಮಾನ್ಯತೆ ದೊರೆತಿದೆ.




ಉದಯವಾಹಿನಿ ಚಿತ್ರ

ಈ ಸಾಧನೆಯು ನ್ಯಾಷನಲ್ ಅಸೆಸ್ಮೆಂಟ್ ಮತ್ತು ಅಕ್ರಿಡಿಟೇಶನ್ ಕೌನ್ಸಿಲ್ (ಎನ್ಎಎಸಿ) ಯಶಸ್ವಿ ಮಾನ್ಯತೆಯ ನಂತರ ಬಂದಿದೆ. ಸಂಸ್ಥೆಯು ಉನ್ನತ-ತಂತ್ರಜ್ಞಾನ ಶಿಕ್ಷಣ ನೀಡಲು ಬದ್ಧವಾಗಿದ್ದು, 3ಡಿ ಪ್ರಿಂಟಿಂಗ್ ಲ್ಯಾಬ್, ರೋಬೋಟಿಕ್ಸ್ ಲ್ಯಾಬ್ ಮತ್ತು ವಿ.ಎಲ್.ಎಸ್.ಐ. ಲ್ಯಾಬ್ ಗಳ ಮೂಲಕ ಶಿಕ್ಷಣ ನೀಡಲಾಗುತ್ತಿದೆ.

ಬರುವ 2025-26 ನೇ ಸಾಲಿಗೆ ಎಪಿಎಸ್ ಕಾಲೇಜ್ ಆಫ್ ಇಂಜಿನಿಯರಿಂಗ್‌ನಲ್ಲಿ ಪ್ರವೇಶಕ್ಕೆ ಅವಕಾಶವಿದೆ. ಸಿಲಿಕಾನ್ ಇಂಡಿಯಾ ಎಜುಕೇಶನ್ ಮ್ಯಾಗಜೀನ್‌ನ ಸಮೀಕ್ಷೆಯ ಪ್ರಕಾರ ಎಪಿಎಸ್ ಪಬ್ಲಿಕ್ ಸ್ಕೂಲ್ ಬೆಂಗಳೂರಿನ ಅತ್ಯುತ್ತಮ ಐಸಿಎಸ್ಇ ಶಾಲೆಗಳಲ್ಲಿ ಮೊದಲ ಸ್ಥಾನದಲ್ಲಿದೆ. ಇಲ್ಲಿ ವಿಜ್ಞಾನ, ವಾಣಿಜ್ಯ, ಕ್ರೀಡೆ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಸಮಗ್ರ ಶಿಕ್ಷಣ ನೀಡಲಾಗುತ್ತಿದೆ ಎಂದು ಎಪಿಎಸ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ. ವಿಷ್ಣುಭರತ್ ಅಲಂಪಲ್ಲಿ ತಿಳಿಸಿದ್ದಾರೆ.

## ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಸಚಿವರಿಗೆ ರೈತರ ಮನವಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ತಿ.ನರಸೀಪುರ

ಕಬ್ಬಿನ ಎಫ್‌ಆರ್‌ಪಿ ದರ, ಉಪ ಉತ್ಪನ್ನಗಳ ಲಾಭ ಹಂಚಿಕೆ ಸೇರಿ ರೈತರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕಬ್ಬು ಬೆಳೆಗಾರರ ಸಂಘದ ಮುಖಂಡರು ಸರ್ಕಾರಕ್ಕೆ ಒತ್ತಾಯಿಸಿದ್ದಾರೆ. ಪಟ್ಟಣದಲ್ಲಿ ಕೆಡಿಪಿ ಸಭೆಗೆ ಆಗಮಿಸಿದ್ದ ಸಮಾಜ ಕಲ್ಯಾಣ, ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ. ಮಹದೇವಪ್ಪ ಅವರಿಗೆ ಸಂಘದ ಮುಖಂಡರು ಹಕ್ಕೊತ್ತಾಯದ ಮನವಿ ಪತ್ರವನ್ನು ಮಂಗಳವಾರ ಸಲ್ಲಿಸಿದರು. ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷ ಕಿರಗಸೂರು ಶಂಕರ್, ಕಬ್ಬಿನ ಎಫ್‌ಆರ್‌ಪಿ ದರ ಪುನರ್ ಪರಿಶೀಲನೆ, ರೈತನ ಹೊಲದಲ್ಲಿ ದರ ನಿಗದಿ, ಸಕ್ಕರೆ ಕಾರ್ಖಾನೆಗಳಿಂದ ಕಳೆದ ವರ್ಷದ ಉಪ ಉತ್ಪನ್ನಗಳ ಲಾಭ ಹಂಚಿಕೆ, ಕಳೆದ ವರ್ಷದ ಸರ್ಕಾರ ನಿಗದಿಪಡಿಸಿರುವ ಹೆಚ್ಚುವರಿ ಬೆಲೆ 150 ರೂಪಾಯಿಗಳಂತೆ ಕಾರ್ಖಾನೆಗಳಿಂದ ರೈತರಿಗೆ ಬರಬೇಕಿರುವ 950 ಕೋಟಿ ಬಾಕಿ ಕೊಡಿಸುವಂತೆ ಸಚಿವರಲ್ಲಿ ಮನವಿ ಮಾಡಿದ್ದೇವೆ ಎಂದು ತಿಳಿಸಿದರು.

> **ರೈತರ ಸಾಲಗಳಿಗೆ ಬಡ್ಡಿ ಕಟ್ಟಿಸಿಕೊಂಡು ಮರು ಸಾಲ ನವೀಕರಣ ಮಾಡಿ ಕೊಡುವುದು, ಸಕಾಲದಲ್ಲಿ ರೈತರಿಗೆ ಕೃಷಿ ಸಾಲ ಮತ್ತು ಇನ್ನಿತರ ಸಾಲ ಸೌಲಭ್ಯ ದೊರಕಿಸಲು ಬ್ಯಾಂಕುಗಳಿಗೆ ಆದೇಶ ನೀಡುವುದು, ಖಾಸಗಿ ಶಾಲಾ, ಕಾಲೇಜುಗಳಲ್ಲಿ ಡೋನೇಶನ್ ತಪ್ಪಿಸಲು ಅಗತ್ಯ ಕ್ರಮ ಕೈಗೊಳ್ಳುವುದು, ಪಟ್ಟಣದ ವ್ಯಾಪ್ತಿಗಳಲ್ಲಿನ ಗುಂಡಿ ಬಿದ್ದ ರಸ್ತೆಗಳ ದುರಸ್ತಿಪಡಿಸಬೇಕು ಎಂದು ಒತ್ತಾಯಿಸಲಾಗಿದೆ ಎಂದರು.**

ಮುಂಗಾರಿನಲ್ಲಿ ರೈತರಿಗೆ ಸಕಾಲದಲ್ಲಿ ಬಿತ್ತನೆ ಬೀಜ, ರಸಗೊಬ್ಬರಗಳು ಸಬ್ಸಿಡಿ ದರದಲ್ಲಿ ವಿತರಣೆ ಆಗಬೇಕು. ತುಂಬಲದ ನ್ಯಾಚುರಲ್ ಆ್ಯಂಡ್ ಎಫೆನ್ಸಿಯಲ್ ಆಯಿಲ್ ಪ್ರೈವೇಟ್ ಲಿಮಿಟೆಡ್‌ನಿಂದ ರೈತರು ಬೆಳೆದ ಸುಗಂಧರಾಜ ಹೂವು ಖರೀದಿ ಮಾಡಲು, ಹೆಚ್ಚಿನ ದರ ನಿಗದಿಯಾಗಬೇಕು. ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಅಕ್ರಮ ಸಕ್ರಮ ಯೋಜನೆ ಜಾರಿ ಸೇರಿಯೂ ಸೇರಿ ರೈತರ ವಿವಿಧ ಸಮಸ್ಯೆಗಳನ್ನು ಪರಿಹರಿಸುವಂತೆ ರಾಜ್ಯ ಕಬ್ಬು ಬೆಳೆಗಾರರ ಸಂಘ ಒತ್ತಾಯಿಸಿ, ಸಚಿವರ ಮೂಲಕ ಸರ್ಕಾರಕ್ಕೆ ಮನವಿ ಮಾಡಿದ್ದೇವೆ ಎಂದು ಹೇಳಿದರು.

# ರೈತರ ಮೇಲೆ ಪಾಳೆಗಾರಿಕೆ ಮಾಡೋದು ನಿಲ್ಲಿಸಿ

## ಡಿಸಿಎಂ ಡಿಕೆ ಶಿವಕುಮಾರ್ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಾಗ್ದಾಳಿ

• ಉದಯವಾಹಿನಿ, ತುಮಕೂರು

ರೈತರ ಹೋರಾಟವನ್ನ ಪ್ರತಿಷ್ಠೆಯಾಗಿ ತೆಗೆದುಕೊಳ್ಳಬೇಡಿ. ಸೌಜನ್ಯಯುತವಾಗಿ ಎಲ್ಲರ ಅಭಿಪ್ರಾಯ ಪಡೆದು ತೀರ್ಮಾನ ತೆಗೆದುಕೊಂಡು ತೀರ್ಮಾನ ತಗೊಳ್ಳಬೇಕು. ದುರಹಂಕಾರದ ವರ್ತನೆಯನ್ನು ಕೈಬಿಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ. ವಿಜಯೇಂದ್ರ ಅವರು ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ತಾಕೀತು ಮಾಡಿದ್ದಾರೆ.

> **ರೈತರ ಪರವಾಗಿ ನಿಲ್ಲುವಂತೆ ಸರ್ಕಾರಕ್ಕೆ ಎಚ್ಚರಿಕೆ**
> **ಬಿ.ವೈ. ವಿಜಯೇಂದ್ರ ಅವರು ಡಿಸಿಎಂ ಡಿ.ಕೆ. ಶಿವಕುಮಾರ್ ಅವರಿಗೆ ರೈತರ ಹೋರಾಟವನ್ನು ಪ್ರತಿಷ್ಠೆಯಾಗಿ ಪರಿಗಣಿಸದೆ, ಸೌಜನ್ಯದಿಂದ ಅಭಿಪ್ರಾಯಗಳನ್ನು ಪಡೆದು ನಿರ್ಧಾರ ತೆಗೆದುಕೊಳ್ಳುವಂತೆ ಸೂಚಿಸಿದ್ದಾರೆ. ಹೇಮಾವತಿ ಲಿಂಕ್ ಕೆನಾಲ್ ಕಾಮಗಾರಿ ವಿರೋಧಿಸಿ ಪ್ರತಿಭಟನೆ ನಡೆಸಿದ ರೈತರನ್ನು ಬೆಂಬಲಿಸಿ, ಸರ್ಕಾರ ರೈತರ ಹೋರಾಟವನ್ನು ಹತ್ತಿಕ್ಕುವ ಪ್ರಯತ್ನ ಮಾಡುತ್ತಿದೆ ಎಂದು ಅವರು ಆರೋಪಿಸಿದ್ದಾರೆ. ರೈತರ ಪರವಾಗಿ ನಿಲ್ಲುವಂತೆ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.**

ಮೇ 31ರಂದು ಗುಬ್ಬಿ ತಾಲ್ಲೂಕಿನಲ್ಲಿ ನಡೆಯುತ್ತಿದ್ದ ಹೇಮಾವತಿ ಲಿಂಕ್ ಕೆನಾಲ್ ಕಾಮಗಾರಿಯನ್ನು ನಿಲ್ಲಿಸಿ ರೈತರು ಪ್ರತಭಟನೆ ನಡೆಸಿದ್ದು, ಅವರೆಲ್ಲರ ವಿರುದ್ಧ ಎಫ್ ಐಆರ್ ದಾಖಲಾಗಿದೆ. ಆ ಹಿನ್ನೆಲೆಯಲ್ಲಿ, ರೈತರ ಮನೆಗಳಿಗೆ ಜೂ. 3ರಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅವರು ಭೇಟಿ ನೀಡಿದ್ದರು. ಈ ಸಂದರ್ಭದಲ್ಲಿ, ಸಂಕಾಪುರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರೈತರಿಗೆ ಬಲ ತುಂಬಲು ಐತಿಹಾಸಿಕ ಹೋರಾಟ ಈ ಜಾಗದಲ್ಲಿ ನಡೆಯಿತು. ನಾವೆಲ್ಲ ಬಂದಿರೋದು ರಾಜಕೀಯ ಮಾಡಲು ಅಲ್ಲ. ಈ ಭಾಗದ ರೈತರ ಹಕ್ಕನ್ನ ಕಿತ್ತುಕೊಳ್ಳಲು ಹೊರಟಿದೆ. ಅವರ ಬೆಂಬಲಕ್ಕೆ ನಾವು ಬಂದಿದ್ದೇವೆ ಎಂದರಲ್ಲದೆ, ರೈತರ ಹೋರಾಟವನ್ನ ಹತ್ತಿಕ್ಕಲು ಸರ್ಕಾರ ಹೊರಟಿದೆ. ಈ ಸರ್ಕಾರ ರೈತರ ಹೋರಾಟವನ್ನು ಹತ್ತಿಕ್ಕುತ್ತಿದೆ, ಬಂಧಿಸುತ್ತಿದೆ ಎಂದು ಆರೋಪಿಸಿದರು.



ಉದಯವಾಹಿನಿ ಚಿತ್ರ

- **ಭಾರತೀಯ ಜನತಾ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ರೈತರ ಹೋರಾಟವನ್ನು ಪ್ರತಿಷ್ಠೆಯಾಗಿ ತೆಗೆದು ಕೊಳ್ಳಬಾರದು ಎಂದು ತಾಕೀತು ಮಾಡಿದ್ದಾರೆ.**
- **ರೈತರ ತೀವ್ರ ಪ್ರತಿಭಟನೆಯ ನಡುವೆಯೂ, ಡಿಸಿಎಂ ಡಿಕೆ ಶಿವಕುಮಾರ್ ಅವರು ಲಿಂಕ್ ಕೆನಾಲ್ ಕಾಮಗಾರಿಯನ್ನು ನಿಲ್ಲಿಸುವುದಿಲ್ಲ ಎಂದು ಹೇಳಿದ್ದು, ಬಿ.ವೈ. ವಿಜಯೇಂದ್ರ ಅವರು ಇದನ್ನು ಖಂಡಿಸಿದ್ದಾರೆ.**
- **ಬಿ.ವೈ. ವಿಜಯೇಂದ್ರ ಅವರು ಸರ್ಕಾರದ ವರ್ತನೆಯನ್ನು ದುರಾಹಂಕಾರ ಎಂದು ಕರೆದಿದ್ದು, ರೈತರ ಪರವಾಗಿ ನಿಲ್ಲಲು ಸರ್ಕಾರವನ್ನು ಎಚ್ಚರಿಸಿದ್ದಾರೆ.**

ರೈತರ ತೀವ್ರ ಪ್ರತಿಭಟನೆಯ ನಡುವೆಯೂ, ಲಿಂಕ್ ಕೆನಾಲ್ ಕಾಮಗಾರಿಯನ್ನು ನಾವು ನಿಲ್ಲಿಸುವುದಿಲ್ಲ ಎಂದು ಹೇಳಿರುವ ಡಿಸಿಎಂ ಡಿಕೆ ಶಿವಕುಮಾರ್ ಅವರ ಹೇಳಿಕೆಯನ್ನು ಖಂಡಿಸಿದ ಅವರು, ಸರ್ಕಾರದ ಈ ಪಾಳೇಗಾರಿಕೆ ನಡೆಯಲ್ಲ. ರೈತರ ಹೋರಾಟ ಹಗುರವಾಗಿ ತೆಗೆದುಕೊಳ್ಳಬೇಡಿ. ಅಧಿಕಾರದ ಅಮಲಿನಿಂದ ಹೊರಬಂದು ರೈತರ ಪರವಾಗಿನಿಲ್ಲಿ ಎಂದು ತಿಳಿಸಿದರು. ಮತ್ತೊಮ್ಮೆ ರೈತರು ಬೀದಿಗಿಳಿದ್ರೆ ಸರ್ಕಾರದ ಬುಡ ಅಲ್ಲಾಡುತ್ತದೆ ಎಂದು ಎಚ್ಚರಿಸಿದ ಅವರು, ಈ ಕಾಮಗಾರಿ ಅವೈಜ್ಞಾನಿಕವಾಗಿದೆ ಎಂದು ಎಲ್ಲರೂ ಹೇಳ್ತಿದ್ದಾರೆ.

ಯಾರಿಗೋ ನ್ಯಾಯ ಕೊಡಲು ಹೋಗಿ ತುಮಕೂರಿಗೆ ಅನ್ಯಾಯ ಮಾಡಬೇಡಿ. ಯಾರಿಗೂ ಅನ್ಯಾಯವಾಗದಂತೆ ವೈಜ್ಞಾನಿಕವಾಗಿ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

**ಏನಿದು ಹೇಮಾವತಿ ಯೋಜನೆ?:** ತುಮಕೂರಿನಲ್ಲಿ ಹೇಮಾವತಿ ನದಿಗೆ ಸಂಬಂಧಿಸಿದಂತೆ ನಡೆಯುತ್ತಿರುವ ಹೇಮಾವತಿ ಲಿಂಕ್ ಕೆನಾಲ್ ಯೋಜನೆಯ ಬಗ್ಗೆ ಏನಾದರೂ ಸಮಸ್ಯೆಗಳಿದ್ದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಗೃಹಸಚಿವರು ಬಗೆಹರಿಸುವಂತೆ ಸೂಚನೆ ನೀಡಿರುವುದಾಗಿ ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.




ಹೇಮಾವತಿ ನದಿ ಕೆನಾಲ್ ಯೋಜನೆ ಪ್ರತಿಭಟಿಸಿ ತುಮಕೂರಿನಲ್ಲಿ ನಡೆಯುತ್ತಿರುವ ಪ್ರತಿಭಟನೆಗೆ ಕುರಿತಾಗಿ ಮೇ 31ರಂದು ವಿಧಾನಸೌಧದಲ್ಲಿ ಪತ್ರಕರ್ತರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, ಹೇಮಾವತಿ ನದಿ ಕೆನಾಲ್ ಯೋಜನೆ ಅಡ್ಡಿಪಡಿಸುವ ಕೆಲಸ ಆಗಬಾರದು ಎಂದಿದ್ದಾರೆ.

**ಆರು ಜಿಲ್ಲೆಗಳ ನಡುವೆ ಇದೆ ಒಳಜಗಳ:** ಹೇಮಾವತಿ ಲಿಂಕ್ ಕೆನಾಲ್ ಮಾತ್ರವಲ್ಲ, ರಾಜ್ಯದಲ್ಲಿ ಇನ್ನೂ ಆರು ಜಿಲ್ಲೆಗಳ ನಡುವೆ ನಾನಾ ನದಿಗಳ ಬಗ್ಗೆ ಅಸಮಾಧಾನಗಳು ಭುಗಿಲೆದ್ದಿವೆ. ಕೊಪ್ಪಳ - ರಾಯಚೂರು ನಡುವೆ ತುಂಗಭದ್ರಾ ನದಿ ನೀರು ಹಂಚಿಕೆ ವಿಚಾರದಲ್ಲಿ, ಮಂಡ್ಯ - ಬೆಂಗಳೂರು ನಡುವೆ ಕಾವೇರಿ ನದಿ ನೀರು ಹಂಚಿಕೆ, ಬೆಳಗಾವಿ-ಧಾರವಾಡ ನಡುವೆ ಘಟಪ್ರಭಾ ನದಿ ನೀರಿನ ಹಂಚಿಕೆಯ ಬಗ್ಗೆ ಅಸಮಾಧಾನ ಭುಗಿಲೆದ್ದಿದೆ.

## ಮಿನಿ ನ್ಯೂಸ್

### ಡಿಕೆ ಸಹೋದರರ ನಿಂದನೆ ಆರೋಪಿ ವಿರುದ್ಧ ಎಫ್‌ಐಆರ್

• ಉದಯವಾಹಿನಿ, ಕನಕಪುರ

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಸಂಸದ ಡಿ.ಕೆ. ಸುರೇಶ್ ಅವರಿಗೆ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿದ ಆರೋಪದ ಮೇಲೆ ವ್ಯಕ್ತಿಯೊಬ್ಬರ ಮೇಲೆ ಕೋಡಿಹಳ್ಳಿ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಸಾಮಾಜಿಕ ಜಾಲತಾಣದಲ್ಲಿ ಡಿಕೆ ಸಹೋದರರ ವಿರುದ್ಧ ಅವಾಚ್ಯ ಶಬ್ದಗಳಿಂದ ನಿಂದಿಸಿರುವ ಆರೋಪದ ಮೇಲೆ ತಾಲ್ಲೂಕಿನ ಕೋಡಿಹಳ್ಳಿಯ ಬೆಟ್ಟದ ಹಲಸೂರು ಗ್ರಾಮದ ರವೀಂದ್ರ (44) ಅವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ಮಾಜಿ ಸಂಸದ ಡಿ.ಕೆ.ಸುರೇಶ್ ಅವರ ಮನೆಯಲ್ಲಿ ಕಾರು ಚಾಲಕನಾಗಿ ಕೆಲಸ ಮಾಡುತ್ತಿರುವ ಬೆಟ್ಟದ ಹಲಸೂರಿನ ಕಾಳೇಗೌಡ ಅಲಿಯಾಸ್ ರಘು ಅವರ ಮಗ ರಕ್ಷಿತ್ ಕುಮಾರ್ ಮೇ 29 ರಂದು ಸಾಮಾಜಿಕ ಜಾಲತಾಣ ವೀಕ್ಷಿಸುವಾಗ ರವೀಂದ್ರ ಅವರು ಲೈವ್ ಬಂದು ಡಿಕೆ ಸಹೋದರರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿ, ಜಾತಿ ವಿಚಾರವಾಗಿ ಸಮಾಜದಲ್ಲಿ ಶಾಂತಿ ಕದಡುವಂತೆ ಮಾಡಿದ್ದಾರೆ ಎಂದು ಆರೋಪಿಸಿ ರವೀಂದ್ರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಕೋಡಿಹಳ್ಳಿ ಪೊಲೀಸ್ ಠಾಣೆಗೆ ರಕ್ಷಿತ್ ಕುಮಾರ್ ದೂರು ನೀಡಿದ್ದು, ಆರೋಪಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

### ಕಮಲ್ ಹಾಸನ್ ವಿರುದ್ಧ ಕ್ರಮ ಕೈಗೊಳ್ಳಲು ಆಗ್ರಹ

• ಉದಯವಾಹಿನಿ, ಗೌರಿಬಿದನೂರು

ಇತಿಹಾಸ ಪರಂಪರೆ ಇರುವ ಕನ್ನಡ ಭಾಷೆ ಬಗ್ಗೆ ತಮಿಳು ನಟ ಕಮಲ್ ಹಾಸನ್ ಅರಿವಿಲ್ಲದೆ, ಕನ್ನಡಿಗರ ಭಾವನೆಗಳಿಗೆ ಧಕ್ಕೆ ತರುವಂತೆ ಮಾತನಾಡಿರುವುದು ಖಂಡನೀಯ ಎಂದು ಕರ್ನಾಟಕ ರಕ್ಷಣಾ ವೇದಿಕೆ ಚಲಪತಿ ಬಣದ ಜಿಲ್ಲಾ ಅಧ್ಯಕ್ಷ ಸುರೇಶ್ ಬಾಬು ಅಕ್ರೋಶ ವ್ಯಕ್ತಪಡಿಸಿದರು. ಪ್ರಜಾಸೌಧದಲ್ಲಿ ತಹಶೀಲ್ದಾರ್ ಮಹೇಶ್ ಎಸ್.ಪತ್ರಿಗೆ ಮನವಿ ಸಲ್ಲಿಸಿ ಮಾತನಾಡಿ, ಕನ್ನಡ ಭಾಷೆ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡಿದ ತಮಿಳು ನಟ ಕಮಲ್ ಹಾಸನ್ ರಾಜ್ಯ ವ್ಯಾಪ್ತಿ ವಿರೋಧ ವ್ಯಕ್ತಪಡಿಸುತ್ತಿವೆ. ಅವರು ಕ್ಷಮೆ ಕೇಳುವವರೆಗೂ ಅವರ ಚಿತ್ರವನ್ನು ಬಿಡುಗಡೆ ಮಾಡಲು ಅವಕಾಶ ನೀಡುವುದಿಲ್ಲ.

ಮುಂಬರುವ ದಿನಗಳಲ್ಲಿ ಕನ್ನಡ ನಾಡು-ನುಡಿ ವಿಚಾರವಾಗಿ ಇಂತಹ ಹೇಳಿಕೆ ನೀಡುವುದನ್ನು ನಿಲ್ಲಿಸಬೇಕು. ಸರ್ಕಾರ ಇದಕ್ಕೆ ಕಠಿಣ ಕಾನೂನು ತರಬೇಕು ಎಂದು ಒತ್ತಾಯ ಮಾಡಿದರು. ಸಂಘಟನೆ ತಾಲ್ಲೂಕು ಅಧ್ಯಕ್ಷ ಡಾ.ಅದಿಮೂರ್ತಿರೆಡ್ಡಿ ಮಾತನಾಡಿ, ಕನ್ನಡಕ್ಕೆ ತನ್ನದೆ ಆದ ಇತಿಹಾಸ ಪರಂಪರೆ ಇದೆ. ನಮ್ಮ ಭಾಷೆಗೆ ಎರಡು ಸಾವಿರ ಐದುನೂರು ವರ್ಷಗಳ ಭವ್ಯ ಪರಂಪರೆ ಇದೆ. ಇಂತಹ ಭಾಷೆಗೆ ಅರಿವಿಲ್ಲದೆ ತಮಿಳು ಭಾಷೆಯಿಂದ ಕನ್ನಡ ಬಂದಿರುವುದು ಎಂದು ಅವೈಜ್ಞಾನಿಕ ಎಂದು ಬಾಲಿಶ ಹೇಳಿಕೆ ನೀಡಿರುವುದು ಖಂಡನೀಯ ಎಂದು ಕಿಡಿಕಾರಿದರು.

### ಮಾಲೂರು ಪಿಯು ಕಾಲೇಜು ಆವರಣದಲ್ಲಿ ಐಪಿಎಲ್ ಪಂದ್ಯ ಲೈವ್ ಸ್ಕ್ರೀನಿಂಗ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಾಲೂರು

ಇಲ್ಲಿನ ಸರ್ಕಾರಿ ಪಿಯು ಕಾಲೇಜು ಆವರಣದಲ್ಲಿ ಮಾಲೂರಿನಲ್ಲಿರುವ ಆರ್‌ಸಿಬಿ ಅಭಿಮಾನಿಗಳು ಐಪಿಎಲ್ ಫೈನಲ್ ಪಂದ್ಯ ವೀಕ್ಷಿಸಲು ಲೈವ್ ಸ್ಕ್ರೀನಿಂಗ್ ವ್ಯವಸ್ಥೆ ಮಾಡಲಾಗಿದೆ. ಈ ಕುರಿತು ಪ್ರತಿಕ್ರಿಯಿಸಿದ ರಾಜ್ಯ ಕಾಂಗ್ರೆಸ್ ಯುವ ಪ್ರಧಾನ ಕಾರ್ಯದರ್ಶಿ ಸುನೀಲ್ ನಂಜೇಗೌಡ, ಆರ್‌ಸಿಬಿ ಅಭಿಮಾನಿಗಳ ಬಹುದಿನಗಳ ಕನಸು ಇಂದು ನನಸಾಗಲಿದೆ. 18 ವರ್ಷಗಳ ಕಾಯುವಿಕೆಗೆ ಇಂದು ಫಲ ಸಿಗುವ ವಿಶ್ವಾಸವಿದೆ ಎಂದು ತಿಳಿಸಿದರು. ಆರ್‌ಸಿಬಿ ಕ್ರಿಕೆಟ್ ಪಂದ್ಯಾವಳಿ ವೀಕ್ಷಿಸಲು ಪಟ್ಟಣದ ಯುವ ಜನತೆ ಪದವಿ ಪೂರ್ವ ಕಾಲೇಜಿನ ಆಟದ ಮೈದಾನದಲ್ಲಿ ಭಾರಿ ಜನಸಮೂಹ ನೆರೆದಿತ್ತು. ಪ್ರತಿಯೊಂದು ಬಾಲ್ ಹಾಕಿದಾಗಲೂ ಸಿಳ್ಳೆ, ಚಪ್ಪಾಳೆ ಹೊಡೆದು ಆನಂದಿಸಿದರು.

### ಆರ್‌ಸಿಬಿ ಗೆಲುವಿಗೆ ಮೂರು ತಿಂಗಳಿನಿಂದ ಬರಿಗಾಲಲ್ಲಿ ನಡಿಗೆ

• ಉದಯವಾಹಿನಿ, ಬಂಗಾರಪೇಟೆ

ಈ ಬಾರಿಯ ಐಪಿಎಲ್‌ನಲ್ಲಿ ಆರ್‌ಸಿಬಿ ತಂಡವು ಗೆದ್ದು ಕಪ್ ಗೆಲ್ಲಬೇಕು ಎಂದು ಹರಕೆ ಹೊತ್ತಿರುವ ಯುವಕನೊಬ್ಬ ಮೂರು ತಿಂಗಳಿನಿಂದ ಬರಿಗಾಲಿನಲ್ಲಿ ನಡೆಯುತ್ತಿದ್ದಾನೆ. ತಾಲ್ಲೂಕಿನ ಬೂದಿಕೋಟೆ ಹೋಬಳಿಯ ಗುಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದಿನ್ನೂರು ಗ್ರಾಮದ ಶಿವಕುಮಾರ್ ಎಂಬ ಯುವಕ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಕಪ್ ಗೆಲ್ಲಬೇಕು ಎಂದು 3 ತಿಂಗಳ ಹಿಂದೆಯೇ ಅಯೋಧ್ಯೆಯ ರಾಮಮಂದಿರ ಮತ್ತು ವಾರಾಣಸಿಯಲ್ಲಿ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಜೊತೆಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ಕಪ್ ಗೆಲ್ಲುವವರೆಗೆ ಚಪ್ಪಲಿ ಧರಿಸುವುದಿಲ್ಲ ಎಂದು ಶಪಥಗೈಯ್ಯುವ ಮೂಲಕ ಅಂದಿನಿಂದ ಬರಿಗಾಲಿನಲ್ಲಿ ನಡೆಯುತ್ತಿದ್ದಾನೆ.

### 20 ಲಕ್ಷ ವೆಚ್ಚದಲ್ಲಿ ಅಂಗನವಾಡಿ ಕಟ್ಟಡ

• ಉದಯವಾಹಿನಿ, ಬೇತಮಂಗಲ

ಮಹಿಳಾ, ಮಕ್ಕಳ ಕಲ್ಯಾಣ ಇಲಾಖೆ, ಗ್ರಾಮ ಪಂಚಾಯಿತಿ ಸಹಯೋಗದೊಂದಿಗೆ ಸುಮಾರು 20 ಲಕ್ಷ ಅನುದಾನದಲ್ಲಿ ನೂತನ ಅಂಗನವಾಡಿ ಕಟ್ಟಡ ನಿರ್ಮಾಣ ಮಾಡಲಾಗುವುದು ಎಂದು ಟಿ.ಗೊಲ್ಲಹಳ್ಳಿ ಪಿಡಿಒ ಶ್ರೀನಿವಾಸ್ ಮೂರ್ತಿ ತಿಳಿಸಿದರು. ತಾಲ್ಲೂಕಿನ ಟಿ.ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಿಗರಾಪುರ ಗ್ರಾಮದಲ್ಲಿ ಸುಮಾರು ವರ್ಷಗಳಿಂದ ಸ್ವಂತ ಕಟ್ಟಡವಿಲ್ಲದ ಕಾರಣ ಬಾಡಿಗೆ ಮನೆಯಲ್ಲಿ ಅಂಗನ ವಾಡಿ ಕೇಂದ್ರ ಕಾರ್ಯ ನಿರ್ವಹಿಸುತ್ತಿದೆ. ಹೊಸ ಅಂಗನವಾಡಿ ಕಟ್ಟಡ ನಿರ್ಮಾಣಕ್ಕೆ 2 ವರ್ಷಗಳಿಂದ ಸೂಕ್ತ ನಿವೇಶನ, ಅನುದಾನ ಬಿಡುಗಡೆಗೆ ಕ್ರಮ ವಹಿಸಲಾಗಿದ್ದು, ಶೀಘ್ರವೇ ಅಂಗನವಾಡಿ ಕಟ್ಟಡ ಕಾಮಗಾರಿ ಆರಂಭಿಸಲಾಗುವುದು ಎಂದು ಹೇಳಿದರು. ಸಿಡಿಪಿಒ ರಾಜೇಶ್ ಮಾತನಾಡಿ, ಗ್ರಾಮದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ ಸ್ಥಳದ ಇ ಖಾತೆ ಮಾಡಿರುವ ಸ್ಥಳವು ಅನ್ಯ ವ್ಯಕ್ತಿಯೊಬ್ಬರು ಅಕ್ರಮವಾಗಿ ಖಾತೆ ಮಾಡಿಸಿಕೊಂಡಿರುವ ಬಗ್ಗೆ ಚರ್ಚೆಯಾಗಿತ್ತು. ಆದ್ದರಿಂದ ಪಿಡಿಒ ಅವರೇ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದ್ದಾರೆ ಎಂದರು. ಎವೈವಿಕೆ ರಾಜ್ಯ ಘಟಕದ ಅಧ್ಯಕ್ಷ ಜೈ ಭೀಮ್ ಶ್ರೀನಿವಾಸ್ ಮಾತನಾಡಿ, ಗ್ರಾಮದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ ಮಾಡಬೇಕೆಂಬ ತಮ್ಮ ಕೋರಿಕೆಗೆ ಅಧಿಕಾರಿಗಳು ತ್ವರಿತವಾಗಿ ಮನ್ನಣೆ ನೀಡಿದ್ದಾರೆ ಎಂದರು.

# ಎಲ್ಲಾ ಪ್ರತಿಮೆಗೂ ರಕ್ಷಣೆ ನೀಡಬೇಕು: ಯದುವೀರ್

• ಉದಯವಾಹಿನಿ, ಮೈಸೂರು

ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಹಿನ್ನಲೆಯಲ್ಲಿ ಮೈಸೂರಿನ ಪೌರ ಕಾರ್ಮಿಕರಿಗೆ ಒಂದು ತಿಂಗಳ ದಿನಸಿ ವಸ್ತುಗಳನ್ನು ನೀಡಲಾಗುತ್ತದೆ ಎಂದು ಮೈಸೂರಿನ ಸಂಸದ ಯದುವೀರ್ ಒಡೆಯರ್ ಹೇಳಿದ್ದಾರೆ. ಮಂಗಳವಾರ ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಲ್ವಡಿ ಕೃಷ್ಣರಾಜ ಒಡೆಯರ್ ಎಲ್ಲರಿಗೂ ಅನ್ನದಾತ ಆಗಿದ್ದರು. ಅವರ ಜನ್ಮದಿನವನ್ನು ಸ್ಮರಣೀಯವಾಗಿಸಲು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದೇವೆ. ಆ ಎಲ್ಲಾ ಕಾರ್ಯಕ್ರಮಗಳಲ್ಲಿ ಸ್ಥಳೀಯ ನಾಯಕರು, ಸಾರ್ವಜನಿಕರು ಹೆಚ್ಚಾಗಿ ಭಾಗಿಯಾಗುತ್ತಾರೆ ಎಂದು ತಿಳಿಸಿದರು.

**ಒಡೆಯರ್ ಪ್ರತಿಮೆಗೆ ರಕ್ಷಣೆ ನೀಡಿ:** ಇತ್ತೀಚೆಗೆ ಒಡೆಯರ್ ಪ್ರತಿಮೆ ಮೇಲೆ ವ್ಯಕ್ತಿ ಕುಳಿತು ಅನುಚಿತ ವರ್ತನೆ ತೋರಿದ ವಿಚಾರಕ್ಕೆ ಸಂಬಂಧಿಸಿದಂತೆ ಮಾತನಾಡಿದ ಅವರು, ಪ್ರತಿಮೆಗೆ ರಕ್ಷಣೆ ನೀಡಬೇಕು. ಈಗಾಗಲೇ ಪೊಲೀಸ್ ಕಮಿಷನರ್‌ಗೆ ತಕ್ಷಣ ಕ್ರಮ ತೆಗೆದು ಕೊಳ್ಳಬೇಕು ಎಂದು ಹೇಳಿದ್ದೇವೆ. ಮೈಸೂರಿನಲ್ಲಿ ಅನೇಕ ಸಾಧಕರ ಪ್ರತಿಮೆ ಇದೆ. ಎಲ್ಲಾ ಪ್ರತಿಮೆಗೂ ರಕ್ಷಣೆ ನೀಡಬೇಕು. ಇನ್ನು ಮೇಲೆ ಈ ರೀತಿ ಯಾವುದೇ ಅವಘಡ ನಡೆಯದಂತೆ ನೋಡಿಕೊಳ್ಳಬೇಕು. ಅಲ್ಲದೆ, ಅಂತಹ ವ್ಯಕ್ತಿಗಳ ವಿರುದ್ಧ ತಕ್ಷಣ ಕ್ರಮ ಆಗಬೇಕು ಎಂದು ಹೇಳಿದ್ದರು.



**ಸ್ಯಾಂಡಲ್ ಸೋಪಿಗೆ ಕನ್ನಡಿಗರೇ ರಾಯಭಾರಿಯಾಗಲಿ**
ಮೈಸೂರು ಸ್ಯಾಂಡಲ್ ಸೋಪ್‌ಗೆ ರಾಯಭಾರಿಯಾಗಿ ನಟಿ ತಮನ್ನಾ ಬಾಟಿಯಾ ಆಯ್ಕೆ ಬಗ್ಗೆ ಎದಿದ್ದ ವಿವಾದಕ್ಕೆ ಸಂಬಂಧಿಸಿದಂತೆ ಮೈಸೂರಿನ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ವಿರೋಧ ವ್ಯಕ್ತಪಡಿಸಿದ್ದರು. ದೇಶದ ಮಟ್ಟದಲ್ಲಿ ಗುರುತಿಸಿಕೊಂಡಿರುವ ಹಲವು ಕನ್ನಡಿಗರು ಇದ್ದಾರೆ. ಅವರನ್ನು ರಾಯಭಾರಿಯನ್ನಾಗಿ ಆಯ್ಕೆ ಮಾಡಬೇಕು ಎಂದು ಆಗ್ರಹಿಸಿದ್ದರು.


**ಕದನ ವಿರಾಮಕ್ಕೆ ಕಾರಣ ಇದೇ:** ಪಾಕಿಸ್ತಾನದ ವಿರುದ್ಧ ಭಾರತ ಶುರು ಮಾಡಿದ್ದ ಆಪರೇಷನ್ ಸಿಂಧೂರ್ ಕಾರ್ಯಾಚರಣೆಯನ್ನು ತಾನೇ ನಿಲ್ಲಿಸಿದ್ದಾಗಿ ಘೋಷಿಸಿಕೊಂಡಿರುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆಗೆ ಸಂಸದ ಯದುವೀರ್ ಅವರು ಪ್ರತಿಕ್ರಿಯಿಸಿದ್ದರು.

> **ಕನ್ನಡದ ವಿರುದ್ಧ ಕಮಲ್ ಹೇಳಿಕೆ ವಿಚಾರ**
> **ಇಂಥವರಿಗೆ ಜನರೇ ಬಹಿಷ್ಕಾರ ಹಾಕಿ ತಕ್ಕ ಪಾಠ ಕಲಿಸಬೇಕು. ಸಿನಿಮಾ ವಿಚಾರಕ್ಕೆ ಅವರು ಕೋರ್ಟ್ ಮೊರೆ ಹೋಗಿರಬಹುದು. ಕನ್ನಡದ ಬಗ್ಗೆ ಹಗುರವಾಗಿ ಮಾತನಾಡುವರಿಗೆ ಜನರೇ ಉತ್ತರ ಕೊಡಬೇಕು**
> **-ಯದುವೀರ್ ಒಡೆಯರ್, ಸಂಸದ**

ಪಾಕಿಸ್ತಾನದ ಸೇನಾ ಮುಖ್ಯಸ್ಥರ ಮನವಿ ಮೇರೆಗೆ ಭಾರತ, ಕದನ ವಿರಾಮ ಘೋಷಿಸಿದೆ. ಈ ಬಗ್ಗೆ ಪ್ರಧಾನಿ ನರೇಂದ್ರ ಮೋದಿಯವರು ಸಕಾಲದಲ್ಲಿ ಉತ್ತರಿಸಿದ್ದಾರೆ. ಯುದ್ಧದ ಸಮಯದಲ್ಲಿ ಕೆಲವೊಂದು ಶಿಷ್ಟಾಚಾರ ಪಾಲನೆ ಮಾಡಬೇಕಿರುತ್ತದೆ ಸರ್ವಪಕ್ಷಗಳ ಸಭೆ ಕರೆದು ಘೋಷಣೆ ಮಾಡಲು ಸಾಧ್ಯವಾಗಿಲ್ಲ. ಅದನ್ನು ರಾಜಕೀಯವಾಗಿ ಬಳಸಿ ಕೊಳ್ಳಬಾರದು ಎಂದಿದ್ದರು.

# ಗ್ರಾಮೀಣ ಕುಡಿಯುವ ನೀರಿಗಾಗಿ 500 ಕೋಟಿ ವೆಚ್ಚದ ಕ್ರಿಯಾ ಯೋಜನೆ: ಟಿ.ಬಿ.ಜಯಚಂದ್ರ

• ಉದಯವಾಹಿನಿ, ಶಿರಾ


ಉದಯವಾಹಿನಿ ಚಿತ್ರ

ತಾಲ್ಲೂಕಿಗೆ ಎತ್ತಿನಹೊಳೆ ನೀರಾವರಿ ಯೋಜನೆ ಮೂಲಕ ದೊರೆಯುವ ನೀರನ್ನು ದೊಡ್ಡ ಕೆರೆಗಳಿಗೆ ಹರಿಸಿ ಅಲ್ಲಿ ನೀರನ್ನು ಸಂಗ್ರಹಿಸಿ ಗ್ರಾಮೀಣ ಪ್ರದೇಶಗಳಿಗೆ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು 500 ಕೋಟಿ ವೆಚ್ಚದಲ್ಲಿ ಕ್ರಿಯಾ ಯೋಜನೆ ರೂಪಿಸಲಾಗುತ್ತಿದೆ ಎಂದು ಶಾಸಕ ಟಿ.ಬಿ.ಜಯಚಂದ್ರ ಹೇಳಿದರು. ತಾಲ್ಲೂಕಿನ ಗೌಡಗೆರೆ ಗ್ರಾಮದಲ್ಲಿ ನೂತನ ಡಿಜಿಟಲ್ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರ ಲೋಕಾರ್ಪಣೆಗೊಳಿಸಿ ಮಾತನಾಡಿದರು. ತಾಲ್ಲೂಕಿನಲ್ಲಿ ಈಗಾಗಲೇ 145 ಕುಡಿಯುವ ನೀರಿನ ಟ್ಯಾಂಕ್‌ಗಳಿದ್ದು, ಇನ್ನು 265 ಟ್ಯಾಂಕ್‌ಗಳನ್ನು ನಿರ್ಮಾಣ ಮಾಡಿ ಸುಲಭವಾಗಿ ಕುಡಿಯುವ ನೀರು ಪೂರೈಕೆಗೆ ಆದ್ಯತೆ ನೀಡಲಾಗುತ್ತಿದೆ. ಕೇಂದ್ರ ಸರ್ಕಾರಕ್ಕೆ 500 ಕೋಟಿ ವೆಚ್ಚದ ಕ್ರಿಯಾಯೋಜನೆ ಸಿದ್ಧಪಡಿಸಿ ಅನುದಾನ ನೀಡುವಂತೆ ಮನವಿ ಮಾಡಲಾಗಿದೆ. ಕೇಂದ್ರ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿದ್ದು, ಶೀಘ್ರ ಕ್ರಿಯಾ ಯೋಜನೆಗೆ ಅನುಮತಿ ದೊರೆಯಲಿದೆ ಎಂದರು. ಎಪಿಎಂಸಿ ಮಾಜಿ ಅಧ್ಯಕ್ಷ ಎಂ.ಆರ್.ಶಶಿಧರ್ ಗೌಡ ಮಾತನಾಡಿ, ಗೌಡಗೆರೆ ವ್ಯಾಪ್ತಿಯ ಹಲವು ಕೆರೆಗಳು ನೀರಾವರಿ ಸೌಲಭ್ಯದಿಂದ ವಂಚಿತವಾಗಿವೆ. ಭದ್ರ ಮೇಲ್ದಂಡೆ ಯೋಜನೆಯಲ್ಲಿ ಗೌಡಗೆರೆ ಸೇರಿ ಇತರ ಕೆರೆಗಳನ್ನು ಸೇರ್ಪಡೆ ಮಾಡುವ ಕೆಲಸವನ್ನು ಶಾಸಕ ಟಿ.ಬಿ.ಜಯಚಂದ್ರ ಮಾಡಬೇಕು ಎಂದರು.

**265 ಟ್ಯಾಂಕ್‌ಗಳ ನಿರ್ಮಾಣ**

> **ನರೇಗಾ ಯೋಜನೆಯಲ್ಲಿ ರೈತರಿಗೆ ಅನುಕೂಲವಾಗುವ, ಗ್ರಾಮಗಳ ಅಭಿವೃದ್ಧಿಗೆ ಪೂರಕವಾಗುವ ಕಾಮಗಾರಿಗಳನ್ನು ರೈತರು, ಜನಸಾಮಾನ್ಯರು ಕೈಗೊಳ್ಳುವ ಮೂಲಕ ಪ್ರಗತಿ ಸಾಧಿಸುವುದರ ಜತೆಗೆ ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡಬೇಕು**
> **- ಹರೀಶ್, ತಾ. ಪಂ. ಇಒ**

# ಮಹಾದ್ವಾರ ಕುಸಿತ: ಕಾರ್ಮಿಕ ಸಾವು


ಉದಯವಾಹಿನಿ ಚಿತ್ರ

• ಉದಯವಾಹಿನಿ, ನಾಗಮಂಗಲ

ತಾಲ್ಲೂಕಿನ ದೇವರಹಳ್ಳಿಯ ತಪಸೀರಾಯಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ನಿರ್ಮಾಣ ಹಂತದಲ್ಲಿದ್ದ ಮಹಾ ದ್ವಾರ ಕುಸಿದ ಪರಿಣಾಮ ಕಾರ್ಮಿಕ ಕಲಬುರಗಿ ಜಿಲ್ಲೆಯ ಶರಣ್ (27) ಮೃತಪಟ್ಟಿದ್ದು, ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಕಾರ್ಮಿಕರು ಕಬ್ಬಿಣದ ಸರಳು, ಸೆಂಟ್ರಿಂಗ್ ಮಧ್ಯೆ ಸಿಲುಕಿ ಗಾಯಗೊಂಡಿದ್ದು, ಹೊರಬರಲಾರದೆ ಗಂಭೀರವಾಗಿ ಗಾಯಗೊಂಡಿದ್ದರು.

ಕಾಂಕ್ರೀಟ್ ಹಾಕುವ ವೇಳೆ ಕುಸಿತ ಸಂಭವಿಸಿದೆ.

**ಪಿಎಸ್‌ಐ ರಾಜೇಂದ್ರ ಸ್ಥಳಕ್ಕೆ ಭೇಟಿ**

> **20 ಅಡಿ ಎತ್ತರ, 35ಅಡಿ ಉದ್ದದ ಮಹಾದ್ವಾರ**
> **ಜೆಸಿಬಿ ಯಂತ್ರದ ಮೂಲಕ ಹೊರತೆಗೆದು ತಾಲ್ಲೂಕಿನ ಬಿ.ಜಿ.ನಗರದ ಆದಿ ಚುಂಚನಗಿರಿ ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಶರಣ್ ಮೃತಪಟ್ಟಿದ್ದಾರೆ. ಗಾಯಾಳುಗಳ ಪೈಕಿ ಒಬ್ಬ ಕಾರ್ಮಿಕ ನಿಗೆ ಕಾಲು ಮುರಿದಿದ್ದು, ಉಳಿದ ಮೂವರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ. ದೇವಸ್ಥಾನದ ಮುಂಭಾಗದಲ್ಲಿ ದಾನಿಗಳ ನೆರವಿನಿಂದ 20 ಅಡಿ ಎತ್ತರ, 35ಅಡಿ ಉದ್ದದ ಮಹಾದ್ವಾರ ನಿರ್ಮಾಣ ನಡೆಯುತ್ತಿತ್ತು. ಮೇಲ್ಛಾವಣಿಗೆ ಕಾಂಕ್ರೀಟ್ ಹಾಕಲು ಸೆಂಟ್ರಿಂಗ್ ಹೊಡೆದು ಕಬ್ಬಿಣ ಕಟ್ಟಲಾಗಿತ್ತು.**

ಮಾಹಿತಿ ತಿಳಿದು ನಾಗಮಂಗಲ ಗ್ರಾಮಾಂತರ ಪೊಲೀಸ್ ಠಾಣೆ ಪಿಎಸ್‌ಐ ರಾಜೇಂದ್ರ, ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಶರಣ್ ಮೃತದೇಹವನ್ನು ಆದಿಚುಂಚನಗಿರಿ ಆಸ್ಪತ್ರೆಯ ಶವಾಗಾರದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿದ ನಂತರ ಕುಟುಂಬಸ್ಥರಿಗೆ ವರ್ಗಾಯಿಸಲಾಗಿದೆ.

# ನ್ಯಾಯ ಸಿಗಲೇಬೇಕು; ಇಲ್ಲದಿದ್ದರೆ ಪ್ರತೀಕಾರ: ರಿಕ್ಕಿ ರೈ

• ಉದಯವಾಹಿನಿ, ರಾಮನಗರ

ನನ್ನ ಮೇಲೆ ನಡೆದ ಗುಂಡಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ನ್ಯಾಯ ಸಿಗಲೇಬೇಕು. ಇಲ್ಲವಾದಲ್ಲಿ ನಾವು ಪ್ರತೀಕಾರ ತೆಗೆದುಕೊಳ್ಳುತ್ತೇವೆ. ತಮ್ಮ ಮೇಲೆ ನಡೆದ ಗುಂಡಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸ್ ವಿಚಾರಣೆಗೆ ಹಾಜರಾದ ಭೂಗತ ಲೋಕದ ಡಾನ್ ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಮಾಧ್ಯಮದವರಿಗೆ ನೀಡಿದ ಪ್ರತಿ ಕ್ರಿಯೆ ಇದು. ಏ. 18ರಂದು ರಾತ್ರಿ ಮನೆಯಿಂದ ಹೊರಗಡೆ ಬಂದಾಗ ನನ್ನ ಕಾರಿನ ಮೇಲೆ ಶೂಟರ್ ಗುಂಡಿನ ದಾಳಿ ನಡೆಸಿದರು.

ಘಟನೆಯಲ್ಲಿ ನನ್ನ ಮೂಗು ಕಟ್ ಆಗಿದ್ದು, ಕೈಗೂ ಗುಂಡು ತಗುಲಿತು. ದೇವರ ದಯೆಯಿಂದ ಏನು ಆಗಲಿಲ್ಲ. ನಾನು ಸಹ ಬಲಿಷ್ಠವಾಗಿದ್ದೇನೆ. ಘಟನೆ ಹಿಂದಿರುವ ಶಂಕಿತರ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿರುವೆ. ತನಿಖೆ ನಡೆಯುತ್ತಿರುವುದರಿಂದ ಹೆಚ್ಚಿನದಾಗಿ ಬೇರೇನೂ ಹೇಳಲು ಸಾಧ್ಯವಿಲ್ಲ ಎಂದು ರಿಕ್ಕಿ ಹೇಳಿದರು. ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ಮಾಜಿ ಅಂಗರಕ್ಷಕ ಮೊನ್ನಪ್ಪ ವಿಠಲ ಬಂಧನ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದ ರಿಕ್ಕಿ, ತನಿಖೆ ನಡೆಯುತ್ತಿದ್ದು, ಆ ಬಗ್ಗೆ ಪ್ರತಿಕ್ರಿಯಿಸುವುದಿಲ್ಲ ಎಂದರು.


ಉದಯವಾಹಿನಿ ಚಿತ್ರ

ಮಂಗಳವರ ಬೆಳಿಗ್ಗೆ 11.45ರ ಸುಮಾರಿಗೆ ಬಿಡದಿ ಪೊಲೀಸ್ ಠಾಣೆಗೆ ತಮ್ಮ ವಕೀಲರು, ಅಂಗರಕ್ಷಕರು, ಕೆಲ ಬೆಂಬಲಿಗರೊಂದಿಗೆ ಬಂದ ರಿಕ್ಕಿ ಸುಮಾರು 4 ತಾಸು ವಿಚಾರಣೆ ಎದುರಿಸಿ, ಪೊಲೀಸರ ಪ್ರಶ್ನೆಗಳಿಗೆ ಉತ್ತರಿಸಿದರು. ಎಎಸ್‌ಪಿ ರಾಮಚಂದ್ರಪ್ಪ, ಡಿವೈಎಸ್ಪಿ ಬಿ.ಎನ್.ಶ್ರೀನಿವಾಸ್ ಹಾಗೂ ಬಿಡದಿ ಇನ್‌ಸ್ಪೆಕ್ಟರ್ ಶಂಕರ್ ನಾಯಕ್ ವಿಚಾರಣೆ ನಡೆಸಿದರು. ಗುಂಡಿನ ದಾಳಿಯಲ್ಲಿ ಗಾಯಗೊಂಡಿದ್ದ ರಿಕ್ಕಿ ರೈ ಬೆಂಗಳೂರಿನ ಮಣಿಪಾಲ ಆಸ್ಪತ್ರೆಯಲ್ಲಿ ಶಸ್ತ್ರಚಿಕಿತ್ಸೆಗೆ ಒಳಗಾಗಿ ವಿಶ್ರಾಂತಿ ಪಡೆಯುತ್ತಿದ್ದರು. ಪ್ರಕರಣದ ಆರೋಪಿಗಳಾದ ಮುತ್ತಪ್ಪ ರೈ ಆಪ್ತರಾಗಿದ್ದ ಕಾಂಗ್ರೆಸ್ ಮುಖಂಡ ರಾಕೇಶ್ ಮಲ್ಲಿ, ಎರಡನೇ ಪತ್ನಿ ಅನುರಾಧ, ರಿಯಲ್ ಎಸ್ಟೇಟ್ ಉದ್ಯಮಿ ನಿತೇಶ್ ಶೆಟ್ಟಿ ವಿಚಾರಣೆ ನಡೆಸಿದ್ದ ಪೊಲೀಸರು, ನಂತರ ವಿಚಾರಣೆಗೆ ಹಾಜರಾಗುವಂತೆ ರಿಕ್ಕಿ ಅವರಿಗೆ ನೋಟಿಸ್ ನೀಡಿದ್ದರು.

> **6ಕ್ಕೆ ಮತ್ತೆ ವಿಚಾರಣೆ**
> **ಪ್ರಕರಣಕ್ಕೆ ಸಂಬಂಧಿಸಿದಂತೆ ರಿಕ್ಕಿ ಅವರನ್ನು ವಿಚಾರಣೆಗೆ ಒಳಪಡಿಸಲಾಗಿದ್ದು, ಮತ್ತೊಂದು ಸುತ್ತಿನ ವಿಚಾರಣೆಗಾಗಿ ಜೂನ್ 6ರಂದು ಠಾಣೆಗೆ ಬರಲು ಸೂಚಿಸಲಾಗಿದೆ. ಕೃತ್ಯದಲ್ಲಿ ರಿಕ್ಕಿ ಮಾಜಿ ಅಂಗರಕ್ಷಕ ಮೊನ್ನಪ್ಪ ವಿಠಲ ಸಹ ಭಾಗಿಯಾಗಿರುವ ಆರೋಪದ ಮೇಲೆ ಆತನನ್ನು ಏಪ್ರಿಲ್ 24ರಂದೇ ಬಂಧಿಸಲಾಗಿತ್ತು. ವಿಚಾರಣೆಗಾಗಿ 10 ದಿನ ಪೊಲೀಸ್ ವಶಕ್ಕೆ ಪಡೆದು, ನಂತರ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಆತ ಇನ್ನೂ ಜೈಲಿನಲ್ಲಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.**

# ಕಮಲ್ ಭಾವಚಿತ್ರಕ್ಕೆ ಚಪ್ಪಲಿ ಸೇವೆ

• ಉದಯವಾಹಿನಿ, ಮಂಡ್ಯ


ಉದಯವಾಹಿನಿ ಚಿತ್ರ

ಕನ್ನಡಿಗರಿಗೆ ಅಪಮಾನ ಮಾಡಿರುವ ತಮಿಳು ನಟ ಕಮಲ್ ಹಾಸನ್ ತಕ್ಷಣ ಕರ್ನಾಟಕದ ಜನತೆ ಕ್ಷಮೆ ಕೇಳಬೇಕೆಂದು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಮಂಗಳವಾರ ನಗರದಲ್ಲಿ ಕಮಲ್ ಹಾಸನ್ ಭಾವಚಿತ್ರಕ್ಕೆ ಚಪ್ಪಲಿ ಸೇವೆ ಮಾಡಿ ಆಕ್ರೋಶ ವ್ಯಕ್ತಪಡಿಸಿದರು. ನಗರದ ಮಹಾವೀರ ವೃತ್ತದಲ್ಲಿ ಬೆಂಗಳೂರು- ಮೈಸೂರು ಹೆದ್ದಾರಿ ವಾಹನ ಸಂಚಾರ ತಡೆದು, ಕಮಲ್ ಹಾಸನ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ತಮಿಳಿನಿಂದ ಕನ್ನಡ ಹುಟ್ಟಿತು ಎಂಬ ಹೇಳಿಕೆ ನೀಡಿ ಕನ್ನಡ ಭಾಷೆ, ಕನ್ನಡಿಗರಿಗೆ ಅಪಮಾನ ಮಾಡಿರುವ ನಟ ಕಮಲ್ ಹಾಸನ್, ತಪ್ಪು ಮಾಡಿದ್ದರೂ ತಾನು ತಪ್ಪೇ ಮಾಡಿಲ್ಲ ಎಂದು ಉದ್ಧಟತನ ಪ್ರದರ್ಶಿಸುತ್ತಿರುವುದು ಏಕೆ? ಅವರ ಸಿನಿಮಾಗಳನ್ನು ಕರ್ನಾಟಕದಲ್ಲಿ ಪ್ರದರ್ಶನಕ್ಕೆ ಅವಕಾಶ ನೀಡಬಾರದು ಎಂದು ಆಗ್ರಹಿಸಿದರು. ಪ್ರೀತಿಯಿಂದ ಕನ್ನಡ ಭಾಷೆ ಬಗ್ಗೆ ಮಾತನಾಡಿದ್ದೀನಿ ಎಂಬುವುದನ್ನು ಹೇಳುವ ನಟ ಕಮಲ್ ಹಾಸನ್, ಮತ್ತೆ ಉದ್ಧಟತನ ಪ್ರದರ್ಶನ ಮಾಡುವ ಮೂಲಕ ತಾನು ಜೂನಿಯರ್ ಜಯಲಲಿತಾ ಎಂಬುದನ್ನು ಪ್ರದರ್ಶನ ಮಾಡಿದ್ದಾರೆ. ಕನ್ನಡ ಚಲನಚಿತ್ರ ವಾಣಿಜ್ಯ ಮಂಡಳಿಯು ಅವರ ಸಿನಿಮಾ ಪ್ರದರ್ಶನ ನಿಷೇಧಿಸಿದ ಹಿನ್ನೆಲೆಯಲ್ಲಿ ಥಗ್ ಲೈಫ್ ಬಿಡುಗಡೆಗಾಗಿ ಕೋರ್ಟ್ ಮೊರೆ ಹೋಗಿದ್ದಾರೆ. ಅಲ್ಲಿಯೂ ಕ್ಷಮೆ ಕೇಳುವಂತೆ ಕೋರ್ಟ್ ಛೀಮಾರಿ ಹಾಕಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಕನ್ನಡದ ಎಲ್ಲಾ ಟಿವಿ ವಾಹಿನಿಗಳು, ಯೂಟ್ಯೂಬ್ ಸೇರಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಕಮಲ್ ಹಾಸನ್ ಸಿನಿಮಾ ಸೇರಿದಂತೆ ಯಾವುದೇ ಕಾರ್ಯಕ್ರಮಗಳನ್ನು ಪ್ರಸಾರ ಮಾಡಬಾರದು. ಇದನ್ನು ಮೀರಿ, ಚಿತ್ರಮಂದಿರಗಳು ಚಿತ್ರ ಪ್ರದರ್ಶನ ಮಾಡುವ ಸಾಹಸ ಮಾಡಿದಲ್ಲಿ ಮುತ್ತಿಗೆ ಹಾಕಿ, ಪ್ರತಿಭಟನೆ ತೀವ್ರಗೊಳಿಸುತ್ತೇವೆ ಎಂದು ಎಚ್ಚರಿಕೆ ನೀಡಿದರು.

# ಎಲ್ಲಾ ತಾಲ್ಲೂಕುಗಳಲ್ಲಿಯೂ ಹೆಚ್ಚಿನ ವರ್ಷಧಾರೆ

## ಕೊಡಗು ಜಿಲ್ಲೆಯಲ್ಲಿ ಮೇ ತಿಂಗಳಿನಲ್ಲಿ ಮೂರೂವರೆಪಟ್ಟು ಅಧಿಕ ಮಳೆ

• ಉದಯವಾಹಿನಿ, ಮಡಿಕೇರಿ

ಕೊಡಗು ಜಿಲ್ಲೆಯಲ್ಲಿ ಮೇ ತಿಂಗಳಿನಲ್ಲಿ ಮೂರುವರೆಪಟ್ಟು ಹೆಚ್ಚು ಮಳೆ ಸುರಿದಿದೆ. ಸಾಮಾನ್ಯವಾಗಿ ಬೇಸಿಗೆ ಬಿಸಿಲಿನಿಂದ ಉಷ್ಣಾಂಶ ಹೆಚ್ಚಿ, ಧಗೆಯಿಂದ ಬಸವಳಿಯುತ್ತಿದ್ದ ಜನರಿಗೆ ಜುಲೈ ತಿಂಗಳಿನ ಮಳೆಗಾಲದ ಅನುಭವ ಮೇ ತಿಂಗಳಿನಲ್ಲೇ ಸಿಕ್ಕಿದೆ. ಎಲ್ಲಾ ತಾಲ್ಲೂಕುಗಳಲ್ಲಿಯೂ ವಾಡಿಕೆಗಿಂತ ಹಲವು ಪಟ್ಟು ಅಧಿಕ ಮಳೆ ಸುರಿದಿದೆ.


ಉದಯವಾಹಿನಿ ಚಿತ್ರ

15 ವರ್ಷಗಳಲ್ಲಿಯೇ ಮೇ ತಿಂಗಳಿನಲ್ಲಿ ಅತ್ಯಂತ ಹೆಚ್ಚು ಮಳೆಯಾಗಿದೆ. ಮೇ 13ರವರೆಗೂ ಶೇ 44ರಷ್ಟು ಮಳೆ ಕೊರತೆ ಜಿಲ್ಲೆಯಲ್ಲಿ ಇತ್ತು. ಆದರೆ, ನಂತರ ಸುರಿದ ಧಾರಾಕಾರ ಮಳೆ ಕೊರತೆಯನ್ನು ನೀಗಿಸಿದ್ದು ಮಾತ್ರವಲ್ಲ ಶೇ 340ರಷ್ಟು ಹೆಚ್ಚುವರಿ ಮಳೆ ಬರಲು ಕಾರಣವಾಯಿತು. ಇದರಿಂದ ಅಗತ್ಯಕ್ಕಿಂತ ಅಧಿಕ ಮಳೆ ಮೇ ತಿಂಗಳಿನಲ್ಲೇ ಸುರಿಯಿತು. ಮೇ ತಿಂಗಳಿನಲ್ಲಿ ಮಡಿಕೇರಿ ತಾಲ್ಲೂಕಿನಲ್ಲಿ 14 ಸೆಂ.ಮೀ ಮಳೆಯಾಗಬೇಕಿತ್ತು. ಆದರೆ, ಸುರಿದಿದ್ದು 71 ಸೆಂ.ಮೀ. ಶೇ 407ರಷ್ಟು ಹೆಚ್ಚು ಮಳೆ ಸುರಿದಿದೆ. ಸೋಮವಾರಪೇಟೆ ತಾಲ್ಲೂಕಿನಲ್ಲಿ 10 ಸೆಂ.ಮೀ ಮಳೆಯಾಗಬೇಕಿತ್ತು. ಬಂದಿದ್ದು 54 ಸೆಂ.ಮೀ. ಶೇ 440ರಷ್ಟು ಹೆಚ್ಚು ವರ್ಷಧಾರೆಯಾಯಿತು.

ವಿರಾಜಪೇಟೆ ತಾಲ್ಲೂಕಿನಲ್ಲಿ 15 ಸೆಂ.ಮೀ ಮಳೆಯಾಗಬೇಕಿತ್ತು. 59 ಸೆಂ.ಮೀ ಸುರಿಯುವ ಮೂಲಕ ಶೇ 286ರಷ್ಟು ಹೆಚ್ಚು ಮಳೆಯಾಯಿತು. ಕುಶಾಲನಗರ ತಾಲ್ಲೂಕಿನಲ್ಲಿ 10 ಸೆಂ.ಮೀ ವರ್ಷಧಾರೆಯಾಗಬೇಕಿತ್ತು. ಆದರೆ, ಬಂದಿದ್ದು 43 ಸೆಂ.ಮೀ. ಮಳೆ. ಶೇ 305ರಷ್ಟು ಹೆಚ್ಚುವರಿಯಾಯಿತು.

ಪೊನ್ನಂಪೇಟೆ ತಾಲ್ಲೂಕಿನಲ್ಲಿ 13 ಸೆಂ.ಮೀ ಮಳೆ ಯಾಗಬೇಕಿತ್ತು. ಆದರೆ, 58 ಸೆಂ.ಮೀ ಸುರಿದಿದ್ದು, ಶೇ 324ರಷ್ಟು ಹೆಚ್ಚು ಮಳೆಯಾಗಿದೆ. ಕೊಡಗು ಜಿಲ್ಲೆಯ ಬಹುಪಾಲು ಎಲ್ಲಾ ಹೋಬಳಿ ವ್ಯಾಪ್ತಿಗಳಲ್ಲೂ ಜನವರಿಯಿಂದ ಇಲ್ಲಿಯವರೆಗೆ ಸುರಿಯಬೇಕಿದ್ದ ಮಳೆಗಿಂತ ದುಪ್ಪಟ್ಟು ವರ್ಷ ಧಾರೆಯಾಗಿದೆ. ವಾಡಿಕೆ ಮಳೆಯ ಗುರಿಯನ್ನು ಮೀರಿದೆ. ಪ್ರತಿ ವರ್ಷ ಆರಂಭವಾಗುತ್ತಿದ್ದ ಮಳೆಗಾಲದ ಅವಧಿಗಿಂತಲೂ ಮುಂಚಿತವಾಗಿಯೇ ಈ ಪ್ರಮಾಣದಲ್ಲಿ ವರುಣ ಕೃಪೆ ತೋರಿರುವುದು ಸಹಜವಾಗಿಯೇ ಕೇವಲ ಅಚ್ಚರಿಗೆ ಮಾತ್ರವಲ್ಲ ಆತಂಕಕ್ಕೂ ಕಾರಣವಾಗಿದೆ. ಮಳೆಯಿಂದ ಬಹುಪಾಲು ಎಲ್ಲಾ ನದಿ, ತೊರೆಗಳು ತುಂಬಿ ಹರಿಯುತ್ತಿವೆ.

> **ಶಾಂತಳ್ಳಿಯಲ್ಲಿ ಅಧಿಕ ಮಳೆ**
> **ಕೊಡಗು ಜಿಲ್ಲೆಯ ಹೋಬಳಿವಾರು ಮಳೆ ಪ್ರಮಾಣ ಗಮನಿಸಿದರೆ ಅತ್ಯಂತ ಹೆಚ್ಚು ಮಳೆ ಸೋಮವಾರಪೇಟೆ ತಾಲ್ಲೂಕಿನ ಶಾಂತಳ್ಳಿ ಹೋಬಳಿಯಲ್ಲಿ ಸುರಿದಿದೆ. ಶೇ 618ರಷ್ಟು ಹೆಚ್ಚು ಮಳೆ ಮೇ ತಿಂಗಳಿನಲ್ಲಿ ಸುರಿದಿದೆ. ಪೊನ್ನಂಪೇಟೆ ತಾಲ್ಲೂಕಿನ ಹುದಿಕೇರಿಯಲ್ಲಿ ಶೇ 560ಷ್ಟು ಮಳೆಯಾಗಿದೆ. ಸೋಮವಾರಪೇಟೆ ತಾಲ್ಲೂಕಿನಲ್ಲೂ ಶೇ 425ರಷ್ಟು ಹೆಚ್ಚು ಮಳೆಯಾಗಿದೆ. ಆದರೆ, ಸಾಮಾನ್ಯವಾಗಿ ಹೆಚ್ಚು ಮಳೆಯಾಗುತ್ತಿದ್ದ ಭಾಗಮಂಡಲ ಹೋಬಳಿಯಲ್ಲಿ ಮೇ ತಿಂಗಳಿನಲ್ಲಿ ಶೇ 283ರಷ್ಟು ಮಾತ್ರ ಹೆಚ್ಚು ಮಳೆಯಾಗಿದೆ.**

ಇನ್ನೂ ಹಲವೆಡೆ ಮಳೆಯಾಗುತ್ತಲೇ ಇದೆ. ಈ ವರ್ಷ ವಾಡಿಕೆಗಿಂತ ಹಲವು ಪಟ್ಟು ಹೆಚ್ಚು ಮಳೆ ಸುರಿಯುವ ಎಲ್ಲಾ ಲಕ್ಷಣಗಳೂ ಕಂಡುಬರುತ್ತಿವೆ. 2023, 2024ಕ್ಕಿಂತಲೂ ಅಧಿಕ ಮಳೆ 2025ರಲ್ಲಿ ಸುರಿಯುವ ನಿರೀಕ್ಷೆ ಇದೆ.

ಅಂತರಾಳದಿಂದ... EDITORIAL

# ಕೇಂದ್ರ-ರಾಜ್ಯಗಳ ಸಂಬಂಧ ಹದಗೆಡಲು ಯಾರು ಕಾರಣ?

ಭಾರತ ಎಂಬುದು ಒಂದು ಒಕ್ಕೂಟ ರಾಷ್ಟ್ರ ಕೇಂದ್ರ ಸರಕಾರವೆಂದು ಬಳಕೆಯಲ್ಲಿ ಕರೆಯುತ್ತಿರುವುದು ವಾಸ್ತವವಾಗಿ, ಸಂವಿಧಾನಾತ್ಮಕವಾಗಿ ಒಕ್ಕೂಟ ಸರಕಾರವನ್ನು ರಾಜ್ಯಗಳು ಮತ್ತು ಒಕ್ಕೂಟ ಸರಕಾರದ ನಡುವೆ ಯಾವುದೇ ವೈಮನಸ್ಸು ಉಂಟಾಗದಂತೆ ಎಚ್ಚರದಿಂದ ವರ್ತಿಸಬೇಕಾದುದು ಒಕ್ಕೂಟ ಸರಕಾರ ಮತ್ತು ರಾಜ್ಯ ಸರಕಾರಗಳ ಕರ್ತವ್ಯ. ಈ ಮಾತು ಹೃದಯಾಂತರಾಳದಿಂದ ಬಂದಿದ್ದರೆ ಅದು ಸ್ವಾಗತಾರ್ಹ. ಆದರೆ ಕಾಟಾಚಾರದ ಹೇಳಿಕೆಯಾಗಿದ್ದರೆ ಪ್ರಯೋಜನವಿಲ್ಲ. ನೀತಿ ಆಯೋಗದ ಆಡಳಿತ ಮಂಡಳಿ ಸಭೆಯಲ್ಲಿ ಇಂತಹ ಮಾತುಗಳನ್ನು ಆಡುವ ಮುನ್ನ ಪ್ರಧಾನ ಮಂತ್ರಿಗಳು ಮೊದಲು ಆತ್ಮಾವಲೋಕನ ಮಾಡಿಕೊಳ್ಳುವುದು ಅಗತ್ಯವಾಗಿದೆ. ಪ್ರಧಾನಿಯಾಗಿ ಅವರು, ಅವರ ಸರಕಾರ ಬಿಜೆಪಿಯೇತರ ಪಕ್ಷಗಳು ಅಧಿಕಾರದಲ್ಲಿರುವ ರಾಜ್ಯಗಳಿಗೆ ಸಂಬಂಧಿಸಿದಂತೆ ನಡೆದುಕೊಂಡ ರೀತಿ ಎಂಥದು? ರಾಜ್ಯಪಾಲರುಗಳನ್ನು ಬಳಸಿಕೊಂಡು ಅಲ್ಲಿನ ಸರಕಾರಗಳಿಗೆ ನಿರಂತರವಾಗಿ ಕೊಡುತ್ತಿರುವ ಕಿರುಕುಳ, ಚುನಾಯಿತ ಸರಕಾರಗಳನ್ನು ಉರುಳಿಸಲು ಮಾಡುತ್ತಾ ಬಂದ ಕುತಂತ್ರ, ತನಿಖಾ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ಶಾಸಕರನ್ನು ಬೆದರಿಸಿ ಆಪರೇಷನ್ ಕಮಲ ಮಾಡಲು ನಡೆಸಿದ ಮಸಲತ್ತು ಇವೆಲ್ಲವೂ ಹಿಂದೆ ಯಾರಿದ್ದಾರೆಂದು ಪ್ರತ್ಯೇಕವಾಗಿ ಹೇಳಬೇಕಾಗಿಲ್ಲ.

ಒಂದೆಡೆ ಚುನಾಯಿತ ಸರಕಾರಗಳನ್ನು ಬುಡಮೇಲು ಮಾಡುತ್ತಾ ಮತ್ತೊಂದೆಡೆ ಕೇಂದ್ರ ಮತ್ತು ರಾಜ್ಯ ಸರಕಾರಗಳು ಒಟ್ಟಾಗಿ ಕೆಲಸ ಮಾಡಬೇಕೆಂದು ಹೇಳಿಕೆ ನೀಡುವುದು ಪ್ರಾಮಾಣಿಕವಾದುದೆ? ಎಂಬ ಸಂದೇಹ ಸಹಜವಾಗಿ ಬರುತ್ತದೆ. ನೀತಿ ಆಯೋಗದ ಆಡಳಿತ ಮಂಡಳಿಯ 10ನೇ ಸಭೆಯಲ್ಲಿ ಕರ್ನಾಟಕ, ಕೇರಳ ಮತ್ತು ಪಶ್ಚಿಮ ಬಂಗಾಳದ ಮುಖ್ಯಮಂತ್ರಿಗಳು ಭಾಗವಹಿಸಿರಲಿಲ್ಲ, ಕೇಂದ್ರ ಮತ್ತು ರಾಜ್ಯಗಳ ನಡುವಿನ ಸಂಬಂಧ ಸೌಹಾರ್ದಯುತವಾಗಿಲ್ಲ ಎಂಬುದಕ್ಕೆ ಇದೊಂದು ಉದಾಹರಣೆಯಾಗಿದೆ. ಒಕ್ಕೂಟ ಸರಕಾರ ಮತ್ತು ರಾಜ್ಯ ಸರಕಾರಗಳ ನಡುವಿನ ಸಂಬಂಧ ಸುಧಾರಿಸ ಬೇಕಾದರೆ ಬಿಜೆಪಿಯೇತರ ರಾಜ್ಯ ಸರಕಾರಗಳ ಬಗ್ಗೆ ನಕಾರಾತ್ಮಕ ನೀತಿಯನ್ನು ಕೈಬಿಡುವುದು ಅವಶ್ಯವಾಗಿದೆ. ತೆರಿಗೆ ವರಮಾನದಲ್ಲಿ ರಾಜ್ಯಗಳ ಪಾಲನ್ನು ನ್ಯಾಯವಾಗಿ ಕೊಡಬೇಕು. ಕೇಂದ್ರ, ರಾಜ್ಯಗಳ ನಡುವೆ ಹಣಕಾಸು ಹಂಚಿಕೆಯ ಕುರಿತಂತೆ ಉಂಟಾಗಿರುವ ಬಿಕ್ಕಟ್ಟನ್ನು ಮೊದಲು ನಿವಾರಿಸಬೇಕು. ಹಿಂದಿಯನ್ನು ರಾಷ್ಟ್ರಭಾಷೆಯೆಂದು ಹೇರುವ ಅಸಾಂವಿಧಾನಿಕ ಮಸಲತ್ತಿಗೆ ದಕ್ಷಿಣದ ರಾಜ್ಯಗಳ ಸ್ಪಷ್ಟ ವಿರೋಧವಿದೆ. ಹಾಗಾಗಿ ಒಕ್ಕೂಟ ಸರಕಾರ ಹಿಂದಿ ಹೇರಿಕೆಯನ್ನು ಕೈ ಬಿಡಬೇಕು. ಚುನಾಯಿತ ಸರಕಾರಗಳನ್ನು ಉರುಳಿಸಲು ರಾಜ್ಯ ಪಾಲರುಗಳನ್ನು ದುರುಪಯೋಗ ಮಾಡಿಕೊಳ್ಳುವುದನ್ನು ಕೈ ಬಿಡಬೇಕು. ತನಿಖಾ ಸಂಸ್ಥೆಗಳನ್ನು ದುರ್ಬಳಕೆ ಮಾಡುವುದನ್ನು ನಿಲ್ಲಿಸಬೇಕು. ಬಿಜೆಪಿಯೇತರ ಪಕ್ಷಗಳು ಅಧಿಕಾರದಲ್ಲಿರುವ ರಾಜ್ಯಗಳನ್ನು ತಾರತಮ್ಯದಿಂದ ನೋಡುವುದನ್ನು ನಿಲ್ಲಿಸಬೇಕು. ಕೇಂದ್ರ ಮತ್ತು ರಾಜ್ಯಗಳ ನಡುವಿನ ಸಂಬಂಧ ಹದಗೆಡಲು ಇನ್ನೊಂದು ಬಹುಮುಖ್ಯ ಕಾರಣ ಭಾರತದ ಬಹುತ್ವಸ್ವರೂಪವನ್ನು ಒಪ್ಪಿಕೊಳ್ಳದಿರುವ ಮೋದಿಯವರ ನೇತೃತ್ವದ ಸರಕಾರದ ಒಂದು ಬಹುದೊಡ್ಡ ಲೋಪ. ವೈವಿಧ್ಯತೆಯ ಈ ನೆಲದಲ್ಲಿ ಏಕರೂಪತೆಯನ್ನು ಹೇರಲು ಅಧಿಕಾರಕ್ಕೆ ಬಂದಾಗಿನಿಂದಲೂ ಸರಕಾರ ಯತ್ನಿಸುತ್ತಲೇ ಇದೆ. ಒಂದೇ ಭಾಷೆ, ಒಂದೇ ಧರ್ಮ. ಒಂದೇ ರೇಷನ್ ಕಾರ್ಡ್ ಹೀಗೆ ನಾನಾ ಕಸರತ್ತುಗಳನ್ನು ಮಾಡುತ್ತಾ ಬಹುತ್ವಕ್ಕೆ ಧಕ್ಕೆ ತರುತ್ತಿದೆ.

> **ಆದರೆ ಕಳೆದ ಹತ್ತು ವರ್ಷಗಳಿಂದ ಒಕ್ಕೂಟ ಮತ್ತು ರಾಜ್ಯ ಸರಕಾರಗಳ ನಡುವಿನ ಸಂಬಂಧ ಅಷ್ಟೊಂದು ಸೌಹಾರ್ದಯುತವಾಗಿಲ್ಲ. ಈ ಹಿನ್ನೆಲೆಯಲ್ಲಿ ನೀತಿ ಆಯೋಗದ ಆಡಳಿತ ಮಂಡಳಿಯ 10ನೇ ಸಭೆಯಲ್ಲಿ ಅಪರೂಪಕ್ಕೆ ಭಾಗವಹಿಸಿದ್ದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಆಡಿದ ಮಾತುಗಳು ಗಮನಾರ್ಹ. ಕೇಂದ್ರ ಮತ್ತು ರಾಜ್ಯ ಸರಕಾರಗಳು ಒಂದು ತಂಡವಾಗಿ ಕೆಲಸ ಮಾಡಬೇಕು ಎಂದು ಪ್ರಧಾನಿ ಮೋದಿಯವರು ಹೇಳಿದ್ದಾರೆ.**

ಪ್ರಧಾನಿ ನರೇಂದ್ರ ಮೋದಿಯವರು ಇಂಥ ನಕಾರಾತ್ಮಕ ನೀತಿಯನ್ನು ಕೈ ಬಿಡದಿದ್ದರೆ, ಕೇಂದ್ರ ಮತ್ತು ರಾಜ್ಯಗಳ ನಡುವಿನ ದ್ವಿಪಕ್ಷೀಯ ಸಂಬಂಧ ಸುಧಾರಿಸಲು ಹೇಗೆ ಸಾಧ್ಯ? ನರೇಂದ್ರ ಮೋದಿಯವರ ನೇತೃತ್ವದ ಒಕ್ಕೂಟ ಸರಕಾರ ಈ ದೇಶವನ್ನು ತನ್ನ ಪಾಳೆಗಾರಿಕೆ ಎಂದು ಭಾವಿಸಿದಂತೆ ಕಾಣುತ್ತಿದೆ. ಇಂತಹ ಪಾಳೆಗಾರಿಕೆ ನೀತಿಯನ್ನು ಕೈ ಬಿಡಬೇಕು. ಇಲ್ಲಿ ವಿವಿಧ ರಾಜ್ಯಗಳು ಸಾಂಸ್ಕೃತಿಕವಾಗಿ, ಸಾಮಾಜಿಕವಾಗಿ ಹಾಗೂ ವಿಭಿನ್ನವಾಗಿವೆ. ಅವುಗಳ ಅಸ್ತಿತೆಯನ್ನು ಗೌರವಿಸಿದರೆ ಮಾತ್ರ, ಕೇಂದ್ರ ಮತ್ತು ರಾಜ್ಯಗಳ ಸಂಬಂಧ ಸುಧಾರಿಸಲು ಸಾಧ್ಯ.ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರದಲ್ಲಿ ಮತ್ತು ರಾಜ್ಯಗಳಲ್ಲಿ ಒಂದೇ ಪಕ್ಷದ ಸರಕಾರವಿರಬೇಕೆಂದು ಬಯಸುವುದು ಸರಿಯಲ್ಲ. ಆಯಾ ರಾಜ್ಯಗಳ ಭಾಷೆ, ಸಂಸ್ಕೃತಿ, ಆಹಾರ ಪದ್ಧತಿ ಮುಂತಾದವುಗಳನ್ನು ಆಧರಿಸಿ ಕೆಲವು ರಾಜ್ಯಗಳಲ್ಲಿ ಪ್ರಾದೇಶಿಕ ಪಕ್ಷಗಳು ಅಧಿಕಾರಕ್ಕೆ ಬರುವುದು ಸಹಜ. ಇಂತಹ ಸನ್ನಿವೇಶದಲ್ಲಿ ಪರಸ್ಪರ ಹೊಂದಾಣಿಕೆ ಅನಿವಾರ್ಯವಾಗಿದೆ.

ಪ್ರಧಾನಿಯವರಿಗೆ ಇಂತಹ ಹೊಂದಾಣಿಕೆ ಬೇಕಾಗಿದ್ದರೆ ಅವರು, ಅವರ ಸರಕಾರ ತಮ್ಮ ಯಜಮಾನಿಕೆಯ ನೀತಿಯನ್ನು ಕೈ ಬಿಡಬೇಕು. ಕೇವಲ ನೀತಿ ಆಯೋಗದ ಸಭೆಯಲ್ಲಿ ಹೇಳಿದರೆ ಮಾತ್ರ ಸಾಲದು. ಕಾರ್ಯರೂಪದಲ್ಲೂ ಇದು ಜಾರಿಗೆ ಬರಬೇಕು. ಜಿಎಸ್‌ಟಿ ಜಾರಿಗೆ ಬಂದ ನಂತರ ರಾಜ್ಯಗಳು ತೆರಿಗೆ ನಿರ್ಧರಿಸುವ ಅಧಿಕಾರವನ್ನು ಕಳೆದುಕೊಂಡಂತಾಗಿದೆ. ಈಗ ರಾಜ್ಯಗಳು ತೆರಿಗೆ ಸಂಗ್ರಹಿಸಿ ಕೇಂದ್ರಕ್ಕೆ ಕೊಡುವ ವಸೂಲಿ ಏಜೆಂಟರಂತಾಗಿವೆ. ರಾಜ್ಯಗಳ ಪಾಲಿನ ಹಣವನ್ನು ಬಿಡುಗಡೆ ಮಾಡಲು ಕೇಂದ್ರ ಸರಕಾರ ಸತಾಯಿಸುತ್ತಿದೆ.





• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ಭರತನು ಅವರು ಬಂದ ಕಾರ್ಯವೇನೆಂದು ಕೇಳಲು ಅವರು ಆತನಿಗೆ ಸಾಷ್ಟಾಂಗವೆರಗಿ ಎಲೈ ಸ್ವಾಮಿ, ಪುರೋಹಿತನಾದ ವಸಿಷ್ಠ ಮುನೀಶ್ವರನೂ ಪ್ರಧಾನಿಗಳೂ ನಿಮ್ಮ ಕ್ಷೇಮವನ್ನು ವಿಚಾರಿಸಿ ನಿನ್ನನ್ನು ಶೀಘ್ರದಲ್ಲಿ ಕರೆದುಕೊಂಡು ಬರಹೇಳಿದರು. ಅಲ್ಲಿ ನಿನಗೆ ಅವಶ್ಯವಾದ ಕಾರ್ಯವುಂಟು. ನೀನು ಶೀಘ್ರವಾಗಿ ಹೊರಡು. ನಿನ್ನ ಸೋದರಮಾವನಿಗೆ ಅನೇಕ ಅಪೂರ್ವವಾದ ಆಭರಣಗಳನ್ನೂ ಇಪ್ಪತ್ತು ಕೋಟಿ ದ್ರವ್ಯಗಳನ್ನೂ ಕಳುಹಿಸಿದ್ದಾರೆ. ಅವನ್ನು ಆತನಿಗೆ ಕೊಡಿಸು. ನಿನಗೆ ಹತ್ತು ಕೋಟಿ ದ್ರವ್ಯವನ್ನು ಕಳುಹಿಸಿದ್ದಾರೆ. ಅದನ್ನು ನೀನು ತೆಗೆದುಕೊಂಡು ನಿನ್ನ ಸ್ನೇಹಿತರಿಂದ ಬೀಳ್ಕೊಂಡು ಹೊರಡು ಎಂದು ಹೇಳಿದರು. ಭರತನು ಅವರಿಗೆ ಅನೇಕ ಸತ್ಕಾರಗಳನ್ನು ಮಾಡಿ ಅವರನ್ನು ಕುರಿತು ಎಲೈ ದೂತರುಗಳಿರಾ, ನಮ್ಮ ತಂದೆಯಾದ ದಶರಥರಾಯನ ಶ್ರೀರಾಮನೂ ಲಕ್ಷ್ಮಣನೂ ಸುಖವಾಗಿದ್ದಾರೆಯೆ ಅತ್ಯಂತ ಧರ್ಮರಹಸ್ಯವನ್ನು ಬಲ್ಲವಳೂ

ಕೀರ್ತಿಶಾಲಿಯೂ ಆದ ಕೌಸಲ್ಯಾದೇವಿಯು ಸುಖವಾಗಿದ್ದಾಳೆಯೆ? ಲಕ್ಷ್ಮಣ ಶತ್ರುಘ್ನರ ತಾಯಿಯಾದ ಸುಮಿತ್ರಾದೇವಿಯು ಚೆನ್ನಾಗಿದ್ದಾಳೆಯೆ? ಯಾವಾಗಲೂ ಕೋಪದಿಂದ ಜಗಳವಾಡುತ್ತ ವಿವೇಕವಿಲ್ಲದವಳಾದ ನನ್ನ ತಾಯಿ ಕೈಕೇಯಿದೇವಿಯು ಚೆನ್ನಾಗಿದ್ದಾಳೆಯೆ ಎಂದು ಎಲ್ಲರ ಕುಶಲವೃತ್ತಾಂತಗಳನ್ನೂ ಕೇಳಿದನು. ಆ ದೂತರು ಕೈಮುಗಿದುಕೊಂಡು ವಿನಯದಿಂದ ಸ್ವಾಮಿ, ಎಲ್ಲರೂ ಕುಶಲರಾಗಿದ್ದಾರೆ. ಲಕ್ಷ್ಮಿಯು ನಿನ್ನನ್ನು ವರಿಸಿದ್ದಾಳೆ ಎಂದು ಹೇಳಿದರು. ಭರತನು ದೂತರೆ, ಒಳ್ಳೆಯದು. ನಾನು ನನ್ನ ಮಾತಾಮಹನನ ಸೋದರಮಾವನನ್ನೂ ಕೇಳಿ ಬರುತ್ತೇನೆ ಎಂದು ಹೇಳಿ ಕೇಕಯರಾಯನ ಮನೆಗೆ ಹೋಗಿ ಮಾತಾಮಹ, ನಮ್ಮ ಗುರುವಾದ ವಸಿಷ್ಟ ಮುನೀಶ್ವರನ ಪ್ರಧಾನರೂ ನನ್ನನ್ನು ಬರಹೇಳಿ ದೂತರನ್ನು ಕಳುಹಿಸಿದ್ದಾರೆ. ನಾನು ನಮ್ಮ ಊರಿಗೆ ಹೋಗಿ ಬರುತ್ತೇನೆ ಎಂದು ಹೇಳಿದನು. ಆ ರಾಯನು ಒಳ್ಳೆಯದು. ನೀನು ಸಂಖವಾಗಿ ಹೋಗಿ ಬಾ. ನಿನ್ನ ತಾಯಿಯ ಸಂಗಡ ಆಕೆಯ ಕುಶಲವನ್ನು ಕೇಳಿದೆನೆಂದು ಹೇಳು. ನಿನ್ನ ತಂದೆಯಾದ ದಶರಥರಾಯನೊಡನೆ ಯೋಗ ಕ್ಷೇಮವನ್ನು ವಿಚಾರಿಸಿದೆನೆಂದು ಹೇಳು. ನಿನ್ನ ಅಣ್ಣತಮ್ಮಂದಿರಾದ ರಾಮಲಕ್ಷ್ಮಣರಿಗೆ ಅವರ ಯೋಗಕ್ಷೇಮಗಳನ್ನು ವಿಚಾರಿಸಿದೆನೆಂದು ಹೇಳು ಎಂದು ಹೇಳಿ ನಾನಾವಿಧವಾದ ರತ್ನ ಕಂಬಳಿಗಳನ್ನೂ ಭೂಷಣಗಳನ್ನೂ ಸಾವಿರದ ಆರುನೂರು ಉತ್ತಮಾಶ್ವಗಳನ್ನೂ ಅನೇಕ ದ್ರವ್ಯವನ್ನೂ ಕೊಟ್ಟು, ಸತ್ಕರಿಸಿ ತನಗೆ ವಿಶ್ವಾಸಿಗಳಾದ ಪ್ರಧಾನರನ್ನು ಕರೆದು ರಥವನ್ನೂ ಅನೇಕ ಬಲಗಳನ್ನೂ ಕೂಡಿಸಿ ಆತನನ್ನು ಅಯೋಧ್ಯಾಪಟ್ಟಣದಲ್ಲಿ ಬಿಟ್ಟು ಬರಹೇಳಿ ಆಜ್ಞಾಪಿಸಿದನು.ಆಮೇಲೆ ಭರತನು ತನ್ನ ಸೋದರಮಾವನ ಮನೆಗೆ ಹೋಗಿ ಆ ವೃತ್ತಾಂತವನ್ನು ಹೇಳಲು ಯುಧಾಜಿತ್ರೆಂಬ ಆ ರಾಯನು ಉತ್ತಮಕುಲದಲ್ಲಿ ಹುಟ್ಟಿದ ಮದ್ದಾನೆಗಳನ್ನೂ ವೇಗಶಾಲಿಗಳಾದ ಹೇಸರಕತ್ತೆಗಳನ್ನೂ ಅನೇಕ ದ್ರವ್ಯಗಳನ್ನೂ ಮನೆಯಲ್ಲಿ ಸಾಕಿದ ಮಹಾಶರೀರದ ನಾಯಿಗಳನ್ನೂ ಉಚಿತವಾಗಿ ಕೊಟ್ಟು ಕಳುಹಿಸಿದನು.

ಭರತನು ಅವರು ಕೊಟ್ಟ ವಸ್ತುಗಳನ್ನು ತಾನು ದುಃಸ್ವಪ್ನವನ್ನು ಕಂಡ ಮನೋವ್ಯಥೆಯಿಂದಲೂ ದೂತರು ಕರೆಯಬಂದದ್ದರಿಂದ ಶೀಘ್ರವಾಗಿ ಹೋಗಬೇಕೆಂಬ ಬುದ್ಧಿಯಿಂದಲೂ ಲೆಕ್ಕಿಸಲಿಲ್ಲ.

**ಮುಂದುವರಿಯುವುದು...**



# ಶ್ರೀಗಳ ನುಡಿಮುತ್ತುಗಳು ಎಲ್ಲರಿಗೂ ದಾರಿದೀಪ!



👉 **ವಿಶ್ವಾಸ್.ಡಿ.ಗೌಡ**
• **ಉದಯವಾಹಿನಿ, ವಿಶೇಷ**

**ಕಾಯಕಯೋಗಿಯ 15 ನುಡಿಮುತ್ತುಗಳು:** ಪಾಲಿಸಿದರೆ ಕೈಲಾಸವೇ ನಮ್ಮದು ತ್ರಿವಿಧ ದಾಸೋಹಿ, ಬಸವಣ್ಣನವರ ತತ್ವ 'ಕಾಯಕವೇ ಕೈಲಾಸ'ವನ್ನು ಚಾಚೂ ತಪ್ಪದೇ ಪಾಲಿಸಿದ ಶತಾಯುಷಿ, ತುಮಕೂರಿನ ಸಿದ್ಧಗಂಗಾ ಮಠದ ಶಿವಕುಮಾರ ಸ್ವಾಮೀಜಿಯವರ ಜೀವನ ಇತರರಿಗೆ ಸ್ಪೂರ್ತಿ ನೀಡುವಂತಹುದ್ದು. ಅತ್ಯಂತ ಸರಳ ಹಾಗೂ ಸಾರ್ಥಕ ಜೀವನ ನಡೆಸಿ ಹಲವರಿಗೆ ಭವಿಷ್ಯ ಕಲ್ಪಿಸಿದ ನಡೆದಾಡುವ ದೇವರ ಕೆಲ ನುಡಿ ಮುತ್ತುಗಳು. ಜನ ಸೇವೆಯೇ ಜನಾರ್ಧನ ಸೇವೆ' ಎಂದು ನಿಸ್ವಾರ್ಥ ಬದುಕು ಬಾಳಿದ ಶ್ರೀಗಳ ಈ ನುಡಿಮುತ್ತುಗಳು ಎಲ್ಲರಿಗೂ ದಾರಿದೀಪ...

ಮಾತು ಮಿತವಾಗಿರಬೇಕು, ಹಿತವಾಗಿರಬೇಕು, ಪ್ರೀತಿಯಿಂದಿರಬೇಕು, ಸರಳವಾಗಿರಬೇಕು, ಮಧುರವಾಗಿರಬೇಕು, ಮೃದುವಾಗಿರಬೇಕು, ತಪಸ್ಸಿನಂತಿರಬೇಕು. ಮಾನವ ಪ್ರಜ್ಞೆ ಜಾಗೃತವಾಗದ ಹೊರತು ಇಂದಿನ ಸಮಸ್ಯೆಗಳಿಗೆ ಪರಿಹಾರ ಸಿಗುವುದಿಲ್ಲ. ಸಹಜ ಪ್ರೀತಿ ಕಲ್ಲನ್ನೂ ಕರಗಿಸುತ್ತದೆ; ಕಟುಕನನ್ನು ಕರುಣಾಮಯಿಯನ್ನಾಗಿಸುತ್ತದೆ. ಕ್ರಮಬದ್ಧ ಜೀವನ ಪ್ರಗತಿಯ ಮೂಲ, ಅಕ್ರಮ ಜೀವನ ವಿನಾಶಕ್ಕೆ ಹಾದಿ. ಸೇವೆ ಪ್ರಚಾರದ ಸರಕಲ್ಲ; ಅದು ಗುಪ್ತಶಕ್ತಿ; ವ್ಯಕ್ತಿಯನ್ನು ಆರೋಗ್ಯವಂತನನ್ನಾಗಿಡುವ ಸಂಜೀವಿನಿ. ಸ್ತ್ರೀಯರು ಸಂಸ್ಕಾರವಂತರಾಗಿ, ಸಮಾಜದ ಕಣ್ಣಾದರೆ ಧರ್ಮ ತತ್ವಗಳು ಉಳಿಯುತ್ತದೆ. ಕರ್ತನೆಂಬ ಅಹಂಕಾರ ಬಿಡು. ಕಿಂಕರನೆಂಬ ಭಾವ ಬೆಳೆಸಿಕೋ. ದೃಷ್ಟಿ ಪವಿತ್ರವಾಗಿರಲಿ, ಭಾವ ಶುದ್ಧವಾಗಿರಲಿ, ಬದುಕು ಭಕ್ತಿಯಿಂದೊಡಗೂಡಿರಲಿ. ಸಮಾಜ ಪರಿಶುದ್ಧವಾಗಬೇಕೆಂದರೆ ಜನನಾಯಕರು ನೀತಿವಂತರಾಬೇಕು. ನಮ್ಮ ಪೂರ್ವಿಕರಿಗೆ ಮಾನವೀಯತೆಯೇ ಜೀವನವಾಗಿತ್ತು. ತಮಗಾಗಿ ದುಡಿದ ಎತ್ತು, ಹೋರಿ, ಹಸುಗಳು ಸತ್ತಾಗ ಸಮಾಧಿ ಮಾಡುತ್ತಿದ್ದರೇ ಹೊರತು, ಕಟುಕರಿಗೆ ಮಾರುತ್ತಿರಲಿಲ್ಲ. ಶಿಕ್ಷಣ ವ್ಯಾಪಾರವಲ್ಲ, ಅದು ದಾಸೋಹದ ರೀತಿಯಲ್ಲಿ ಪಸರಿಸಬೇಕು. ಉತ್ತಮ ಸಮಾಜಕ್ಕಾಗಿ ಜ್ಞಾನದ ಬೀಜ ಬಿತ್ತಬೇಕು. ಬೆವರು ಸುರಿಸದೇ ಯಾವುದಾದರೂ ಒಂದು ರೀತಿಯ ಕಾಯಕ ಮಾಡದೆ ಫಲ ಅನುಭವಿಸಲು ಯಾರಿಗೂ ಹಕ್ಕಿಲ್ಲ. ಮನಸ್ಸನ್ನು ಯಾವಾಗಲೂ ಪವಿತ್ರತೆಯಿಂದಿರುವಂತೆ ಜೋಪಾನ ಮಾಡಬೇಕು. ಮದುವೆ ಸಮಾರಂಭಗಳು ಸರಳವಾಗಿರಬೇಕು. ಪ್ರೀತಿ ಪ್ರೇಮಗಳ ಆತ್ಮೀಯ ಮಂಗಳ ಕಾರ್ಯಕ್ರಮಗಳಾಗಬೇಕು. ಉಭಯ ಕುಟುಂಬಗಳ ಬೆಳಕಿನ ಹಬ್ಬವಾಗಬೇಕು. ದುಡಿಮೆ ಸತ್ಯಶುದ್ಧವಾಗಿದ್ದು, ಪರರಿಗೆ ಉಪಕಾರವಾಗುವಂತಿರಬೇಕು. ಗ್ರಂಥದಲ್ಲಿ, ಗುಡಿಯಲ್ಲಿ ಧರ್ಮವಿಲ್ಲ. ಬದುಕಿನಲ್ಲಿದೆ, ಹೃದಯವಂತಿಕೆಯಲ್ಲಿದೆ.

> **ಜನ ಸೇವೆಯೇ ಜನಾರ್ಧನ ಸೇವೆ**

### ಶ್ರೀಗಳ ಕಿರು ಪರಿಚಯ

- **ಜನನ:** 1 ಏಪ್ರಿಲ್ 1907
- **ಜನನಸ್ಥಳ:** ವೀರಾಪುರ, ಮಾಗಡಿ ತಾಲ್ಲೂಕು, ರಾಮನಗರ ಜಿಲ್ಲೆ.
- **ನಿಧನ:** 21 ಜನವರಿ 2019
- **ಗುರು:** ಶ್ರೀ ಉದ್ಧಾನ ಸ್ವಾಮೀಜಿಗಳು
- **ಶಿಷ್ಯರು:** ಸಿದ್ದಗಂಗಾ ಶಿಕ್ಷಣ ಸಂಸ್ಥೆಯಲ್ಲಿ ವಿಧ್ಯಾಭ್ಯಾಸ ಮಾಡಿದ ಲಕ್ಷಾಂತರ ವಿದ್ಯಾರ್ಥಿಗಳು ಮತ್ತು ದೇಶದ ಅಸಂಖ್ಯಾತ ಭಕ್ತವರ್ಗ
- **ತತ್ವಜ್ಞಾನ:** ಕಾಯಕವೇ ಕೈಲಾಸ
- **ಪ್ರಶಸ್ತಿಗಳು/ಬಿರುದುಗಳು:**
- ಕರ್ನಾಟಕ ರತ್ನ, ಪದ್ಮಭೂಷಣ,(ನಡೆದಾಡುವ ದೇವರು, ತ್ರಿವಿಧ ದಾಸೋಹಿ, ಕಾಯಕ ಯೋಗಿ, ಆದುನಿಕ ಬಸವಣ್ಣ,)
- **ನುಡಿ:**ಕಾಯಕವೇ ಕೈಲಾಸ

# ವೈರಸ್ ನಿಂದಲೇ ಹೊಟ್ಟೆಯಲ್ಲಿ ಅಲ್ಸರ್

ಹೊಟ್ಟೆ ಹುಣ್ಣು ಸಾಮಾನ್ಯ ಸಮಸ್ಯೆಯಾದರೂ, ಆರಂಭಿಕ ಹಂತಗಳಲ್ಲಿಯೇ ಇದನ್ನು ಗುರುತಿಸಿ, ನಿಯಂತ್ರಿಸದಿದ್ದರೆ, ಮುಂದಿನ ದಿನಗಳಲ್ಲಿ ಇನ್ನಿತರ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ. ಹೀಗಾಗಿ ಆಹಾರ ಪದ್ಧತಿಯಲ್ಲಿ ಹಾಗೂ ಜೀವನಶೈಲಿಯಲ್ಲಿ ಕೆಲವೊಂದು ಬದಲಾವಣೆ ತಂದುಕೊಳ್ಳುವುದರ ಮೂಲಕ ನೀವು ಈ ಸಮಸ್ಯೆಯಿಂದ ನಿಮ್ಮನ್ನು ದೂರವಿಡಬಹುದು. ಇಂದಿನ ಒತ್ತಡದ ಜೀವನ ಶೈಲಿ ಮತ್ತು ಅನಾರೋಗ್ಯಕಾರಿ ಆಹಾರ ಪದ್ಧತಿಯಿಂದಾಗಿ, ಹೊಟ್ಟೆಗೆ ಸಂಬಂಧಿಸಿದ ಆರೋಗ್ಯ ಸಮಸ್ಯೆಗಳು ಬಹಳ ಸಣ್ಣ ವಯಸ್ಸಿನಲ್ಲಿಯೇ ಹೆಚ್ಚಿನವರಲ್ಲಿ ಕಾಣಿಸಿಕೊಳ್ಳುತ್ತಿದೆ. ಒಂದು ವೇಳೆ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ನೀಡದಿದ್ದರೆ, ಅದು ಗಂಭೀರ ರೂಪವನ್ನು ಪಡೆದುಕೊಳ್ಳಬಹುದು! ಸಾಮಾನ್ಯವಾಗಿ ಹೊಟ್ಟೆ ಹುಣ್ಣಿನ ಸಮಸ್ಯೆ ಅಥವಾ ಹೊಟ್ಟೆಯಲ್ಲಿ ನೋವು ಕಾಣಿಸಿಕೊಂಡಾಗ ಇದ್ದಕ್ಕಿದಂತೆ ಹೊಟ್ಟೆಯಲ್ಲಿ ಉರಿ ಕಾಣಿಸಿಕೊಳ್ಳುವುದು, ಮೂತ್ರದ ಬಣ್ಣ ಬದಲಾಗುವುದು, ಊಟ ಮಾಡಲು ಆಗದಿರುವುದು ಇವೆಲ್ಲವೂ ಹೊಟ್ಟೆ ಹುಣ್ಣು ಅಥವಾ ಅಲ್ಸರ್ ಲಕ್ಷಣಗಳಾಗಿವೆ. ಹೊಟ್ಟೆಯ ಹುಣ್ಣು ಅಥವಾ ಹೊಟ್ಟೆಯಲ್ಲಿ ಅಲ್ಸರ್ ಎನ್ನುವುದು ಒಂದು ರೀತಿಯ ಪೆಪ್ಟಿಕ್ ಅಲ್ಸರ್ ಆರೋಗ್ಯ ಸಮಸ್ಯೆಯಾಗಿದ್ದು ಅದು ಹೊಟ್ಟೆಯ ಒಳಪದರದಲ್ಲಿ ನೋವನ್ನು ಉಂಟುಮಾಡುತ್ತದೆ.


**ತಜ್ಞರು ಹೇಳುವ ಪ್ರಕಾರ:** ಮ್ಯಾಕ್ಸ್ ಆಸ್ಪತ್ರೆಯ ಡಾ. ರೋಹಿತ್ ಕಪೂರ್ ಹೇಳುವ ಪ್ರಕಾರ, ಗ್ಯಾಸ್ಟ್ರಿಕ್ ಅಲ್ಸರ್ ಎಂದರೆ ಹೊಟ್ಟೆಯ ಒಳಪದರದಲ್ಲಿ ಗಾಯಗಳು ಅಥವಾ ಹುಣ್ಣುಗಳು ರೂಪುಗೊಳ್ಳುವ ಸ್ಥಿತಿ. ಈ ಹುಣ್ಣುಗಳು ಆಮ್ಲಗಳು ಮತ್ತು ಕಿಣ್ವಗಳಿಂದ ಉಂಟಾಗುತ್ತವೆ, ಇದು ಆಹಾರವನ್ನು ಜೀರ್ಣಿಸಿ ಕೊಳ್ಳಲು ಸಹಾಯ ಮಾಡುತ್ತದೆ.

ಆದರೆ ಕೆಲವೊಮ್ಮೆ ಈ ಹುಣ್ಣುಗಳು ಹೊಟ್ಟೆಯೊಳಗೆ ಕಿರಿಕಿರಿ, ನೋವು ಮತ್ತು ಅನೇಕ ಜೀರ್ಣಕಾರಿಗೆ ಸಂಬಂಧಿಸಿದ ಆರೋಗ್ಯ ಸಮಸ್ಯೆಗಳನ್ನು ಉಂಟು ಮಾಡುವ ಸಾಧ್ಯತೆ ಇರುತ್ತದೆ. ಹಾಗಂತ ಇದೊಂದು ದೊಡ್ಡ ಸಮಸ್ಯೆಯಲ್ಲ ಆದರೆ ಈ ಸಮಸ್ಯೆ ಬಂತೆಂದರೆ ಅದರಿಂದ ಹೊರಬರುವುದು ಅಷ್ಟೊಂದು ಸುಲಭದ ವಿಚಾರವಲ್ಲ ಎನ್ನುತ್ತಾರೆ ತಜ್ಞರು.

**ಹೆಲಿಕೋಬ್ಯಾಕ್ಟರ್ ಪೈಲೋರಿ ಎನ್ನುವ ಬ್ಯಾಕ್ಟೀರಿಯಾ ಇದಕ್ಕೆ ಪ್ರಮುಖ ಕಾರಣವಾಗಬಹುದು:** ಮ್ಯಾಕ್ಸ್ ಆಸ್ಪತ್ರೆಯ ಡಾ. ರೋಹಿತ್ ಕಪೂರ್ ಅವರ ಪ್ರಕಾರ, ಹೆಲಿಕೋ ಬ್ಯಾಕ್ಟರ್ ಪೈಲೋರಿ ಎನ್ನುವುದು ಒಂದು ರೀತಿಯ ಬ್ಯಾಕ್ಟೀರಿಯಾವಾಗಿದ್ದು, ಹೊಟ್ಟೆಯ ಹುಣ್ಣಿಗೆ ಕಾರಣವಾಗುವ ಸಾಧ್ಯತೆ ಹೆಚ್ಚಿರುತ್ತದೆ. ಅಲ್ಲದೆ ಇದು ಹೊಟ್ಟೆಯ ಲೋಳೆಯ ಪದರವನ್ನು ಹಾನಿಗೊಳಿಸುವುದರ ಜೊತೆಗೆ ಹೊಟ್ಟೆಯೊಳಗೆ ಹುಣ್ಣುಗಳು ರೂಪುಗೊಳ್ಳುವಂತೆ ಮಾಡುತ್ತದೆ!

**ಇದಕ್ಕೆ ಕಾರಣಗಳ ಬಗ್ಗೆ ನೋಡುವುದಾದರೆ :** ಮ್ಯಾಕ್ಸ್ ಆಸ್ಪತ್ರೆಯ ಡಾ. ರೋಹಿತ್ ಕಪೂರ್ ಅವರ ಪ್ರಕಾರ, ಹೆಲಿಕೋಬ್ಯಾಕ್ಟರ್ ಪೈಲೋರಿ ಎಂಬುದು ಬ್ಯಾಕ್ಟೀರಿಯಾವಾಗಿದ್ದು ಇದು ಹೊಟ್ಟೆಯ ಲೋಳೆಯ ಪದರವನ್ನು ಹಾನಿಗೊಳಿಸುತ್ತದೆ, ಇದರಿಂದಾಗಿ ಆಮ್ಲವು ಹೊಟ್ಟೆಯ ಗೋಡೆಗಳನ್ನು ತಲುಪುತ್ತದೆ ಮತ್ತು ಹುಣ್ಣುಗಳು ರೂಪುಗೊಳ್ಳಬಹುದು.

**ನೋವು ನಿವಾರಕಗಳ ಅತಿಯಾದ ಬಳಕೆ-** ಆಸ್ಪಿರಿನ್, ಐಬು ಪ್ರೊಫೇನ್ ಮುಂತಾದ ನೋವು ನಿವಾರಕಗಳನ್ನು ದೀರ್ಘಕಾಲದವರೆಗೆ ಬಳಸುವುದರಿಂದ ಹೊಟ್ಟೆಯ ರಕ್ಷಣಾತ್ಮಕ ಪದರವು ದುರ್ಬಲಗೊಳ್ಳುತ್ತದೆ, ಈ ಕಾರಣಗಳಿಂದ ಕೂಡ ಹೊಟ್ಟೆಯೊಳಗೆ ಹುಣ್ಣುಗಳು



ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ.

**ಅತಿಯಾದ ಮಸಾಲೆಯುಕ್ತ ಆಹಾರ ಪದಾರ್ಥಗಳು:** ಮೆಣಸಿನ ಕಾಯಿಗಳು, ಮಸಾಲೆ ಪದಾರ್ಥಗಳು ಮತ್ತು ಜಂಕ್ ಫುಡ್‌ಗಳು ಹೊಟ್ಟೆಯ ಒಳ ಪದರವನ್ನು ಹಾನಿಗೊಳಿಸುತ್ತದೆ ಮತ್ತು ಹುಣ್ಣುಗಳ ಅಪಾಯವನ್ನು ಹೆಚ್ಚಿಸುತ್ತದೆ.

**ಒತ್ತಡ ಮತ್ತು ಆತಂಕ** - ನಿರಂತರ ಒತ್ತಡವು ದೇಹದಲ್ಲಿ ಆಮ್ಲದ ಉತ್ಪಾದನೆಯನ್ನು ಹೆಚ್ಚಿಸುತ್ತದೆ, ಇದು ಹುಣ್ಣುಗಳ ಸಾಧ್ಯತೆಯನ್ನು ಹೆಚ್ಚಿಸುತ್ತದೆ. ಮದ್ಯಪಾನ ಮತ್ತು ಧೂಮಪಾನ - ಅತಿಯಾದ ಮದ್ಯಪಾನ ಮತ್ತು ಧೂಮಪಾನವು ಹೊಟ್ಟೆಯ ಒಳಪದರವನ್ನು ಹಾನಿ ಗೊಳಿಸುತ್ತದೆ, ಇದು ಹುಣ್ಣುಗಳಿಗೆ ಕಾರಣವಾಗಬಹುದು.

### ಹೊಟ್ಟೆ ಹುಣ್ಣಿನ ಲಕ್ಷಣಗಳು

**ಹೊಟ್ಟೆಯಲ್ಲಿ ಉರಿ ಅಥವಾ ನೋವು: ಈ ನೋವು ಸಾಮಾನ್ಯವಾಗಿ ಆಹಾರ ಸೇವಿಸಿದ ನಂತರ ಅಥವಾ ಖಾಲಿ ಹೊಟ್ಟೆಯಲ್ಲಿ ಹೆಚ್ಚಾಗಿ ಕಂಡುಬರುತ್ತದೆ. ನೋವು ಉರಿಯುತ್ತಿರುವಂತೆ ಇರುತ್ತದೆ. ಹುಳಿ ಬೆಲ್ಚಿಂಗ್, ಆಮ್ಲೀಯತೆ- ಆಗಾಗ್ಗೆ ಹುಳಿ ಬೆಲ್ಚಿಂಗ್, ಗಂಟಲು ಮತ್ತು ಎದೆಯಲ್ಲಿ ಸುಡುವ ಸಂವೇದನೆ ಹುಣ್ಣಿನ ಸಂಕೇತವಾಗಿರಬಹುದು. ವಾಂತಿ ಅಥವಾ ವಾಕರಿಕೆ- ನೀವು ಆಗಾಗ್ಗೆ ವಾಂತಿ ಮಾಡುತ್ತಿದ್ದರೆ ಅಥವಾ ವಾಕರಿಕೆ ಅನುಭವಿಸುತ್ತಿದ್ದರೆ, ಅದು ಹುಣ್ಣಿನ ಲಕ್ಷಣವಾಗಿರಬಹುದು. ಹಸಿವು ಕಡಿಮೆಯಾಗುವುದು ಮತ್ತು ತೂಕ ಕಡಿಮೆಯಾಗುವುದು ಹಸಿವಿನ ಕೊರತೆ ಅಥವಾ ತಿನ್ನುವ ಭಯ, ಜೊತೆಗೆ ತ್ವರಿತ ತೂಕ ನಷ್ಟವು ಹುಣ್ಣಿನ ಲಕ್ಷಣವಾಗಿರಬಹುದು. ಕಪ್ಪು ಮಲ ಅಥವಾ ರಕ್ತಸ್ರಾವ- ಮಲವು ಕಪ್ಪಾಗಿದ್ದರೆ ಅಥವಾ ಅದರಲ್ಲಿ ರಕ್ತ ಕಾಣಿಸಿಕೊಂಡರೆ, ಅದು ಅಪಾಯಕಾರಿ ಲಕ್ಷಣವಾಗಿದೆ, ನೀವು ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕು.**



# ಕಮಲ್ ಹಾಸನ್ ಕ್ಷಮೆ ಕೇಳದಿದ್ದರೆ ಕರ್ನಾಟಕ ಬಂದ್

• **ಉದಯವಾಹಿನಿ, ಬೆಂಗಳೂರು**

ತಮಿಳಿನಿಂದ ಕನ್ನಡ ಹುಟ್ಟಿದೆ ಎಂಬ ಹೇಳಿಕೆಗೆ ಸಂಬಂಧಿಸಿದಂತೆ ನಟ ಕಮಲ್ ಹಾಸನ್ ಅವರು ಕ್ಷಮೆ ಕೇಳಲೇ ಬೇಕು. ಇಲ್ಲವಾದಲ್ಲಿ ಕನ್ನಡ ಪರ ಸಂಘಟನೆಗಳ ಜತೆಗೆ ಚರ್ಚಿಸಿ, ಕರ್ನಾಟಕ ಬಂದ್‌ಗೆ ಕರೆ ನೀಡಲಾಗುವುದು' ಎಂದು ಕನ್ನಡ ಚಳವಳಿ ವಾಟಾಳ್ ಪಕ್ಷದ ಅಧ್ಯಕ್ಷ ವಾಟಾಳ್ ನಾಗರಾಜ್ ಎಚ್ಚರಿಕೆ ನೀಡಿದರು.ಮಂಗಳವಾರ ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೆಲ, ಜಲ, ಭಾಷೆ ವಿಚಾರದಲ್ಲಿ ರಾಜಿ ಸಾಧ್ಯವಿಲ್ಲ. ಕಮಲ್ ಹಾಸನ್ ಕನ್ನಡದ ಮುಂದೆ ಸಣ್ಣ ವ್ಯಕ್ತಿ. ಅವರು ಕನ್ನಡದ ಬಗ್ಗೆ ಅನಗತ್ಯವಾಗಿ ಮಾತನಾಡಿದ್ದಾರೆ. ಅವರು ಕ್ಷಮೆ ಕೇಳುವವರೆಗೂ ಹೋರಾಟ ಮಾಡಲಾಗುವುದು. ಅವರ ಸಿನಿಮಾ ರಾಜ್ಯದಲ್ಲಿ ಬಿಡುಗಡೆಯಾಗದಂತೆ ನೋಡಿಕೊಳ್ಳಬೇಕು. ಒಂದು ವೇಳೆ ಅವರು ಕ್ಷಮೆ ಕೇಳದಿದ್ದರೆ, ಅವರ ಸಿನಿಮಾ ರಾಜ್ಯದಲ್ಲಿ ಬಿಡುಗಡೆಯಾದರೆ ಕರ್ನಾಟಕ ಬಂದ್ ಮಾಡಲಾಗುವುದು' ಎಂದು ಹೇಳಿದರು. 'ಕಮಲ್ ಹಾಸನ್ ಉದ್ಧಟತನ ತೋರುತ್ತಿದ್ದಾರೆ. ಅವರನ್ನು ಕರ್ನಾಟಕದಿಂದ ಬಹಿಷ್ಕರಿಸಬೇಕು. ಕನ್ನಡ ಚಿತ್ರರಂಗ ಇದನ್ನು ಗಂಭೀರವಾಗಿ ಪರಿಗಣಿಸಬೇಕು' ಎಂದರು.



# 368 ಮರ ಉಳಿಸಲು ಆಗ್ರಹ

• **ಉದಯವಾಹಿನಿ, ಬೆಂಗಳೂರು**

ಕಂಟೋನ್ಸೆಂಟ್ ಪ್ರದೇಶದಲ್ಲಿರುವ ರೈಲ್ವೆ ಕಾಲೋನಿಯಲ್ಲಿ ವಾಣಿಜ್ಯ ಅಭಿವೃದ್ಧಿಗಾಗಿ 368 ಮರಗಳನ್ನು ಕಡಿಯಬಾರದು ಎಂದು ಆಗ್ರಹಿಸಿ, ಪರಿಸರಕ್ಕಾಗಿ ನಾವು ಸಂಘಟನೆ ವತಿಯಿಂದ 'ವೃಕ್ತ ರಕ್ಷಾ ಅಭಿಯಾನ' ಆಯೋಜಿಸಲಾಗಿದೆ.'ಪ್ರಗತಿ ಹೆಸರಿನಲ್ಲಿ ಪ್ರಕೃತಿ ಧ್ವಂಸ ಮಾಡಬಾರದು. ಪ್ರಗತಿ- ಪ್ರಕೃತಿ ಒಂದೇ ಸ್ತರದಲ್ಲಿ ನಡೆದು, ಸುಸ್ಥಿರ ಅಭಿವೃದ್ಧಿಯಾಗಬೇಕು.




ಮರಗಳನ್ನು ರಕ್ಷಿಸುವುದು ಇಂದಿನ ತುರ್ತು ಅಗತ್ಯ. ಹೀಗಾಗಿ, 368 ಮರಗಳನ್ನೂ ಉಳಿಸಬೇಕು ಎಂದು ಪರಿಸರ ದಿನವಾದ ಜೂನ್ 5ರಂದು, ರೈಲ್ವೆ ಕಾಲೋನಿಯಲ್ಲಿ ಅಭಿಯಾನ ನಡೆಸಲಾಗುತ್ತದೆ ಎಂದು ಪರಿಸರಕ್ಕಾಗಿ ನಾವು ಸಂಘಟನೆಯ ಅಧ್ಯಕ್ಷ ಎ.ಟಿ. ರಾಮಸ್ವಾಮಿ ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು. ಉದ್ಯಾನ ನಗರಿ, ಸುಂದರ ನಗರಿಯಾಗಿದ್ದ ಬೆಂಗಳೂರು ಇಂದು ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರಖ್ಯಾತಿ ಗಳಿಸಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಪರಿಸರಕ್ಕೆ ಮಾರಕವಾಗಿ ಬೃಹತ್ ಮರಗಳನ್ನು ಕಡಿಯುವ ಮೂಲಕ ನಗರಕ್ಕೆ ದೊಡ್ಡ ಕಳಂಕ ಎದುರಾಗಿದೆ. ನೀರು, ಗಾಳಿ, ಆಹಾರ ಶುದ್ಧವಾಗಿರಬೇಕು. ಇದರ ಬಗ್ಗೆ ನಾವೆಲ್ಲರೂ ಈಗಲೇ ಎಚ್ಚೆತ್ತುಕೊಳ್ಳದಿದ್ದರೆ ದೊಡ್ಡ ಆಘಾತ ಎದುರಾಗುತ್ತದೆ' ಎಂದರು. 'ಕಂಟೋನ್ಸೆಂಟ್ ರೈಲ್ವೆ ಕಾಲೋನಿಯಲ್ಲಿ ಬಾಗ್ಮನೆಯವರಿಗೆ ವಾಣಿಜ್ಯ ಕಟ್ಟಡ ನಿರ್ಮಿಸಲು ಭೂಮಿ ನೀಡಲು ರಾಜ್ಯ-ಕೇಂದ್ರ ಸರ್ಕಾರದ ಅಧಿಕಾರಿಗಳು ಕೈಜೋಡಿಸಿದ್ದಾರೆ. ಇವರು ಕಡಿಯಲು ಉದ್ದೇಶಿಸಿರುವ 368 ಮರಗಳಲ್ಲಿ 84 ಪಾರಂಪರಿಕ ಮರಗಳಿವೆ. ಇನ್ನು ಉಳಿದವು ನೂರಾರು ವರ್ಷಗಳಿಂದ ಇವೆ. ಬಿಬಿಎಂಪಿ ಅರಣ್ಯ ವಿಭಾಗದ ಅಧಿಕಾರಿಗಳು ನಡೆಸಿದ ಸಭೆಯಲ್ಲಿ ಎಲ್ಲಾ ನಾಗರಿಕರೂ ಮರಗಳನ್ನು ಕಡಿಯಬಾರದು ಎಂದು ಹೇಳಿದ್ದಾರೆ. ಆದರೂ ಈ ಬಗ್ಗೆ ಇನ್ನೂ ಕ್ರಮ ಕೈಗೊಂಡಿಲ್ಲ' ಎಂದು ಹೇಳಿದರು.

# ಲಿವರ್ ಕ್ಯಾನ್ಸರ್‌ನ ಮೊದಲ ರೋಗಲಕ್ಷಣಗಳು

ಆಗಾಗ ಹೊಟ್ಟೆ ನೋವು, ಹೊಟ್ಟೆ ಊದಿಕೊಳ್ಳುವುದು, ದೇಹದ ತೂಕ ಕಡಿಮೆ ಆಗುವುದು, ಹಸಿವು ಕಡಿಮೆ ಆಗುವುದು ಇವೆಲ್ಲಾ ಸೂಚನೆಗಳು ಒಂದು ವೇಳೆ ನಿಮಗೆ ಪದೇ ಪದೇ ಕಾಣಿಸುತ್ತಿದ್ದರೆ ಅದು ಲಿವರ್ ಕ್ಯಾನ್ಸರ್ ಆಗಿರಲುಬಹುದು! ಹಾಗಾಗಿ ನಿರ್ಲಕ್ಷ್ಯ ಮಾಡದೇ ಕೂಡಲೇ ವೈದ್ಯರ ಬಳಿ ಪರೀಕ್ಷೆ ಮಾಡಿಸಿಕೊಂಡರೆ ಒಳ್ಳೆಯದು.

ಮನುಷ್ಯನ ದೇಹದಲ್ಲಿ ಲಿವರ್ ಒಂದು ಪ್ರಮುಖವಾದ ಅಂಗ. ಇದರ ಪ್ರಮುಖ ಕಾರ್ಯ ಏನೆಂದರೆ ದೇಹದಲ್ಲಿನ ವಿಷಕಾರಿ ಅಂಶಗಳನ್ನು ಶುದ್ಧೀಕರಿಸಲು, ಜೀರ್ಣಕ್ರಿಯೆ ರಸ ಉತ್ಪತ್ತಿ ಮಾಡುವಲ್ಲಿ ಹಾಗೂ ದೇಹದ ರಕ್ತವನ್ನು ಸ್ವಚ್ಛ ಮಾಡುವುದರ ಜೊತೆಗೆ ಮೆಟಬಾಲಿಸಂ ಪ್ರಕ್ರಿಯೆಯಲ್ಲಿ ಕೂಡ ತನ್ನನ್ನು ತಾನು ತೊಡಗಿಸಿಕೊಳ್ಳುತ್ತದೆ. ಅದರಲ್ಲೂ ದಿನ 24 ಗಂಟೆಯೂ ಕೂಡ ತನ್ನ ಪಾಡಿಗೆ ತಾನು ಕಾರ್ಯ ನಿರ್ವಹಿಸುವ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಣೆ ಮಾಡುವ ಈ ಪ್ರಮುಖ ಅಂಗ ಇಲ್ಲದೆ ನಮ್ಮ ಜೀವನವನ್ನು ಕಲ್ಪಿಸಿಕೊಳ್ಳಲು ಕೂಡ ಸಾಧ್ಯವಿಲ್ಲ.

ಆದರೆ ನಮ್ಮಲ್ಲಿ ಹೆಚ್ಚಿನವರಿಗೆ ಸಣ್ಣ ವಯಸ್ಸಿನಿಂದಲೇ ಲಿವರ್ ಸಮಸ್ಯೆ ಕಾಣಿಸಿಕೊಳ್ಳುತ್ತಿದೆ. ಇನ್ನು ಕೆಲವರಿಗೆ



ಮದ್ಯಪಾನ ಹಾಗೂ ಆಹಾರ ಪದ್ಧತಿಗಳ ಬದಲಾವಣೆಗಳಿಂದ ಈ ಸಮಸ್ಯೆ ಶುರುವಾಗಿ ಬಿಟ್ಟಿರುತ್ತದೆ.

ಅದರೆ ನಿಮಗೆ ಗೊತ್ತಿರಲಿ, ದೇಹದ ಪ್ರಮುಖ ಅಂಗವಾದ ಲಿವರ್‌ನಲ್ಲಿ ಒಮ್ಮೆ ಸಮಸ್ಯೆ ಕಾಣಿಸಿಕೊಂಡರೆ ಮತ್ತೆ ಯಾವ ಗ್ಯಾರೆಂಟಿಯನ್ನು ಕೂಡ ಹೇಳಲು ಆಗುವುದಿಲ್ಲ

**ಲಿವರ್ ಕ್ಯಾನ್ಸರ್:** ಇಂದಿನ ದಿನಗಳಲ್ಲಿ ಹಲವಾರು ಬಗೆಯ ಮಾರಣಾಂತಿಕ ಕ್ಯಾನ್ಸರ್ ಸಮಸ್ಯೆಯು ಕಾಣಸಿಗುತ್ತಿದೆ. ಇದರಲ್ಲಿ ಯಾಕೃತ್ ಅಥವಾ ಲಿವರ್ ಕ್ಯಾನ್ಸರ್ ಕೂಡ ಒಂದು! ಬೇರೆ ಕ್ಯಾನ್ಸರ್ ಗೆ ಹೋಲಿಸಿದರೆ, ಲಿವರ್ ನಲ್ಲಿ ಕಾಣಿಸಿಕೊಳ್ಳುವ ಈ ಕ್ಯಾನ್ಸರ್ ಲಕ್ಷಣಗಳು ಕೊಂಚ ಭಿನ್ನವಾಗಿರುವುದು ಹಾಗಂತ ಇದನ್ನು ಕಡೆಗಣಿಸಿದರೆ, ಪ್ರಾಣಕ್ಕೆ ಅಪಾಯ ವಾಗಬಹುದು. ಹೀಗಾಗಿ ಈ ಕ್ಯಾನ್ಸರ್ ಬಗ್ಗೆ ಹೆಚ್ಚು ಜಾಗೃತೆ ವಹಿಸುವುದು ಅತ್ಯಗತ್ಯ.

ಅದರಲ್ಲೂ ಮದ್ಯಪಾನ ಮಾಡುವವರು ಇದನ್ನು ಗಂಭೀರವಾಗಿ ಪರಿಗಣಿಸಬೇಕು. ಹೌದು ಯಕೃತ್ತಿನ ಕ್ಯಾನ್ಸರ್ ಒಂದು ಗಂಭೀರ ಕಾಯಿಲೆಯಾಗಿದ್ದು, ಇದು ಯಕೃತ್ತಿನ ಕೋಶಗಳ ಅಸಹಜ ಬೆಳವಣಿಗೆಯಿಂದ ಉಂಟಾಗುತ್ತದೆ.

ಈ ಸಮಸ್ಯೆ ಹೆಚ್ಚಾಗಿ ನಿಧಾನವಾಗಿ ಬೆಳೆಯುತ್ತದೆ, ಇದರ ಆರಂಭಿಕ ಲಕ್ಷಣಗಳು ತುಂಬಾ ಸೂಕ್ಷ್ಮವಾಗಿರುತ್ತವೆ! ಹಾಗಾಗಿ ನಮ್ಮಲ್ಲಿ ಹೆಚ್ಚಿನ ಜನರು ಈ ಕಾಯಿಲೆಯ ರೋಗಲಕ್ಷಣಗಳನ್ನು ನಿರ್ಲಕ್ಷಿಸುತ್ತಾ ಬರುತ್ತಾರೆ! ಕೊನೆಗೆ ಇದು ಪತ್ತೆಯಾಗುವ ಹೊತ್ತಿಗೆ, ಈ ಕಾಯಿಲೆ ಕೈಮೀರಿ ಹೋಗಿರುತ್ತದೆ! ಆದ್ದರಿಂದ, ಈ ಕಾಯಿಲೆಯ ರೋಗ ಲಕ್ಷಣಗಳನ್ನು ಆರಂಭದಲ್ಲಿಯೇ ಪತ್ತೆ ಹಚ್ಚಿ ಸಮಯಕ್ಕೆ ಸರಿಯಾಗಿ ವೈದ್ಯಕೀಯ ಸಲಹೆ ಪಡೆಯುವುದು ಬಹಳ ಮುಖ್ಯ. ಈ ಬಗ್ಗೆ ಆರ್ಟ್ ಆಫ್ ಹೀಲಿಂಗ್ ಕ್ಯಾನ್ಸರ್ ಸೆಂಟರ್‌ನ ಸಹ-ಸಂಸ್ಥಾಪಕ ಮತ್ತು ಶಸ್ತ್ರಚಿಕಿತ್ಸಾ ಆಂಕೊಲಾಜಿಸ್ಟ್ ಡಾ. ಮಂದೀಪ್ ಸಿಂಗ್, ಲಿವರ್ ಕ್ಯಾನ್ಸರ್ ಸಂದರ್ಭದಲ್ಲಿ ಯಾವ ಲಕ್ಷಣಗಳು ಕಂಡು ಬರುತ್ತವೆ ಮತ್ತು ಅದನ್ನು ತಡೆಗಟ್ಟಲು ಏನು ಮಾಡಬೇಕು ಎಂಬುದನ್ನು ನೋಡುತ್ತಾ ಹೋಗೋಣ



**ಲಿವರ್ ಕಾಯಿಲೆಯ ರೋಗಲಕ್ಷಣಗಳು :** ಯಕೃತ್ತಿನ ಕ್ಯಾನ್ಸರ್‌ನ ಸಾಮಾನ್ಯ ಲಕ್ಷಣಗಳೆಂದರೆ ಹೊಟ್ಟೆಯ ಮೇಲಿನ ಬಲಭಾಗದಲ್ಲಿ ನಿರಂತರ ನೋವು ಅಥವಾ ಏನೋ ಒಂದು ರೀತಿಯಲ್ಲಿ ಭಾರ ಆಗಿರುವ ಹಾಗೆ ಸಮಸ್ಯೆ ಕಾಣಿಸಿಕೊಳ್ಳುವುದು. ಇದರ ಹೊರತಾಗಿ, ಇದ್ದಕ್ಕಿದಂತೆ ತೂಕ ಇಳಿಕೆ ಆಗುವುದು, ಹಸಿವು ಆಗದಿರುವುದು, ಆಗಾಗ ಆಯಾಸ-ಸುಸ್ತು ಕಾಣಿಸಿಕೊಳ್ಳುವುದು, ಬೆಳಗಿನ ಸಮಯದಲ್ಲಿ ಕಣ್ಣುಗಳು ಹಳದಿ ಬಣ್ಣಕ್ಕೆ ತಿರುಗುವುದು, ಚರ್ಮದಲ್ಲಿ ವಿಪರೀತ ತುರಿಕೆ ಕಾಣಿಸಿ ಕೊಳ್ಳುವುದು, ನೋಡಲು ಸಣ್ಣ ಇದ್ದು ಹೊಟ್ಟೆ ಮಾತ್ರ ದಪ್ಪಗೆ ಕಂಡರೆ ಲಿವರ್ ಭಾಗ ಊದಿಕೊಂಡಿದೆ ಎಂದರ್ಥ. ಇದು ಕೂಡ ಲಿವರ್ ಕ್ಯಾನ್ಸರ್ ಲಕ್ಷಣವಾಗಿರಬಹುದು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಇಂದು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ.

**ವೃಷಭ** ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡ ಬಹುದಾದ ಒಂದು ದಿನ. ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚುಮಾಡಬಹುದು.

**ಮಿಥುನ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯವಿರುತ್ತದೆ.

**ಕರ್ಕಾಟಕ** ನಿಮ್ಮ ಕುಟುಂಬದೊಂದಿಗೆ ಸಾಮಾಜಿಕ ಚಟುವಟಿಕೆ ಎಲ್ಲರನ್ನೂ ಆರಾಮವಾಗಿ ಮತ್ತು ಆಹ್ಲಾದಕರ ಮನಸ್ಥಿತಿಯಲ್ಲಿಡುತ್ತದೆ. ಯಾರನ್ನೂ ಚುಡಾಯಿಸಬೇಡಿ. ಇಂದು ನೀವು ಕೇಂದ್ರಬಿಂದುವಾಗಿರುತ್ತೀರಿ

**ಸಿಂಹ** ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು. ಪ್ರೇಮ ಧನಾತ್ಮಕ ಕಂಪನಗಳನ್ನು ತೋರಿಸುತ್ತದೆ.

**ಕನ್ಯಾ** ಕ್ರೀಡೆಗಳು ಮತ್ತು ಇತರ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗ ವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ಹಣ ನಿಮಗೆ ಅಗತ್ಯವಾಗಿದೆ.

**ತುಲಾ** ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ.

**ವೃಶ್ಚಿಕ** ಎಣ್ಣೆಯುಕ್ತ ಮತ್ತು ಮಸಾಲೆಯುಕ್ತ ಆಹಾರ ತಪ್ಪಿಸಿ. ವಿದೇಶದಲ್ಲಿ ವ್ಯಾಪಾರ ಮಾಡುವ ಈ ರಾಶಿಚಕ್ರದ ಜನರಿಗೆ ಇಂದು ಸಾಕಷ್ಟು ಹಣದ ಲಾಭವನ್ನು ಪಡೆಯಬಹುದು.

**ಧನಸ್ಸು** ಕಿಕ್ಕಿರಿದ ಬಸ್‌ನಲ್ಲಿ ಪ್ರಯಾಣಿಸುವಾಗ ರಕ್ತದೊತ್ತಡವಿರುವ ರೋಗಿಗಳು ಅವರ ಆರೋಗ್ಯದ ಬಗ್ಗೆ ಹೆಚ್ಚು ಎಚ್ಚರಿಕೆ ವಹಿಸಬೇಕು. ಸುಮ್ಮನೆ ಕುಳಿತುಕೊಳ್ಳುವ ಬದಲು –ಏಕೆ ಏನನ್ನಾದರೂ ಮಾಡಬಾರದು.

**ಮಕರ** ಇಂದು ನೀವು ಅಂದುಕೊಂಡಿದ್ದಕ್ಕಿಂತಲೂ ಹೆಚ್ಚು ನಿಮ್ಮ ಜೀವನದಲ್ಲಿ ತೆರೆಮರೆಯಲ್ಲಿ ನಡೆಯುತ್ತಿದೆ. ಮುಂದಿನ ಕೆಲವು ದಿನಗಳಲ್ಲಿ ನಿಮಗೆ ಒಳ್ಳೆಯ ಅವಕಾಶಗಳು ಸಿಗಲಿವೆ.

**ಕುಂಭ** ನಿಮ್ಮ ಜೀವನದಲ್ಲಿ ನಂತರ ವಿಷಾದಿಸಬಹುದಾದ ಆತುರದ ನಿರ್ಧಾರಗಳನ್ನು ಕೈಗೊಳ್ಳಬೇಡಿ. ಇಂದು ನಿಮ್ಮ ಮದುವೆಯಲ್ಲಿನ ಒಂದು ಕಠಿಣ ಸಮಯವಾಗಿರಬಹುದು.

**ಮೀನ** ನೀವು ಅವರಿಗೆ ಹಣವನ್ನು ಸಾಲವಾಗಿ ಕೊಡುತ್ತೀರಿ ಆದರೆ ಇದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ.

● ಕಾಳಸಂತೆಯಲ್ಲಿ ಪಡಿತರ: 5 ತಿಂಗಳಿನಲ್ಲಿ 95 ಕ್ವಿಂಟಲ್ ಅಕ್ಕಿ ಜಪ್ತಿ ● ಪ್ರತಿ ಗ್ರಾಮದಲ್ಲೂ 'ಅಕ್ಕಿ ಏಜೆಂಟರ' ಹಾವಳಿ

# ಪಡಿತರ ಕಾಳಸಂತೆ: ಶ್ರೀಮಂತರ ಮನೆ ದೋಸೆ-ಪಡ್ಡಿಗೆ ಬಡವರ ಅಕ್ಕಿ

• ಉದಯವಾಹಿನಿ ಹಾವೇರಿ

ಬಡವರ ಹಸಿವು ನೀಗಿಸುವ ಉದ್ದೇಶದಿಂದ ಸರ್ಕಾರ ಅಕ್ಕಿ ವಿತರಣೆ ಮಾಡುತ್ತಿದ್ದು, ಇದೇ ಪಡಿತರವನ್ನು ಕಾಳಸಂತೆಯಲ್ಲಿ ಮಾರುತ್ತಿರುವ ಜಾಲ ಜಿಲ್ಲೆಯಲ್ಲಿ ಸಕ್ರಿಯವಾಗಿದೆ. ಬಡವರ ಹೊಟ್ಟೆ ತುಂಬಿಸುವ ಅಕ್ಕಿ, ಶ್ರೀಮಂತರ ಮನೆಯ ದೋಸೆ-ಪಡ್ಡಿಗಾಗಿ ಮಾರಾಟವಾಗುತ್ತಿದೆ.

ದೇಶ ಹಾಗೂ ರಾಜ್ಯದಲ್ಲಿ ಯಾವುದೇ ವ್ಯಕ್ತಿಯೂ ಹಸಿವಿನಿಂದ ಬಳಲಬಾರದೆಂದು ರಾಜ್ಯ-ಕೇಂದ್ರ ಸರ್ಕಾರಗಳು, ಹಲವು ಯೋಜನೆಗಳ ಮೂಲಕ ದುಬಾರಿಗೆ ಬೆಲೆಗೆ ಪಡಿತರ ಅಕ್ಕಿಯನ್ನು ಖರೀದಿಸಿ ಉಚಿತವಾಗಿ ವಿತರಣೆ ಮಾಡುತ್ತಿವೆ. ಇದೇ ಉಚಿತ ವ್ಯವಸ್ಥೆಯನ್ನು ತಮ್ಮ ಲಾಭಕ್ಕಾಗಿ ಬಳಸಿಕೊಳ್ಳುತ್ತಿರುವ ಏಜೆಂಟರು, ಬಡವರಿಂದ ಅಕ್ಕಿಯನ್ನು ಖರೀದಿಸಿ ಕಾಳಸಂತೆಯಲ್ಲಿ ರಾಜಾರೋಷವಾಗಿ ಮಾರುತ್ತಿರುವ ಪ್ರಕರಣಗಳು ಜಿಲ್ಲೆಯಲ್ಲಿ ವರದಿಯಾಗುತ್ತಿವೆ.

ಸುಗಮ ರೀತಿಯಲ್ಲಿ ಪಡಿತರ ವಿತರಣೆ ಮಾಡಲು ನ್ಯಾಯಬೆಲೆ ಅಂಗಡಿಗಳನ್ನು ಸ್ಥಾಪನೆ ಮಾಡಲಾಗಿದೆ. ಇದೇ ಅಂಗಡಿಯಲ್ಲಿ ಅಕ್ಕಿ ಖರೀದಿಸುವ ಕೆಲವರು, ಅದರಲ್ಲಿ ಸ್ವಲ್ಪ ಪ್ರಮಾಣದ ಅಕ್ಕಿಯನ್ನು ಮಾತ್ರ ತಮ್ಮ ಬಳಿ ಇಟ್ಟುಕೊಳ್ಳುತ್ತಿದ್ದಾರೆ. ಹೆಚ್ಚಿನ ಪ್ರಮಾಣದ ಅಕ್ಕಿಯನ್ನು ಏಜೆಂಟರ ಮೂಲಕ ಮಾರಾಟ ಮಾಡುತ್ತಿದ್ದಾರೆ. ಅದರಿಂದ ಬಂದ ಹಣದಲ್ಲಿ, ಜೀವನ ನಿರ್ವಹಣೆಗಾಗಿ ಬಳಸಿಕೊಳ್ಳುತ್ತಿದ್ದಾರೆ.

**ಹೆಚ್ಚುವರಿ ಅಕ್ಕಿಯಿಂದ ದಂಧೆ ಹೆಚ್ಚಳ:** ಜಿಲ್ಲೆಯ ಪ್ರತಿಯೊಬ್ಬ ಪಡಿತರದಾರರಿಗೆ ಈ ಹಿಂದೆ ತಲಾ 5 ಕೆ.ಜಿ. ಅಕ್ಕಿ ನೀಡಲಾಗುತ್ತಿತ್ತು. ಜೊತೆಗೆ, 5 ಕೆ.ಜಿ. ಅಕ್ಕಿಯ ಬದಲು ಹಣ ನೀಡಲಾಗುತ್ತಿತ್ತು.

**ಹೆಚ್ಚುವರಿ ಅಕ್ಕಿಯಿಂದ ದಂಧೆ ಹೆಚ್ಚಳ**

ಈ ಸಂದರ್ಭದಲ್ಲಿ ಅಕ್ಕಿ ಅಕ್ರಮ ಮಾರಾಟ ದಂಧೆಯ ಛಾಯೆ ಕಡಿಮೆಯಿತ್ತು. ತಲಾ 10 ಕೆ.ಜಿ. ಅಕ್ಕಿ ಕೊಡುವುದು ಪ್ರಾರಂಭವಾಗುತ್ತಿದ್ದಂತೆ, ಅಕ್ಕಿ ದಂಧೆಯೂ ಹೆಚ್ಚಾಗಿರುವುದಾಗಿ ಜನರು ದೂರುತ್ತಿದ್ದಾರೆ.

ಜಿಲ್ಲೆಯ ಪ್ರತಿಯೊಂದು ಗ್ರಾಮಗಳಲ್ಲಿಯೂ ಅಕ್ಕಿ ಖರೀದಿಸುವ ಏಜೆಂಟರು ಹುಟ್ಟಿಕೊಂಡಿದ್ದಾರೆ. ನ್ಯಾಯಬೆಲೆ ಅಂಗಡಿಯಿಂದ ಅಕ್ಕಿ ತರುತ್ತಿದ್ದಂತೆ, ಪಡಿತರದಾರರ ಮನೆಗೆ ಹೋಗಿ ಅಕ್ಕಿ ಪಡೆಯುತ್ತಿದ್ದಾರೆ. ಜೊತೆಗೆ, ಅದೇ ಅಕ್ಕಿಯಲ್ಲಿ ಕಾಳಸಂತೆಯಲ್ಲಿ ಮಾರಾಟ ಮಾಡಿ ಲಾಭ ಮಾಡಿಕೊಳ್ಳುತ್ತಿದ್ದಾರೆ' ಎಂದು ಹೇಳಿದರು. 5 ಕೆ.ಜಿ ಅಕ್ಕಿ ಹಾಗೂ ಹಣ ನೀಡುತ್ತಿದ್ದ ಸಮಯದಲ್ಲಿ ಏಜೆಂಟರ ಸಂಖ್ಯೆ ಕಡಿಮೆಯಿತ್ತು. ಈಗ 10 ಕೆ.ಜಿ. ಅಕ್ಕಿ ನೀಡುತ್ತಿರುವುದರಿಂದ, ಏಜೆಂಟರು ಹೆಚ್ಚಾಗಿದ್ದಾರೆ. ಜನರು ಸಹ ಹೆಚ್ಚಿನ ಪ್ರಮಾಣದಲ್ಲಿ ಅಕ್ಕಿ ಇಟ್ಟುಕೊಳ್ಳದೇ, ಅದನ್ನು ಮಾರಾಟ ಮಾಡಿ ಹಣ ಪಡೆದುಕೊಳ್ಳುತ್ತಿದ್ದಾರೆ. ಪಡಿತರದಾರರು ಹಾಗೂ ಖರೀದಿದಾರರು ಇಬ್ಬರೂ ದಂಧೆಯಲ್ಲಿ ಶಾಮೀಲಾಗಿದ್ದಾರೆ. ಇದರಿಂದಾಗಿ ಸರ್ಕಾರದ ಉದ್ದೇಶಕ್ಕೆ ಧಕ್ಕೆ ಉಂಟಾಗುತ್ತಿದೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

**ಪ್ರತ್ಯೇಕ ತಂಡ ರಚನೆಗೆ ಆಗ್ರಹ**

**ಹಸಿವು ಮುಕ್ತ ರಾಜ್ಯ ನಿರ್ಮಿಸುವ ಉದ್ದೇಶದಿಂದ ಸರ್ಕಾರ ಪಡಿತರ ವಿತರಣೆ ಮಾಡುತ್ತಿದೆ. ಈ ಉದ್ದೇಶಕ್ಕೆ ಧಕ್ಕೆ ತರುವ ಪಡಿತರದಾರರು ಹಾಗೂ ಕಾಳಸಂತೆಯ ಏಜೆಂಟರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕಿದೆ. ಇದಕ್ಕಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಪ್ರತ್ಯೇಕ ತಂಡಗಳನ್ನು ರಚಿಸಬೇಕು ಎಂದು ಹಾವೇರಿ ನಿವಾಸಿ ಶಂಕರ ಆಗ್ರಹಿಸಿದರು.**

**ದೂರುಗಳು ಬಂದರಷ್ಟೇ ದಾಳಿ**

**ಪಡಿತರ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹ ಮಾಡಿಕೊಂಡು ಮಾರಾಟ ಮಾಡುವ ಬಗ್ಗೆ ದೂರುಗಳು ಬಂದರಷ್ಟೇ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಅಧಿಕಾರಿಗಳು ದಾಳಿ ಮಾಡಿ ಪ್ರಕರಣ ದಾಖಲಿಸಿಕೊಳ್ಳುತ್ತಿದ್ದಾರೆ. ಆದರೆ, ನ್ಯಾಯಬೆಲೆ ಅಂಗಡಿಯಿಂದ ನೀಡಿದ ಅಕ್ಕಿಯನ್ನು ಮಾರುವ ಪಡಿತರದಾರರು ಹಾಗೂ ಅವರಿಂದ ಅಕ್ಕಿ ಖರೀದಿಸುವ ಏಜೆಂಟರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಈ ಬಗ್ಗೆ ಅಧಿಕಾರಿಗಳನ್ನು ವಿಚಾರಿಸಿದಾಗ, ಸರ್ಕಾರಿ ನೌಕರರಿಗೆ ಸರ್ಕಾರದಿಂದ ಪ್ರತಿ ತಿಂಗಳು ವೇತನ ಬರುತ್ತದೆ. ನೌಕರರು ವೇತನವನ್ನು ಹೇಗೆ ಖರ್ಚು ಮಾಡುತ್ತಾರೆ ಎಂಬ ಬಗ್ಗೆ ಸರ್ಕಾರ ತಲೆಕೆಡಿಸಿಕೊಳ್ಳುವುದಿಲ್ಲ. ಅದೇ ರೀತಿ, ಬಡವರಿಗೂ ಸರ್ಕಾರ ಅಕ್ಕಿ ನೀಡುತ್ತಿದೆ. ಅಕ್ಕಿ ಪಡೆದವರು, ಅಕ್ಕಿಯನ್ನು ಏನು ಮಾಡುತ್ತಾರೆ ? ಎಂಬುದರ ಬಗ್ಗೆಯೂ ಸರ್ಕಾರ ತಲೆಕೆಡಿಸಿಕೊಳ್ಳುವುದಿಲ್ಲ. ಯಾರಾದರೂ ದೂರು ನೀಡಿದರೆ ಮಾತ್ರ, ದಾಳಿ ಮಾಡಿ ಕಾನೂನು ಕ್ರಮ ಜರುಗಿಸಲು ಅವಕಾಶವಿದೆ ಎಂದು ಜಿಲ್ಲಾಡಳಿತದ ಅಧಿಕಾರಿಯೊಬ್ಬರು ತಿಳಿಸಿದರು.**

**13ರಿಂದ-15 ದರ:** ಪಂಜಾಬ್ ಹಾಗೂ ಇತರೆ ರಾಜ್ಯಗಳಲ್ಲಿ ಬೆಳೆದ ಭತ್ತವನ್ನು ಬೆಂಬಲ ಬೆಲೆಯಡಿ ಖರೀದಿಸಿ, ಬೇಡಿಕೆಗೆ ತಕ್ಕಂತೆ ಅಕ್ಕಿ ಮಾರಲಾಗುತ್ತದೆ. ಅದೇ ಅಕ್ಕಿಯನ್ನು ಕರ್ನಾಟಕ ಸರ್ಕಾರ ಕಾಲಕ್ಕೆ ತಕ್ಕಂತೆ ನಿಗದಿತ ಬೆಲೆಗೆ ಖರೀದಿ ಮಾಡಿ, ಪಡಿತರದಾರರಿಗೆ ಮಾರುತ್ತದೆ. ಇದೇ ಅಕ್ಕಿಯನ್ನು ಪಡಿತರದಾರರಿಂದ ಪ್ರತಿ ಕೆ.ಜಿ.ಗೆ 13ರಿಂದ 15 ಕೊಟ್ಟು ಖರೀದಿಸಲಾಗುತ್ತಿದೆ ಎಂದು ಜನರು ಮಾಹಿತಿ ನೀಡಿದರು.

'ಪರಿತರದಾರರಿಂದ ಖರೀದಿಸಿದ ಅಕ್ಕಿಯನ್ನು, ಮಾರುಕಟ್ಟೆ ಹಾಗೂ ಅಂಗಡಿಗಳಲ್ಲಿ ಕೆ.ಜಿ.ಗೆ 25ರಿಂದ 30ಗೆ ಮಾರಲಾಗುತ್ತಿದೆ. ಸರ್ಕಾರ ನೀಡುವ ಅಕ್ಕಿ, ತಿನ್ನಲು ಯೋಗ್ಯವಲ್ಲವೆಂದು ಹಲವರು ಹೇಳುತ್ತಾರೆ. ಆದರೆ, ಅದೇ ಅಕ್ಕಿಯಲ್ಲಿ ದೋಸೆ-ಪಡ್ಡು ಹಾಗೂ ಇತರೆ ಆಹಾರ ಸಿದ್ಧಪಡಿಸುವುದು ಉತ್ತಮವೆಂಬ ಅಭಿಪ್ರಾಯವಿದೆ. ಇದೇ ಕಾರಣಕ್ಕೆ ಶ್ರೀಮಂತರು ಸಹ ಪಡಿತರ ಅಕ್ಕಿಯನ್ನೇ ಖರೀದಿಸಿ, ತಮ್ಮ ಮನೆಯಲ್ಲಿ ದೋಸೆ-ಪಡ್ಡು ಮಾಡುತ್ತಿದ್ದಾರೆ ಎಂದು ಹೇಳಿದರು.

## ಪ್ರತಿ ಮಹಿಳೆಯೂ ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಬೇಕು

• ಉದಯವಾಹಿನಿ ಚಿತ್ರದುರ್ಗ

ಸಮಾಜದಲ್ಲಿ ಪ್ರತಿ ಮಹಿಳೆಯು ತಮ್ಮದೇಯಾದ ಹಣಕಾಸಿನ ಸ್ವಾತಂತ್ರ್ಯ ಮತ್ತು ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಬೇಕು ಎಂದು ಹಿರಿಯ ವಕೀಲೆ ಡಿ.ಕೆ.ಶೀಲಾ ಹೇಳಿದರು.

ನಗರದ ಸ್ಟೇಡಿಯಂ ರಸ್ತೆಯ ಜಿ.ಜಿ.ಸಮುದಾಯ ಭವನದಲ್ಲಿ ಸೋಮವಾರ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ದಾವಣಗೆರೆ ವಿಶ್ವವಿದ್ಯಾಲಯ, ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಐಕ್ಯೂಎಸಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ''ಪ್ರತಿಭೋತ್ಸವ ಸಮಾರಂಭ''ದಲ್ಲಿ ಅವರು ಮಾತನಾಡಿದರು.

ನಮ್ಮಿಂದ ಹಾಗೂ ನಮ್ಮ ಕುಟುಂಬದಿಂದಲೇ ಸಮಾನತೆ ಶುರುವಾಗಬೇಕು. ಪೋಷಕರು ಗಂಡು, ಹೆಣ್ಣು ಇಬ್ಬರಿಗೂ ಸಮಾನ ಅವಕಾಶಗಳನ್ನು ಕಲ್ಪಿಸಬೇಕು. ನಮ್ಮನ್ನು ನಾವು ಬದಲಾಯಿಸಿಕೊಳ್ಳುವ ಮೂಲಕ ಬದಲಾವಣೆ ಪ್ರಾರಂಭವಾಗಬೇಕು ಎಂದು ಹೇಳಿದರು. ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಪ್ರಾಂಶುಪಾಲ ಡಾ.ಹೆಚ್. ಗುಡ್ಡದೇಶ್ವರಪ್ಪ ಮಾತನಾಡಿ, ವಿದ್ಯಾರ್ಥಿಗಳು ತಂದೆ-ತಾಯಿ ಹಾಗೂ ಕುಟುಂಬಕ್ಕೆ ಉತ್ತಮ ಹೆಸರು ತರುವ ಮೂಲಕ ಸ್ವಾವಲಂಬಿಗಳಾಗಿ,


ಉದಯವಾಹಿನಿ ಚಿತ್ರ

ಆರ್ಥಿಕ ಸ್ವಾತಂತ್ರ್ಯದಲ್ಲಿ ಯಶಸ್ವಿಗಳಾಗಬೇಕು. ಗಾಂಧೀಜಿ, ಡಾ.ಬಿ.ಆರ್.ಅಂಬೇಡ್ಕರ್ ಅವರು ಕಂಡ ಮಹಿಳೆಯರು ನೀವಾಗಬೇಕು ಎಂದು ತಿಳಿಸಿದ ಅವರು, ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಿರಲಿ ಎಂದು ಶುಭ ಹಾರೈಸಿದರು.

ಇದೇ ಸಂದರ್ಭದಲ್ಲಿ ''ಮಹಿಳಾ ಸಿರಿ'' ವಾರ್ಷಿಕ ಸಂಚಿಕೆ ಬಿಡುಗಡೆ ಹಾಗೂ ಬಿ.ಕಾಂ ಪದವಿಯಲ್ಲಿ ಉನ್ನತ ಶ್ರೇಣಿ ಪಡೆದ ಎಂ.ಜೆ.ಸಿಂಧು ಹಾಗೂ ಬಿಎ ಪದವಿಯಲ್ಲಿ ಉನ್ನತ ಶ್ರೇಣಿ ಪಡೆದ ಎಂ.ಎಸ್.ದೀಪಾ ಅವರಿಗೆ ತಲಾ ಮೂರು ಸಾವಿರ ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು. 40 ಜನ ಉನ್ನತ ಶ್ರೇಣಿ ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ತಲಾ 1 ಸಾವಿರ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಲಾಯಿತು. ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಉತ್ತಮ ಸಾಧನೆ ತೋರಿದ 180 ವಿದ್ಯಾರ್ಥಿಗಳಿಗೆ ಬಹುಮಾನ ನೀಡಲಾಯಿತು. ಮಹಿಳಾ ಸಿರಿ ವಾರ್ಷಿಕ ಸಂಚಿಕೆ ಸಂಪಾದಕ ಡಾ.ಡಿ.ಓ.ಸಿದ್ದಪ್ಪ, ಸಾಂಸ್ಕೃತಿಕ ಸಮಿತಿ ಸಂಚಾಲಕ ಡಾ.ಶಿವಣ್ಣ, ಅಧ್ಯಾಪಕರ ಸಂಘ ಕಾರ್ಯದರ್ಶಿ ಡಾ.ಪಿ.ಎನ್.ಮಧುಸೂದನ, ಐಕ್ಯೂಎಸಿ ಸಂಚಾಲಕ ಹಲಸಂದಿ ಸತೀಶ, ವಾಣಿಜ್ಯ ಶಾಸ್ತ್ರ ವಿಭಾಗ ಮುಖ್ಯಸ್ಥೆ ಹೆಚ್.ಶಕುಂತಲ, ಎನ್ ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಎಂ.ಗಿರೀಶ್, ಕ್ರೀಡಾ ಸಮಿತಿ ಸಂಚಾಲಕ ಆರ್.ಶಿವಪ್ರಸಾದ್, ಪತ್ರಾಂಕಿತ ವ್ಯವಸ್ಥಾಪಕ ಆರ್.ವೆಂಕಟೇಶ್ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

**ಮಹಿಳಾ ಕಾಲೇಜಿನ ನೂತನ ಕಟ್ಟಡಕ್ಕೆ ಕೆಎಂಇಆರ್‌ಸಿ ಯಿಂದ ರೂ.25 ಕೋಟಿಗೆ ಆಡಳಿತಾತ್ಮಕ ಅನುಮೋದನೆ ದೊರೆತ್ತಿದ್ದು, ಟೆಂಡರ್ ಪ್ರಕ್ರಿಯೆಗೆ ಆಯುಕ್ತರಿಗೆ ಅನುಮೋದನೆಗೆ ಕಳಿಸಲಾಗಿದೆ. ಸರ್ಕಾರದಿಂದ ವಿದ್ಯಾರ್ಥಿಗಳ ಮೂಲ ಸೌಕರ್ಯಕ್ಕೆ ರೂ.2 ಕೋಟಿ ಹಾಗೂ ವಿಶ್ರಾಂತಿ ಕೊಠಡಿಗೆ ರೂ.1 ಕೋಟಿ ಮಂಜೂರಾಗಿದೆ. ಇನ್ನೂ ಕೆಲವೇ ದಿನಗಳಲ್ಲಿ ಅತ್ಯಂತ ಉತ್ತಮ ಕಾಲೇಜ್ ಆಗಿ ಮಹಿಳಾ ಕಾಲೇಜು ಮಾರ್ಪಾಡಲಾಗಲಿದೆ**

**-ಡಾ.ಹೆಚ್.ಗುಡ್ಡದೇಶ್ವರಪ್ಪ, ಪ್ರಾಂಶುಪಾಲ**

## ಬಕ್ರೀದ್ ಹಬ್ಬದ ನಿಮಿತ್ತ ಸರ್ಕಾರ ಹೊರಡಿಸಿದ ನಿಯಮಾವಳಿಗಳು ಪಾಲಿಸಿ: ಡಿವೈಎಸ್ಪಿ ಹಿರೇಮಠ

• ಉದಯವಾಹಿನಿ, ಚಿಂಚೋಳಿ

ಜೂನ್ 07ರಂದು ಮುಸ್ಲಿಂ ಬಾಂಧವರು ಆಚರಿಸುವ ಬಕ್ರೀದ್ ಹಬ್ಬವು ರಾಜ್ಯ ಸರ್ಕಾರ ಹೊರಡಿಸಿದ ನಿಯಮಾವಳಿಗಳು ಚಾಚುತಪ್ಪದೆ ಎಲ್ಲರೂ ಪಾಲಿಸಬೇಕು ಎಂದು ಡಿವೈಎಸ್ಪಿ ಸಂಗಮನಾಥ ಹಿರೇಮಠ ತಿಳಿಸಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಬಕ್ರೀದ್ ಹಬ್ಬದ ನಿಮಿತ್ತವಾಗಿ ಸರ್ವಧರ್ಮದ ಸಮಾಜದ ಬಾಂಧವರನ್ನು ಅಹ್ವಾನಿಸಿದ ಶಾಂತಿ ಸಭೆಯಲ್ಲಿ ಮಾತನಾಡಿದ ಅವರು, ಯಾರಿಗೂ ತೊಂದರೆ ಕೊಡದೆ ಶಾಂತತೆಯಿಂದ ಹಬ್ಬ ಆಚರಿಸಿ, ತಮ್ಮ ಧರ್ಮ ಪ್ರೀತಿಸಿ ಮತ್ತೊಂದು ಧರ್ಮವನ್ನು ಗೌರವಿಸಿ, ಕಾನೂನು ಸುವ್ಯವಸ್ಥೆ ಹಾಳು ಮಾಡದಂತೆ ಕಾನೂನಿನ ಅಡಿಯಲ್ಲಿ ಎಲ್ಲರೂ ಹಬ್ಬದ ನಿಯಮಗಳನ್ನು ಪಾಲನೆ ಮಾಡಬೇಕು ಎಂದರು.


ಉದಯವಾಹಿನಿ ಚಿತ್ರ

ಸಿಪಿಐ ಕಪಿಲದೇವ, ಪಿಎಸ್‌ಐ ಗಂಗಮ್ಮ ಹಾಗೂ ಕೆ.ಎಂ.ಬಾರಿ, ಅನ್ವರ್ ಖತೀಬ್, ರೇವಣಸಿದ್ದಪ್ಪ ಮೋಘಾ, ಹಣಮಂತ ಪೂಜಾರಿ, ಆನಂದ ಕಾಂಬ್ಳೆ, ಆರ್.ಗಣಪತರಾವ, ಜಾಕೀರಸಾಬ, ಹಾಫೀಜ್ ಅಬ್ದುಲ್ ಹಮೀದ್, ಎಸ್ಕೆ ಮೋಖ್ತಾರ್, ಹಸೇನ್ ಹಾಶ್ಮಿ, ಅಹೇಮದ್, ಸಮೀರ್, ಅನೇಕರಿದ್ದರು.

## ಪಂಪಸೆಟ್ ಕಳವು; ನಾಲ್ವರ ಬಂಧನ

• ಉದಯವಾಹಿನಿ, ಹರಪನಹಳ್ಳಿ

ತಾಲ್ಲೂಕಿನ ಹಿರೆಮೇಗಳಗೆರೆ ಭದ್ರಾ ಚಾನಲ್ ಬಳಿ ಮೋಟಾರು ಪಂಪಸೆಟ್ ಕಳವು ಮಾಡಿದ್ದ 4 ಜನರನ್ನು ಪೊಲೀಸರು ಬಂಧಿಸಿದ್ದಾರೆ. ಹಿರೆಮೇಗಳಗೆರೆ ಗ್ರಾಮದ ಗಾಯಪ್ಪರ ಹನುಮಂತ, ಕರಳೇರ ಅಣ್ಣಪ್ಪ, ಪೂಜಾರ ಪರಶುರಾಮ ಹಾಗೂ ನಾಗಡ್ಕರ ಅರುಣ ಬಂಧಿತ ಆರೋಪಿಗಳು. ಅವರಿಂದ 10 ಎಚ್.ಪಿ ಮತ್ತು 7 ಎಚ್.ಪಿ. ಸಾಮರ್ಥ್ಯದ ಪಂಪಸೆಟ್ ಮೋಟಾರು, ಎರಡು ಬೈಕ್ ಜಪ್ತಿ ಮಾಡಲಾಗಿದೆ. ಡಿವೈಎಸ್ಪಿ ವೆಂಕಟಪ್ಪ ನಾಯಕ, ಸಿಪಿಐ ಮಹಾಂತೇಶ್ ಸಜ್ಜನ್ ಮಾರ್ಗದರ್ಶನದಲ್ಲಿ ಪಿಎಸ್‌ಐ ರಂಗಯ್ಯ, ಸಿಬ್ಬಂದಿ ಕೆ.ಗುರುರಾಜ್, ಕಾರ್ಯಾಚರಣೆಯಲ್ಲಿದ್ದರು.

## ವಿಶ್ವತಂಬಾಕು ದಿನ ಆಚರಣೆ

• ಉದಯವಾಹಿನಿ, ವಿಜಯಪುರ

ನಗರದ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಜ್ಞಾನ ಶಕ್ತಿ ಆವರಣದಲ್ಲಿ ವಿಶ್ವ ತಂಬಾಕು ರಹಿತ ದಿನ'ದ ಅಂಗವಾಗಿ ಶಿಕ್ಷಣ ಅಧ್ಯಯನ ವಿಭಾಗ, ಎನ್.ಎಸ್.ಎಸ್. ಸ್ವಯಂ ಸೇವಕಿಯರು ಮಾನವ ಸರಪಳಿ ನಿರ್ಮಿಸುವ ಮೂಲಕ ವಿವಿಯ ಆವರಣದಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಮಹಿಳಾ ವಿವಿಯ ಹಂಗಾಮಿ ಕುಲಪತಿ ಪ್ರೊ. ಶಾಂತಾದೇವಿ ಟಿ ಚಾಲನೆ ನೀಡಿದರು.

ತಂಬಾಕನಿಂದ ಆಗುವ ವಿವಿಧ ಅನಾಹುತಗಳ ಬಗ್ಗೆ ಅರಿವು ಮೂಡಿಸಲು ಕರಪತ್ರಗಳನ್ನು ಹಂಚಿದರು. ವಿಶ್ವವಿದ್ಯಾನಿಲಯದ ಸಿಬ್ಬಂದಿಗಳೊಂದಿಗೆ ಸಮಾಲೋಚನೆ ನಡೆಸಿ ತಂಬಾಕು ಮುಕ್ತ ದೇಶವಾಗಿಸಲು ಎಲ್ಲರೂ ಶ್ರಮ ಪಡಬೇಕು ಎಂದು ಪ್ರಚಾರ ನಡೆಸಿದರು.

## ಪ್ರವಾಹ ಮುನ್ನೆಚ್ಚರಿಕೆ ಕ್ರಮವಾಗಿ ಜಲಾಶಯಗಳಿಗೆ ಭೇಟಿ: ಪರಿಶೀಲನೆ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಅತಿದೊಡ್ಡವಾದ ನಾಗರಾಳ ಜಲಾಶಯ ಹಾಗೂ ಚಂದ್ರಂಪಳ್ಳಿ ಜಲಾಶಯಗಳು ನೀರಿನ ಸಾಂದ್ರತೆಯು ಮಳೆಗಾಲ ಪ್ರಾರಂಭವಾಗಿರುವುದರಿಂದ ಹೆಚ್ಚಾಗುವ ಸಾಧ್ಯತೆ ಇರುವ ಕಾರಣ ಜಲಾಶಯಗಳಿಗೆ ಎನ್.ಡಿ.ಆರ್.ಎಫ್ ತಂಡ ಹಾಗೂ ತಹಸೀಲ್ದಾರ್ ಸುಬ್ಬಣ್ಣ ಜಮಖಂಡಿ ಮತ್ತು ಗ್ರೇಡ್2 ತಹಸೀಲ್ದಾರ್ ವೆಂಕಟೇಶ ದುಗ್ಗನ್ ಭೇಟಿನೀಡಿ ಪ್ರವಾಹದ ಮುನ್ನೆಚ್ಚರಿಕೆ ಕುರಿತು ಪರಿಶೀಲಿಸಿದರು.

ಚಂದ್ರಂಪಳ್ಳಿ ಜಲಾಶಯ, ನಾಗರಾಳ ಜಲಾಶಯಗಳು ಅತಿದೊಡ್ಡದಾದ ಜಲಾಶಯಗಳು ಮಳೆಗಾಲ ಇರುವುದರಿಂದ ಮುನ್ನೆಚ್ಚರಿಕೆ ಕ್ರಮಗಳು ತೆಗೆದುಕೊಳ್ಳುವಂತೆ ಹಾಗೂ ಜಲಾಶಯ ನೀರು ಹೊರಬಿಟ್ಟದರೆ ನದಿಯ ದಂಡೆಯಲ್ಲಿರುವ ಗ್ರಾಮಗಳಿಗೆ ಮುನ್ನೆಚ್ಚರಿಕೆ ಕ್ರಮವಾಗಿ ಮೊದಲೇ ಮಾಹಿತಿ ನೀಡುವುದು ಡೊಂಗೂರ್ ಸಾರುವುದು ಆಯಾ ಗ್ರಾಪಂಗಳಿಗೆ ಮಾಹಿತಿ ನೀಡಬೇಕು ಎಂದು ತಹಸೀಲ್ದಾರ್ ಸುಬ್ಬಣ್ಣ ಜಮಖಂಡಿಯವರು ಜಲಾಶಯದ ಎಇಇ ಅಧಿಕಾರಿಗಳಿಗೆ ಸೂಚಿಸಿದರು.


ಉದಯವಾಹಿನಿ ಚಿತ್ರ

ಚಂದ್ರಂಪಳ್ಳಿ ಜಲಾಶಯ ಎಇಇ ಚೇತನ ಕಳಸ್ಕರ, ನಾಗರಾಳ ಜಲಾಶಯ ಎಇಇ ಅಮೃತ ಸೇರಿದಂತೆ ಐನಾಪೂರ ಆರ್.ಐ ಆರೀಫ್, ಅನೇಕರಿದ್ದರು.

## ಅನಿರ್ದಿಷ್ಟಾವಧಿ ಮುಷ್ಕರಕ್ಕೆ ನ್ಯಾಯಕ್ರಾಂತಿ ಸಂಘ ಬೆಂಬಲ: ಡಿಸಿಗೆ ಮನವಿ

• ಉದಯವಾಹಿನಿ, ಕೆಂಭಾವಿ

ಪಟ್ಟಣದ ಪುರಸಭೆ ಕಾರ್ಯಾಲಯದ ಮುಂದೆ ಕರ್ನಾಟಕ ರಾಜ್ಯ ಪೌರಸೇವಾ ನೌಕರರ ಬೇಡಿಕೆಗಳನ್ನು ಈಡೇರಿಸದೇ ಇರುವುದರಿಂದ ಪೌರ ಸೇವಾ ನೌಕರರು ನಡೆಸುತ್ತಿರುವ ಅನಿರ್ಧಿಷ್ಟಾವಧಿ ಮುಷ್ಕರಕ್ಕೆ ನ್ಯಾಯಕ್ರಾಂತಿ ಸಂಘ ಬೆಂಬಲ ವ್ಯಕ್ತಪಡಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ನಂತರ ಮಾತನಾಡಿದ ಕಲ್ಯಾಣ ಕರ್ನಾಟಕ ವಿಭಾಗದ ಅಧ್ಯಕ್ಷ ಬಂದೇನವಾಜ ನಾಶಿ, ಪೌರಸೇವಾ ನೌಕರರ ಎಲ್ಲಾ ಬೇಡಿಕೆಗಳಿಗೆ ಸರಕಾರ ಸ್ಪಂದಿಸಬೇಕು. ರಾಜ್ಯ ಸರಕಾರಿ ನೌಕರರಿಗೆ ನೀಡುವ ಪ್ರತಿಯೊಂದ ಸವಲತ್ತುಗಳನ್ನು ಪೌರಸೇವಾ ನೌಕರರಿಗೆ ಪ್ರತ್ಯೇಕ ಆದೇಶವಿಲ್ಲದೆ ವಿಸ್ತರಿಸುವ ಬಗ್ಗೆ. ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ದಿನಗೂಲಿ / ಕ್ಷೇಮಾಭಿವೃದ್ಧಿ ಅಧಿನಿಯಮದಡಿ ಇರುವ ನೌಕರರನ್ನು ಸಕ್ರಮಾತಿಗೊಳಿಸಬೇಕು. ನಗರ ಸಭೆಗಳಲ್ಲಿ ಶೇಕಡ 10% ರಷ್ಟು ಪೌರಕಾರ್ಮಿಕರನ್ನು ವಿಶೇಷ ನೇಮಕಾತಿ ಅಡಿ ನೇಮಕಾತಿ ಮಾಡಬೇಕು. 2022 ನೇ ಸಾಲಿನ ವಿಶೇಷ ನೇಮಕಾತಿ ಅಡಿ ಆಯ್ಕೆಯಾದ ಪೌರಕಾರ್ಮಿಕರು / ಲೋಡರ್ಸ್ ಗಳಿಗೆ ಎಸ್.ಎಫ್.ಸಿ. ವೇತನ ನಿಧಿಯಿಂದ ವೇತನ ಪಾವತಿಸಬೇಕು.

ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೀರು ಸರಬರಾಜು ನೌಕರರಗಳನ್ನು ವಿಶೇಷ ನೇಮಕಾತಿ ಅಡಿ ಪರಿಗಣಿಸಬೇಕು. ಪೌರ ಸೇವಾ ನೌಕರರಿಗೆ ಜ್ಯೋತಿ ಸಂಜೀವಿನಿ / ನಗದು ರಹಿತ ಚಿಕಿತ್ಸಾ ಸೌಲಭ್ಯವನ್ನು ಕಲ್ಪಿಸಬೇಕು.


ಉದಯವಾಹಿನಿ ಚಿತ್ರ

ಐ.ಟಿ.ಸಿಬ್ಬಂದಿ / ಅಕೌಂಟ್ ಕನ್ಸಲ್ ಟೆಂಟ್ / ಕಂಪ್ಯೂಟರ್ ಅಪರೇಟರ್ / ವಾಹನ ಚಾಲಕ / ಸ್ಯಾನಿಟರಿ ಸೂಪರ್‌ವೈಟರ್ ಹಾಗೂ ಇತರೆ ವೃಂದದ ನೌಕರರನ್ನು ಪೌರ ಸೇವ ನೌಕರರೆಂದು ಪರಿಗಣಿಸಿ ವೀಲಿನಾತಿಗೊಳಿಸಬೇಕೆಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಅಬ್ದುಲಬಾಷಾ, ಹಬೀಬಪಟೇಲ, ಮೊಹ್ಮದ ಸಲೀಮ್ ಸೇರಿದಂತೆ ಇತರರಿದ್ದರು.

## ಲೋಕಾಯುಕ್ತ ಬಲೆಗೆ ಜೆಸ್ಕಾಂ ಇಇ

• ಉದಯವಾಹಿನಿ, ಕಲಬುರಗಿ

ವಿದ್ಯುತ್ ಗುತ್ತಿಗೆ ಬಿಲ್‌ಗಳಿಗೆ ಅನುಮೋದನೆ ನೀಡಲು 2 ಲಕ್ಷ ಲಂಚ ಪಡೆಯುತ್ತಿದ್ದ ಆರೋಪದಡಿ ಜೆಸ್ಕಾಂ ಕಾರ್ಯನಿರ್ವಾಹಕ ಎಂಜಿನಿಯರ್ ಅವರನ್ನು ಲೋಕಾಯುಕ್ತ ಪೊಲೀಸರು ಮಂಗಳವಾರ ವಶಕ್ಕೆ ಪಡೆದರು. ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿಯ (ಜೆಸ್ಕಾಂ) ಗ್ರಾಮೀಣ ಕಾರ್ಯ ಮತ್ತು ಪಾಲನೆ ಕಲಬುರಗಿ ವಿಭಾಗ-2ರ ಕಾರ್ಯನಿರ್ವಾಹಕ ಎಂಜಿನಿಯರ್ (ಇಇ) ಶೇಖರ್ ಬಹುರೂಪಿ ಲಂಚ ಪಡೆದ ಆರೋಪಿ. ಜೇವರ್ಗಿ ಗುತ್ತಿಗೆದಾರ ಸಾಯಬಣ್ಣ ಪೂಜಾರಿ ಅವರು ನೀಡಿದ ದೂರಿನ ಅನ್ವಯ ಲೋಕಾಯುಕ್ತ ಪೊಲೀಸರು ದಾಳಿ ಮಾಡಿದ್ದಾರೆ.

ಹೆಚ್ಚುವರಿ ವಿದ್ಯುತ್ ಪರಿವರ್ತಕಗಳು (ಟಿಸಿ), ವಿದ್ಯುತ್ ಲೈನ್ ನಿರ್ವಹಣೆ, ಹೊಸ ಟಿಸಿ ಮತ್ತು ಗಂಗಾ ಕಲ್ಯಾಣ ಯೋಜನೆಗಳ ಬಿಲ್ ಪಾಸ್ ಮಾಡಿಕೊಡಲು ಶೇಖರ್ ಅವರು ಸಾಯಬಣ್ಣ ಅವರನ್ನು ಸಾಕಷ್ಟು ಬಾರಿ ಕಚೇರಿಗೆ ಅಲೆದಾಡಿಸಿದ್ದರು. 2 ಲಕ್ಷ ಲಂಚ ಕೊಟ್ಟರೆ ಬಿಲ್‌ಗಳಿಗೆ ಮಂಜೂರಾತಿ ಮಾಡುವುದಾಗಿ ಬೇಡಿಕೆ ಇಟ್ಟಿದ್ದರು. ಈ ಸಂಬಂಧ ಸಾಯಬಣ್ಣ ಅವರು ದೂರು ನೀಡಿದ್ದರು ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ.

## ಹಾಸ್ಟೆಲ್‌ಗಳಿಗೆ ಜಿಪಂ ಸಿಇಒ ಭೇಟಿ

• ಉದಯವಾಹಿನಿ, ಬೆಳಗಾವಿ

ಬೆಳಗಾವಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ ಅವರು, ಬೆಳಗಾವಿ ನಗರದ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಅಜಮನಗರದ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ ಹಾಗೂ ಶಿವಬಸವ ನಗರದ ಮೆಟ್ರಿಕ್ ಪೂರ್ವ ಬಾಲಕರ ಹಾಸ್ಟೆಲ್ ಗೆ ದಿಢೀರ್ ಭೇಟಿ ನೀಡಿ ಪರಿಶೀಲಿಸಿದರು. ಹಾಸ್ಟೆಲ್ ನ ಅಡುಗೆ ಕೋಣೆ,


ಉದಯವಾಹಿನಿ ಚಿತ್ರ

ಶೌಚಾಲಯ ಸೇರಿದಂತೆ ಕೊಠಡಿಗಳಿಗೆ ಸಿಇಓ ಭೇಟಿ ನೀಡಿ ಅಲ್ಲಿರುವ ವ್ಯವಸ್ಥೆಯ ಕೂಲಂಕಷ ಪರಿಶೀಲನೆ ನಡೆಸಿದ್ದಾರೆ. ವಿದ್ಯಾರ್ಥಿಗಳೊಂದಿಗೆ ಸಮಾಲೋಚಿಸಿದ್ದಾರೆ. ಹಾಸ್ಟೆಲ್‌ನಲ್ಲಿ ಲಭ್ಯವಾಗುತ್ತಿರುವ ಸೌಲಭ್ಯ, ಕುಡಿಯುವ ನೀರಿನ ಶುದ್ಧತೆ ಹಾಗೂ ಶುಚಿತ್ವದ ಕುರಿತಂತೆ ಮಾಹಿತಿ ಕಲೆ ಹಾಕಿದರು. ಅಜಮನಗದಲ್ಲಿರುವ ವಸತಿ ನಿಲಯದಲ್ಲಿ ಗಂಥಾಲಯ ಚಿಕ್ಕದಾಗಿದ್ದು ಮಕ್ಕಳಿಗೆ ಓದುವುದಕ್ಕೆ ಅನಾನಕೂಲವಾಗುತ್ತಿರುವುದನ್ನು ಮನಗಂಡು ಗಂಥಾಲಯವನ್ನು ದೊಡ್ಡದಾಗಿ ವಿಸ್ತರಣೆ ಮಾಡಲು ಅಧಿಕಾರಿಗಳಿಗೆ ತಿಳಿಸಿದರು. ಆಹಾರದ ಗುಣಮಟ್ಟ ಪರಿಶೀಲನೆ ನಡೆಸಿದ್ದಾರೆ. ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಲಭ್ಯವಾಗುವ ಸೌಲಭ್ಯಗಳನ್ನು ನಿಯಮಾನುಸಾರ ವಿತರಣೆ ಮಾಡಬೇಕುಸ ಎಂದು ಹಾಸ್ಟೆಲ್ ಸಿಬ್ಬಂದಿಗಳಿಗೆ ಸೂಚನೆ ನೀಡಿದ್ದಾರೆ.

## ವಿಶ್ವಪರಿಸರ ದಿನಾಚರಣೆ

• ಉದಯವಾಹಿನಿ, ಧಾರವಾಡ

ವಿಶ್ವ ಪರಿಸರ ದಿನಾಚರಣೆ-2025 ರ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವಗಳ ಪ್ರಾಧಿಕಾರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಅರಣ್ಯ ಇಲಾಖೆ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ, ಹುಬ್ಬಳ್ಳಿ-ಧಾರವಾಡ ನಾಗರೀಕ ಪರಿಸರ ಸಮಿತಿ, ಎಸ್.ಡಿ. ಎಮ್ ಇಂಜಿನೀಯರಿಂಗ್ ಕಾಲೇಜ್, ಮತ್ತು ಜೆ.ಎಸ್.ಎಸ್ ವಿದ್ಯಾಗಿರಿ ಸಂಸ್ಥೆಯ ಸಹಯೋಗದೊಂದಿಗೆ ಜಿಲ್ಲಾ ಮಟ್ಟದ ಪ್ರಾಥಮಿಕ ಶಾಲೆ, ಪ್ರೌಢ ಶಾಲಾ ವಿಧ್ಯಾರ್ಥಿಗಳಿಗೆ ನಿಬಂಧ ಮತ್ತು ಚಿತ್ರಕಲಾ ಸ್ಪರ್ಧೆಗಳನ್ನು ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು ಎಂಬ ವಿಷಯದ ಬಗ್ಗೆ ಹಮ್ಮಿಕೊಳ್ಳಲಾಗಿತ್ತು. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಅಧಿಕಾರಿ ಜಗದೀಶ ಐ.ಹೆಚ್. ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ವಿಶ್ವ ಪರಿಸರ ದಿನಾಚರಣೆಯ ಮಹತ್ವ ಹಾಗೂ ವಿಶ್ವ ಪರಿಸರ ದಿನಾಚರಣೆಯ ಘೋಷಣೆ ಇವುಗಳ ಮುಖ್ಯ ಉದ್ದೇಶಗಳನ್ನು ತಿಳಿಸಿದರು.


ಉದಯವಾಹಿನಿ ಚಿತ್ರ

## ದ್ವೇಷ ಭಾಷಣ ಮಾಡಿದರೆ ಕ್ರಮ

• ಉದಯವಾಹಿನಿ ಬೀದರ್

ಬಕ್ರೀದ್ ಹಬ್ಬವನ್ನು ಎಲ್ಲರೂ ಶಾಂತಿಯುತವಾಗಿ ಆಚರಿಸಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಪೋಸ್ಟ್, ದ್ವೇಷ ಭಾಷಣ ಮಾಡಿದರೆ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ ಎಚ್ಚರಿಕೆ ನೀಡಿದರು. ಬಕ್ರೀದ್ ಹಬ್ಬದ ಅಂಗವಾಗಿ ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿ ಮಂಗಳವಾರ ಏರ್ಪಡಿಸಿದ್ದ ಸಭೆಯಲ್ಲಿ ಮಾತನಾಡಿದರು.

ಯಾರು ಕೂಡ ವಿವಾದಾತ್ಮಕ ಅಂಶಗಳಿರುವ ಪೋಸ್ಟ್, ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹಾಕಬಾರರು. ಗೋವುಗಳ ಹತ್ಯೆ, ಅಕ್ರಮ ಸಾಗಾಟ ನಿಷೇಧಿಸಲಾಗಿದೆ. ಗೋಹತ್ಯೆ ನಿಷೇಧ ಕಾಯ್ದೆ ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದರು. ಜಿಲ್ಲೆಯ ಮುಸ್ಲಿಂ ಹಾಗೂ ಹಿಂದೂ ಸಮುದಾಯದವರು ಒಗ್ಗಟ್ಟು ಪ್ರದರ್ಶಿಸಬೇಕು. ಯಾವುದೇ ರೀತಿಯ ಅಹಿತಕರ ಘಟನೆ ಆಗದಂತೆ ಬಕ್ರೀದ್ ಹಬ್ಬ ಆಚರಿಸಬೇಕೆಂದು ಸಲಹೆ ಮಾಡಿದರು. ಡಿವೈಎಸ್ಪಿಗಳಾದ ಶಿವನಗೌಡ ಪಾಟೀಲ, ಶಿವಾನಂದ ಪವಾಡಶೆಟ್ಟಿ, ಜೆ.ಎಸ್. ನ್ಯಾಮೇಗೌಡ ಹಾಜರಿದ್ದರು.

ಜಿಲ್ಲಾಧಿಕಾರಿಗಳ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆಯಲ್ಲಿ ಮಾನ್ಯ ಮುಖ್ಯಮಂತ್ರಿಗಳಿಂದ ಸೂಕ್ತ ನಿರ್ದೇಶನ

# ಜಿಲ್ಲಾಧಿಕಾರಿಗಳಿಂದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ

• ಉದಯವಾಹಿನಿ ಯಾದಗಿರಿ

ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಪರೀಕ್ಷಾ ಫಲಿತಾಂಶ ಹೆಚ್ಚಳಕ್ಕೆ. ಶಾಲಾ -ಕಾಲೇಜು ಆರಂಭದ ದಿನಗಳಿಂದಲೇ ಯೋಜನೆ ರೂಪಿಸುವಂತೆ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ.ಅವರು ಸೂಚಿಸಿದರು.

ಇತ್ತೀಚೆಗೆ ಮಾನ್ಯ ಮುಖ್ಯಮಂತ್ರಿಗಳು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆ ನಡೆಸಿ ಸೂಕ್ತ ನಿರ್ದೇಶನ ನೀಡಿದ ಪ್ರಯುಕ್ತ, ಈ ಕುರಿತು ಚರ್ಚಿಸಲು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪ್ರತಿಶತ 60 ಕ್ಕಿಂತ ಕಡಿಮೆ ಫಲಿತಾಂಶ ಬಂದಕಡೆ ನೋಟಿಸ್ ಸಹ ಜಾರಿಗೊಳಿಸಲಾಗುವುದು. ಕಳೆದ ಎಸ್.ಎಸ್.ಎಲ್.ಸಿ ಸುಧಾರಣೆಗೆ ಡಿಡಿಪಿಐ ಕೈಗೊಂಡಿರುವ ಕ್ರಮಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು ಮುಂದಿನ ದಿನಗಳಲ್ಲಿ ಸವಾಲಾಗಿ ಸ್ವೀಕರಿಸಿ, ಫಲಿತಾಂಶ ಹೆಚ್ಚಳಕ್ಕೆ ವಿಶೇಷ ಗಮನ ನೀಡುವಂತೆ ಸಲಹೆ ನೀಡಿದರು.

**ಫಲಿತಾಂಶ ಸುಧಾರಣೆಗೆ ವಿಶೇಷ ಗಮನ**

**ಸರ್ಕಾರಿ ಶಾಲೆಗಳಲ್ಲಿ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿ ಫಲಿತಾಂಶ ಚೆನ್ನಾಗಿ ಮಾಡಬಹುದಾಗಿದ್ದು, ಡಿಡಿಪಿಐ ಹಾಗೂ ಡಿಡಿಪಿಯು ಶಾಲಾ ಕಾಲೇಜು ಆರಂಭದಿಂದಲೇ ಈ ಕುರಿತು ನಿಗಾವಹಿಸಿ ಸೂಕ್ತ ಯೋಜನೆ ರೂಪಿಸಬೇಕು. ನಿರಂತರ ಪರಿಶೀಲನೆ ನಡೆಸಬೇಕು. ತಾಲ್ಲೂಕುವಾರು ಪೋಷಕರು, ಎಸ್‌ಡಿಎಂಸಿ, ಶಿಕ್ಷಕರುಗಳ ಸಭೆ ನಡೆಸಿ, ಡ್ರಾಪ್ ಔಟ್ ಮಕ್ಕಳನ್ನು ಪುನಃಸೇರ್ಪಡೆ, ಗುಣಮಟ್ಟದ ಶಿಕ್ಷಣ, ಮೂಲಸೌಕರ್ಯಗಳ ಉತ್ತಮ ಬಳಕೆಯೊಂದಿಗೆ ಮುಂದಿನ ವರ್ಷಗಳಲ್ಲಿ ಫಲಿತಾಂಶ ಸುಧಾರಣೆಗೆ ವಿಶೇಷ ಗಮನ ನೀಡುವಂತೆ ಸೂಚಿಸಿದರು.**


ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಕಳಪೆ ಬೀಜ , ರಸಗೊಬ್ಬರ ಮಾರಾಟವಾಗದಂತೆ ನಿಗಾವಹಿಸಬೇಕು. ಕೃಷಿಗೆ ಸಂಬಂಧಿಸಿದ ಚಟುವಟಿಕೆಗಳ ಬಗ್ಗೆ ಗಂಭೀರವಾಗಿರಬೇಕು. ಡಿಎಪಿ (ಡೈ ಅಮೋನಿಯಂ ಪಾಸ್ಪೇಟ್) ರಸಗೊಬ್ಬರ ಬದಲಾಗಿ ★ಎನ್ ಪಿ ಕೆ★( ಸಂಯುಕ್ತ ರಸಗೊಬ್ಬರ) ಬಳಸುವ ಬಗ್ಗೆ. ರೈತರಿಗೆ ತಿಳಿಹೇಳಬೇಕು. ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಅಂಗನವಾಡಿಗಳು ಸೇರಿದಂತೆ ವಿವಿಧ ನಿವೇಶನದ ಅವಶ್ಯಕತೆಗಳ ಬಗ್ಗೆ ವರದಿ ಸಲ್ಲಿಸಬೇಕು ಎಂದು ಸೂಚಿಸಿದರು. ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿವಿಧ ನಿಗಮಗಳ ವ್ಯಾಪ್ತಿಯಲ್ಲಿ ಅವಶ್ಯಕ ಕ್ರಮಗಳನ್ನು ಕೈಗೊಳ್ಳಬೇಕು. ನಗರಸ್ಥಳಿಯ ಹಾಗೂ ಗ್ರಾ.ಪಂ. ವ್ಯಾಪ್ತಿಯಲ್ಲಿ ಅಭಿಯಾನ ರೂಪದಲ್ಲಿ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಚರಂಡಿ ನೀರು ಹರಿದು ಹೋಗುವಂತೆ ನೋಡಿಕೊಳ್ಳಬೇಕು.

**ಗ್ರಾಮಸ್ಥರಲ್ಲಿ ಸೂಕ್ತ ಅರಿವು**

**ಜಿಲ್ಲೆಯಲ್ಲಿ ಬಾಲ್ಯವಿವಾಹ ತಡೆಯಲು ಗ್ರಾಮವಾರು ಆಯಾ ಪೋಷಕರು, ಮಕ್ಕಳು, ಗ್ರಾಮಸ್ಥರಲ್ಲಿ ಸೂಕ್ತ ಅರಿವು ಮೂಡಿಸಬೇಕು. ಆರೋಗ್ಯಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು, ಜಿಲ್ಲಾ ಆರ್ ಸಿ ಹೆಚ್ ಅಧಿಕಾರಿಗಳು ಆಶಾ ಕಾರ್ಯಕರ್ತೆಯರ ಸಮನ್ವಯತೆಯಿಂದ ತಾಯಿ ಮರಣ, ಶಿಶುಮರಣ ಪ್ರಮಾಣ ತಗ್ಗಿಸಲು ಪ್ರಯತ್ನಿಸಬೇಕು. ಅಪೌಷ್ಟಿಕ ನಿವಾರಣೆಗೆ ಸೂಕ್ತ ನಿಗಾಯಿಡುವಂತೆ ಸೂಚಿಸಿದರು.**

**ಅವಶ್ಯಕತೆಗಳ ಬಗ್ಗೆ ವರದಿ ಸಲ್ಲಿಸಬೇಕು**

ವಸತಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳಬೇಕು ಎಂದು ಸೂಚಿಸಿದರು.

ಪ್ರವಾಹ ಸಂಭವ ಹಿನ್ನೆಲೆಯಲ್ಲಿ ಅಧಿಕಾರಿಗಳು ಅನುಮತಿ ಇಲ್ಲದೆ ಕೇಂದ್ರ ಸ್ಥಾನ ಬಿಡಬಾರದು. ನೋಡಲ್ ಅಧಿಕಾರಿಗಳು ಸೂಕ್ತ ಮುನ್ನೆಚ್ಚರಿಕೆಗಳ ಬಗ್ಗೆ ಆಯಾ ಗ್ರಾಮ ವ್ಯಾಪ್ತಿಯಲ್ಲಿ ತಿಳಿಹೇಳಬೇಕು.

ವಿವಿಧ ಸಮೂಹ ಮಾಧ್ಯಮ ಗಳಲ್ಲಿ ಬರುವಂತಹ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಕಾಲ ಕಾಲಕ್ಕೆ ಕ್ರಮ ಕೈಗೊಂಡು ಸಮನ್ವಯ ಸಾಧಿಸಿ ಸಮಸ್ಯೆ ಪರಿಹರಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಜಿ.ಪಂ ಸಿಇಓ ಲವೀಶ್ ಒರಡಿಯಾ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರಣೇಶ್ ಎಸ್.ಪಿ. ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಭಾರತ, ಪಾಕಿಸ್ತಾನದ ತೀವ್ರ ಉದ್ವಿಗ್ನತೆ ಇದ್ದ ವೇಳೆ ಹಠಾತ್ ಕದನ ವಿರಾಮ

## ಕದನ ವಿರಾಮ ಘೋಷಣೆಯಾಗಲು ಅಮೆರಿಕಾದ ಮಧ್ಯಸ್ಥಿಕೆ ಕಾರಣವಾಯಿತಾ?



**ಎಂದಿಗೂ ಮೌನವಾಗಿ ಇರುವುದಿಲ್ಲ**

**ಸಿಂಗಾಪುರ:** ಭಾರತ ಮತ್ತು ಪಾಕಿಸ್ತಾನದ ನಡುವೆ ಕದನ ವಿರಾಮ ಏರ್ಪಟ್ಟ ಸುಮಾರು 20 ದಿನಗಳ ನಂತರ ಈ ಹಠಾತ್ ನಿರ್ಧಾರಕ್ಕೆ ಕಾರಣವೇನು ಎನ್ನುವುದನ್ನು ಮೂರೂ ರಕ್ಷಣಾ ಪಡೆಗಳ ಮುಖ್ಯಸ್ಥ ಸಿಡಿಎಸ್ ಅನಿಲ್ ಚೌಹಾಣ್ ವಿವರಣೆಯನ್ನು ನೀಡಿದ್ದಾರೆ. ಎರಡು ದೇಶಗಳ ನಡುವಿನ ಉದ್ವಿಗ್ನತೆ ತಾರಕಕ್ಕೇರಿದ್ದ ವೇಳೆ, ಒಮ್ಮೆಲೇ ಕದನ ವಿರಾಮ ಘೋಷಣೆಯಾಗಿತ್ತು. ಸಿಂಗಾಪುರದಲ್ಲಿ ನಡೆದ ಶಂಗ್ರಿ – ಲಾ ಸಂವಾದದಲ್ಲಿ ಮಾತನಾಡುತ್ತಿದ್ದ ಅನಿಲ್ ಚೌಹಾಣ್, ಕದನ ವಿರಾಮ ಘೋಷಣೆಯಾಗಿದ್ದದ್ದು ಭಾರತದ ಆಪರೇಷನ್ ಸಿಂಧೂರ್ ಕಾರ್ಯತಂತ್ರದ ಭಾಗವಾಗಿತ್ತು. ನಮ್ಮ ನಿರ್ಧಾರದಲ್ಲಿ ನಮಗೆ ಸ್ಪಷ್ಟತೆಯಿತ್ತು ಎಂದು ಅವರು ಹೇಳಿದ್ದಾರೆ.

ಪಹಲ್ಗಾಮ್‌ನಲ್ಲಿ ಅಮಾಯಕ ಪ್ರವಾಸಿಗರ ಮೇಲಿನ ದಾಳಿಯ ನಂತರ, ಭಾರತ ಸುಮಾರು ಎರಡು ವಾರಗಳ ನಂತರ ಪ್ರತೀಕಾರವನ್ನು ತೆಗೆದುಕೊಂಡಿತು. ಪಹಲ್ಗಾಮ್ ದಾಳಿಯಲ್ಲಿ 26 ಪ್ರವಾಸಿಗರು ಮೃತ ಪಟ್ಟಿದ್ದರು. ಉಗ್ರರ ಕಾರ್ಯಾಚರಣೆ ನಡೆಸಲು ಆಪರೇಷನ್ ಸಿಂಧೂರ್ ಹೆಸರಿನಲ್ಲಿ ಭಾರತದ ವಾಯು ಪಡೆಗಳು ಮೇ 6-7ರ ಮಧ್ಯರಾತ್ರಿ ಉಗ್ರರ ನೆಲದ ಮೇಲೆ ದಾಳಿಯನ್ನು ನಡೆಸಿತ್ತು. ಭಾರತದ ಮಿಲಿಟರಿ ಪಡೆಗಳು, ಪಾಕಿಸ್ತಾನ, ಪಾಕ್ ಆಕ್ರಮಿತ ಕಾಶ್ಮೀರದ ಒಂಬತ್ತು ಉಗ್ರ ನೆಲೆಯ ಮೇಲೆ ದಾಳಿಯನ್ನು ನಡೆಸಿತು. ಇದರಲ್ಲಿ ನೂರಕ್ಕೂ ಹೆಚ್ಚು ಉಗ್ರರು ಹತರಾಗಿದ್ದಾರು. ಜೈಶ್-ಎ-ಮೊಹಮ್ಮದ್ ನಾಯಕ ಅಬ್ದುಲ್ ರೌಫ್ ಅಜರ ಸೇರಿದಂತೆ ಹಲವರು ಸಾವನ್ನಪ್ಪಿದ್ದರು. ಪಾಕಿಸ್ತಾನದ ವಾಯುನೆಲೆಗಳಿಗೆ ಭಾರತ ಮಿಲಿಟರಿಗಳು ಸಾಕಷ್ಟು ನಷ್ಟವನ್ನುಂಟು ಮಾಡಿತ್ತು.

ರಾವಲ್ಪಿಂಡಿಯ ಸೇನಾ ಮುಖ್ಯ ಕಚೇರಿಯ ಪಕ್ಕದಲ್ಲಿರುವ ನೂರ್ ಖಾನ್ ವಾಯುನೆಲೆ, ಜೊತೆಗೆ, ಜಾಕೋಬಾಬಾದ್, ಸಗೋರ್ಧಾ, ಭೋಲಾರಿ ಮುಂತಾದ ವಾಯುನೆಲೆಗಳು ನಾಶಗೊಂಡಿದ್ದವು.ಆಪರೇಷನ್ ಸಿಂಧೂರ್ ಕಾರ್ಯಾಚರಣೆ, ಅತ್ಯಂತ ಸ್ಪಷ್ಟತೆಯಿಂದ ಕೂಡಿತ್ತು, ಏನು ಗುರಿಯನ್ನು ಇಟ್ಟುಕೊಂಡು ನಾವು ಕಾರ್ಯಾಚರಣೆ ಆರಂಭಿಸಿದ್ದೆವು ಅದು ಮುಗಿದಿತ್ತು. ನಮ್ಮ ಟಾರ್ಗೆಟ್ ಉಗ್ರರೇ ಹೊರತು, ಪಾಕಿಸ್ತಾನದ ನಾಗರೀಕರು ಅಥವಾ ಅಲ್ಲಿನ ಮಿಲಿಟರಿ ಅಲ್ಲ ಎಂದು ಅನಿಲ್ ಚೌಹಾಣ್ ಹೇಳಿದ್ದಾರೆ. ಭಯೋತ್ಪಾದನೆಯನ್ನು ಎದುರಿಸಲು ಭಾರತ ಸರ್ವಸನ್ನದ್ಧವಾಗಿದೆ, ಈ ವಿಚಾರದಲ್ಲಿ ಎಂದಿಗೂ ಮೌನವಾಗಿ ಇರುವುದಿಲ್ಲ. ಕದನ ವಿರಾಮವನ್ನು ಪಾಕಿಸ್ತಾನ ಉಲ್ಲಂಘಿಸಿದರೆ, ನಿರ್ಣಾಯಕ ಪ್ರತಿಕ್ರಿಯೆಯನ್ನು ನೀಡಲಾಗುವುದು. ಈ ಎಚ್ಚರಿಕೆಯನ್ನು ರಾಜತಾಂತ್ರಿಕ ಮಟ್ಟದಲ್ಲಿ ಪಾಕಿಸ್ತಾನಕ್ಕೆ ನೀಡಲಾಗಿದೆ ಎಂದು ಅನಿಲ್ ಚೌಹಾಣ್ ಹೇಳಿದ್ದಾರೆ.

> **2014ರಲ್ಲಿ ನರೇಂದ್ರ ಮೋದಿಯವರು ಮೊದಲ ಬಾರಿಗೆ ಪ್ರಧಾನಿಯಾದಾಗ, ಆ ಪ್ರಮಾಣವಚನ ಸಮಾರಂಭಕ್ಕೆ ಅಂದಿನ ಅಲ್ಲಿನ ಪ್ರಧಾನಿ ನವಾಜ್ ಷರೀಫ್ ಅವರನ್ನು ಆಹ್ವಾನಿಸಿದ್ದರು. ಆದರೆ, ಪಾಕಿಸ್ತಾನ ದ್ವೇಷ ಸಾಧಿಸುತ್ತಲೇ ಬಂದಿದೆ. ಹಾಗಾಗಿ, ಆ ರಾಷ್ಟ್ರದ ಜೊತೆ ಅಂತರ ಕಾಯ್ದುಕೊಳ್ಳುವುದು ಸೂಕ್ತ ಎನ್ನುವ ನಿರ್ಧಾರಕ್ಕೆ ಬರಲಾಗಿದೆ**
>
> **-ಅನಿಲ್ ಚೌಹಾಣ್**

### ಕದನ ವಿರಾಮಕ್ಕೆ ಒಪ್ಪಿಗೆ

**1947ರಲ್ಲಿ ಭಾರತ ಮತ್ತು ಪಾಕಿಸ್ತಾನಕ್ಕೆ ಸ್ವಾತಂತ್ರ್ಯ ಬಂದ ನಂತರ ಹಲವು ಕ್ಷೇತ್ರಗಳಲ್ಲಿ ಪಾಕಿಸ್ತಾನ ಮುಂದಿತ್ತು. ಆದರೆ, ಭಾರತವು ಈಗ ಆರ್ಥಿಕತೆ, ಸಾಮಾಜಿಕತೆಯ ದೃಷ್ಟಿಯಿಂದ ವಿಶ್ವದ ಪ್ರಬಲ ಶಕ್ತಿಯಾಗಿ ಹೊಮ್ಮಿದೆ. ಇದು ನಮ್ಮ ನಿರಂತರ ಕಾರ್ಯತಂತ್ರದ ಭಾಗವಾಗಿದೆ, ಆಪರೇಷನ್ ಸಿಂಧೂರ್ ನಲ್ಲಿ ನಮ್ಮ ಗುರಿ ನಾವು ಮುಟ್ಟಿದ ನಂತರವಷ್ಟೇ ನಾವು ಕದನ ವಿರಾಮಕ್ಕೆ ಒಪ್ಪಿಕೊಂಡೆವು ಎಂದು ಅನಿಲ್ ಚೌಹಾಣ್ ಹೇಳಿದ್ದಾರೆ. ಭಾರತವು ಪಾಕಿಸ್ತಾನದ ಜೊತೆಗೆ ದ್ವಿಪಕ್ಷೀಯ ಸಂಬಂಧಗಳನ್ನು ಸುಧಾರಿಸಿಕೊಳ್ಳಲು ಹಲವು ಪ್ರಯತ್ನಗಳನ್ನು ಮಾಡಿವೆ.**

# ಉಷಾ ವ್ಯಾನ್ಸ್‌ಮಕ್ಕಳ ಮನಗೆದ್ದ ಮೋದಿ ಅಜ್ಜ



**ವಾಷಿಂಗ್ಟನ್:** ಕಳೆದ ಏಪ್ರಿಲ್‌ನಲ್ಲಿ ಭಾರತಕ್ಕೆ ನೀಡಿದ ಭೇಟಿಯನ್ನು ಅಮೆರಿಕದ ಎರಡನೇ ಮಹಿಳೆ ಉಷಾ ವ್ಯಾನ್ಸ್ ಅವರು ತಮ್ಮ ಕುಟುಂಬಕ್ಕೆ ಜೀವಮಾನದ ಪ್ರವಾಸ ಎಂದು ಬಣ್ಣಿಸಿದ್ದಾರೆ, ಅವರ ಮೂವರು ಚಿಕ್ಕ ಮಕ್ಕಳು ಪ್ರಧಾನಿ ನರೇಂದ್ರ ಮೋದಿಯವರನ್ನು ತಮ್ಮ ಅಜ್ಜ ಎಂದು ಮನಗಂಡಿದ್ದಾರೆ ಎಂದಿದ್ದಾರೆ. ಜೆ ಡಿ.ವ್ಯಾನ್ಸ್ ಏಪ್ರಿಲ್‌ನಲ್ಲಿ ಭಾರತಕ್ಕೆ ತಮ್ಮ ಮೊದಲ ಅಧಿಕೃತ ಭೇಟಿಯನ್ನು ಕೈಗೊಂಡರು ಮತ್ತು ಉಷಾ ವ್ಯಾನ್ಸ್ ಮತ್ತು ಅವರ ಮೂವರು ಚಿಕ್ಕ ಮಕ್ಕಳಾದ ಇವಾನ್, ವಿವೇಕ್ ಮತ್ತು ಮಿರಾಬೆಲ್ ಅವರೊಂದಿಗೆ ಇದ್ದರು. ಇದು ನಿಜವಾಗಿಯೂ ನಮಗೆ ಜೀವಮಾನದ ಪ್ರವಾಸವಾಗಿತ್ತು ಎಂದು ಉಷಾ ವ್ಯಾನ್ಸ್ ಹೇಳಿದರು.

ಅವರು ಯುಎಸ್-ಇಂಡಿಯಾ ಸ್ಟ್ರಾಟೆಜಿಕ್ ಪಾರ್ಟ್‌ನರ್‌ಶಿಪ್ ಫೋರಂ ನಾಯಕತ್ವ ಶೃಂಗ ಸಭೆಯ ಎಂಟನೇ ಆವೃತ್ತಿಯಲ್ಲಿ ನಡೆದ ಫೈರ್‌ಸೈಡ್ ಚಾಟ್ ನಲ್ಲಿ ಭಾರತಕ್ಕೆ ನೀಡಿದ ಭೇಟಿಯನ್ನು ನೆನಪಿಸಿಕೊಂಡರು. ವ್ಯಾನ್ಸ್ ದಂಪತಿಗಳು ಏ. 21-24 ರವರೆಗೆ ಭಾರತದಲ್ಲಿದ್ದರು ಮತ್ತು ಜೈ ಪುರ, ಆಗ್ರಾಕ್ಕೆ ಪ್ರಯಾಣಿಸುವ ಮೊದಲು ದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರನ್ನು ಭೇಟಿಯಾದರು. ಉಷಾ ವ್ಯಾನ್ಸ್ ಪ್ರಧಾನಿ ಮೋದಿ ಅವರನ್ನು ಭೇಟಿಯಾಗುವುದು ನಿಜವಾಗಿಯೂ ತುಂಬಾ ವಿಶೇಷವಾಗಿತ್ತು ಎಂದು ಒತ್ತಿ ಹೇಳಿದರು.

ನಮಗೆ ಮೊದಲು ಅವರನ್ನು ಭೇಟಿಯಾಗುವ ಅವಕಾಶ ಸಿಕ್ಕಿತ್ತು, ಎಂದು ಅವರು ಹೇಳಿದರು. ಪ್ಯಾರಿಸ್‌ನಲ್ಲಿ ಪ್ರಯಾಣಿಸುವಾಗ ನಿದ್ರೆಯಿಂದ ವಂಚಿತರಾಗಿದ್ದ ಅವರ ಮಕ್ಕಳು ಪ್ರಧಾನಿಯನ್ನು ನೋಡಿದಾಗ, ಬಿಳಿ ಗಡ್ಡ ಮತ್ತು ಬಿಳಿ ಕೂದಲಿನ ಭಾರತೀಯ ವ್ಯಕ್ತಿಯನ್ನು ನೋಡಿದರು ಮತ್ತು ಅವರು ತಕ್ಷಣ ಅವರನ್ನು ತಮ್ಮ ಅಜ್ಜ ವರ್ಗಕ್ಕೆ ಸೇರಿಸಿದರು. ಆದ್ದರಿಂದ ಅವರು ಅವ ರನ್ನು ತುಂಬಾ ಇಷ್ಟಪಡುತ್ತಾರೆ. ಅವರು ಅವರನ್ನು ಪ್ರೀತಿಸುತ್ತಾರೆ.

ಆ ದಿನ ನಮ್ಮ ಐದು ವರ್ಷದ ಮಗುವಿಗೆ ಹುಟ್ಟು ಹಬ್ಬದ ಉಡುಗೊರೆಯನ್ನು ನೀಡುವ ಮೂಲಕ ಅವರು ನಿಜವಾಗಿಯೂ ತಮ್ಮ ಸ್ಥಾನ ಮಾನವನ್ನು ಭದ್ರ ಪಡಿಸಿಕೊಂಡರು ಎಂದು ಅವರು ಹೇಳಿದರು. ವ್ಯಾನ್ಸ್ ಕುಟುಂಬವು ದೆಹಲಿಯಲ್ಲಿ ಪ್ರಧಾನಿ ಮೋದಿಯವರ ನಿವಾಸಕ್ಕೆ ಭೇಟಿ ನೀಡಿದಾಗ, ಅವರ ಮಕ್ಕಳು ಅವರ ಬಳಿಗೆ ಓಡಿಹೋಗಿ ಅವರನ್ನು ಅಪ್ಪಿಕೊಳ್ಳುತ್ತಿದ್ದರು ಎಂದು ಅವರು ನೆನಪಿಸಿಕೊಂಡರು. ಅವರು ಅವರಿಗೆ ನಂಬಲಾಗದಷ್ಟು ದಯೆ ಮತ್ತು ಉದಾರರಾಗಿದ್ದರು. ತಮ್ಮ ಪತಿ, ಪ್ರಧಾನಿ ನಡುವಿನ ಸಂಭಾಷಣೆ ಬಹಳ ಉತ್ಪಾದಕ ಮತ್ತು ಅವರು ಹೊಂದಿರುವ ವೈಯಕ್ತಿಕ ಸಂಬಂಧವನ್ನು ಗಟ್ಟಿಗೊಳಿಸಲು ಇದು ನಮಗೆ ನಿಜವಾದ ಅವಕಾಶವಾಗಿತ್ತು, ಅದು ಒಳ್ಳೆಯದಕ್ಕಾಗಿ ಮಾತ್ರ ಎಂದು ನಾನು ಭಾವಿಸುತ್ತೇನೆ.

> **ಸಾಂಕ್ರಾಮಿಕ ರೋಗ, ಪತಿಯ ರಾಜಕೀಯ ವೇಳಾಪಟ್ಟಿಯಿಂದಾಗಿ ತನ್ನ ಮಕ್ಕಳು ಹಿಂದೆಂದೂ ಭಾರತಕ್ಕೆ ಬಂದಿರಲಿಲ್ಲ. ಆದರೆ ಅವರು ಈ ದೇಶದ ಬಗ್ಗೆ, ಕಥೆಗಳು, ಆಹಾರ, ಅಜ್ಜಿಯರು, ಸ್ನೇಹಿತರೊಂದಿಗಿನ ಸಂಬಂಧಗಳ ಬಗ್ಗೆ ತುಂಬಾ ತಿಳಿದುಕೊಂಡು ಬೆಳೆದಿದ್ದಾರೆ. ಆದರೆ ಅವರು ಅದನ್ನು ಎಂದಿಗೂ ನೋಡಿರಲಿಲ್ಲ. ಆದ್ದರಿಂದ ಅವರ ದೃಷ್ಟಿಕೋನದಿಂದ ಇದು ಒಂದು ರೀತಿಯ ಮನಸ್ಸಿಗೆ ಮುದ ನೀಡುವಂತಿತ್ತು ಎಂದು ವ್ಯಾನ್ಸ್ ಹೇಳಿದರು.**

# ಅಮರಾವತಿ ಅಭಿವೃದ್ಧಿಗೆ 36 ಸಾವಿರ ಎಕರೆ ಭೂಮಿ ನೀಡಲು ರೈತರ ಸಮ್ಮತಿ



**ಅಮರಾವತಿ:** ಆಂಧ್ರಪ್ರದೇಶದ ಪುರಸಭೆ ಸಚಿವ ಪಿ. ನಾರಾಯಣ ಅವರು, ಹಸಿರು ವಲಯ ರಾಜಧಾನಿ ಅಮರಾವತಿಗೆ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ, ಸ್ಮಾರ್ಟ್ ಕೈಗಾರಿಕೆಗಳು ಮತ್ತು ಕ್ರೀಡಾ ನಗರವನ್ನು ನಿರ್ಮಿಸಲು ಎರಡನೇ ಹಂತದ ಭೂ ಸಂಗ್ರಹಕ್ಕಾಗಿ. ರೈತರು 36,000 ಎಕರೆ ಭೂಮಿಯನ್ನು ನೀಡಲು ಮುಂದೆ ಬಂದಿದ್ದಾರೆ ಎಂದು ಇಲ್ಲಿ ಹೇಳಿದ್ದಾರೆ.

ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಹೈದರಾಬಾದ್‌ನ ಶಂಶಾಬಾದ್ ವಿಮಾನ ನಿಲ್ದಾಣದಂತೆಯೇ ವಿಮಾನ ನಿಲ್ದಾಣವನ್ನು ನಿರ್ಮಿಸಲು ಟಿಡಿಪಿ ನೇತೃತ್ವದ ಎನ್‌ಡಿಎ ಸರ್ಕಾರಕ್ಕೆ 5,000 ಎಕರೆ ಭೂಮಿ, ಸ್ಮಾರ್ಟ್ ಕೈಗಾರಿಕೆಗಳು ಮತ್ತು ಅಂತರರಾಷ್ಟ್ರೀಯ ಕ್ರೀಡಾ ನಗರವನ್ನು ನಿರ್ಮಿಸಲು ತಲಾ 2,500 ಎಕರೆ ಭೂಮಿ ಅಗತ್ಯವಿದೆ ಎಂದು ತಿಳಿಸಿದರು. ಆದರೆ, ಸರ್ಕಾರ ಭೂಸ್ವಾಧೀನಕ್ಕೆ ಹೋಗಬೇಕೆ, ಭೂ ಸಂಗ್ರಹಕ್ಕೆ ಹೋಗಬೇಕೆ ಎಂಬುದರ ಕುರಿತು ಇನ್ನೂ ಯಾವುದೇ ನಿರ್ಧಾರ ತೆಗೆದು ಕೊಳ್ಳಲಾಗಿಲ್ಲ ಎಂದು ಅವರು ತಿಳಿಸಿದರು. ರೈತರ ಅಭಿಪ್ರಾಯವನ್ನು ಪಡೆಯಲು ಗ್ರಾಮ ಸಭೆಗಳನ್ನು ನಡೆಸಲಾಗುತ್ತಿದೆ ಎಂದು ಹೇಳಿದರು. ನಾರಾಯಣ ಅವರ ಪ್ರಕಾರ, ರೈತರು ಭೂ ಸಂಗ್ರಹದ ಆಯ್ಕೆಯತ್ತ ಆಕರ್ಷಿತರಾಗುತ್ತಿದ್ದಾರೆ. ಗ್ರೀನ್‌ಫೀಲ್ಡ್ ರಾಜಧಾನಿ ನಗರಕ್ಕಾಗಿ ರಾಜ್ಯ ಸರ್ಕಾರವು ಈಗಾಗಲೇ 54,000 ಎಕರೆ ಭೂಬ್ಯಾಂಕ್ ಅನ್ನು ಹೊಂದಿದ್ದು, ಇದು ಇನ್ನೂ ಮೂಲಸೌಕರ್ಯ, ನಿರ್ಮಾಣಗಳ ಮೂಲಕ ಸಂಪೂರ್ಣವಾಗಿ ಬಳಕೆಯಾಗಿಲ್ಲ ಮತ್ತು ಎರಡನೇ ಹಂತದ ಅಡಿಯಲ್ಲಿ ಹೆಚ್ಚುವರಿಯಾಗಿ 40,000 ಎಕರೆ ಭೂಮಿ ಯನ್ನು ಖರೀದಿಸಲು ಹೊರಟಿದೆ. ಏ. 15 ರಂದು, ಸಿಎಂ ಎನ್ ಚಂದ್ರಬಾಬು ನಾಯ್ಡು ಅವರು ಪಕ್ಕದ ಮಂಗಳಗಿರಿ, ತಡೆಪಲ್ಲಿ, ಗುಂಟೂರು, ವಿಜಯವಾಡವನ್ನು ಅಮರಾವತಿಯೊಂದಿಗೆ ಸಂಯೋಜಿಸುವ ಮೆಗಾ ಸಿಟಿ ರಚಿಸಲು ಉತ್ಸುಕರಾಗಿದ್ದಾರೆ ಎಂದು ನಾರಾಯಣ ಘೋಷಿಸಿದ್ದರು. ಇದಲ್ಲದೆ, ಸಿಎಂ ಅಧ್ಯಕ್ಷತೆಯಲ್ಲಿ ನಡೆದ 48ನೇ ರಾಜಧಾನಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಸಭೆಯು ಗ್ರೀನ್‌ಫೀಲ್ಡ್ ರಾಜಧಾನಿ ನಗರದ ಕೋರ್ ಕ್ಯಾಪಿಟಲ್ ಪ್ರದೇಶದಲ್ಲಿ ಐದು ಆಡಳಿತಾತ್ಮಕ ಟವರ್ ಗಳನ್ನು ನಿರ್ಮಿಸಲು ಎಲ್ 1 ಬಿಡ್ಡರ್‌ಗಳನ್ನು ದೃಢೀಕರಿಸಲು ನಿರ್ಧಾರ ತೆಗೆದುಕೊಂಡಿದೆ, ಈ ಟವರ್‌ಗಳ ಕೆಲಸ ಶೀಘ್ರದಲ್ಲೇ ಪ್ರಾರಂಭವಾಗಲಿದೆ ಎಂದು ನಾರಾಯಣ ಹೇಳಿದರು.

# ಸಿಕ್ಕಿಂನಲ್ಲಿ ಭೂಕುಸಿತ: ಹೆಲಿಕಾಪ್ಟರ್ ಮೂಲಕ 34 ಜನರ ರಕ್ಷಣೆ



**ಗ್ಯಾಂಗ್ಟಕ್:** ಉತ್ತರ ಸಿಕ್ಕಿಂನ ಛತೆನ್‌ನಲ್ಲಿ ಸಂಭವಿಸಿದ ಭೂಕುಸಿತದಲ್ಲಿ ಸಿಲುಕಿದ್ದ 34 ಜನರನ್ನು ಹೆಲಿಕಾಪ್ಟರ್ ಮೂಲಕ ರಕ್ಷಿಸಿ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಎರಡು ಎಂಐ-17 ವಿ5 ಹೆಲಿಕಾಪ್ಟರ್‌ಗಳು 34 ಜನರನ್ನು ಹೊತ್ತುಕೊಂಡು ಪಕ್ಯೊಂಗ್ ವಿಮಾನ ನಿಲ್ದಾಣದಲ್ಲಿ ಸುರಕ್ಷಿತವಾಗಿ ಇಳಿದು ರಕ್ಷಣಾ ಕಾರ್ಯಾಚರಣೆಯನ್ನು ಪೂರ್ಣಗೊಳಿಸಿದವು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಭೂಕುಸಿತದದಲ್ಲಿ ಹಲವರು ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸೇನಾ ಶಿಬಿರದ ಬಳಿ ಭೂಕುಸಿತ ಸಂಭವಿಸಿದ ಮಾಹಿತಿ ಬಂದ ತಕ್ಷಣ 23 ಎನ್‌ಡಿಆರ್‌ಎಫ್ ಸಿಬ್ಬಂದಿ ಸ್ಥಳಕ್ಕೆ ಧಾವಿಸಿದ್ದರು. ಘಟನೆಯಲ್ಲಿ ಮೂವರು ಸೇನಾ ಸಿಬ್ಬಂದಿ ಮೃತಪಟ್ಟಿದ್ದಾರೆ.

ಮೃತ ಸಿಬ್ಬಂದಿಯ ಶವಗಳನ್ನು ಹೊರತೆಗೆಯಲಾಗಿದ್ದು, ಇತರ ನಾಲ್ವರು ಸೈನಿಕರನ್ನು ರಕ್ಷಿಸಲಾಗಿದೆ, ಅವರಿಗೆ ಸಣ್ಣಪುಟ್ಟ ಗಾಯಗಳಾಗಿದ್ದು ಚಿಕಿತ್ಸೆ ಪಡೆಯುತ್ತಿದ್ದಾರೆ. ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ ಎಂದು ಅಧಿಕಾರಿ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಮೃತಪಟ್ಟ ಯೋಧರನ್ನು ಲಲ್ವಿಂದರ್ ಸಿಂಗ್, ಮನೀಷ್ ಠಾಕೂರ್, ಅಭಿಷೇಕ್ ಲಖಾಡ ಎಂದು ಗುರುತಿಸಲಾಗಿದೆ.

# ಕುತ್ತಿಗೆ ಮೇಲೆ ಮಂಡಿಯೂರಿ ಭಾರತೀಯನನ್ನು ಬಂಧಿಸಿದ ಪೊಲೀಸರು



**ಸಿಡ್ನಿ:** ಆಸ್ಟ್ರೇಲಿಯಾದಲ್ಲಿ ಭಾರತೀಯ ಮೂಲದ 42 ವರ್ಷದ ವ್ಯಕ್ತಿಯೊಬ್ಬರನ್ನು ಪೊಲೀಸರು ಬಂಧಿಸಲು ಯತ್ನಿಸಿದಾಗ ಅವರ ಕುತ್ತಿಗೆಗೆ ಮೊಣಕಾಲೂರಿದ ಘಟನೆ ನಡೆದಿದ್ದು, ಅವರ ಮೆದುಳಿಗೆ ಗಂಭೀರ ಗಾಯಗಳಾಗಿದ್ದು, ಅವರು ಕೋಮಾದಲ್ಲಿದ್ದಾರೆ. ಈ ಘಟನೆಯು ಅಮೆರಿಕದ ಮಿನ್ನಿಯಾ ಪೊಲಿಸ್‌ನಲ್ಲಿ ಜಾರ್ಜ್ ಫ್ಲಾಯ್ಡ್ ಹತ್ಯೆಯನ್ನು ನೆನಪಿಸುತ್ತದೆ. ಈ ಘಟನೆ ವ್ಯಾಪಕ ಆಕ್ರೋಶಕ್ಕೆ ಕಾರಣವಾಯಿತು. ಸ್ಥಳೀಯ ಮಾಧ್ಯಮಗಳು ಹಂಚಿಕೊಂಡಿರುವ ಘಟನೆಯ ವೀಡಿಯೊದಲ್ಲಿ ಗೌರವ್ ಕುಂಡಿ ಎಂಬ ವ್ಯಕ್ತಿಯನ್ನು ಅಡಿಲೇಡ್‌ನ ಪೂರ್ವ ಉಪ ನಗರಗಳಲ್ಲಿ ರಸ್ತೆಗೆ ಬಲವಂತವಾಗಿ ತಳ್ಳಲಾಗುತ್ತಿರು ವುದನ್ನು ತೋರಿಸ ಲಾಗಿದೆ. ಈ ವೇಳೆ ಗೌರವ್ ಕುಂಡಿ, ಅವರ ಸಂಗಾತಿ ಅಮೃತಪಾಲ್ ಕೌರ್ ತಮ್ಮ ಮುಗ್ಧತೆಯನ್ನು ಜೋರಾಗಿ ಪ್ರತಿಭಟಿಸುತ್ತಾರೆ. ನಾನು ಯಾವುದೇ ತಪ್ಪು ಮಾಡಿಲ್ಲ ಎಂದು ಕುಂಡಿ ಕೂಗುತ್ತಾರೆ, ಆದರೆ ಕೌರ್ ಪೊಲೀಸರು ಅನ್ಯಾಯವಾಗಿ ವರ್ತಿಸುತ್ತಿದ್ದಾರೆ ಎಂದು ಚಿತ್ರೀ ಕರಿಸಿ ಕೂಗುತ್ತಾರೆ.

ಎರಡು ಮಕ್ಕಳ ತಂದೆಯಾಗಿರುವ ಆ ವ್ಯಕ್ತಿಯನ್ನು ನೆಲಕ್ಕೆ ತಳ್ಳಿದ ನಂತರ ಪ್ರಜ್ಞೆ ಕಳೆದುಕೊಂಡರು, ಅವರ ಸಂಗಾತಿ ಅಧಿಕಾರಿಯೊಬ್ಬರು ಅವರ ಕುತ್ತಿಗೆಗೆ ಮೊಣಕಾಲಿನಿಂದ ಹೊಡೆದಿದ್ದಾರೆ ಎಂದು ಹೇಳಿದ್ದು, ಇದು 2020 ರಲ್ಲಿ ಅಮೆರಿಕದಲ್ಲಿ ಜಾರ್ಜ್ ಫ್ಲಾಯ್ಡ್ ಸಾವಿಗೆ ಹೋಲುತ್ತದೆ ಎಂದು ಆಸ್ಟ್ರೇಲಿಯಾ ಟುಡೇ ವರದಿ ಮಾಡಿದೆ.

ಕೌರ್ ಹೌದು, ಅವನು ಏನೂ ಮಾಡಿಲ್ಲ, ಎಂತಹ ಕೆಲಸ. ಓ ದೇವರೇ ಅವರು ಅನ್ಯಾಯ ಮಾಡುತ್ತಿದ್ದಾರೆ. ಎಂದು ಕಿರು ಚುತ್ತಿರುವುದನ್ನು ಕೇಳಬಹುದು ಆದಾಗ್ಯೂ, ಪೊಲೀಸರ ಅತಿರೇಕ ಮುಂದುವರೆ ದಿದೆ ಎಂದು ಆರೋಪಿಸಲಾಗಿದೆ. ತನ್ನ ಗಂಡನ ತಲೆ ಪೊಲೀಸ್ ವಾಹನಕ್ಕೆ ಡಿಕ್ಕಿ ಹೊಡೆದಿದೆ ಎಂದು ಮಹಿಳೆ ಮತ್ತಷ್ಟು ಹೇಳಿದರು, ಭಯಭೀತರಾಗಿ ಚಿತ್ರೀಕರಣ ನಿಲ್ಲಿಸಿದಾಗ ಅದನ್ನು ರೆಕಾರ್ಡ್ ಮಾಡಲು ಸಾಧ್ಯವಾಗಲಿಲ್ಲ.

ಆ ವ್ಯಕ್ತಿಯ ಸ್ಥಿತಿ ಹದಗೆಟ್ಟಾಗ, ಪೊಲೀಸ್ ಠಾಣೆಗೆ ಅಲ್ಲ, ಆಸ್ಪತ್ರೆಗೆ ಕರೆದೊಯ್ಯುವಂತೆ ಪೊಲೀಸರಲ್ಲಿ ಬೇಡಿಕೊಂಡಳು. ನಂತರ ಅವರನ್ನು ಆಸ್ಪತ್ರೆಗೆ ಸಾಗಿಸಲಾಯಿತು, ಅವರ ಸ್ಥಿತಿ ಗಂಭೀರವಾಗಿದೆ, ಅಲ್ಲಿ ಅವರು ಜೀವರಕ್ಷಕ ವ್ಯವಸ್ಥೆಯಲ್ಲಿದ್ದಾರೆ ಎಂದು ವರದಿಗಳು ತಿಳಿಸಿವೆ. ಅವರ ಮೆದುಳು ಸಂಪೂರ್ಣವಾಗಿ ಹಾನಿಗೊಳಗಾಗಿದೆ ಎಂದು ವೈದ್ಯರು ಹೇಳುತ್ತಿದ್ದಾರೆ. ಮೆದುಳು ಕೆಲಸ ಮಾಡಿದರೆ ಅವರು ಎಚ್ಚರಗೊಳ್ಳಬಹುದು, ಅವರು ಎಚ್ಚರಗೊಳ್ಳದಿರಬಹುದು ಎಂದು ಕೌರ್ ಸ್ಥಳೀಯ ಮಾಧ್ಯಮಗಳಿಗೆ ತಿಳಿಸಿದರು.

# ಜಗನ್ನಾಥನ ರಥಯಾತ್ರೆಗೆ ಒಡಿಶಾ ಪೊಲೀಸರಿಂದ ಭಾರಿ ಭದ್ರತೆ



**ಕಟಕ್:** ಈ ತಿಂಗಳ ಕೊನೆಯಲ್ಲಿ ನಡೆಯಲಿರುವ ಜಗನ್ನಾಥ ಸ್ವಾಮಿಯ ವಾರ್ಷಿಕ ರಥಯಾತ್ರೆಗೆ ಒಡಿಶಾ ಪೊಲೀಸರು ಬೃಹತ್ ಭದ್ರತಾ ವ್ಯವಸ್ಥೆಗಳನ್ನು ಸಿದ್ಧಪಡಿಸಿದ್ದಾರೆ. ಪೊಲೀಸ್ ಮಹಾ ನಿರ್ದೇಶಕ ವೈ ಬಿ ಖುರಾನಿಯಾ ಅವರು, ಗುಪ್ತ ಚರ, ಕಾನೂನು, ಸುವ್ಯವಸ್ಥೆ, ರೈಲು, ಕರಾವಳಿ ಭದ್ರತೆಯನ್ನು ನೋಡಿಕೊಳ್ಳುವವರು ಸೇರಿದಂತೆ ಉನ್ನತಪೊಲೀಸ್ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಸಭೆ ನಡೆಸಿದರು.

ಸಂಭವನೀಯ ಕಾಲ್ತುಳಿತದ ಪರಿಸ್ಥಿತಿ, ಅಪರಾಧಿಗಳು, ಭಕ್ತರ ಸೌಲಭ್ಯಗಳ ವಿರುದ್ಧ ಚಾಲನೆ ಮುಂತಾದ ಘಟನೆಗಳ ಬಗ್ಗೆ ವಿಶೇಷ ಗಮನ ಹರಿಸುವಂತೆ ಅವರು ಆದೇಶಿಸಿದರು. ಕೆ9 ಸ್ಕ್ವ್ಯಾಡ್, ಶ್ವಾನ ದಳದ ನಿಯೋಜನೆಯ ಬಗ್ಗೆಯೂ ಡಿಜಿಪಿ ಒತ್ತಿ ಹೇಳಿದರು ಎಂದು ಅಧಿಕಾರಿ ಹೇಳಿದರು. ಸಿಎಂ ಮೋಹನ್ ಚರಣ್ ಮಾಝಿ ಅವರು ಎನ್‌ಡಿಎ ಆಡಳಿ ತದ ರಾಜ್ಯಗಳ ಮುಖ್ಯಮಂತ್ರಿಗಳನ್ನು ರಥ ಯಾತ್ರೆಯ ಸಮಯದಲ್ಲಿ ಪುರಿಗೆ ಭೇಟಿ ನೀಡಲು ಆಹ್ವಾನಿಸಿರುವುದರಿಂದ ಹಲವಾರು ಕೇಂದ್ರ ಸಚಿವರು, ಅನೇಕ ವಿವಿಐಪಿಗಳು ರಥ ಯಾತ್ರೆಯ ಸಮಯದಲ್ಲಿ ಪುರಿಗೆ ಭೇಟಿ ನೀಡುವ ಸಾಧ್ಯತೆಯಿದೆ. ಕಳೆದ ವರ್ಷ ರಾಷ್ಟ್ರಪತಿ ದ್ರೌಪದಿ ಮುರ್ಮು ಪುರಿಯಲ್ಲಿ ರಥಯಾತ್ರೆ ಉತ್ಸವವನ್ನು ವೀಕ್ಷಿಸಿದ್ದರು.ನಗರದ ವಿವಿಧ ಪ್ರಮುಖ ಸ್ಥಳಗಳಲ್ಲಿ ಸಿಸಿಟಿವಿ ಅಳವಡಿಕೆ,ರಸ್ತೆ ವಿಭಜಕಗಳು, ಸಂಚಾರ ನಿರ್ವಹಣೆ ಗಾಗಿ ಸಂಚಾರ ವಲಯಗಳು, ನಗರದ ವಿವಿಧ ಸ್ಥಳಗಳಲ್ಲಿ ಸಾಕಷ್ಟು ಪಾರ್ಕಿಂಗ್ ವ್ಯವಸ್ಥೆಗಳು, ಕ್ರಮಬದ್ಧ ಸಂಚಾರ ವ್ಯವಸ್ಥೆಯ ನಿರ್ವಹಣೆ ಮತ್ತು ಇತರ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಅದೇ ರೀತಿ, ಸಮುದ್ರ ತೀರದಲ್ಲಿ ಪೊಲೀಸರಿಂದ ಗಸ್ತು ತಿರುಗುವುದು, ಅಲ್ಲಿ ತಾತ್ಕಾಲಿಕ ಪೊಲೀಸ್ ಠಾಣೆಗಳನ್ನು ತೆರೆಯುವ ಬಗ್ಗೆಯೂ ವಿವರವಾಗಿ ಚರ್ಚಿಸಲಾಯಿತು. ಸುಮಾರು ಹದಿನೈದು ದಿನಗಳ ಕಾಲ ಆಚರಿಸಲಾಗುವ ರಥಯಾತ್ರೆ ಉತ್ಸವದ ಸಮಯದಲ್ಲಿ ಒಡಿಶಾ ಪೊಲೀಸರು ಲಕ್ಷಾಂತರ ಭಕ್ತರ ಸಭೆಯನ್ನು ನಿರೀಕ್ಷಿಸುತ್ತಾರೆ.

ಜೂನ್ 11 ರಂದು ಭಗವಂತನ ಸ್ನಾನೋತ್ಸವ ಸ್ನಾನಯಾತ್ರೆ ನಡೆಯಲಿದ್ದು, ಜೂನ್ 27ರಂದು ರಥಯಾತ್ರೆ, ರಥ ಎಳೆಯುವಿಕೆಯನ್ನು ನಿಗದಿ ಪಡಿಸಲಾಗಿದೆ. ರಥ ಎಳೆಯುವ ಒಂದು ದಿನ ಮೊದಲು ಜೂನ್ 26 ರಂದು ಅನಬ ಜೇಬನ್ ದರ್ಶನಲ್ಲಿ ದಿನದಂದು ಪುರಿಯಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರುತ್ತಾರೆ. ಜುಲೈ 1 ರಂದು ಹೇರಾ ಪಂಚಮಿ ಉತ್ಸವ ನಡೆಯಲಿದ್ದು, ಜು. 4 ರಂದು ಸಂಧ್ಯಾ ದರ್ಶನ, ಜುಲೈ 5 ರಂದು ಬಹುಧ ಯಾತ್ರೆ ನಡೆಯಲಿದೆ. ಜುಲೈ 6 ರಂದು ಸುನ ಬೇಷ , ಜುಲೈ 7 ರಂದು ಅಧರ್ಪಣ ಆಚರಣೆ, ಅಂತಿಮವಾಗಿ ಜು. 8 ರಂದು ನೀಲಾದ್ರಿ ಬಿಜೆ ರಥ ಯಾತ್ರೆಯ ಉತ್ಸವದ ಅಂತ್ಯವನ್ನು ಸೂಚಿಸುತ್ತವೆ.

> **ಜಿಲ್ಲಾ ಆಡಳಿತದ ಸಹಯೋಗದೊಂದಿಗೆ ಸುಗಮ ಸಂಚಾರ, ಬ್ಯಾರಿಕೇಡ್ ವ್ಯವಸ್ಥೆ ಮತ್ತು ವಿವಿಧ ಸಮಸ್ಯೆಗಳ ತ್ವರಿತ ಪರಿಹಾರವನ್ನು ಖಚಿತಪಡಿಸಿಕೊಳ್ಳಲು ಡಿಜಿಪಿ ನಿರ್ದೇಶನ ನೀಡಿದರು. ತುರ್ತು ಪರಿಸ್ಥಿತಿಗಳನ್ನು ನಿಭಾಯಿಸುವ ವಿಷಯದ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಗಿದೆ ಎಂದು ಅಧಿಕಾರಿ ಹೇಳಿದರು.**

# ಪಾಕ್‌ಗೆ ಮಾಹಿತಿ ನೀಡುತ್ತಿದ್ದ ದೇಶದ್ರೋಹಿಯ ಬಂಧನ



**ಚಂಡೀಗಢ:** ಆಪರೇಷನ್ ಸಿಂಧೂರ್ ಸಮಯದಲ್ಲಿ ಸೇನೆಯ ಚಲನವಲನಗಳಿಗೆ ಸಂಬಂಧಿಸಿದ ಸೂಕ್ಷ್ಮ ಮಾಹಿತಿಯನ್ನು ಪಾಕಿಸ್ತಾನಿ ಗುಪ್ತಚರ ಕಾರ್ಯಕರ್ತರೊಂದಿಗೆ ಹಂಚಿಕೊಂಡ ಆರೋಪದ ಮೇಲೆ ಪಂಜಾಬ್ ತರಣ್ ತರಣ್ ಜಿಲ್ಲೆಯ ವ್ಯಕ್ತಿಯೊಬ್ಬನನ್ನು ಬಂಧಿಸಲಾಗಿದೆ ಎಂದು ಉನ್ನತ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪಾಕಿಸ್ತಾನಿ ಗುಪ್ತಚರ ಕಾರ್ಯಕರ್ತರೊಂದಿಗೆ ಹಂಚಿಕೊಂಡ ಮಾಹಿತಿಯನ್ನು ಒಳಗೊಂಡ ಮೊಬೈಲ್ ಫೋನ್ ಅನ್ನು ಸಹ ಪೊಲೀಸರು ವಶಪಡಿಸಿಕೊಂಡಿದ್ದಾರೆ.ಆರೋಪಿ ಪಾಕಿಸ್ತಾನದ ಗುಪ್ತಚರ ಸಂಸ್ಥೆ ಇಂಟರ್‌ಸರ್ವೀಸಸ್ ಇಂಟೆಲಿಜೆನ್ಸ್ ನೊಂದಿಗೆ ಸಂಪರ್ಕದಲ್ಲಿದ್ದರು, ಸೂಕ್ಷ್ಮ ಮಾಹಿತಿಯನ್ನು ರವಾನಿಸಲು ಹಣವನ್ನು ಸಹ ಪಡೆದಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಯನ್ನು ತರಣ್ ಮೊಹಲ್ಲಾ ರೋಡುಪುರದ ನಿವಾಸಿ ಗಗನ್‌ದೀಪ್ ಸಿಂಗ್ ಅಲಿಯಾಸ್ ಗಗನ್ ಎಂದು ಗುರುತಿಸಲಾಗಿದೆ ಎಂದು ಪೊಲೀಸ್ ಮಹಾನಿರ್ದೇಶಕ ಗೌರವ್ ಯಾದವ್ ತಿಳಿಸಿದ್ದಾರೆ. ತರಣ್ ತರಣ್ ಪೊಲೀಸರು, ಪೊಲೀಸ್ ಕೌಂಟರ್ ಇಂಟೆಲಿಜೆನ್ಸ್ ವಿಭಾಗದ ಜಂಟಿ ಕಾರ್ಯಾಚರಣೆಯಲ್ಲಿ ಆತನನ್ನು ಬಂಧಿಸಲಾಗಿದೆ ಬಂಧಿತ ಆರೋಪಿಗಳು ಪಾಕಿಸ್ತಾನ ಐಎಸ್‌ಐ, ಗೋಪಾಲ್ ಸಿಂಗ್ ಚಾವ್ಲಾ ಅವರೊಂದಿಗೆ ಸಂಪರ್ಕದಲ್ಲಿದ್ದರು. ಆಪರೇಷನ್ ಸಿಂಧೂರ್ ಸಮಯದಲ್ಲಿ ಸೇನಾ ಚಲನವಲನಗಳ ಬಗ್ಗೆ ಸೂಕ್ಷ್ಮ ಮಾಹಿತಿಯನ್ನು ಹಂಚಿಕೊಂಡಿದ್ದರು ಎಂದು ಡಿಜಿಪಿ ಎಕ್ಸ್‌ನಲ್ಲಿ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಆರೋಪಿಗಳು ಪಡೆಗಳ ನಿಯೋಜನೆ, ಕಾರ್ಯತಂತ್ರದ ಸ್ಥಳಗಳು ಸೇರಿದಂತೆ ವರ್ಗೀಕೃತ ವಿವರಗಳನ್ನು ಹಂಚಿಕೊಳ್ಳುವಲ್ಲಿ ನಿರತರಾಗಿದ್ದರು ಎಂದು ತನಿಖೆಗಳು ತಿಳಿಸಿವೆ. ಇದು ರಾಷ್ಟ್ರೀಯ ಭದ್ರತೆಗೆ ಅಪಾಯವನ್ನುಂಟುಮಾಡುತ್ತದೆ.

ಗಗನ್‌ದೀಪ್ ಕಳೆದ ಐದು ವರ್ಷಗಳಿಂದ ಖಲಿಸ್ತಾನಿ ಬೆಂಬಲಿಗ ಗೋಪಾಲ್ ಸಿಂಗ್ ಚಾವ್ಲಾ ಅವರೊಂದಿಗೆ ಸಂಪರ್ಕದಲ್ಲಿದ್ದರು, ಅವರ ಮೂಲಕ ಅವರನ್ನು ಪಿಐಒ ಗಳಿಗೆ ಪರಿಚಯಿಸಲಾಯಿತು ಎಂದು ಯಾದವ್ ಹೇಳಿದರು. ಅವರು ಭಾರತೀಯ ಚಾನೆಲ್‌ಗಳ ಮೂಲಕ ಪಿಐಒಗಳಿಂದ ಪಾವತಿಗಳನ್ನು ಸಹ ಪಡೆದರು ಎಂದು ಅವರು ಹೇಳಿದರು. ಪಿಐಒಗಳೊಂದಿಗೆ ಹಂಚಿಕೊಂಡ ಗುಪ್ತಚರ ಮಾಹಿತಿಯನ್ನು ಒಳಗೊಂಡಿರುವ ಮೊಬೈಲ್ ಫೋನ್, 20 ಕ್ಕೂ ಹೆಚ್ಚು ಐಎಸ್‌ಐ ಸಂಪರ್ಕಗಳ ವಿವರಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಅವರು ಹೇಳಿದರು.

ಇತರ ಸಂಪರ್ಕಗಳನ್ನು ಪತ್ತೆಹಚ್ಚಲು, ಈ ಬೇಹುಗಾರಿಕೆ ಜಾಲದ ಸಂಪೂರ್ಣ ವ್ಯಾಪ್ತಿಯನ್ನು ಸ್ಥಾಪಿಸಲು ಸಂಪೂರ್ಣ ಹಣಕಾಸು, ತಾಂತ್ರಿಕ ತನಿಖೆಗಳು ನಡೆಯುತ್ತಿವೆ ಎಂದು ಡಿಜಿಪಿ ಹೇಳಿದರು.ತರಣ್ ತರಣ್ ಪೊಲೀಸ್ ಠಾಣೆಯಲ್ಲಿ ಅಧಿಕೃತ ರಹಸ್ಯ ಕಾಯ್ದೆಯಡಿ ಎಫ್‌ಐಆರ್ ದಾಖಲಿಸಲಾಗಿದ್ದು, ಹೆಚ್ಚಿನ ತನಿಖೆ ಪ್ರಗತಿಯಲ್ಲಿದೆ ಎಂದು ಅವರು ಹೇಳಿದರು. ಪಂಜಾಬ್ ಪೊಲೀಸರು ರಾಷ್ಟ್ರದ ಸಾರ್ವಭೌಮತೆ, ಸಮಗ್ರತೆಯನ್ನು ಕಾಪಾಡಲು ಬದ್ಧರಾಗಿದ್ದಾರೆ, ರಾಷ್ಟ್ರವಿರೋಧಿ ಚಟುವಟಿಕೆಗಳಲ್ಲಿ ಭಾಗಿಯಾಗಿರುವವರ ವಿರುದ್ಧ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತಾರೆ ಎಂದರು.

# ಹೊಸ ವಿವಾದ ಸೃಷ್ಟಿಸಿದ ರಾಹುಲ್ ಗಾಂಧಿ

## ಶೂ ಧರಿಸಿ ಇಂದಿರಾ ಗಾಂಧಿ ಪ್ರತಿಮೆಗೆ ರಾಹುಲ್ ಗಾಂಧಿ ಪುಷ್ಪ ನಮನ; ಸಂಸ್ಕೃತಿಹೀನ ಎಂದ ಬಿಜೆಪಿ



**ಭೋಪಾಲ್:** ಮಧ್ಯಪ್ರದೇಶದಲ್ಲಿ ಪಕ್ಷ ಸಂಘಟನೆಗೆ ಒತ್ತು ನೀಡುವ ಸಂಘಟನ್ ಸೃಜನ್ ಅಭಿಯಾನ್‌ಗೆ ಚಾಲನೆ ನೀಡಿರುವ ಕಾಂಗ್ರೆಸ್, ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಹೊಸದೊಂದು ವಿವಾದದಲ್ಲಿ ಸಿಲುಕಿದ್ದಾರೆ.

ಪ್ರಮುಖ ಸಭೆಗಳ ಸರಣಿಗಾಗಿ ಮಧ್ಯಪ್ರದೇಶ ಕಾಂಗ್ರೆಸ್ ಪ್ರಧಾನ ಕಚೇರಿಗೆ ಪ್ರವೇಶಿಸುವ ಮೊದಲು, ರಾಹುಲ್ ಗಾಂಧಿ ಅವರು ತಮ್ಮ ಅಜ್ಜಿ, ಮಾಜಿ ಪ್ರಧಾನಿ ಇಂದಿರಾ ಗಾಂಧಿ ಯವರ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿದರು. ಆದರೆ ಪುಷ್ಪ ನಮನದ ವೇಳೆ ಅವರು ತಮ್ಮ ಪಾದರಕ್ಷೆಗಳನ್ನು ತೆಗೆಯದಿರುವುದು ಇದೀಗ ವಿವಾದಕ್ಕೆ ಕಾರಣವಾಗಿದೆ. ರಾಹುಲ್ ಗಾಂಧಿ ಇತ್ತೀಚಿಗೆ ಗೋಡ್ಸೆ, ಸಾವರ್ಕರ್ ರಕ್ತ ಸಂಬಂಧಿಗಳು ಎಂದು ಅಫಿಡವಿಟ್ ಸಲ್ಲಿಸಿ ವಿವಾದ ಸೃಷ್ಟಿಸಿದ್ದರು.

ಹೌದು, ರಾಹುಲ್ ಗಾಂಧಿ ಅವರು ಇಂದಿರಾ ಗಾಂಧಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಸಂದರ್ಭದಲ್ಲಿ, ತಮ್ಮ ಶೂಗಳನ್ನು ತೆಗೆಯದಿರುವುದು ಬಿಜೆಪಿಗೆ ಹೊಸ ಅಸ್ತ್ರವನ್ನು ಒದಗಿಸಿದೆ. ರಾಹುಲ್ ಗಾಂಧಿ ಅವರಿಗೆ ಭಾರತೀಯ ಸಂಸ್ಕೃತಿಯ ಬಗ್ಗೆ ಕಿಂಚಿತ್ತೂ ಜ್ಞಾನವಿಲ್ಲ ಎಂದು ಬಿಜೆಪಿ ಹರಿಹಾಯ್ದಿದೆ. ರಾಹುಲ್ ಸಾಮಾಜಿಕ ಜಾಲತಾಣಗಳಲ್ಲೂ ಟ್ರೋಲ್‌ಗೆ ತುತ್ತಾಗಿದ್ದಾರೆ. ಭೋಪಾಲ್‌ನಲ್ಲಿ ಪಕ್ಷದ ಆಂತರಿಕ ಕಾರ್ಯತಂತ್ರ, ಸಭೆಗಳಲ್ಲಿ ಭಾಗವಹಿಸಿರುವ ರಾಹುಲ್ ಗಾಂಧಿ, ಆ ಬಳಿಕ ಇಲ್ಲಿನ ರವೀಂದ್ರ ಭವನದಲ್ಲಿ ಜಿಲ್ಲಾ, ಬ್ಲಾಕ್ ಅಧ್ಯಕ್ಷರ ಸಾಂಸ್ಥಿಕ ಸಮಾವೇಶವನ್ನು ಉದ್ದೇಶಿಸಿ ಮಾತ ನಾಡಲಿದ್ದಾರೆ.

ರಾಹುಲ್ ಗಾಂಧಿ ತಮ್ಮ ಅಜ್ಜಿ ಇಂದಿರಾ ಗಾಂಧಿ ಅವರಿಗೆ ಗೌರವ ಸಲ್ಲಿಸುವಾಗ ತಮ್ಮ ಶೂಗಳನ್ನು ತೆಗೆಯಲಿಲ್ಲ. ಅವರ ನಡೆ ನಮ್ಮ ಸಾಂಸ್ಕೃತಿಕ ಮೌಲ್ಯಗಳಿಗೆ ವಿರುದ್ಧವಾಗಿದೆ. ಅವರು ಅಂತಹ ವಿಷಯಗಳ ಬಗ್ಗೆ ಸ್ವಲ್ಪ ಹೆಚ್ಚು ಜಾಗರೂಕರಾಗಿರಬೇಕು ಎಂದು ಮಧ್ಯ ಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ಅಸಮಾಧಾನ ಹೊರಹಾಕಿದ್ದಾರೆ.ಇದೇ ವಿಚಾರವಾಗಿ ಮಾತನಾಡುರುವ ಬಿಜೆಪಿ ನಾಯಕ ಹಿತೇಶ್ ವಾಜಪೇಯಿ, ತಮ್ಮ ಅಜ್ಜಿಗೆ ಪುಷ್ಪ ನಮನ ಸಲ್ಲಿಸುವಾಗ ಶೂಗಳನ್ನು ತೆಗೆಯದ ವ್ಯಕ್ತಿ, ಭಾರತ ಮಾತೆಯ ಗೌರವವನ್ನು ಹೇಗೆ ಎತ್ತಿ ಹಿಡಿಯಲು ಸಾಧ್ಯ? ಎಂದು ಪ್ರಶ್ನಿಸಿದ್ದಾರೆ. ಒಬ್ಬ ವ್ಯಕ್ತಿಯ ಸಂಸ್ಕೃತಿಯು ಅವರ ಭಾವನೆಗಳು, ಉದ್ದೇಶಗಳಲ್ಲಿ ಪ್ರತಿಫಲಿಸುತ್ತದೆ. ಅವರು ತಮ್ಮ ಪೂರ್ವಜರನ್ನು ಎಷ್ಟು ನೆನಪಿಸಿಕೊಳ್ಳುತ್ತಾರೆ, ಗೌರವಿಸುತ್ತಾರೆ, ಅವರು ತಮ್ಮ ಪರಂಪರೆಯನ್ನು ಹೇಗೆ ಎತ್ತಿಹಿಡಿಯುತ್ತಾರೆ ಎಂಬುದು ಮುಖ್ಯವಾಗುತ್ತದೆ. ರಾಹುಲ್ ಗಾಂಧಿ ಅವರಲ್ಲಿ ಈ ಎಲ್ಲಾ ಗುಣಗಳೂ ಇವೆ. ಇತರರನ್ನು ಪ್ರಶ್ನಿಸುವ ಮೊದಲು, ಬಿಜೆಪಿ ತನ್ನ ಮುಖವನ್ನು ಕನ್ನಡಿಯಲ್ಲೊಮ್ಮೆ ನೋಡಿಕೊಳ್ಳುವುದು ಒಳಿತು ಅಧ್ಯಕ್ಷ ಮಿತೇಂದ್ರ ದರ್ಶನ್ ಸಿಂಗ್ ತಿರುಗೇಟು ನೀಡಿದ್ದಾರೆ.

> **ಏನಾಯ್ತು?**
>
> **ರಾಹುಲ್ ಗಾಂಧಿ ಅವರು ಮಧ್ಯಪ್ರದೇಶ ಕಾಂಗ್ರೆಸ್ ಪ್ರಧಾನ ಕಚೇರಿಗೆ ಪ್ರವೇಶಿಸುವ ಮೊದಲು, ತಮ್ಮ ಅಜ್ಜಿ ಇಂದಿರಾ ಗಾಂಧಿ ಅವರ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಿದರು. ಗಡಿಬಿಡಿಯಲ್ಲೇ ಕಾರಿನಿಂದ ಇಳಿದು ಬಂದ ರಾಹುಲ್ ಗಾಂಧಿ, ತಮ್ಮ ಶೂಗಳನ್ನು ಕಳಚದೇ ಇಂದಿರಾ ಗಾಂಧಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದರು.**

### ಕಾಂಗ್ರೆಸ್ ಪ್ರತಿಕ್ರಿಯೆ

**ಇನ್ನು ಬಿಜೆಪಿ ಆರೋಪಗಳಿಗೆ ತೀಕ್ಷ್ಣವಾಗಿ ಪ್ರತಿಕ್ರಿಯೆ ನೀಡಿರುವ ಕಾಂಗ್ರೆಸ್, ಬಿಜೆಪಿಯ ಮನಸ್ಥಿತಿ ಅತ್ಯಂತ ಸಂಕುಚಿತವಾಗಿದೆ. ರಾಷ್ಟ್ರೀಯ ತ್ರಿವರ್ಣ ಧ್ವಜದ ಬದಲಿಗೆ ತನ್ನದೇ ಆದ ಧ್ವಜವನ್ನು ಹೊಂದಿರುವ ಆರ್‌ಎಸ್‌ಎಸ್ ಬಗ್ಗೆ ತುಟಿ ಬಿಚ್ಚದ ಬಿಜೆಪಿ, ರಾಹುಲ್ ಗಾಂಧಿ ಕೇವಲ ಶೂ ಬಿಚ್ಚಿಲ್ಲ ಎಂಬ ಕಾರಣಕ್ಕೆ ವಾಗ್ದಾಳಿ ನಡೆಸುತ್ತಿರುವುದು ನಾಚಿಕಗೇಡಿನ ಸಂಗತಿ ಎಂದು ಕಿಡಿಕಾರಿದೆ.**

## ಮಿನಿ ನ್ಯೂಸ್

### ಪಾಕ್ ಜೈಲಿನಿಂದ 200ಕ್ಕೂ ಹೆಚ್ಚು ಕೈದಿಗಳು ಪರಾರಿ

**ಕರಾಚಿ:** ಸ್ಥಳಾಂತರಿಸುವ ಸಮಯದಲ್ಲಿ ಉಂಟಾದ ಅವ್ಯವಸ್ಥೆಯಲ್ಲಿ ಸುಮಾರು 216 ಕೈದಿಗಳು ಪಾಕಿಸ್ತಾನದ ಕರಾಚಿ ಜೈಲಿನಿಂದ ಪರಾರಿಯಾಗಿದ್ದಾರೆ. ಕರಾಚಿಯ ಮಾಲಿರ್ ಜೈಲಿನಲ್ಲಿ ಕಳೆದ ರಾತ್ರಿ ನಡೆದ ಈ ಘಟನೆಯಲ್ಲಿ ಒಬ್ಬ ಕೈದಿ ಸಾವನ್ನಪ್ಪಿದರು ಮತ್ತು ಮೂವರು ರಕ್ಷಣಾ ಸಿಬ್ಬಂದಿ ಮತ್ತು ಒಬ್ಬ ಜೈಲು ಸಿಬ್ಬಂದಿ ಗಾಯಗೊಂಡಿದ್ದಾರೆ. ಎಂದು ಜಿಯೋ ನ್ಯೂಸ್ ವರದಿ ಮಾಡಿದೆ. ಜೈಲು ಅಧಿಕಾರಿಗಳ ಪ್ರಕಾರ, 80 ಕ್ಕೂ ಹೆಚ್ಚು ಕೈದಿಗಳನ್ನು ಮರಳಿ ವಶಪಡಿಸಿಕೊಳ್ಳಲಾಗಿದೆ. ಕಳೆದ 24 ಗಂಟೆಗಳಲ್ಲಿ ಕರಾಚಿಯಲ್ಲಿ ಸರಣಿ ಭೂಕಂಪಗಳು ಸಂಭವಿಸಿವೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಭೂಕಂಪನ ಸಂಭವಿಸಿದ ಸಮಯದಲ್ಲಿ 600ಕ್ಕೂ ಹೆಚ್ಚು ಕೈದಿಗಳನ್ನು ಅವರ ಬ್ಯಾರಕ್‌ಗಳಿಂದ ಹೊರಗೆ ಕರೆದೊಯ್ಯಲಾಗಿದೆ ಎಂದು ಜೈಲು ಸೂಪರಿಂಟೆಂಡೆಂಟ್ ಅರ್ಷದ್ ಶಾ ಹೇಳಿದ್ದಾರೆ. ಇದರ ಅವಕಾಶ ಪಡೆದು,ಅವ್ಯವಸ್ಥೆಯ ನಡುವೆ, 216 ಮಂದಿ ಪರಾರಿಯಾಗುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಶಾ ಹೇಳಿದ್ದಾರೆ. 135 ಕ್ಕೂ ಹೆಚ್ಚು ಕೈದಿಗಳು ತಲೆಮರೆಸಿ ಕೊಂಡಿದ್ದು ಶೋಧ ಕಾರ್ಯಗಳು ಮುಂದುವರೆದಿವೆ ಎಂದು ಅವರು ಹೇಳಿದರು. ಉಳಿದ ಪರಾರಿಯಾದವರನ್ನು ಪತ್ತೆಹಚ್ಚಲು ಕಾನೂನು ಜಾರಿ ಅಧಿಕಾರಿಗಳು ಜಂಟಿ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದಾರೆ. ಸಿಂಧ್‌ನ ಗೃಹ ಸಚಿವ ಜಿಯಾ-ಉಲ್-ಹಸನ್ ಲಾಂಜಾರ್ ಈ ಘಟನೆಯನ್ನು ಇತ್ತೀಚಿನ ವರ್ಷಗಳಲ್ಲಿ ಅತ್ಯಂತ ಗಂಭೀರ ಜೈಲ್ ಬ್ರೇಕ್ ಎಂದು ಕರೆದಿದ್ದಾರೆ.

### ಜಾರ್ಖಂಡ್ : ಶಸ್ತ್ರಾಸ್ತ್ರ, ಮದ್ದುಗುಂಡು ಹೊಂದಿದ್ದ ಮೂವರ ಬಂಧನ

**ಜಮ್‌ಶೆಡ್‌ಪುರ:** ಜಾರ್ಖಂಡ್‌ನ ಜಮ್‌ಶೆಡ್‌ಪುರ ನಗರದಲ್ಲಿ ಮೂವರನ್ನು ಬಂಧಿಸಲಾಗಿದೆ, ಅವರ ಬಳಿಯಿದ್ದ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಖಚಿತ ಸುಳಿವಿನ ಮೇರೆಗೆ ಕಾದ್ಮಾ ಪೊಲೀಸ್ ಠಾಣೆ ಪ್ರದೇಶದ ಖಾರ್ಕೈ ನದಿಯ ಪಕ್ಕದಲ್ಲಿರುವ ರಾಮನಗರದ ಮೆರೈನ್ ಡ್ರೈವ್ ರಸ್ತೆಯ ಮೇಲೆ ದಾಳಿ ನಡೆಸಿದ ಪೊಲೀಸರು, ತಪ್ಪಿಸಿಕೊಳ್ಳಲು ಯತ್ನಿಸುತ್ತಿದ್ದ ಮೂವರನ್ನು ಬೆನ್ನಟ್ಟಿ ಬಂಧಿಸಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ನಗರ) ಕುಮಾರ್ ಶಿವಶಿಶ್ ತಿಳಿಸಿದ್ದಾರೆ.

ಶಸ್ತ್ರಾಸ್ತ್ರ ವ್ಯಾಪಾರಿ ಶಾರುಖ್ ಖಾನ್ (29) ಅವರಿಂದ ಬಂದೂಕು ಖರೀದಿಸಲು ಸ್ಥಳಕ್ಕೆ ಬಂದಿದ್ದರು. ಮೂವರಲ್ಲಿ, ಲಲಿತ್ ಯಾದವ್ (33) ಮತ್ತು ರಾಕೇಶ್ ಕುಮಾರ್ (30) ಎಂದು ಗುರುತಿಸಲಾದ ಇಬ್ಬರು ಖರೀದಿದಾರರು ಪೊಲೀಸರು ಎರಡು ದೇಶೀಯ ನಿರ್ಮಿತ ಪಿಸ್ತೂಲ್‌ಗಳು ಮತ್ತು ಮೂರು ಕಾರ್ಟ್ರಿಡ್ಜ್‌ಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಅವರು ಹೇಳಿದರು. ಖಾನ್ ಕ್ರಿಮಿನಲ್ ಹಿನ್ನೆಲೆಗಳನ್ನು ಹೊಂದಿದ್ದು, ಅವರ ವಿರುದ್ಧ ಈಗಾಗಲೇ ಪ್ರಕರಣ ದಾಖಲಿಸಲಾಗಿದೆ ಎಂದು ಎಸ್‌ಪಿ ಹೇಳಿದರು. ಶಸ್ತ್ರಾಸ್ತ್ರಗಳ ಮೂಲವನ್ನು ಕಂಡುಹಿಡಿಯಲು ಪೊಲೀಸ್ ತನಿಖೆ ನಡೆಯುತ್ತಿದೆ ಎಂದು ಅವರು ಹೇಳಿದರು. ಶಸ್ತ್ರಾಸ್ತ್ರ ಕಾಯ್ದೆಯ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ಹೇಳಿದರು.

### ನಿಷೇಧಿತ ಸಂಘಟನೆ ಜಮಾತ್‌ಉದ್-ದಾವಾ ಗ್ಯಾಲಿಯಲ್ಲಿ ಪಾಕ್ ಸ್ಪೀಕರ್ ಭಾಗಿ

**ಲಾಹೋರ್:** ಮುಂಬೈ ಭಯೋತ್ಪಾದಕ ದಾಳಿಯ ಮುಖ್ಯಸಂಚುಕೋರ ಹಫೀಜ್ ಸಯೀದ್ ನೇತೃತ್ವದ ನಿಷೇಧಿತ ಸಂಘಟನೆ ಜಮಾತ್-ಉದ್-ದಾವಾ ಆಯೋಜಿಸಿದ್ದ ರ್‍ಯಾಲಿಯಲ್ಲಿ ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದ ಶಾಸನ ಸಭೆಯ ಸ್ಪೀಕರ್ ಮಲಿಕ್ ಅಹಮದ್ ಖಾನ್ ಅವರು ಪಾಲ್ಗೊಂಡಿದ್ದಾರೆ. ಪಾಕಿಸ್ತಾನ್ ಮುಸ್ಲಿಮ್ ಲೀಗ್-ನವಾಜ್ ಪಕ್ಷದ ಮುಖಂಡರಾಗಿರುವ ಖಾನ್ ಅವರು ಮೇ 28ರಂದು ಕಸೂರ್‌ನಲ್ಲಿ ನಡೆದ ರ್‍ಯಾಲಿಯಲ್ಲಿ ಜೆಯುಡಿ ನಾಯಕರ ಜತೆ ವೇದಿಕೆ ಹಂಚಿಕೊಂಡು ಭಾರತದ ವಿರುದ್ಧ ದ್ವೇಷ ಭಾಷಣ ಮಾಡಿದ್ದಾರೆ. ಕಾರ್ಯಕ್ರಮದಲ್ಲಿ ಅವರು ಜೆಯುಡಿ ನಾಯಕ ಸೈಫುಲ್ಲಾ ಕಸೂರಿ, ಹಫೀಜ್ ಸಯೀದ್‌ನ ಪುತ್ರ ಹಫೀಜ್ ತಲ್ಲಾ ಮತ್ತು ಇತರರೊಂದಿಗೆ ವೇದಿಕೆ ಹಂಚಿಕೊಂಡಿದ್ದಾರೆ. ತೀವ್ರಗಾಮಿ ಇಸ್ಲಾಮಿಸ್ಟ್ ಪಾರ್ಟಿ ತೆಹ್ರಕ್-ಎ-ಲಬ್ಬೈಕ್ ಪಾಕಿಸ್ತಾನ್ ಮುಖ್ಯಸ್ಥ ಸಾದ್ ಹುಸೇನ್ ರಿಜ್ವಿ ಕೂಡ ಉಪಸ್ಥಿತರಿದ್ದರು. ಜೆಯುಡಿ ರ್‍ಯಾಲಿಯಲ್ಲಿ ಪಾಲ್ಗೊಂಡ ಬಗ್ಗೆ ಪತ್ರಕರ್ತರು ಸೋಮವಾರ ಖಾನ್ ಅವರನ್ನು ಕೇಳಿದಾಗ, ಯಾವುದೇ ಸಾಕ್ಷಾಧಾರಗಳಿಲ್ಲದೆ ಅವರು ಶಂಕಿತರಾಗಿರುವುದು ಹೇಗೆ? ಎಂದು ಮರು ಪ್ರಶ್ನೆ ಹಾಕಿದ್ದಾರೆ. ಪಹಲ್ಗಾಮ್ ದಾಳಿಯಲ್ಲಿ ತನ್ನ ಕೈವಾಡದ ಬಗ್ಗೆ ಪುರಾವೆಗಳನ್ನು ನೀಡುವಂತೆ ಪಾಕಿಸ್ತಾನವು ಭಾರತವನ್ನು ಕೇಳಿದೆ.

ಆದರೆ ಭಾರತ ಆ ಕೆಲಸ ಮಾಡಿಲ್ಲ. ಈ ವಿಷಯದ ಬಗ್ಗೆ ತಟಸ್ಥ ಸಂಸ್ಥೆಯಿಂದ ತನಿಖೆ ನಡೆಸುವಂತೆಯೂ ನಾವು ಕೇಳಿಕೊಂಡಿದ್ದೇವೆ. ಅದನ್ನೂ ಸಹ ಭಾರತ ತಿರಸ್ಕರಿಸಿದೆ. ಪಾಕಿಸ್ತಾನದ ಮೇಲೆ ದಾಳಿ ಮಾಡುವುದಕ್ಕೆ ಭಾರತ ಆದ್ಯತೆ ನೀಡಿದೆ. ಅವರ ದಾಳಿಗೆ ಪಾಕಿಸ್ತಾನವು ಕೆಲವೇ ಗಂಟೆಗಳಲ್ಲಿ ತಕ್ಕ ಪ್ರತ್ಯುತ್ತರ ನೀಡಿತು ಎಂದು ಹೇಳಿದ್ದಾರೆ. ರ್‍ಯಾಲಿಯಲ್ಲಿ ತಮ್ಮ ಉಪಸ್ಥಿತಿಯನ್ನು ಸಮರ್ಥಿಸಿಕೊಂಡ ಸ್ಪೀಕರ್, ಈ ಕಾರ್ಯಕ್ರಮ ನಾನು ಪ್ರತಿನಿಧಿಸುವ ಕ್ಷೇತ್ರದಲ್ಲಿ ನಡೆದಿದ್ದು, ಆ ವೇದಿಕೆಯಿಂದಲೇ ಶಾಂತಿಯ ಸಂದೇಶವನ್ನು ಸಾರಿದ್ದೇನೆ ಎಂದಿದ್ದಾರೆ. ಜೆಯುಡಿಯ ರಾಜಕೀಯ ಘಟಕ ಪಾಕಿಸ್ತಾನ್ ಮರ್ಕಝಿ ಮುಸ್ಲಿಮ್ ಲೀಗ್ ಆಯೋಜಿಸಿದ್ದ ರ್‍ಯಾಲಿಯಲ್ಲಿ ಪಾಲ್ಗೊಂಡಿರುವುದಕ್ಕಾಗಿ ಖಾನ್ ಅವರಿಗೆ ಕಸೂರಿ ಮಂಗಳವಾರ ಧನ್ಯವಾದ ಸಲ್ಲಿಸಿದ್ದಾರೆ.

### ಮೆಡಿಕಲ್ ಪ್ರತಿನಿಧಿಗಳು ಸರ್ಕಾರಿ ವೈದ್ಯರನ್ನು ಭೇಟಿಯಾಗುವಂತಿಲ್ಲ

**ನವದೆಹಲಿ:** ಆಸ್ಪತ್ರೆ ಆವರಣದಲ್ಲಿ ಕೇಂದ್ರ ಸರ್ಕಾರಿ ಆಸ್ಪತ್ರೆಗಳ ವೈದ್ಯರನ್ನು ವೈದ್ಯಕೀಯ ಪ್ರತಿನಿಧಿಗಳು ಭೇಟಿ ಮಾಡುವುದನ್ನು ನಿಷೇಧಿಸಲಾಗಿದೆ ಎಂದು ಆರೋಗ್ಯ ಸೇವೆಗಳ ಮಹಾ ನಿರ್ದೇಶನಾಲಯ ಆದೇಶ ಹೊರಡಿಸಿದೆ. ರೋಗಿಗಳ ಹಿತಾಸಕ್ತಿ ಕಾಪಾಡಲು ಹಾಗೂ ನೈತಿಕ ಹೊಣೆಗಾರಿಕೆ ಹಿನ್ನೆಲೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ತಿಳಿಸಿದೆ. ಆರೋಗ್ಯ ಸಂಸ್ಥೆಗಳ ಮುಖ್ಯಸ್ಥರು ಈ ಕುರಿತು ಎಲ್ಲಾ ಅಧಿಕಾರಿಗಳಿಗೆ ಅಗತ್ಯವಾದ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಬೇಕು. ಆದೇಶ ಉಲ್ಲಂಘನೆಯಾದರೆ ಅಗತ್ಯ ಕ್ರಮ ಕೈಗೊಳ್ಳಬೇಕು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ನಿರ್ದೇಶನಾಲಯಕ್ಕೆ ವರದಿ ನೀಡಬೇಕು ಎಂದು ಸೂಚಿಸಿದೆ. ಸರ್ಕಾರಿ ಆಸ್ಪತ್ರೆಯ ವೈದ್ಯರ ಬಳಿ ಯಾವುದೇ ಚಿಕಿತ್ಸೆ ಅಥವಾ ಹೊಸ ಸೌಲಭ್ಯಗಳ ಕುರಿತು ಮಾಹಿತಿ ಪಡೆಯಬೇಕಿದ್ದರೆ ಇ-ಮೇಲ್ ಅಥವಾ ಡಿಜಿಟಲ್ ಮಾಧ್ಯಮಗಳ ಮೂಲಕ ಪಡೆದುಕೊಳ್ಳಬಹುದು ಎಂದು ಅದು ತಿಳಿಸಿದೆ. ಆಸ್ಪತ್ರೆ ಆವರಣದಲ್ಲಿ ವೈದ್ಯಕೀಯ ಪ್ರತಿನಿಧಿಗಳು ತಮ್ಮ ಕಂಪನಿಯ ಔಷಧಿಗಳನ್ನು ರೋಗಿಗಳಿಗೆ ಶಿಫಾರಸು ಮಾಡುವಂತೆ ವೈದ್ಯರ ಮೇಲೆ ಪ್ರಭಾವ ಬೀರುವುದನ್ನು ತಡೆಯಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದೆ.

# ಗೆದ್ದ ತಂಡಕ್ಕೆ 20 ಕೋಟಿ ರೂ. ಅಷ್ಟೇ ಅಲ್ಲ; ಭರ್ಜರಿ ಗಿಫ್ಟ್, ವರಮಾನ!

ಐಪಿಎಲ್ ಗೆದ್ದ ತಂಡಕ್ಕೆ ಬರೋಬ್ಬರಿ 20 ಕೋಟಿ ರೂಪಾಯಿ ಬಹುಮಾನ ಸಿಗಲಿದೆ. ಮೊದಲ ಐಪಿಎಲ್‌ನಲ್ಲಿ ಗೆದ್ದ ತಂಡಕ್ಕೆ 4.8 ಕೋಟಿ ರೂಪಾಯಿ ಸಿಗುತ್ತಿತ್ತು. ಅದು ಈಗ 20 ಕೋಟಿ ರೂಪಾಯಿಗೆ ಬಂದು ನಿಂತಿದೆ. ಇದು ಪ್ರಶಸ್ತಿ ಮೊತ್ತ ಮಾತ್ರ, ಇದರ ಜೊತೆ ಐಪಿಎಲ್ ಗೆದ್ದ ತಂಡಕ್ಕೆ ಹಣದ ಹೊಳೆಯೇ ಹರಿದು ಬರುತ್ತದೆ.

ಗೆದ್ದ ತಂಡಕ್ಕೆ 20 ಕೋಟಿ ರೂಪಾಯಿ ಬಹುಮಾನ ಇದ್ದರೆ, ರನ್ನರ್ ಅಪ್ ಆದ ತಂಡಕ್ಕೆ 13 ಕೋಟಿ ರೂಪಾಯಿ ಬಹುಮಾನ ಸಿಗಲಿದೆ. ಬಹುಮಾನಕ್ಕಿಂತ ಹೆಚ್ಚಿನ ಹಣಕ್ಕೆ ಹಲವು ಆಟಗಾರರನ್ನು ಫ್ರಾಂಚೈಸಿಗಳು ಖರೀದಿಸಿವೆ. ಬಹುಮಾನ ಹಲವು ಮಾರ್ಗದ ಮೂಲಕ ಹಣವನ್ನು ಸಂಪಾದಿಸುತ್ತವೆ. ಅದರಲ್ಲೂ ಐಪಿಎಲ್ ಗೆದ್ದ ತಂಡ ಸ್ವಲ್ಪ ಜಾಸ್ತಿಯೇ ಹಣವನ್ನು ಗಳಿಸಲಿದೆ.

**ಮೀಡಿಯಾ ರೈಟ್ಸ್‌ನಲ್ಲಿ ಪಾಲು!:** ಐಪಿಎಲ್ ತಂಡಗಳು ತಮ್ಮ ಆದಾಯದ ಗಣನೀಯ ಭಾಗವನ್ನು ಲೀಗ್‌ನ ಮೀಡಿಯಾ ರೈಟ್ಸ್‌ನಿಂದ ಅಂದ್ರೇ ಪ್ರಸಾರದ ಹಕ್ಕುಗಳಿಂದ ಗಳಿಸುತ್ತವೆ. 2023 ರಿಂದ 2027ರ ಐದು ಐಪಿಎಲ್‌ನ ಮೀಡಿಯಾ ರೈಟ್ಸ್ ಅನ್ನು ಬಿಸಿಸಿಐ ಬರೋಬ್ಬರಿ 48,390 ಕೋಟಿ ರೂಪಾಯಿಗೆ ಮಾರಾಟ ಮಾಡಿದೆ. ಈ ಆದಾಯದಲ್ಲಿ ಸರಿ ಸುಮಾರು ಶೇ.45ರಷ್ಟು ಪಾಲು ಫ್ರಾಂಚೈಸಿಗಳ ಪಾಲಾಗಲಿದೆ. ಈ ಆದಾಯವನ್ನು ತಂಡದ ಪ್ರದರ್ಶನ, ಎಷ್ಟು ಫಾಲೋವರ್ಸ್ ಅನ್ನು ಹೊಂದಿದೆ ಎನ್ನುವುದರ ಮೇಲೆ ವಿತರಿಸಲಾಗುತ್ತದೆ. ಲೀಗ್‌ನಲ್ಲೇ ಹೊರಬಿದ್ದ ತಂಡಗಳಿಗೆ ಕಡಿಮೆ ಆದಾಯ ಬಂದರೆ, ಪ್ಲೇಆಫ್ ಹಂತದಲ್ಲಿ ಅಭಿಯಾನ ಮುಗಿಸಿದ ತಂಡಗಳು ಅದಕ್ಕಿಂತ



ಸ್ವಲ್ಪ ಹೆಚ್ಚು ಪಾಲನ್ನು ಪಡೆಯಲಿವೆ. ಈ ಆದಾಯದಲ್ಲಿ ವಿಜೇತ ತಂಡವೇ ಹೆಚ್ಚಿನ ಪಾಲನ್ನು ಪಡೆಯಲಿದೆ ಎಂದು ಹೇಳಲಾಗಿದೆ.

**ಸ್ಪಾನ್ಸರ್‌ಶಿಪ್ ಮತ್ತು ಬ್ರ್ಯಾಂಡ್ ಪಾಲು!:** ಇನ್ನು, ಐಪಿಎಲ್ ಅನ್ನು ಇಡೀ ಜಗತ್ತೇ ಕಾತರದಿಂದ ನೋಡುವ ಕಾರಣ ಐಪಿಎಲ್ ಗೆದ್ದ ತಂಡಕ್ಕೆ ಶುಕ್ರದೆಸೆ ಶುರುವಾಗಲಿದೆ. ಜೆರ್ಸಿ ಸ್ಪಾನ್ಸರ್‌ಶಿಪ್, ಟೈಟಲ್ ಸ್ಪಾನ್ಸರ್‌ಶಿಪ್ ಹಾಗೂ ಡಿಜಿಟಲ್ ಪಾರ್ಟನರ್ಸ್ ಸೇರಿ ಹಲವು ವಿಚಾರಕ್ಕೆ ಕಂಪನಿಗಳ ಜೊತೆ ಫ್ರಾಂಚೈಸಿ ಒಪ್ಪಂದ ಮಾಡಿಕೊಂಡಿರುತ್ತದೆ. ಗೆದ್ದ ಬೆನ್ನಲ್ಲೇ ತಂಡದ ಮೌಲ್ಯ ಕೂಡ ವೃದ್ಧಿಯಾಗಲಿದ್ದು, ಹೆಚ್ಚಿನ ಹಣ ಹರಿದುಬರಲಿದೆ. ಮೈದಾನದಲ್ಲಿನ ಯಶಸ್ಸು ತಂಡದ ಬ್ರ್ಯಾಂಡ್ ಮೌಲ್ಯವನ್ನು ಹೆಚ್ಚಿಸುತ್ತದೆ. ಐಪಿಎಲ್‌ನಲ್ಲಿರುವ ಪ್ರಮುಖ ತಂಡಗಳು ಸ್ಪಾನ್ಸರ್‌ಶಿಪ್‌ನಿಂದಲೇ ಪ್ರತಿ ಸೀಸನ್‌ಗೆ 70100 ಕೋಟಿ ರೂಪಾಯಿಯನ್ನು ಗಳಿಸುತ್ತದೆ. ಇದು ಐಪಿಎಲ್ ಗೆದ್ದ ಬೆನ್ನಲ್ಲೇ ಹೆಚ್ಚಾಗುವ ಸಾಧ್ಯತೆ ಇದೆ.

| ಜಗತ್ತಿನ ಅತ್ಯಂತ ದೊಡ್ಡ ಶ್ರೀಮಂತ ಲೀಗ್‌ಗಳು | |
|---|---|
| ಐಸಿಸಿ ಏಕದಿನ ವಿಶ್ವಕಪ್ | 34 ಕೋಟಿ ರೂ. |
| ಐಸಿಸಿ ಟೆಸ್ಟ್ ಚಾಂಪಿಯನ್‌ಶಿಪ್ | 31 ಕೋಟಿ ರೂ. |
| ಐಸಿಸಿ ಟಿ20 ವಿಶ್ವಕಪ್ | 21 ಕೋಟಿ ರೂ. |
| ಐಪಿಎಲ್ | 20 ಕೋಟಿ ರೂ. |
| ಐಸಿಸಿ ಚಾಂಪಿಯನ್ಸ್ ಟ್ರೋಫಿ | 19 ಕೋಟಿ ರೂ. |

**ಟಿಕೆಟ್ ಮಾರಾಟ ಮತ್ತು ಪಂದ್ಯದ ದಿನದ ಆದಾಯ**

ಇನ್ನು, ಚಾಂಪಿಯನ್ ತಂಡಗಳಿಗೆ ಟಿಕೆಟ್ ಮಾರಾಟ ಹಾಗೂ ಪಂದ್ಯದ ದಿನದ ಆದಾಯದಿಂದಲೂ ಆದಾಯ ಬರಲಿದೆ. ಈ ಸಲ ಏನಾದ್ರೂ ಚಾಂಪಿಯನ್ ಆದ್ರೆ, ಮುಂದಿನ ಸೀಸನ್‌ನಲ್ಲಿ ಮೈದಾನ ಕಿಕ್ಕಿರಿದು ತುಂಬಲಿದೆ. ಅದರ ಜೊತೆ ಪ್ರೀಮಿಯಂ ಟಿಕೆಟ್ ಮಾರಾಟ ಕೂಡ ಹೆಚ್ಚಾಗಲಿದೆ. ಆದ್ದರಿಂದ ಟಿಕೆಟ್ ಮಾರಾಟದಿಂದ ಫ್ರಾಂಚೈಸಿಗಳು ಪ್ರತಿ ಪಂದ್ಯಕ್ಕೆ 3 ರಿಂದ 6 ಕೋಟಿ ರೂಪಾಯಿಯನ್ನು ಗಳಿಸಲಿವೆ. ಇದು ಟ್ರೋಫಿ ಗೆದ್ದ ಬಳಿಕ ಮತ್ತಷ್ಟು ಹೆಚ್ಚಾಗಲಿದೆ. ಇದರ ಜೊತೆ ಟೈಟಲ್ ಸ್ಪಾನ್ಸರ್, ಅಸೋಸಿಯೇಟ್ ಪಾರ್ಟನರ್ಸ್, ಅಂಪೈರ್ ಪಾರ್ಟನರ್, ಸ್ಟ್ರಾಟೆಜಿಕ್ ಟೈಮ್ ಔಟ್ ಪಾರ್ಟನರ್, ಆರೆಂಜ್ ಕ್ಯಾಪ್ ಹಾಗೂ ಪರ್ಪಲ್ ಕ್ಯಾಪ್ ಪಾರ್ಟನರ್, ಫ್ಯಾಂಟಸಿ 11 ಪಾರ್ಟನರ್, ಸಿಕ್ಸರ್, ಫೋರ್ ಪಾರ್ಟನರ್, ಸ್ಟ್ರೈಕ್ ರೇಟ್ ಪಾರ್ಟನರ್‌ಗಳ ಆದಾಯದಲ್ಲೂ ತಂಡಗಳಿಗೆ ಪಾಲು ಸಿಗಲಿದೆ.

**ಮರ್ಚಂಡೈಸ್ ಮಾರಾಟ, ಬ್ರ್ಯಾಂಡ್ ಮೌಲ್ಯ ಹೆಚ್ಚಳ:** ಐಪಿಎಲ್ ಗೆದ್ದ ನಂತರ ತಂಡದ ಅಭಿಮಾನಿಗಳ ಉತ್ಸಾಹ ಕೂಡ ಹೆಚ್ಚಾಗಲಿದೆ. ಇದರಿಂದ ಚಾಂಪಿಯನ್ ಟೀಂನ ಜೆರ್ಸಿ, ಕ್ಯಾಪ್ ಸೇರಿ ಇತರೆ ಉತ್ಪನ್ನಗಳ ಮಾರಾಟದಲ್ಲಿ ಏರಿಕೆ ಕಾಣಲಿದೆ. ತಂಡಗಳು ಅಧಿಕೃತ ಮರ್ಚಂಡೈಸ್‌ಗಾಗಿ ಪ್ರಮುಖ ಬ್ರ್ಯಾಂಡ್‌ಗಳೊಂದಿಗೆ ಒಪ್ಪಂದ ಮಾಡಿಕೊಳ್ಳಲಿದ್ದು, ಅಲ್ಲಿಂದಲೂ ಆದಾಯವನ್ನು ಗಳಿಸಲಿವೆ. ಜೊತೆಗೆ ಅಭಿಮಾನಿಗಳ ಲಾಯಲ್ಟಿಯನ್ನು ಕೂಡ ಹೆಚ್ಚಿಸಲಿದೆ. ಇನ್ನು, ಐಪಿಎಲ್ ಗೆದ್ದರೆ ಫ್ರಾಂಚೈಸಿಯ ಬ್ರ್ಯಾಂಡ್ ಮೌಲ್ಯವನ್ನು ಗಮನಾರ್ಹವಾಗಿ ಹೆಚ್ಚಿಸುತ್ತದೆ. ಇದು ಸೋಶಿಯಲ್ ಮೀಡಿಯಾದಲ್ಲಿ ಫಾಲೋವರ್ಸ್‌ಗಳ ಸಂಖ್ಯೆ ಹೆಚ್ಚಳಕ್ಕೂ ಕಾರಣವಾಗುತ್ತದೆ. ಫ್ಯಾನ್ಸ್‌ಗಳು ಹೆಚ್ಚಿನ ಸಂಖ್ಯೆಯಲ್ಲಿ ಫ್ರಾಂಚೈಸಿ ಜೊತೆ ತೊಡಗಿಸಿಕೊಳ್ಳುವುದರಿಂದ ಟೀಂನ ಮಾರ್ಕೆಟ್ ವ್ಯಾಲ್ಯೂ ಕೂಡ ಹೆಚ್ಚಲಿದೆ. ಇದು ಹೆಚ್ಚಿನ ವಾಣಿಜ್ಯ ಅವಕಾಶಗಳು ಮತ್ತು ಮಾರುಕಟ್ಟೆ ಮೌಲ್ಯಮಾಪನಕ್ಕೆ ಕಾರಣವಾಗಲಿದೆ.

ಐಸಿಸಿ ಏಕದಿನ ವಿಶ್ವಕಪ್ ಟೂರ್ನಿಯಲ್ಲಿ ಗೆದ್ದ ದೇಶಕ್ಕೆ 34 ಕೋಟಿ ರೂ. ಸಿಕ್ಕರೆ, ಐಸಿಸಿ ಟೆಸ್ಟ್ ಚಾಂಪಿಯನ್‌ಶಿಪ್‌ನಲ್ಲಿ 31 ಕೋಟಿ ರೂ. ಸಿಗಲಿದೆ. ಐಸಿಸಿ ಟಿ20 ವಿಶ್ವಕಪ್‌ನಲ್ಲಿ ಗೆದ್ದ ತಂಡಕ್ಕೆ 21 ಕೋಟಿ ರೂ. ಸಿಗಲಿದೆ. ಅದಾದ ಬಳಿಕ ಐಪಿಎಲ್ ಟೂರ್ನಿಯಲ್ಲಿ 20 ಕೋಟಿ ರೂಪಾಯಿ ಬಹುಮಾನ ಇದೆ. ಅದಾದ ನಂತರ ಐಸಿಸಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಬಹುಮಾನ 19 ಕೋಟಿ ರೂಪಾಯಿ ಇದೆ. ಇನ್ನು, ಐಪಿಎಲ್‌ನಲ್ಲಿ ಅತಿ ಹೆಚ್ಚು ರನ್ ಗಳಿಸಿದವರಿಗೆ ಆರೆಂಜ್ ಕ್ಯಾಪ್, ಅತಿ ಹೆಚ್ಚು ವಿಕೆಟ್ ಕಿತ್ತವರಿಗೆ ಪರ್ಪಲ್ ಕ್ಯಾಪ್ ನೀಡಲಾಗುತ್ತಿದ್ದು, ಅವರಿಗೆ ತಲಾ 10 ಲಕ್ಷ ರೂಪಾಯಿ ಬಹುಮಾನ ಇದ್ದರೆ, ಎಮರ್ಜಿಂಗ್ ಪ್ಲೇಯರ್‌ಗೆ 10 ಲಕ್ಷ ರೂಪಾಯಿ ಬಹುಮಾನ ಸಿಗಲಿದೆ.

| ವಿಶ್ವದ ಶ್ರೀಮಂತ ಕ್ರಿಕೆಟ್ ಲೀಗ್! | | |
|---|---|---|
| ಭಾರತ | ಐಪಿಎಲ್ | 10.9 ಬಿ. ಡಾಲರ್ |
| ಯುಎಇ | ಐ20ಲೀಗ್ | 15 ಮಿ. ಡಾಲರ್ |
| ದಕ್ಷಿಣ ಆಫ್ರಿಕಾ | ಎಸ್‌ಎಟಿ20 | 12.5 ಮಿ. ಡಾಲರ್ |
| ಆಸ್ಟ್ರೇಲಿಯಾ | ಬಿಬಿಎಲ್ | 10 ಮಿ. ಡಾಲರ್ |
| ಇಂಗ್ಲೆಂಡ್ | ದಿ ಹಂಡ್ರೆಡ್ | 9 ಮಿ. ಡಾಲರ್ |

ಜಗತ್ತಿನ ಅತ್ಯಂತ ಶ್ರೀಮಂತ ಕ್ರಿಕೆಟ್ ಲೀಗ್‌ನಲ್ಲಿ ಐಪಿಎಲ್‌ಗೆ ಮೊದಲ ಸ್ಥಾನವಿದ್ದು, 10.9 ಬಿಲಿಯನ್ ಡಾಲರ್ ಮೌಲ್ಯವನ್ನು ಹೊಂದಿದೆ. ನಂತರ ಯುಎಇಯ ಇಂಟರ್‌ನ್ಯಾಷನಲ್ ಟಿ20 ಲೀಗ್ 15 ಮಿಲಿಯನ್ ಡಾಲರ್ ಮೌಲ್ಯ ಹೊಂದಿದ್ದರೆ, ದಕ್ಷಿಣ ಆಫ್ರಿಕಾದ ಸೌಥ್ ಆಫ್ರಿಕಾ ಟಿ20 ಲೀಗ್ ಮೂರನೇ ಸ್ಥಾನದಲ್ಲಿದ್ದು, 12.5 ಮಿಲಿಯನ್ ಡಾಲರ್ ಮೌಲ್ಯ ಹೊಂದಿದೆ. ಬಳಿಕ ಆಸ್ಟ್ರೇಲಿಯಾದ ಬಿಗ್‌ಬಾಷ್ ಲೀಗ್, ಇಂಗ್ಲೆಂಡ್‌ನ ದಿ ಹಂಡ್ರೆಡ್ ಲೀಗ್‌ಗಳಿವೆ. ಕ್ರಮವಾಗಿ 10 ಮಿಲಿಯನ್ ಡಾಲರ್, 9 ಮಿಲಿಯನ್ ಡಾಲರ್ ಮೌಲ್ಯವನ್ನು ಹೊಂದಿವೆ ಎಂದು ಕೆಲ ವರದಿಗಳು ಹೇಳಿವೆ. ಒಟ್ಟಿನಲ್ಲಿ, ಚಿನ್ನದ ಮೊಟ್ಟೆ ಇಡುವ ಕೋಳಿಯಾಗಿರುವ ಐಪಿಎಲ್ ಟೂರ್ನಿ ಗೆದ್ದ ತಂಡಕ್ಕೆ ಭರಪೂರ ಆದಾಯ ಹರಿದುಬರುವುದರಲ್ಲಿ ಯಾವುದೇ ಡೌಟ್ ಇಲ್ಲ.

## ಐಪಿಎಲ್ ನಲ್ಲಿ ಸೀನಿಯರ್‌ಗಳನ್ನು ಔಟ್ ಮಾಡೋದೇ ಮಜಾ!

ಸಾಮಾಜಿಕ ಜಾಲತಾಣಗಳೆಂದರೆ ಹಾಗೆ. ಇಲ್ಲಿ ಯಾವಾಗಲೋ ಹೇಳಿದ್ದು ಇನ್ನು ಯಾವಾಗಲೋ ವೈರಲ್ ಆಗುತ್ತಿರುತ್ತದೆ. ಇದೀಗ ಶ್ರೇಯಸ್ ಅಯ್ಯರ್ ನೇತೃತ್ವದ ಪಂಜಾಬ್ ಕಿಂಗ್ಸ್ ತಂಡ ಐಪಿಎಲ್ 2025 ಫೈನಲ್ ತಲುಪಿರುವ ಹಿನ್ನೆಲೆಯಲ್ಲಿ ರೋಹಿತ್ ಶರ್ಮಾ ಜೊತೆಗಿನ ಅವರ ಹಳೇ ವಿಡಿಯೋ ಒಂದು ವೈರಲ್ ಆಗುತ್ತಿದೆ. ಸೀನಿಯರ್ ಆಟಗಾರರನ್ನು ಔಟ್ ಮಾಡುವುದೇ ಮಜಾ ಎಂದು ಶ್ರೇಯಸ್ ಅಯ್ಯರ್ ಅವರು ಈ ಹಿಂದೆ ಕಪಿಲ್ ಶರ್ಮಾ ಶೋನಲ್ಲಿ ತಮಾಷೆಯಾಗಿ ಹೇಳಿದ್ದರು.

ಪಂಜಾಬ್ ನಾಯಕ ಶ್ರೇಯಸ್ ಮತ್ತು ಟೀಂ ಇಂಡಿಯಾ ಹಿರಿಯ ಆಟಗಾರ ರೋಹಿತ್ ಶರ್ಮಾ ಅವರ ತಮಾಷೆಯ ವಿಡಿಯೋ ತುಣುಕೊಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಐಪಿಎಲ್‌ನಲ್ಲಿ ಭಾರತ ತಂಡದ ಹಿರಿಯ ಆಟಗಾರರನ್ನು ಔಟ್ ಮಾಡಿದಾಗ ತನಗಾಗುವ ಸಂತೋಷದ ಬಗ್ಗೆ ಶ್ರೇಯಸ್ ಈ ವಿಡಿಯೋದಲ್ಲಿ ಹೇಳಿಕೊಂಡಿದ್ದಾರೆ.

ದಿ ಗ್ರೇಟ್ ಇಂಡಿಯನ್ ಕಪಿಲ್ ಶೋ ನಲ್ಲಿ ಈ ವಿಷಯವನ್ನು ಅವರು ಹಂಚಿಕೊಂಡಿದ್ದಾರೆ. ಕಪಿಲ್ ಶರ್ಮಾ ಅವರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ, ಭಾರತ ತಂಡದ ಹಿರಿಯ ಆಟಗಾರರ ಕ್ಯಾಚ್ ಹಿಡಿದಾಗ ಖುಷಿಯಾಗುತ್ತದೆ ಎಂದು ಹೇಳಿದ್ದಾರೆ. ರೋಹಿತ್ ಶರ್ಮಾ ಕೂಡ ಇದಕ್ಕೆ ತಮಾಷೆಯಾಗಿ ಪ್ರತಿಕ್ರಿಯಿಸಿದ್ದಾರೆ.



## ಬುಮ್ರಾಗೆ ಬೌಲಿಂಗ್ ಹೇಳಿಕೊಡ್ತೀರಾ

ಪಂಜಾಬ್ ಕಿಂಗ್ಸ್ ವಿರುದ್ಧ ಕ್ವಾಲಿಫೈಯರ್ 2 ಪಂದ್ಯದಲ್ಲಿ ಪರಾಭವ ಅನುಭವಿಸಿದ ಬಳಿಕ ಮುಂಬೈ ಇಂಡಿಯನ್ಸ್ ತಂಡದ ಮ್ಯಾನೇಜ್ ಮೆಂಟ್ ಬಗ್ಗೆ ಹತ್ತು ಹಲವು ಟೀಕೆಗಳು ಕೇಳಿ ಬರುತ್ತಿವೆ. ಟೀಂ ಇಂಡಿಯಾ ಮತ್ತು ಮುಂಬೈ ಇಂಡಿಯನ್ಸ್‌ನ ಮಾಜಿ ಆಟಗಾರನಾಗಿರುವ ಆಫ್ ಸ್ಪಿನ್ನರ್ ಹರ್ಭಜನ್ ಸಿಂಗ್ ಅವರು ನೇರವಾಗಿ ತಂಡದ ಕೋಚ್ ಗಳ ವಿರುದ್ಧವೇ ಹರಿಹಾಯ್ದಿದ್ದಾರೆ. ಕೋಚ್ ಗಳು ಆಟಗಾರರ ಮೇಲೆ ಅತಿಯಾದ ಹಸ್ತಕ್ಷೇಪ ಮಾಡಬಾರದು ಎಂದು ತಿಳಿಸಿದ್ದಾರೆ.

ಈ ಬಗ್ಗೆ ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ ಮಾತನಾಡಿದ ಅವರು, ಮುಂಬೈ ಇಂಡಿಯನ್ಸ್ ಸೋಲಿಗೆ ಕೋಚ್‌ಗಳಾದ ಮಹೇಲ ಜಯವರ್ಧನೆ ಮತ್ತು ಲಸಿತ್ ಮಾಲಿಂಗ ಅವರ ತಂತ್ರಗಳನ್ನು ಟೀಕಿಸಿದರು. ರೋಹಿತ್ ಶರ್ಮಾ, ಹಾರ್ದಿಕ್ ಪಾಂಡ್ಯ ಮತ್ತು ಜಸ್ಪ್ರೀತ್ ಬುಮ್ರಾ ಅವರಂತಹ ದೊಡ್ಡ ಆಟಗಾರರಿಗೆ ಏನು ಮಾಡಬೇಕೆಂದು ಹೇಳುವ ಅಗತ್ಯವಿಲ್ಲ. ಕೋಚ್‌ಗಳು ಅತಿಯಾಗಿ ತಲೆ ಹಾಕುವುದರಿಂದ ಆಟಗಾರರ ಆತ್ಮವಿಶ್ವಾಸ ಕುಗ್ಗುತ್ತದೆ ಎಂದು ಅವರು ಅಭಿಪ್ರಾಯಪಟ್ಟರು. ಮುಂಬೈ ಇಂಡಿಯನ್ಸ್‌ನ ಡಗೌಟ್ ನೋಡಿ. ರನ್ ಸೋರಿಕೆಯಾದಾಗ, ಹೊರಗಿನಿಂದ ಹೆಚ್ಚು ಹಸ್ತಕ್ಷೇಪವಿತ್ತು. ಕೋಚ್‌ಗಳು ಜಸ್ಪ್ರೀತ್ ಬುಮ್ರಾ ಅವರಂತಹ ಬೌಲರ್‌ಗೆ ಏನು ಮಾಡಬೇಕು, ಏನು ಮಾಡಬಾರದು ಎಂದು ಹೇಳುತ್ತಿದ್ದರು.

## ಮುಕೇಶ್ ಕುಮಾರ್ 18 ನಂಬರ್ ಜರ್ಸಿ ಧರಿಸಿದ್ದಕ್ಕೆ ವಿರಾಟ್ ಕೊಹ್ಲಿ ಫ್ಯಾನ್ಸ್ ಗರಂ




ಹೇಳಿಕೇಳಿ ನಂಬರ್ 18 ಎಂಬುದು ವಿರಾಟ್ ಕೊಹ್ಲಿ ಅವರ ಜರ್ಸಿ ನಂಬರ್. ಅದನ್ನು ಬೇರೆ ಯಾರಾದರೂ ಧರಿಸಿದರೆ ಕಿಂಗ್ ಕೊಹ್ಲಿ ಅಭಿಮಾನಿಗಳು ಹೇಗೆ ತಾನೇ ಸಹಿಸಿಯಾರು ಈ ಹಿಂದೆ ಸಚಿನ್ ತೆಂಡೂಲ್ಕರ್ ನಿವೃತ್ತಿ ಬಳಿಕ ಶಾರ್ದೂಲ್ ಠಾಕೂರ್ ಅವರು 10 ಧರಿಸಿದ್ದು ದೊಡ್ಡ ವಿವಾದವಾಗಿತ್ತು.

ಇದೀಗ ವಿರಾಟ್ ಕೊಹ್ಲಿ ಅವರ 18ನೇ ನಂಬರ್ ಅನ್ನು ಮುಕೇಶ್ ಗೆ ನೀಡಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಹಾಗಿದ್ದರೆ ಕೊಹ್ಲಿ ಅವರು ಟೆಸ್ಟ್ ಕ್ರಿಕೆಟ್‌ಗೆ ನಿವೃತ್ತಿ ಹೇಳಿದ ಬೆನ್ನಲ್ಲೇ ಇದನ್ನು ಬೇರೆ ಆಟಗಾರರಿಗೆ ನೀಡಲಾಯಿತೇ ಎಂಬ ಬಗ್ಗೆ ಪ್ರಶ್ನೆ ಹುಟ್ಟಿಕೊಂಡಿದೆ. ಭಾರತ ಎ ಮತ್ತು ಇಂಗ್ಲೆಂಡ್ ಲಯನ್ಸ್ ನಡುವಿನ ಪಂದ್ಯದಲ್ಲಿ ಮುಕೇಶ್ ಕುಮಾರ್ 'ಜೆರ್ಸಿ ನಂ 18' ಧರಿಸಿದ್ದು ವಿವಾದಕ್ಕೆ ಕಾರಣವಾಗಿತ್ತು. ವಿರಾಟ್ ಕೊಹ್ಲಿ ಅವರ ಜೆರ್ಸಿಯನ್ನು ಮುಕೇಶ್ ಧರಿಸಿದ್ದಕ್ಕೆ ಅಭಿಮಾನಿಗಳು ಆಕ್ರೋಶ ವ್ಯಕ್ತಪಡಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಚರ್ಚೆ ನಡೆದಿದೆ.

**ಬಿಸಿಸಿಐ ಸ್ಪಷ್ಟನೆ ಏನು**

ಆದರೆ ಈ ಬಗ್ಗೆ, ಬಿಸಿಸಿಐ ಪ್ರತಿಕ್ರಿಯಿಸಿದ್ದು, ಭಾರತ ಎ ತಂಡದಲ್ಲಿ ಜೆರ್ಸಿಗಳಿಗೆ ನಿರ್ದಿಷ್ಟ ಸಂಖ್ಯೆಗಳಿಲ್ಲ. ಜೆರ್ಸಿಗಳಿಗೆ ಆಟಗಾರರ ಹೆಸರುಗಳೂ ಇರುವುದಿಲ್ಲ. ಹೀಗಾಗಿ ಯಾರು ಬೇಕಾದರೂ ಯಾವುದೇ ಸಂಖ್ಯೆಯನ್ನು ಆಯ್ಕೆ ಮಾಡಬಹುದು ಎಂದು ಹೇಳಿದೆ. ಅಷ್ಟೇ ಅಲ್ಲ, ಮುಕೇಶ್ ಕುಮಾರ್ ಟೆಸ್ಟ್ ಕ್ರಿಕೆಟ್‌ನಲ್ಲಿ ಈ ಸಂಖ್ಯೆಯ ಜೆರ್ಸಿ ಧರಿಸುವುದಿಲ್ಲ ಎಂದು ಸ್ಪಷ್ಟಪಡಿಸಿದೆ.

## ಪ್ರಭಾಸ್ ನಟನೆಯ ಸಿನಿಮಾ ಬಿಡುಗಡೆ




**ಹೊಸ ಸಿನಿಮಾದ ಬಿಡುಗಡೆ ದಿನಾಂಕ**

ಪ್ರಭಾಸ್ ನಟಿಸಿದ್ದ 'ಕಲ್ಕಿ 2898 ಎಡಿ' ಸಿನಿಮಾ ಕಳೆದ ವರ್ಷ ಜೂನ್ ತಿಂಗಳಲ್ಲಿ ಬಿಡುಗಡೆ ಆಗಿತ್ತು. ಇದೀಗ ಪ್ರಭಾಸ್ ನಟನೆಯ ಹೊಸ ಸಿನಿಮಾದ ಬಿಡುಗಡೆ ದಿನಾಂಕ ಘೋಷಣೆ ಮಾಡಲಾಗಿದೆ. ಒಂದೂವರೆ ವರ್ಷದ ಬಳಿಕ ಪ್ರಭಾಸ್ ನಟನೆಯ ಹೊಸ ಸಿನಿಮಾ ಬಿಡುಗಡೆ ಆಗುತ್ತಿದೆ. ಪ್ರಭಾಸ್ ನಟನೆಯ ಸಿನಿಮಾ ಬಿಡುಗಡೆ ಆಗಿ ಒಂದು ವರ್ಷವಾಗಿದೆ. ಇದು ವಿಶೇಷವೇನೂ ಅಲ್ಲ. ಪ್ರಭಾಸ್ ನಟಿಸುವುದೇ ವರ್ಷಕ್ಕೆ ಒಂದೋ-ಎರಡು ಸಿನಿಮಾಗಳಲ್ಲಿ. ಕಳೆದ ವರ್ಷ ಜೂನ್ ತಿಂಗಳಲ್ಲಿ ಅವರ ನಟನೆಯ 'ಕಲ್ಕಿ 2898 ಎಡಿ' ಸಿನಿಮಾ ಬಿಡುಗಡೆ ಆಗಿತ್ತು. ಇದೀಗ ಪ್ರಭಾಸ್ ನಟನೆಯ ಹೊಸ ಸಿನಿಮಾದ ಬಿಡುಗಡೆ ದಿನಾಂಕ ಘೋಷಿಸಲಾಗಿದೆ. ಆದರೆ ಇದು ಪ್ರಭಾಸ್ ಅಭಿಮಾನಿಗಳಿಗೆ ತುಸು ಬೇಸರವನ್ನೇ ಉಂಟು ಮಾಡಿದೆ. ಪ್ರಭಾಸ್ ನಟನೆಯ 'ದಿ ರಾಜಾ ಸಾಬ್' ಸಿನಿಮಾದ ಬಿಡುಗಡೆ ದಿನಾಂಕ ಘೋಷಣೆಯಾಗಿದೆ. ಸಿನಿಮಾ ಡಿಸೆಂಬರ್ ಐದರಂದು ತೆರೆಗೆ ಬರಲಿದೆ. ಅಸಲಿಗೆ 'ದಿ ರಾಜಾ ಸಾಬ್' ಸಿನಿಮಾ ಇದೇ ತಿಂಗಳು ಬಿಡುಗಡೆ ಆಗಬೇಕಿತ್ತು. ಈ ಹಿಂದೆ ಹರಿದಾಡಿದ್ದ ಸುದ್ದಿಯಂತೆ 'ದಿ ರಾಜಾ ಸಾಬ್' ಸಿನಿಮಾ ಜೂನ್ ಅಥವಾ ಜುಲೈ ತಿಂಗಳಲ್ಲಿ ತೆರೆಗೆ ಬರಬೇಕಿತ್ತು.

ಆದರೆ ನಾನಾ ಕಾರಣಗಳಿಂದಾಗಿ ಸಿನಿಮಾದ ಬಿಡುಗಡೆ ತಡವಾಗುತ್ತಲೇ ಬರುತ್ತಿದೆ. ಇದೀಗ ಸಿನಿಮಾದ ಬಿಡುಗಡೆ ಘೋಷಣೆ ಆಗಿದ್ದು, ಸಿನಿಮಾ ಡಿಸೆಂಬರ್ 05ಕ್ಕೆ ಬಿಡುಗಡೆ ಆಗಲಿದೆ. 'ಪುಷ್ಪ 2' ಸಿನಿಮಾ ಸಹ ಕಳೆದ ವರ್ಷ ಡಿಸೆಂಬರ್ 05 ರಂದೇ ಬಿಡುಗಡೆ ಆಗಿತ್ತು. ಇದೀಗ 'ರಾಜಾ ಸಾಬ್' ಸಿನಿಮಾಕ್ಕೂ ಅದೇ ಬಿಡುಗಡೆ ದಿನಾಂಕವನ್ನು ಆಯ್ಕೆ ಮಾಡಲಾಗಿದೆ.

## ಧೂಮ್ 4 ರಣಬೀರ್ ವಿಲನ್



ಬಾಲಿವುಡ್‌ನ ಬಲು ಜನಪ್ರಿಯ ಮತ್ತು ಯಶಸ್ವಿ ಸಿನಿಮಾ ಸರಣಿಗಳಲ್ಲಿ 'ಧೂಮ್' ಪ್ರಮುಖವಾದುದು, ಈ ಸರಣಿಯ ಮೂರು ಸಿನಿಮಾಗಳು ಈವರೆಗೆ ತೆರೆಗೆ ಬಂದಿವೆ. ಇದೀಗ ನಾಲ್ಕನೇ ಸಿನಿಮಾದ ಚಿತ್ರಕತೆ ಪೂರ್ಣಗೊಂಡಿದ್ದು, ಸಿನಿಮಾದ ಪ್ರೀ ಪ್ರೊಡಕ್ಷನ್ ಕಾರ್ಯ ಆರಂಭವಾಗಲಿದೆ. ಅಂದಹಾಗೆ ಈ ಬಾರಿ ಯಾರು 'ವಿಲನ್' ಪಾತ್ರದಲ್ಲಿ ನಟಿಸಲಿದ್ದಾರೆ 'ಧೂಮ್' ಸಿನಿಮಾ ಸರಣಿ ಬಾಲಿವುಡ್‌ನ ಅತ್ಯಂತ ಯಶಸ್ವಿ ಮತ್ತು ಜನಪ್ರಿಯ ಸಿನಿಮಾ ಸರಣಿ. 2004 ರಲ್ಲಿ ಮೊದಲ ಬಾರಿಗೆ ಬಿಡುಗಡೆ ಆದ 'ಧೂಮ್' ಸಿನಿಮಾ ಆಗಿನ ಕಾಲಕ್ಕೆ ತನ್ನ ಭಿನ್ನ ಕತೆ, ಸ್ಟೈಲಿಷ್ ಮೇಕಿಂಗ್, ನಾಯಕ ಹಾಗೂ ವಿಲನ್ ನಡುವಿನ ಅದ್ಭುತ ಸನ್ನಿವೇಶಗಳು, ಆಕ್ಷನ್, ಹಾಗೂ ಹಾಡುಗಳಿಂದ ಸಖತ್ ಹಿಟ್ ಆಗಿತ್ತು. ಅದಾದ ಬಳಿಕ 2006 ರಲ್ಲಿ ಬಂದ ಹೃತಿಕ್ ನಟನೆಯ 'ಧೂಮ್ 2' ಸಿನಿಮಾ ಸಹ ಭಾರಿ ದೊಡ್ಡ ಹಿಟ್ ಆಗಿತ್ತು. ಬಳಿಕ ಆಮಿರ್ ಖಾನ್ ನಟನೆಯ 'ಧೂಮ್ 3' 2013 ರಲ್ಲಿ ಬಿಡುಗಡೆ ಆಯ್ತಾದರೂ ನಿರೀಕ್ಷಿತ ಯಶಸ್ಸು ಕಾಣಲಿಲ್ಲ, ಇದೀಗ 'ಧೂಮ್ 4' ಬರಲು ಸಜ್ಜಾಗಿದೆ. ಯಶ್ ರಾಜ್ ಫಿಲಮ್ಸ್ ನಿರ್ಮಾಣ ಮಾಡುತ್ತಾ ಬಂದಿರುವ 'ಧೂಮ್' ಸಿನಿಮಾ ಸರಣಿಯ ನಾಲ್ಕನೇ ಭಾಗಕ್ಕೆ ತಯಾರಿ ಆರಂಭವಾಗಿದೆ. ಸಿನಿಮಾದ ಚಿತ್ರಕತೆ ಬಹುತೇಕ ಅಂತ್ಯವಾಗಿದ್ದು, ಶೀಘ್ರವೇ ಸಿನಿಮಾದ ಪ್ರೀ ಪ್ರೊಡಕ್ಷನ್ ಆರಂಭ ಆಗಲಿದೆ. ನಿರ್ಮಾಪಕ ಆದಿತ್ಯ ಚೋಪ್ರಾ ಮತ್ತು 'ಖಾಕಿ', 'ವಾರ್', 'ಬ್ಲಫ್ ಮಾಸ್ಟರ್' ಇನ್ನೂ ಹಲವು ಸೂಪರ್ ಹಿಟ್ ಸಿನಿಮಾಗಳಿಗೆ ಚಿತ್ರಕತೆ ಬರೆದಿರುವ ಶ್ರೀಧರ್ ರಾಘವನ್ ಒಟ್ಟಾಗಿ ಸಿನಿಮಾದ ಚಿತ್ರಕತೆ ಬರೆದು ಮುಗಿಸಿದ್ದಾರೆ.

## ಹೈ ಟೀ ಸಮಾರಂಭದಲ್ಲಿ ಮೋದಿ ಭೇಟಿಯಾದ ಅನಂತ್‌ನಾಗ್



ಪದ್ಮಭೂಷಣ ಸಮಾರಂಭದ ನಂತರ ರಾಷ್ಟ್ರಪತಿಯವರು ನೀಡಿದ ಹೈ ಟೀ ಸಮಾರಂಭದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರು ಹಿರಿಯ ನಟ ಅನಂತನಾಗ್ ಅವರನ್ನು ಮಾತನಾಡಿಸಿದ್ದಾರೆ.

ದೆಹಲಿಯ ರಾಷ್ಟ್ರಪತಿ ಭವನದಲ್ಲಿ ಮೇ 27 ರಂದು ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಕನ್ನಡದ ಹಿರಿಯ ನಟ ಅನಂತ್ ನಾಗ್ , ರಿಕಿ ಕೇಜ್ , ಪ್ರಶಾಂತ್ ಪ್ರಕಾಶ್, ವೆಂಕಪ್ಪ ಅಂಬಾಜಿ ಸುಗಟೇಕರ್ ಸೇರಿದಂತೆ ದೇಶಾದ್ಯಂತ 68 ಸಾಧಕರಿಗೆ ಪದ್ಮ ಪುರಸ್ಕಾರ ಪ್ರದಾನ ಮಾಡಿದ್ದರು. ಅನಂತ್ ನಾಗ್ ಕನ್ನಡ ಚಲನಚಿತ್ರ ರಂಗದ ಹಿರಿಯ ನಟರಾಗಿ ಅನಂತ್ ನಾಗ್ ಖ್ಯಾತಿ ಗಳಿಸಿದ್ದಾರೆ. ಕಳೆದ 5 ದಶಕಗಳಲ್ಲಿ ಭಾರತೀಯ ಚಿತ್ರರಂಗಕ್ಕೆ ನೀಡಿದ ಕೊಡುಗೆಗೆ ಮತ್ತು ತಮ್ಮ ಬಹುಮುಖ ಪ್ರತಿಭೆಗೆ ಹೆಸರುವಾಸಿಯಾಗಿದ್ದಾರೆ. ಸಿನಿಮಾ ರಂಗದಲ್ಲಿ ಸಾಧನೆಗೆ ಅವರಿಗೆ ಪದ್ಮಭೂಷಣ ಪ್ರಶಸ್ತಿ ಲಭಿಸಿದೆ.



## ಅತಿಯಾಗಿ ಕೆಲಸ ಮಾಡೋದನ್ನ ನಿಲ್ಲಿಸಿ



**ಅತಿಯಾಗಿ ಕೆಲಸ ವಿಸ್ತರಿಸಬಾರದು**

ಈ ಷರತ್ತು ಚಲನಚಿತ್ರ ನಿರ್ಮಾಪಕರಿಗೆ ಇಷ್ಟವಾಗಲಿಲ್ಲ ಎಂದು ವರದಿಯಾಗಿದೆ. ಈಗ, ಇದೇ ರೀತಿಯ ಭಾವನೆಗಳನ್ನು ಪ್ರತಿಧ್ವನಿಸುತ್ತಾ, ನಟ ಪಂಕಜ್ ತ್ರಿಪಾಠಿ ಕೆಲಸದಲ್ಲಿ ಮಿತಿಗಳನ್ನು ನಿಗದಿಪಡಿಸುವ ಬಗ್ಗೆ ಮಾತನಾಡಿದರು. ಸಂದೀಪ್ ರೆಡ್ಡಿ ವಂಗಾ ಅವರ ಮುಂಬರುವ ಚಿತ್ರ 'ಸ್ಪಿರಿಟ್' ಸಿನಿಮಾದಿಂದ ದೀಪಿಕಾ ಪಡುಕೋಣೆ ನಿರ್ಗಮಿಸುತ್ತಿದ್ದಾರೆ ಎಂದು ವರದಿ ಆಗಿತ್ತು. ಇತ್ತೀಚೆಗೆ ನಟಿ ಎಂಟು ಗಂಟೆಗಳವರೆಗೆ ಮಾತ್ರ ಕೆಲಸವನ್ನು ಸೀಮಿತಗೊಳಿಸುವಂತೆ ವಿನಂತಿಸಿಕೊಂಡಿದ್ದಾರೆ ಎಂದು ವರದಿಗಳು ಹೇಳಿಕೊಂಡಿವೆ.

ಈ ಷರತ್ತು ಚಲನಚಿತ್ರ ನಿರ್ಮಾಪಕರಿಗೆ ಇಷ್ಟವಾಗಲಿಲ್ಲ ಎಂದು ವರದಿಯಾಗಿದೆ. ಈಗ, ಇದೇ ರೀತಿಯ ಭಾವನೆಗಳನ್ನು ಪ್ರತಿಧ್ವನಿಸುತ್ತಾ, ನಟ ಪಂಕಜ್ ತ್ರಿಪಾಠಿ ಕೆಲಸದಲ್ಲಿ ಮಿತಿಗಳನ್ನು ನಿಗದಿಪಡಿಸುವ ಬಗ್ಗೆ ಮಾತನಾಡಿದರು. ಸಮಯಕ್ಕೆ ಆದ್ಯತೆ ಹಾಗೇ ಅತಿಯಾಗಿ ಕೆಲಸ ವಿಸ್ತರಿಸಬಾರದು ಎಂದು ಹೇಳಿದರು. ದಿ ಹಾಲಿವುಡ್ ರಿಪೋರ್ಟರ್ ಇಂಡಿಯಾ ಜೊತೆಗಿನ ಸಂಭಾಷಣೆಯಲ್ಲಿ, ಪಂಕಜ್ ತ್ರಿಪಾಠಿ ಅವರು ಮಾತನಾಡಿ, ಇದೀಗ, ನಾನು ಕೆಲಸದಲ್ಲಿ 'ಇಲ್ಲ' ಎಂದು ಹೇಳುವುದನ್ನು ಅಭ್ಯಾಸ ಮಾಡುತ್ತಿದ್ದೇನೆ. ಏಕೆಂದರೆ ಪ್ರತಿಯೊಬ್ಬರೂ ಡೆಡ್‌ಲೈನ್ ಎಲ್ಲಿದೆ ಎಂದು ತಿಳಿದಿರಬೇಕು. ಅವರು ಸೆಟ್‌ನಲ್ಲಿ ತಮ್ಮ ಕೆಲಸದ ಸಮಯವನ್ನು 16 ರಿಂದ 18 ಗಂಟೆಗಳ ಕಾಲ ವಿಸ್ತರಿಸುತ್ತಿದ್ದ ದಿನಗಳನ್ನು ನೆನಪಿಸಿಕೊಂಡರು. ಕೆಲಸದ ಸಮಯ ವಿಸ್ತರಿಸುತ್ತಿದೆ. ನಾನು 1618 ಗಂಟೆಗಳ ಕಾಲ ನೇರವಾಗಿ ಕೆಲಸ ಮಾಡುತ್ತಿದ್ದೇನೆ ಎಂದರು.

## ರಕುಲ್ ಪ್ರೀತ್‌ಗೆ ರಾಜಕಾರಣಿ ಮನೆ

**ಒಂದು ವಿಚಿತ್ರ ಗಾಳಿ ಸುದ್ದಿ**

ಬಾಲಿವುಡ್ ನಟಿ ರಕುಲ್ ಪ್ರೀತ್ ಸಿಂಗ್ ಅವರು ತೆಲಂಗಾಣ ಮಾಜಿ ಸಚಿವ ಕೆಟಿಆರ್ ಅವರಿಂದ ಮನೆ ಉಡುಗೊರೆಯಾಗಿ ಪಡೆದಿದ್ದಾರೆ ಎಂಬ ವದಂತಿಗಳಿಗೆ ಸ್ಪಷ್ಟನೆ ನೀಡಿದ್ದಾರೆ. ಅವರು ತಮ್ಮ ತಂದೆಯೇ ಮನೆ ಖರೀದಿಗೆ ಪೇಪರ್ ವರ್ಕ್ ಮಾಡಿದ್ದರು ಎಂದು ಹೇಳಿದ್ದಾರೆ. ಈ ವದಂತಿಯಿಂದ ತಮ್ಮ ಕುಟುಂಬ ಬಹಳ ಬೇಸರಗೊಂಡಿದೆ ಎಂದೂ ಹೇಳಿದ್ದಾರೆ. ನಟಿ ರಕುಲ್ ಪ್ರೀತ್ ಸಿಂಗ್ ಅವರು ಬಾಲಿವುಡ್‌ನಲ್ಲಿ ಸದ್ಯ ಬ್ಯುಸಿ ಇದ್ದಾರೆ.

ಅವರು ದಕ್ಷಿಣದ ಹೀರೋಯಿನ್. ಅವರು ಮೊದಲ ಸಿನಿಮಾ ಮಾಡಿದ್ದು ಕನ್ನಡದಲ್ಲೇ. ಆದರೆ, ಈಗ ಬಾಲಿವುಡ್‌ನಲ್ಲಿ ಬ್ಯುಸಿ ಇದ್ದಾರೆ. ಅವರ ಬಗ್ಗೆ ಒಂದು ದೊಡ್ಡ ವದಂತಿ ಹುಟ್ಟಿಕೊಂಡಿತ್ತು. ತೆಲಂಗಾಣ ಮಾಜಿ ಸಚಿವ ಕೆಟಿಆರ್ ಅವರು ರಕುಲ್‌ಗೆ ಮನೆ ನೀಡಿದ್ದರು ಎಂದು ಹೇಳಲಾಗಿತ್ತು. ಈ ಬಗ್ಗೆ ರಕುಲ್ ಅವರೇ ಪ್ರತಿಕ್ರಿಯಿಸಿದ್ದಾರೆ.

ಕೆಲವು ನಟಿಯರಿಗೆ ರಾಜಕೀಯ ನಾಯಕರ ಜೊತೆ ಒಳ್ಳೆಯ ಒಡನಾಟ ಇರುತ್ತದೆ. ಆದರೆ, ಕೆಲವು ಸಂದರ್ಭದಗಳಲ್ಲಿ ನಟಿಯರ ಕ್ಯಾರೆಕ್ಟರ್‌ಗೆ ಹಾನಿ ಆಗುವಂಥ ವದಂತಿಗಳು ಹುಟ್ಟಿಕೊಳ್ಳುತ್ತವೆ. ರಕುಲ್ ಅವರಿಗೂ ಇದೇ ರೀತಿ ಆಗಿತ್ತು. ಅವರಿಗೆ ತೆಲಂಗಾಣದಲ್ಲಿ ಮನೆ ಕೊಟ್ಟಿದ್ದು ಓರ್ವ ರಾಜಕಾರಣಿ ಎಂದು ಹೇಳಲಾಗಿತ್ತು. ಇಷ್ಟು ದಿನ ಅವರು ಈ ವಿಚಾರದಲ್ಲಿ ಮೌನ ವಹಿಸಿದ್ದರು. ಈಗ ಅವರು ರಾಜಕಾರಣಿ ಹೆಸರು ಹಾಗೂ ವದಂತಿ ಬಗ್ಗೆ ನೇರವಾಗಿ ಹೇಳದೇ ಈ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. 'ಉಡುಗೊರೆಯಾಗಿ ಸಿಕ್ಕ ನನ್ನ ಮನೆಯ ಬಗ್ಗೆ ಒಂದು ವಿಚಿತ್ರ ಗಾಳಿ ಸುದ್ದಿ ಹರಿದಾಡಿತ್ತು. ನಿಜ ಹೇಳಬೇಕು ಎಂದರೆ ನನ್ನ ತಂದೆಯೇ ಇದರ ಪೇಪರ್ ಕೆಲಸ ಮಾಡಿದ್ದಾರೆ. ಕಷ್ಟಪಟ್ಟು ದುಡಿದ ಹಣದಿಂದ ಮನೆ ಪಡೆದು, ಈ ರೀತಿಯ ವದಂತಿ ಹುಟ್ಟಿಕೊಂಡಾಗ ನನ್ನ ತಂದೆ ಸಾಕಷ್ಟು ಬೇಸರಗೊಂಡರು. ನನಗೆ ಅವರು ಉತ್ತರಿಸುವಂತೆ ಹೇಳಿದರು. ಆದರೆ, ನಾನು ಎಲ್ಲಾ ಸಮಯದಲ್ಲೂ ಉತ್ತರ ಕೊಡುತ್ತಾ ಕೂರೋಕೆ ಆಗಲ್ಲ ಎಂದೆ' ಎಂಬುದು ರಕುಲ್ ಉತ್ತರ ಆಗಿತ್ತು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966